ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 7 ಭಾನುವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 261 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

₹4



ದೇವರಾಜ ಮಾರುಕಟ್ಟೆಯನ್ನು ನವೀಕರಿಸಿ ಸಂರಕ್ಷಿಸಬಹುದು

ಯುವರಾಜ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪ್ರತಿಪಾದನೆ



ಮೈಸೂರು,ಜ.6(ಆರ್‌ಕೆ)– ಮುಂದಿನ ಪೀಳಿಗೆಗಾಗಿ ಮೈಸೂರಿನ ಪಾರಂಪರಿಕ ದೇವರಾಜ ಮಾರುಕಟ್ಟೆ ಹಾಗೂ ಲ್ಯಾನ್ಸ್‌ಡೌನ್ ಕಟ್ಟಡಗಳನ್ನು ಯಥಾಸ್ಥಿತಿಯಲ್ಲಿ ಸಂರಕ್ಷಿಸಬಹುದು ಎಂದು ಯುವರಾಜ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಇಂದಿಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಮೈಸೂರಿನ ಒಡೆಯರ್ ಸೆಂಟರ್ ಫಾರ್ ಆರ್ಕಿಟೆಕ್ಚರ್ ಸಭಾಂಗಣದಲ್ಲಿ ನಡೆದ ಮಾರ್ಕೆಟ್ಸ್ ಆ್ಯಸ್ ಲಿವಿಂಗ್ ಹೆರಿಟೇಜ್: ದಿ ಕೇಸ್ ಫಾರ್ ಕನ್ಸರ್ವೇಷನ್ ಅಂಡ್ ರಿವೈವಲ್' ಕುರಿತ ಕಾನ್ಫರೆನ್ಸ್‌ನಲ್ಲಿ ವರ್ಚುಯಲ್ ಮೂಲಕ ಭಾಗವಹಿಸಿ ಮಾತನಾಡಿದ ಅವರು, ಮೈಸೂರಿನ ಪಾರಂಪರಿಕ ಸ್ಮಾರಕಗಳು ಮತ್ತು ಕಟ್ಟಡಗಳು ಇಲ್ಲಿನ ಪುರಾತನ ಇತಿಹಾಸಗಳನ್ನು ಬಿಂಬಿಸುತ್ತವೆ ಎಂದರು.

ಪಾರಂಪರಿಕ ತಜ್ಞರು ಮೈಸೂರಿನ ಪರಂಪರೆ ರಕ್ಷಣೆಗಾಗಿ ಯೋಜನೆ ರೂಪಿಸಬೇಕು, ಇಲ್ಲಿನ ದೇವರಾಜ ಮಾರುಕಟ್ಟೆ ಮತ್ತು ಲ್ಯಾನ್ಸ್‌ಡೌನ್ ಕಟ್ಟಡಗಳು ಮೈಸೂರಿನ ಹೆಗ್ಗುರುತುಗಳಾಗಿವೆಯಲ್ಲದೇ, ಪರಂಪರೆಯ ಪ್ರಾಮುಖ್ಯತೆಗೆ ಸಾಕ್ಷಿಯಾಗಿದೆ. ಗ್ರಾಮೀಣ ಭಾಗದ ರೈತರಿಗೆ ನೇರ ಮಾರುಕಟ್ಟೆ ಕಲ್ಪಿಸುವ ದೇವರಾಜ ಮಾರುಕಟ್ಟೆ ಕಟ್ಟಡವು ಫಾರಂ–ಟು–ಟೇಬಲ್ ವ್ಯವಸ್ಥೆಯನ್ನು ಕಲ್ಪಿಸಿದೆ ಎಂದು ತಿಳಿಸಿದರು.

ರೈತರು, ವ್ಯಾಪಾರಿಗಳು ಮತ್ತು ಗ್ರಾಹಕರಿಗೆ ಮೂಲ ಮಾರುಕಟ್ಟೆ ಕಲ್ಪಿಸಿ ಜನರ ಜೀವನಕ್ಕೆ ಕೊಂಡಿಯಾಗಿರುವ ಈ ಪಾರಂಪರಿಕ ಕಟ್ಟಡಗಳು ಪ್ರಪಂಚಕ್ಕೆ ಮೈಸೂರಿನ ಪುರಾತನ ಇತಿಹಾಸ ಪರಿಚಯಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆಯಾದ್ದರಿಂದ ಈ ಸ್ಮಾರಕಗಳನ್ನು ನವೀಕರಿಸಿ ಸಂರಕ್ಷಿಸಬೇಕೇ ಹೊರತು, ನೆಲಸಮ ಮಾಡುವುದು ಸಮಂಜಸವಲ್ಲ ಎಂದು ಯದುವೀರ ನುಡಿದರು.

ಎಕೋ ಸೆನ್ಸಿಟೀವ್ ಸಲ್ಯೂಷನ್, ಎಕೋ ಕಾನ್ಶಿಯಸ್ ಮೌಲ್ಯ ಹೊಂದಿರುವ ಈ ಎರಡೂ ಕಟ್ಟಡಗಳನ್ನು ಯಥಾಸ್ಥಿತಿ ಕಾಪಾಡಿಕೊಂಡು ನವೀಕರಿಸಿ ಪುನಶ್ಚೇತನಗೊಳಿಸಬೇಕು. ಪಾರಂಪರಿಕ ಕಟ್ಟಡಗಳ ಸಂರಕ್ಷಣೆಗೆ ಸರ್ಕಾರ ನೀತಿಯಲ್ಲಿ ಸೇರಿಸಬೇಕು. ಕಾಮಗಾರಿಯ ಟೆಂಡರ್‌ಗಳನ್ನು ಸಂರಕ್ಷಣಾ ಮೆಥಡ್‌ನಲ್ಲಿಯೇ ಲೈವ್ ಮಾರ್ಟರ್‌ಗಳು ಮತ್ತು ಪಾರಂಪರಿಕ ಸಲಕರಣೆ (Heritage Materials)ಗಳನ್ನು ಬಳಸುವ ನೀತಿ ಜಾರಿಯಾಗಬೇಕು ಎಂದು ಒತ್ತಾಯಿಸಿದರು.



ತಜ್ಞ ಸಂಸ್ಥೆ, ನುರಿತ ಕೆಲಸಗಾರರು ದೇಶದ ಹಲವೆಡೆ ಪಾರಂಪರಿಕ ಕಟ್ಟಡಗಳನ್ನು ಯಥಾವತ್ತಾಗಿ ನವೀಕರಿಸಿ ಸಂರಕ್ಷಿಸಿರುವ ಉದಾಹರಣೆಗಳಿವೆ. ಅವುಗಳು ಸುಭದ್ರವಾಗಿರುವಾಗ ಮೈಸೂರಿನ ದೇವರಾಜ ಮಾರುಕಟ್ಟೆ ಮತ್ತು ಲ್ಯಾನ್ಸ್‌ಡೌನ್ ಕಟ್ಟಡಗಳನ್ನು ಕೆಡವಿ ಹೊಸದಾಗಿ ನಿರ್ಮಿಸಬೇಕೆಂಬುದು ಸಮಂಜಸವಲ್ಲ ಎಂದು ಯದುವೀರ ಅಭಿಪ್ರಾಯಪಟ್ಟರು.

ಇದೇ ವೇಳೆ ವರ್ಚುಯಲ್ ಮೂಲಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ DRONAH ಸಂಸ್ಥಾಪಕ ನಿರ್ದೇಶಕಿ ಡಾ.ಶಿಖಾ ಜೈನ್, ಜೈಪುರ ನಗರದಲ್ಲಿ ಹಲವು ಪಾರಂಪರಿಕ ಸ್ಮಾರಕ, ಕಟ್ಟಡಗಳನ್ನು ಸಂರಕ್ಷಿಸಲಾಗಿದೆ. ಏಕೆಂದರೆ ಜೈಪುರದಲ್ಲಿ ಈ ಸಾಂಪ್ರದಾಯಿಕ ಪಾರಂಪರಿಕ ಕಟ್ಟಡಗಳೇ ಆರ್ಥಿಕತೆಗೆ ಆಧಾರವಾಗಿವೆ. ಸರ್ಕಾರವು ಅವುಗಳನ್ನು ರಕ್ಷಿಸಿರುವ ಕಾರಣ ಮಾರುಕಟ್ಟೆಯು ಪ್ರಮುಖ ಕೇಂದ್ರಗಳಾಗಿವೆ ಎಂದರು.

ಕೆನಡಾದ ಒಟ್ಟಾವದಲ್ಲಿರುವ ಬೈವಾರ್ಡ್ ಮಾರುಕಟ್ಟೆ ಕಟ್ಟಡವನ್ನು ಸಂರಕ್ಷಿಸಿದ್ದು, ಅದೀಗ ಪ್ರಮುಖ ವ್ಯಾಪಾರಿ ಮತ್ತು ಪ್ರವಾಸೋದ್ಯಮ ಸ್ಥಳವಾಗಿರುವುದನ್ನು ಅವರು ಉದಾಹರಿಸಿದರು.

'ಜೀವಂತ ಪರಂಪರೆಯಾಗಿ ಮಾರುಕಟ್ಟೆಗಳು: ಸಂರಕ್ಷಣೆ–ಪುನಶ್ಚೇತನ' ಮೈಸೂರಲ್ಲಿ ಸಮ್ಮೇಳನ

ದೇವರಾಜ ಮಾರುಕಟ್ಟೆಗೆ ದೇಶದ ಪ್ರಖ್ಯಾತ ಪಾರಂಪರಿಕ ತಜ್ಞರ ಭೇಟಿ; ಅಲ್ಲಿನ ವ್ಯಾಪಾರಿಗಳೊಂದಿಗೆ ಸಂವಾದ

ಮೈಸೂರು, ಜ. 6(ಆರ್‌ಕೆ)–ಮೈಸೂರಿನ ಕೃಷ್ಣರಾಜ ಬುಲೇವಾರ್ಡ್ ರಸ್ತೆಯಲ್ಲಿರುವ ಒಡೆಯರ್ ಸೆಂಟರ್ ಫಾರ್ ಆರ್ಕಿಟೆಕ್ಚರ್ (WCFA) ಸಭಾಂಗಣದಲ್ಲಿ ಇಂದು 'ಜೀವಂತ ಪರಂಪರೆಯಾಗಿ ಮಾರುಕಟ್ಟೆಗಳು: ಸಂರಕ್ಷಣೆ ಮತ್ತು ಪುನಶ್ಚೇತನ' ವಿಷಯ ಕುರಿತ ಒಂದು ದಿನದ ಸಮ್ಮೇಳನ ನಡೆಯಿತು.

ಇಂಡಿಯನ್ ನ್ಯಾಷನಲ್ ಟ್ರಸ್ಟ್ ಫಾರ್ ಆರ್ಟ್ ಅಂಡ್ ಕಲ್ಚರಲ್ ಹೆರಿಟೇಜ್ (INTACH), ಬೆಂಗಳೂರು ಚಾಪ್ಟರ್, ಎನ್‌ಆರ್ ಪ್ರತಿಷ್ಠಾನ ಮತ್ತು ವಿನ್ಯಾಸಕಾರರ ಸಹಯೋಗದೊಂದಿಗೆ ಡಬ್ಲ್ಯೂಸಿಎಫ್‌ಎ ಆಯೋಜಿಸಿದ್ದ ಸಮ್ಮೇಳನವನ್ನು ಇಂಟ್ಯಾಕ್‌ನ ಡಾ.ಮೀರಾ ಅಯ್ಯರ್ ಉದ್ಘಾಟಿಸಿದರು.



ಮೈಸೂರಿನ ಒಡೆಯರ್ ಸೆಂಟರ್ ಫಾರ್ ಆರ್ಕಿಟೆಕ್ಚರ್ (WCFA) ಸಭಾಂಗಣದಲ್ಲಿ ಆಯೋಜಿಸಿದ್ದ 'ಜೀವಂತ ಪರಂಪರೆಯಾಗಿ ಮಾರುಕಟ್ಟೆಗಳು: ಸಂರಕ್ಷಣೆ ಮತ್ತು ಪುನಶ್ಚೇತನ' ವಿಷಯ ಕುರಿತ ಒಂದು ದಿನದ ಸಮ್ಮೇಳನವನ್ನು ಇಂಟ್ಯಾಕ್‌ನ ಡಾ.ಮೀರಾ ಅಯ್ಯರ್ ಉದ್ಘಾಟಿಸಿದರು. ಈ ವೇಳೆ ಡಾ.ಎಸ್.ರಘುನಾಥ, ಪ್ರೊ.ಸಂಗಮಿತ್ರ ಬಸು, ಯಶಸ್ವಿನಿ ಶರ್ಮಾ ಉಪಸ್ಥಿತರಿದ್ದಾರೆ.

ಜೀವಂತ ಪರಂಪರೆಯಾಗಿರುವ ಮಾರುಕಟ್ಟೆಗಳ ರಕ್ಷಣೆ, ಪುನರುಜ್ಜೀವನಗೊಳಿಸಿ ಮುಂದಿನ ಪೀಳಿಗೆಗೆ ಉಳಿಸುವುದು ಮತ್ತು ಪಾರಂಪರಿಕ ಕಟ್ಟಡಗಳ ಮಹತ್ವ ಸಾರುವುದು ಕಾನ್ಫರೆನ್ಸ್ ಮುಖ್ಯ ಉದ್ದೇಶವಾಗಿದ್ದು, ದೇಶದ ಹಲವು ಭಾಗಗಳಿಂದ ಆಗಮಿಸಿದ್ದ ನುರಿತ ಆರ್ಕಿಟೆಕ್ಟ್‌ಗಳು, ಪುರಾತತ್ವ ಇತಿಹಾಸ ಹಾಗೂ ಪಾರಂಪರಿಕ ತಜ್ಞರು ಭಾಗವಹಿಸಿದ್ದರು.

ಅದಕ್ಕೂ ಮೊದಲು ಪಾರಂಪರಿಕ ತಜ್ಞರು ಶನಿವಾರ ಬೆಳಗ್ಗೆ ಮೈಸೂರಿನ ದೇವರಾಜ ಮಾರುಕಟ್ಟೆಗೆ ಭೇಟಿ ನೀಡಿ ಪಾರಂಪರಿಕ ಕಟ್ಟಡ ವೀಕ್ಷಿಸಿದರಲ್ಲದೇ ಸೊಪ್ಪು–ತರಕಾರಿ, ಹಣ್ಣು, ಗೃಹೋಪಯೋಗಿ ವಸ್ತು ಮಾರಾಟಗಾರರೊಂದಿಗೆ ಸಮಾಲೋಚನೆ ನಡೆಸಿದರು. ಮೈಸೂರು ವಿಶ್ವವಿದ್ಯಾನಿಲಯದ ಪುರಾತನ ಇತಿಹಾಸ ಮತ್ತು ಪುರಾತತ್ವ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಪಾರಂಪರಿಕ ಸಂರಕ್ಷಣಾ ಸಮಿತಿ ಸದಸ್ಯ ಪ್ರೊ.ಎನ್.ಎಸ್.ರಂಗರಾಜು ಮಾರುಕಟ್ಟೆ ಒಳಗೆ ತಜ್ಞರನ್ನು ಕರೆದೊಯ್ದು ಕಟ್ಟಡವನ್ನು ಪರಿಚಯಿಸಿ ಮಾಹಿತಿ ನೀಡಿದರು.

ಮಾರುಕಟ್ಟೆಗಳ ಐತಿಹಾಸಿಕ ಮತ್ತು ಸಾಂಸ್ಕೃತಿಕ ಮಹತ್ವ, ಹಿನ್ನೆಲೆ, ಪ್ರಕರಣ ಅಧ್ಯಯನ, ಮಾರುಕಟ್ಟೆಗಳ ಸಂರಕ್ಷಣೆ ಮತ್ತು ಪುನಶ್ಚೇತನ ಯೋಜನೆಗಳ ಯಶಸ್ವಿ ಕುರಿತಂತೆ ಪ್ರಖ್ಯಾತ ಆರ್ಕಿಟೆಕ್ಟ್‌ಗಳು, ಸಂರಕ್ಷಕರು, ಹೆರಿಟೇಜ್ ಎಕ್ಸ್‌ಪರ್ಟ್‌ಗಳು, ಕ್ಷೇತ್ರದಲ್ಲಿ ಅನುಭವ ಪಡೆದಿರುವ ತಜ್ಞರು ವಿಷಯ ಕುರಿತಂತೆ ಸುದೀರ್ಘ ಚರ್ಚೆ ನಡೆಸಿದರು.

ಬೆಂಗಳೂರಿನ ಬಿಎಂಎಸ್ ಕಾಲೇಜ್ ಆಫ್ ಇಂಜಿನಿಯರಿಂಗ್‌ನ ಸ್ಟ್ರಕ್ಚರಲ್ ಇಂಜಿನಿಯರ್ ಡಾ.ಎಸ್.ರಘುನಾಥ, ಖಾರಗಪುರ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ನಿವೃತ್ತ ಪ್ರಾಧ್ಯಾಪಕಿ ಪ್ರೊ.ಸಂಗಮಿತ್ರ ಬಸು, ಪುಣೆಯ ಸ್ಟ್ರಕ್ಚರಲ್ ಕನ್ಸಲ್ಟೆಂಟ್ ರಂಜಿತ್ ಪಾಟೀಲ್, ಮೈಸೂರಿನ ಒಡೆಯರ್ ಸೆಂಟರ್ ಫಾರ್ ಆರ್ಕಿಟೆಕ್ಟ್ ಪ್ರಾಂಶುಪಾಲ ಪ್ರೊ.ಆನಂದ್ ಕೃಷ್ಣಮೂರ್ತಿ, ಏಸ್ತಟಿಕ್ ಆರ್ಕಿಟೆಕ್ಟ್ಸ್‌ನ ಸಂಸ್ಥಾಪಕ ಆರ್ಕಿಟೆಕ್ಟ್ ಯಶಸ್ವಿನಿ ಶರ್ಮಾ ಸಮ್ಮೇಳನದಲ್ಲಿ ಪಾಲ್ಗೊಂಡು ಅಭಿಪ್ರಾಯ ಮಂಡಿಸಿದರಲ್ಲದೇ, ಹಿರಿಯ ನಾಗರಿಕರು, ಪಾರಂಪರಿಕ ಸ್ಮಾರಕಗಳ ರಕ್ಷಣೆಗೆ ಆಸಕ್ತಿ ತೋರುವ ವಿವಿಧ ಸಂಸ್ಥೆಗಳ ಪ್ರಮುಖರು, ಆರ್ಕಿಟೆಕ್ಟ್ ಇಂಜಿನಿಯರಿಂಗ್ ವಿದ್ಯಾರ್ಥಿಗಳೊಂದಿಗೆ ವಿಷಯ ಕುರಿತಂತೆ ಸಂವಾದ ನಡೆಸಿದರು.

ಮೈಸೂರು ಗ್ರಾಹಕರ ಪರಿಷತ್ ಅಧ್ಯಕ್ಷೆ ಶೋಭನಾ, ಭಾಮಿ ವಿ.ಶೆಣೈ, ನಿರಂತರ ಸಂಸ್ಥೆಯ ಶ್ರೀನಿವಾಸ, ಪ್ರಸಾದ್, ಸುಗುಣ ರಾಜೇಶ್ ಜೈನ್, ಪ್ರೊ.ಶ್ರೀ ಜಯದೇವ ರಾಜೇ ಅರಸ್, ನಟ ವಿನಯ್‌ರಾಜ್ ಕುಮಾರ್, ಶ್ರೀನಾಥ್ ಸೇರಿದಂತೆ ಹಲವರು ಕಾನ್ಫರೆನ್ಸ್‌ನಲ್ಲಿ ಪಾಲ್ಗೊಂಡಿದ್ದರು. ಮಧ್ಯಾಹ್ನ 3.15 ಗಂಟೆಗೆ ತಜ್ಞರು ಮೈಸೂರಿನ ಪುರಭವನ, ಅರಮನೆ ಸುತ್ತಲಿನ ರಸ್ತೆ, ರಾಜಮಾರ್ಗ, ಓಲ್ಡ್ ಬ್ಯಾಂಕ್ ರಸ್ತೆಗಳಲ್ಲಿ ಪಾರಂಪರಿಕ ನಡಿಗೆ ಮೂಲಕ ಮೈಸೂರಿನ ಹಳೇ ಪಾರಂಪರಿಕ ಕಟ್ಟಡಗಳು ಹಾಗೂ ಸ್ಮಾರಕಗಳನ್ನು ವೀಕ್ಷಿಸಿದರು.

ತಾಲೂಕುವಾರು ಲೋಕಾಯುಕ್ತ ಅಧಿಕಾರಿಗಳ ಭೇಟಿ

ಮೈಸೂರು,ಜ.6–ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗದ ಅಧಿಕಾರಿಗಳು ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಂಬಂಧಪಟ್ಟ ಸಾರ್ವಜನಿಕ ಸರ್ಕಾರಿ ಅಧಿಕಾರಿ ಅಥವಾ ನೌಕರರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಅಡಿಯಲ್ಲಿ ಕ್ರಮಬದ್ಧವಾಗಿ ಭರ್ತಿ ಮಾಡಿದ ದೂರುಗಳನ್ನು ನಮೂನೆ–1ರಲ್ಲಿ ಮತ್ತು ನಮೂನೆ–2ರಲ್ಲಿ ಪ್ರಮಾಣ ಪತ್ರಗಳನ್ನು ಅಗತ್ಯ ದಾಖಲಾತಿಗಳನ್ನು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ತಾಲೂಕು ಮಟ್ಟದಲ್ಲಿ ಜ.10ರಂದು ಬೆಳಗ್ಗೆ 11ರಿಂದ ಮಧ್ಯಾಹ್ನ 1ರವರೆಗೆ ನಂಜನಗೂಡು ತಾಲೂಕಿನ ತಾಲೂಕು ಪಂಚಾಯಿತಿ ಕಚೇರಿ, ಕೊಳ್ಳೇಗಾಲ ತಾಲೂಕಿನ ಪ್ರವಾಸಿ ಮಂದಿರ ಹಾಗೂ ವಿರಾಜಪೇಟೆ ತಾಲೂಕಿನ ತಹಶೀಲ್ದಾರ್‌ರವರ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಎಸ್.ಎಸ್.ಕವಿತಾಗೆ ಪಿಹೆಚ್.ಡಿ ಪದವಿ

ಮೈಸೂರು,ಜ.6–ಡಾ.ನರಸಿಂಹ ಕೌಲಗುಡ್ಡ ಅವರ ಮಾರ್ಗದರ್ಶನದಲ್ಲಿ ಎಸ್.ಎಸ್.ಕವಿತಾ ಅವರು ಫಾಕಲ್ಟಿ ಆಫ್ ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಸೈನ್ಸ್ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.





ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿ ನೇಮಕಗೊಂಡಿರುವ ಮಹದೇಶ್ ಅವರನ್ನು ಮೈಸೂರಿನ ಕೆ.ಜಿ.ಕೊಪ್ಪಲು ಪೈಲ್ವಾನ್ ಬಸವಯ್ಯ ವೃತ್ತದ ಶ್ರೀ ಸಿದ್ದಪ್ಪಾಜಿ ದೇವಸ್ಥಾನದ ವತಿಯಿಂದ ಅಭಿನಂದಿಸಲಾಯಿತು. ಈ ವೇಳೆ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಇನ್ನಿತರರು ಉಪಸ್ಥಿತರಿದ್ದರು.

ಗನ್ ಹೌಸ್ ವೃತ್ತದ ಪ್ರತಿಮೆ ತೆರವಿಗೆ ಆಗ್ರಹಿಸಿ ಪ್ರತಿಭಟನಾ ಮೆರವಣಿಗೆ

ಮೈಸೂರು,ಜ.6(ಬಿಎಲ್‌ಯು)–ಮೈಸೂರಿನ ಗನ್‌ಹೌಸ್ ವೃತ್ತದಲ್ಲಿ ಸ್ಥಾಪಿಸಿರುವ ಡಾ.ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರ ಪ್ರತಿಮೆ ತೆರವಿಗೆ ಆಗ್ರಹಿಸಿ ಕಾನೂನುಬಾಹಿರ ಪ್ರತಿಮೆ ತೆರವು ಹೋರಾಟ ಸಮಿತಿಯವರು ನಗರದಲ್ಲಿ ಶನಿವಾರ ಪ್ರತಿಭಟನಾ ಮೆರವಣಿಗೆ ನಡೆಸಿದರು.

ನಗರದ ದಸರಾ ವಸ್ತುಪ್ರದರ್ಶನದ ಪ್ರವೇಶ ದ್ವಾರದಿಂದ ಮೆರವಣಿಗೆ ಆರಂಭಿಸಿದ ಸಮಿತಿಯವರು, ಸುಪ್ರೀಂಕೋರ್ಟ್ ಆದೇಶ ಉಲ್ಲಂಘಿಸಿ ಪ್ರತಿಮೆ ಸುತ್ತ ಕಾಮಗಾರಿ ನಡೆಸಲು ಜಿಲ್ಲಾಡಳಿತ ಅವಕಾಶ ಮಾಡಿಕೊಟ್ಟಿದೆ ಎಂದು ದೂರಿದರು.

ಗನ್‌ಹೌಸ್ ವೃತ್ತದಲ್ಲಿ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಪ್ರತಿಮೆ ಸ್ಥಾಪನೆ ಮಾಡುವಂತೆ 2015ರಲ್ಲಿ ನಗರಪಾಲಿಕೆಗೆ ಮನವಿ ನೀಡಿದಾಗ ಅವಕಾಶ ನೀಡಲಿಲ್ಲ. ವಾಹನ ದಟ್ಟಣೆ ಹೆಚ್ಚಾಗಿರುವ ಸಾರ್ವಜನಿಕ ಸ್ಥಳದಲ್ಲಿ ಪ್ರತಿಮೆ ಸ್ಥಾಪನೆಗೆ ಅವಕಾಶವಿಲ್ಲ. ಇದು ಸುಪ್ರೀಂಕೋರ್ಟ್ ಆದೇಶಕ್ಕೆ ವಿರುದ್ಧವಾದ ಕ್ರಮ ಎಂದು ಅವಕಾಶ ನಿರಾಕರಿಸಲಾಯಿತು.



ಮೈಸೂರಿನ ಗನ್‌ಹೌಸ್ ಬಳಿಯ ವೃತ್ತದಲ್ಲಿ ಪ್ರತಿಷ್ಠಾಪನೆ ಮಾಡಿರುವ ಪ್ರತಿಮೆ ತೆರವು ಮಾಡುವಂತೆ ಆಗ್ರಹಿಸಿ ಕಾನೂನುಬಾಹಿರ ಪ್ರತಿಮೆ ತೆರವು ಹೋರಾಟ ಸಮಿತಿಯವರು ಪ್ರತಿಭಟನಾ ಮೆರವಣಿಗೆ ನಡೆಸಿದರು.

ಆದರೆ ಈಗ ಅದೇ ವೃತ್ತದಲ್ಲಿ ಪ್ರತಿಮೆ ನಿರ್ಮಾಣ ಮಾಡಲಾಗುತ್ತಿದೆ ಎಂದು ದೂರಿದರು. ಇಟ್ಟಿಗೆಗೂಡು, ನಜರ್‌ಬಾದ್ ಮೂಲಕ ಸಿದ್ಧಾರ್ಥ ಬಡಾವಣೆಯಲ್ಲಿರುವ ನೂತನ ಡಿಸಿ ಕಚೇರಿಗೆ ತಲುಪಿ ಜಿಲ್ಲಾಧಿಕಾರಿ ಡಾ.ರಾಜೇಂದ್ರ ಅವರಿಗೆ ಮನವಿ ಪತ್ರ ನೀಡಲು ಮುಂದಾದರು. ಆದರೆ ತಾವು ಜಿಲ್ಲಾ ಪಂಚಾಯಿತಿ ಸಭೆಯಲ್ಲಿ ಪಾಲ್ಗೊಳ್ಳುತ್ತಿರುವುದರಿಂದ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸುವಂತೆ ಡಿಸಿ ಸೂಚಿಸಿದರು.

ಆದರೆ ಜಿಲ್ಲಾಧಿಕಾರಿ ಬರುವ ತನಕ ಕಾದು ಅವರಿಗೆ ಮನವಿ ಸಲ್ಲಿಸುವುದಾಗಿ ಪ್ರತಿಭಟನಾಕಾರರು ಪಟ್ಟು ಹಿಡಿದರು. ಕೊನೆಗೆ ಅಪರ ಜಿಲ್ಲಾಧಿಕಾರಿ ಲೋಕನಾಥ್ ಅವರಿಗೆ ಮನವಿ ಸಲ್ಲಿಸಿದರು. ಸಮಿತಿಯ ಸಂಚಾಲಕ ಹೆಚ್‌ಎಂಟಿ ಲಿಂಗರಾಜೇ ಅರಸ್, ಅಮರನಾಥ ರಾಜೇಅರಸ್, ಶ್ರೀಧರ ರಾಜೇ ಅರಸ್, ಲಕ್ಷ್ಮಿಕಾಂತರಾಜೇ ಅರಸ್, ಮಾರುಕಟ್ಟೆಗಳ ಸಂಘದ ಅಧ್ಯಕ್ಷ ಮಹದೇವ್, ಒಕ್ಕಲಿಗ ರಕ್ಷಣಾ ವೇದಿಕೆ ಅಧ್ಯಕ್ಷೆ ಯಮುನ ಸೇರಿದಂತೆ ನೂರಕ್ಕೂ ಹೆಚ್ಚು ಜನರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಇಂದು ಮೈಸೂರಲ್ಲಿ ಖಾಸಗಿ ವೈದ್ಯರ ಸಭೆ

ಮೈಸೂರು, ಜ. 6– ಮೈಸೂರಿನ ವಿದ್ಯಾರಣ್ಯಪುರಂನಲ್ಲಿರುವ ವಂಶ ಪಾರಂಪರಿಕ ವೈದ್ಯರ ಸಂಘದ ಕೊರತೆಗಳ ಬಗ್ಗೆ ಚರ್ಚಿಸಲು ಜ.7ರಂದು ಮಧ್ಯಾಹ್ನ 2.30ಕ್ಕೆ ಮೈಸೂರಿನ ಸಿದ್ಧಾರ್ಥ ಹೋಟೆಲ್‌ನಲ್ಲಿ ಸಭೆ ಕರೆಯಲಾಗಿದೆ ಎಂದು ಸಂಘದ ಸಂಚಾಲಕ ರಾಮು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನ:** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು 108 ಕಳಸಗಳ ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಮಹತೋಬಾರ ಶ್ರೀ ಧರ್ಮಶಾಸ್ತಾ ಸ್ವಾಮಿಯವರಿಗೆ ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾ ನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ವಿಶೇಷ ಪೂಜೆ, ಅನ್ನದಾನಂ ಸೇವಾ, ಸ್ಥಳ: ದೇವಸ್ಥಾನದ ಆವರಣ, ರಾಘವೇಂದ್ರನಗರ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಉಚಿತ ಆರೋಗ್ಯ ತಪಾಸಣೆ ಮತ್ತು ಸಲಹಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಬೆಳಗ್ಗೆ 9ರಿಂದ.

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರಾ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಬೆಳಗ್ಗೆ 10ರಿಂದ ಸಂಜೆ 7 ಗಂಟೆಯವರೆಗೆ.

■ **ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿಕ ಸಂಘ :** ಸುವರ್ಣ ಮಹೋತ್ಸವ ಕಾರ್ಯಕ್ರಮ, ಬೆಳಗ್ಗೆ 9ಕ್ಕೆ ಪೂಜಾ ಕಾರ್ಯಕ್ರಮ, ಬೆ. 10ಕ್ಕೆ ಸಭಾ ಕಾರ್ಯಕ್ರಮ, ಉದ್ಘಾಟನೆ : ಮಂಗಳೂರು ಗಣೇಶ ಬೀಡಿ ವರ್ಕ್ಸ್‌ನ ಜಗನ್ನಾಥ ಶೆಣೈ, ಉಪಸ್ಥಿತರು : ಸಂಸ್ಕೃತ ವಿದ್ವಾಂಸ ಡಾ. ಗುರುಪಾದ ಹೆಗಡೆ, ಅತಿಥಿಗಳು : ದಕ್ಷಿಣ ಕನ್ನಡ ಮತ್ತು ಕರಾವಳಿ ಜಿಲ್ಲೆಗಳ ಸಂಘಗಳ ಒಕ್ಕೂಟದ ಅಧ್ಯಕ್ಷ ಗ್ರೇಶಿಯಸ್ ರೋಡ್ರಿಗ್ರಸ್, ಕಾರ್ಯದರ್ಶಿ ನಾರಾಯಣ ವಿ. ಹೆಗಡೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಡಾ. ನಾರಾಯಣ ಹೆಗಡೆ, ಸ್ಥಳ: ಯೋಗ ಸಂಸ್ಕೃತಿ ಕಲಾ ಭವನ (ಸಂಘದ ಆವರಣ).

■ **ವಿಶ್ವೇಶ್ವರಯ್ಯ ಡೆವಲಪ್‌ಮೆಂಟ್ ಆರ್ಗನೈಜೇಷನ್, ಮೈಕ್ರೋಬಿ ಫೌಂಡೇಷನ್:** ಕೃಷಿ ಸುಗ್ಗಿ ಸಂಭ್ರಮ ಕಾರ್ಯಕ್ರಮ, ಪುಸ್ತಕಗಳ ಲೋಕಾರ್ಪಣೆ, ಉದ್ಘಾಟನೆ: ಶಾಸಕ ಪಿ.ಎಂ.ನರೇಂದ್ರಸ್ವಾಮಿ, ಅಧ್ಯಕ್ಷತೆ: ಸಾವಯವ ತಜ್ಞ ಡಾ. ಕೆ.ಆರ್.ಹುಲ್ಲುನಾಚೇಗೌಡ, ಮುಖ್ಯ ಅತಿಥಿಗಳು: ಶಾಸಕರಾದ ಟಿ.ಎಸ್.ಶ್ರೀವತ್ಸ, ದರ್ಶನ್ ಪುಟ್ಟಣ್ಣಯ್ಯ, ಮಾಜಿ ಶಾಸಕ ಮನೋಹರ್ ಮಸ್ಕಿ, ಆಕಾಶವಾಣಿ ಕಾರ್ಯಕ್ರಮ ನಿರ್ವಾಹಕ ಎನ್. ಕೇಶವಮೂರ್ತಿ, ಡಾ. ರತ್ನಾಕರ್ ದೇವರು, ಸಿ. ಶಂಕರ, ಶ್ರೀಮತಿ ಸತ್ಯಶ್ರೀಬಿ. ಶ್ಯಾಮ್, ಸ್ಥಳ: ಕಲಾಮಂದಿರ, ಬೆಳಗ್ಗೆ 10ಕ್ಕೆ.

■ **ಶ್ರೀ ಕುಂದೂರು ಮಠ:** ಡಾ.ಇಮ್ಮಡಿ ಶಿವಬಸವ ಸ್ವಾಮಿಗಳವರ 85ನೇ ಜಯಂತಿ ಸಂಸ್ಮರಣೋತ್ಸವ, ಡಾ. ಶರತ್‌ಚಂದ್ರ ಸ್ವಾಮಿಗಳವರ ಪಟ್ಟಾಧಿಕಾರ ರಜತ ಮಹೋತ್ಸವ, ವಿದ್ಯಾರ್ಥಿ ನಿಲಯ, ಗ್ರಂಥಾಲಯ ಕಟ್ಟಡದ ಭೂಮಿಪೂಜೆ ಹಾಗೂ ಗ್ರಂಥಗಳ ಲೋಕಾರ್ಪಣೆ, ಸಾನ್ನಿಧ್ಯ: ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, 'ಇಮ್ಮಡಿ ದೀಪ್ತಿ' ಚಿತ್ರಸಂಪುಟ ಲೋಕಾರ್ಪಣೆ: ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು, ಅಧ್ಯಕ್ಷತೆ: ಡಾ.ತೋಂಟದ ಸಿದ್ದರಾಮ ಮಹಾಸ್ವಾಮಿಗಳು, ಶ್ರೀಮಠದ ಆ್ಯಪ್ ಬಿಡುಗಡೆ: ಡಾ.ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳು, ಉದ್ಘಾಟನೆ: ಹಿರಿಯ ಸಾಹಿತಿ ಗೊ.ರು. ಚನ್ನಬಸಪ್ಪ, ಮಿಲಿಂದ ಪ್ರಶ್ನೆ ಕೃತಿ ಲೋಕಾರ್ಪಣೆ: ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯ ವಿಶ್ರಾಂತ ಕುಲಪತಿ ಪ್ರೊ.ಮಲ್ಲೇಪುರಂ ಜಿ.ವೆಂಕಟೇಶ, ಸಂಸ್ಕೃತ ಸಾಹಿತ್ಯಕ್ಕೆ ಕರ್ನಾಟಕದ ಕೊಡುಗೆ ಕೃತಿ ಲೋಕಾರ್ಪಣೆ: ಕೇಂದ್ರೀಯ ಸಂಸ್ಕೃತ ವಿವಿ ಕುಲಪತಿ ಪ್ರೊ. ಶ್ರೀನಿವಾಸ ವರಖೇಡಿ, ಸ್ಥಳ: ಶ್ರೀ ಕುಂದೂರು ಮಠದ ಗದ್ದಿಗೆ, ಚಾಮುಂಡಿಬೆಟ್ಟದ ಪಾದದ ರಸ್ತೆ, ಬೆಳಗ್ಗೆ 10.30ಕ್ಕೆ.

■ **ರೂಪ ಪ್ರಕಾಶನ, ಅಂಗಳ ಸಾಹಿತ್ಯ ಬಳಗ–ಬಾರುಕೋಲು ಬಳಗ, ಸಂಶೋಧಕರ ಸಂಘ, ಮೈಸೂರು ವಿವಿ:** ನಾ ದಿವಾಕರ ಅವರ ನಿರೀಕ್ಷೆ ಭರವಸೆ ಆಶಯ ಕೃತಿ ಬಿಡುಗಡೆ ಸಮಾರಂಭ, ಕೃತಿ ಬಿಡುಗಡೆ: ಕನ್ನಡ –ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ. ಧರಣಿದೇವಿ ಮಾಲಗತ್ತಿ, ಕೃತಿ ಕುರಿತು ಮಾತನಾಡುವವರು: ಸಾಹಿತಿ ಟಿ.ಗುರುರಾಜ್, ಅಧ್ಯಕ್ಷತೆ: ಕವಯತ್ರಿ ಪ್ರೊ.ಚ.ಸರ್ವಮಂಗಳ, ಉಪಸ್ಥಿತರು: ಕೃತಿ ಲೇಖಕ ನಾ. ದಿವಾಕರ, ರೂಪ ಪ್ರಕಾಶನದ ಯು.ಎಸ್. ಮಹೇಶ್, ಸ್ಥಳ: ಇಎಂಎಂಆರ್‌ಸಿ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.



ಇಂದಿನ ಪಂಚಾಂಗ

7.1.2024 ಭಾನುವಾರ, ಮಳೆ ನಕ್ಷತ್ರ: ಪೂಷಾ 29.12.2023ರಿಂದ 10.01.2024 ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಕೃಷ್ಣ ಪಕ್ಷ, ತಿಥಿ: ಏಕಾದಶಿ, ನಕ್ಷತ್ರ: ವಿಶಾಖ, ರಾಹುಕಾಲ: ಸಂಜೆ 4.30ರಿಂದ 6ರವರೆಗೆ

■ **ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ:** ವಾರ್ಷಿಕ ವಿಶೇಷ ಪೂಜಾ ಮಹೋತ್ಸವ, ಸಾನ್ನಿಧ್ಯ: ಇಳೈ ಆಳ್ವಾರ್ ಸ್ವಾಮೀಜಿ, ಉದ್ಘಾಟನೆ: ಗಿರಿಜಾರಾಜು, ವೈ.ಆರ್.ರಾಜುಶೆಟ್ಟಿ, ಅಧ್ಯಕ್ಷತೆ: ದಿ ಕೋ ಆಪರೇಟಿವ್ ಬ್ಯಾಂಕ್ ವ್ಯವಸ್ಥಾಪಕ ಹೆಚ್.ರಾಜಶೇಖರ್, ಉಪಸ್ಥಿತರು: ಪಾಳ್ಯಂ ಶ್ರೀ ಶಾಸ್ತಾ ಪೀಠಂನ ಧರ್ಮಾಧಿಕಾರಿ ಎಂ.ಎಸ್.ಮುರಳೀಧರ ಶಾಸ್ತ್ರಾ, ಮುಖ್ಯ ಅತಿಥಿಗಳು: ಎಸ್.ನಾಗರಾಜು, ಲಯನ್ ಡಾ.ಎಸ್.ವೆಂಕಟೇಶ್, ವಿನಯ್ ಬಾಬು, ಸ್ಥಳ: ದೇವಸ್ಥಾನಂ, ರಾಘವೇಂದ್ರನಗರ, ಬೆಳಗ್ಗೆ 11ಕ್ಕೆ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು:** ದಿನದರ್ಶಿಕೆ ಬಿಡುಗಡೆ, ದಿನದರ್ಶಿಕೆ ಬಿಡುಗಡೆ: ವಿಶ್ರಾಂತ ಉಪನಿರ್ದೇಶಕ ಮ.ಗು.ಸದಾನಂದಯ್ಯ, ಮುಖ್ಯ ಅತಿಥಿಗಳು : ಶ್ರೀಮತಿ ಪುಷ್ಪ ಅಯ್ಯಂಗಾರ್, ಅಧ್ಯಕ್ಷತೆ: ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸ್ಥಳ: ಜಿಲ್ಲಾ ಪತ್ರಕರ್ತರ ಭವನ, ಮ.12ಕ್ಕೆ.

■ **ಶ್ರೀ ಶಿರಡಿ ಸಾಯಿ ಭಿಕ್ಷಾ ಕೇಂದ್ರ:** ಗುರು ಸಂವಾದ, ಅಗ್ನಿಹೋತ್ರ ಮಂತ್ರ ದೀಕ್ಷಾ, ಸ್ಥಳ: ಶ್ರೀಮತಿ ಲೀಲಾ ಹೆಚ್. ಚನ್ನಯ್ಯ ಕಲ್ಯಾಣ ಮಂಟಪ, ವಾಲ್ಮೀಕಿ ರಸ್ತೆ, ವಿನಾಯಕನಗರ, ಮಧ್ಯಾಹ್ನ 2 ರಿಂದ.

■ **ವಾಸವಿ ಮಹಿಳಾ ಸಮಾಜ:** ಬೆಳ್ಳಿ ಹಬ್ಬದ ಸಂಭ್ರಮಾಚರಣೆ, ಉದ್ಘಾಟನೆ: ಶ್ರೀ ಕನ್ಯಕಾಪರಮೇಶ್ವರಿ ದೇವಸ್ಥಾನದ ಅಧ್ಯಕ್ಷ ಎಸ್.ಕೆ.ದಿನೇಶ್, ಮುಖ್ಯ ಅತಿಥಿಗಳು: ಚಲನಚಿತ್ರ ನಟಿ ತಾರಾ ಅನುರಾಧ, ಬಹುಮಾನ ವಿತರಣೆ : ಶ್ರೀ ಕನ್ಯಕಾಪರಮೇಶ್ವರಿ ಕೋ –ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಹೆಚ್.ಎಂ. ಸಂದೀಪ್, ಅಧ್ಯಕ್ಷತೆ : ವಾಸವಿ ಮಹಿಳಾ ಸಮಾಜದ ಅಧ್ಯಕ್ಷೆ ಶ್ರೀಮತಿ ಲಕ್ಷ್ಮೀ ದಿನೇಶ್, ಸ್ಥಳ: ಜಗನ್ಮೋಹನ ಅರಮನೆ, ಸಂಜೆ 4ಕ್ಕೆ.

■ **ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು:** ಶಕುಂತಲ ಜಯದೇವ ಶರಣ ಪ್ರಶಸ್ತಿ ಪ್ರದಾನ ಸಮಾರಂಭ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ: ಪರಿಷತ್ ಅಧ್ಯಕ್ಷ ಡಾ.ಸಿ.ಸೋಮಶೇಖರ, ಉದ್ಘಾಟನೆ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಪ್ರಶಸ್ತಿ ಪುರಸ್ಕೃತರು: ಸಾಹಿತಿ ಜಿ.ಎ.ಶಿವಲಿಂಗಯ್ಯ, ನಿವೃತ್ತ ಪ್ರಾಧ್ಯಾಪಕರಾದ ಎಸ್.ಎಸ್.ವಿಜಯ, ಉಪಸ್ಥಿತರು: ದತ್ತಿ ದಾಸೋಹಿ ಶಕುಂತಲ ಜಯದೇವ, ಸ್ಥಳ: ಶ್ರೀ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಸಂಜೆ 5.30ಕ್ಕೆ.

■ **ಆರ್ಟ್ ಆಫ್ ಲಿವಿಂಗ್:** ಧ್ಯಾನದ ಪರಿಚಯ ಕಾರ್ಯಾಗಾರ, ಸ್ಥಳ: 2ನೇ ಮಹಡಿ, ನಳಪಾಕ್ ಪಕ್ಕ, ಸರಸ್ವತಿಪುರಂ, ಸಂಜೆ 5.30ರಿಂದ.

■ **ವಸುಂಧರಾ ಪ್ರದರ್ಶಕ ಕಲೆಗಳ ಕೇಂದ್ರ, ನಾಟ್ಯಾಂಜಲಿ, ಆಸ್ಟಿನ್–ಸ್ಯಾನ್ ಆಂಟೋನಿಯೊ ಟೆಕ್ಸಾಸ್–ಯುಎಸ್‌ಎ:** ಯುಎಸ್‌ಎ ಪ್ರತಿಭಾನ್ವಿತ ನೃತ್ಯಗಾರ ರಿಂದ ನಾಟ್ಯ ಮಾರ್ಗಂ ನೃತ್ಯದ ಅಭಿವ್ಯಕ್ತಿಗಳು (ಭರತನಾಟ್ಯ), ಉದ್ಘಾಟನೆ: ನೃತ್ಯಾಲಯ ಟ್ರಸ್ಟ್ ನಿರ್ದೇಶಕರಾದ ವಿದುಷಿ ಡಾ. ತುಳಸಿ ರಾಮಚಂದ್ರ, ಮುಖ್ಯ ಅತಿಥಿಗಳು: ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್‌ನ ಪ್ರೊ. ಕೆ.ರಾಮಮೂರ್ತಿರಾವ್, ಗೌರವ ಅತಿಥಿಗಳು: ನಾಟ್ಯಾಂಜಲಿ ನಿರ್ದೇಶಕರಾದ ವಿದುಷಿ ಬಾನ ಶಾಸ್ತ್ರಿ ರಾಮನಾಥ್, ಅಧ್ಯಕ್ಷತೆ: ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಡಾ.ವಸುಂಧರಾ ದೊರೆಸ್ವಾಮಿ, ವಿದುಷಿ ಅನುಪ್ರಿಯಾ ಜೋಸ್, ವಿದುಷಿ ಶ್ರುತಿ ಸುಬ್ರಮಣಿಯನ್, ವಿದುಷಿ ತಪಸ್ವಿನಿ ಪರಾಲ್ಕರ್ ಅವರಿಂದ ನೃತ್ಯ ಪ್ರದರ್ಶನ, ಸ್ಥಳ: ರಮಾಗೋವಿಂದ ಕಲಾ ವೇದಿಕೆ ಗಾನಭಾರತಿ, ಆದಿಚುಂಚನಗಿರಿ ರಸ್ತೆ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಸುದರ್ಶನ್ ಕುಮಾರ್, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ–ಸೈಬರ್ ಮಿತ್ರ –ಸೈಬರ್ ಸುರಕ್ಷೆ: ವಾರದ ಮಾತು, ಪ್ರಸ್ತುತಿ–ಸತೀಶ್ ವಿ.ಪ್ರಾಯೋಜಕರು cybermitra.in ಮೈಸೂರು, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ.ಸಂಗಮೇಶ್ ಸವದತ್ತಿ ಮಠ, 6.50 ರೈತರಿಗೆ ಸಲಹೆ, 9.40 ನಮ್ಮ ಆರೋಗ್ಯ ಚಳಿಗಾಲ ಮತ್ತು ಚರ್ಮದ ಆರೈಕೆ ಕುರಿತು ಡಾ. ಜಯದೇವ ಬಿ. ಬೆಟ್‌ಕೆರೂರ್ ಅವರೊಂದಿಗೆ ಮಾತುಕತೆ, 10.00 ಕೇಳಿಗಿಳಿಗಳೇ–ಕಥೆ ಹೇಳ್ತೀಯೋ ಹಾಡು ಹೇಳ್ತೀಯೋ, 10.30 ಮಕ್ಕಳ ಮಂಟಪ–ಸೈಂಟ್ ಜೋಸೆಫ್ ಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಮಧ್ಯಾಹ್ನ: 12.30 ದೇವರನಾಮ–ಆರ್.ವಿ.ಅನುಪಮಾ, 12.45 ಜನಪದ ಸಂಗೀತ, 1.20 ಭಾವಗೀತೆ –ಶೈಲಜಾ ಚಂದ್ರಶೇಖರ್, 4.00 ಯಕ್ಷಗಾನ ತಾಳ ಮದ್ದಲೆ, ಪ್ರಸಂಗ– ಕೌರವ ಜನನ, ಪ್ರಸ್ತುತಿ–ಪುತ್ತೂರು ಕುಕ್ಕುವಳ್ಳಿಯ ತೆಂಕುತಿಟ್ಟು ಯಕ್ಷಗಾನ ವೇದಿಕೆಯ ಸದಸ್ಯರು, 6.50 ಕೃಷಿರಂಗ – ಲಾಭದಾಯಕ ಹೈನುಗಾರಿಕೆ ಕುರಿತು ಲಿಂಗರಾಜು ಅವರೊಂದಿಗೆ ಸಂದರ್ಶನ, 8.00 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ–ಬಾನುಲಿ ಸರಣಿ ಚಾಮರಾಜನಗರದ ದೀನಬಂಧು ಟ್ರಸ್ಟ್‌ನ ಪ್ರೊಫೆಸರ್ ಜಿ.ಎಸ್. ಜಯದೇವ್ ಅವರೊಡನೆ ಸಂದರ್ಶನ, ನಡೆಸಿಕೊಡುತ್ತಾರೆ–ದಿವಾಕರ ಹೆಗಡೆ, 10.00 ರವಿವಾಸರೀಯ ಅಖಿಲ ಭಾರತೀಯ ಸಂಗೀತ ಸಭಾ–ಎಂ.ವಿ. ಸುಬ್ರಾಮಯ್ಯ–ನಾಗಸ್ವರ ವಾದನ

■ **ಟಿವಿಎಸ್ ಮೋಟಾರ್ ಕಂಪನಿ ಲಿಮಿಟೆಡ್ :** ಸಂಗೀತ ಕಾರ್ಯಕ್ರಮ, ಶ್ರೀಮತಿ ಗಾಯತ್ರಿ ವೆಂಕಟರಾಘವನ್ ವೃಂದದವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ, ಮೈಸೂರು ವಿ. ಶ್ರೀಕಾಂತ್–ಪಿಟೀಲು, ತುಮಕೂರು ಬಿ. ರವಿಶಂಕರ್–ಮೃದಂಗ, ಕೆ.ವಿ. ಗೋಪಾಲಕೃಷ್ಣನ್–ಖಂಜಿರ, ಸ್ಥಳ: ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಆವರಣ, ಚಾಮುಂಡಿಬೆಟ್ಟ, ಸಂಜೆ 6ರಿಂದ.

■ **ನಟನ ರಂಗಶಾಲೆ:** ರಂಗಭೂಮಿ ಡಿಪ್ಲೊಮಾ ವಿದ್ಯಾರ್ಥಿಗಳಿಂದ ಡಾ. ಚಂದ್ರಶೇಖರ ಕಂಬಾರ ಅವರ ಮಹಾಮಾಯಿ ನಾಟಕ ಪ್ರದರ್ಶನ, ನಿರ್ದೇಶನ: ರಂಗಶಾಲೆ ಪ್ರಾಂಶುಪಾಲರಾದ ಮೇಘ ಸಮೀರ, ಸ್ಥಳ: ನಟನ ರಂಗಶಾಲೆ, ರಾಮಕೃಷ್ಣನಗರ, ಸಂಜೆ 6.30ಕ್ಕೆ.

■ **ರಂಗಾಯಣ :** ಭಾರತೀಯ ರಂಗ ಶಿಕ್ಷಣ ಕೇಂದ್ರದ ವಿದ್ಯಾರ್ಥಿಗಳಿಂದ ಕಾಕನಕೋಟೆ ನಾಟಕ ಪ್ರದರ್ಶನ, ನಿರ್ದೇಶನ: ರಾಮನಾಥ, ಸ್ಥಳ: ವನರಂಗ ಬಯಲು ರಂಗಮಂದಿರ, ರಂಗಾಯಣ, ಸಂಜೆ 6.30ಕ್ಕೆ.

■ **ಹೆಬ್ಬಾರ್ ಶ್ರೀ ವೈಷ್ಣವ ಸಭಾ, ಬೆಂಗಳೂರು ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ:** ಹೆಸರಾಂತ ಉಪನ್ಯಾಸಕರಾದ ವಿದ್ವಾನ್ ಎಂ.ಕೆ.ಶೆಲ್ವ ನಾರಾಯಣ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಕೃಷ್ಣ ಮೂರ್ತಿಪುರಂ ಶ್ರೀರಾಮಮಂದಿರ, ಸಂಜೆ 6.45ರಿಂದ.

■ **ಅಷ್ಟಾಂಗಯೋಗ ವಿಜ್ಞಾನಮಂದಿರಂ:** ಕೆ. ಸುದರ್ಶನ ಅವರಿಂದ ಆತ್ಮಗುಣಗಳು ಕುರಿತು ಪ್ರವಚನ, ಸ್ಥಳ: ಅಷ್ಟಾಂಗಯೋಗ ವಿಜ್ಞಾನ ಮಂದಿರಂ, ಶೇಷಾದ್ರಿ ಅಯ್ಯರ್ ರಸ್ತೆ, ಲಕ್ಷ್ಮಿಪುರಂ, ಸಂಜೆ 6.45ಕ್ಕೆ.

■ **ರಾಮಕೃಷ್ಣ–ವಿವೇಕಾನಂದ ಭಾವಪ್ರಚಾರ ಪರಿಷತ್ :** 9ನೇ ವಾರ್ಷಿಕ ಸಮ್ಮೇಳನ, ಬೆ. 6.30ಕ್ಕೆ ಉಷಃಕೀರ್ತನೆ ಸ್ವಾಮಿ ಶಿವಪೂರ್ಣಾನಂದಜೀ ಮಹಾರಾಜ್ ಅವರಿಂದ, ಬೆ. 8.15ಕ್ಕೆ ಸೋದರಿ ಚಂದ್ರಿಕಾ ಮತ್ತು ಸೋದರಿ ಸುಜಾತ ಅವರಿಂದ ಬಜನೆ, ದಿವ್ಯತ್ರಯ ದರ್ಶನಧಾರೆ ಭಾಗ–4, ಬೆ. 8.50ಕ್ಕೆ ಮಾತಾಜೀ ಅಮೋಘಮಯಿ ಅವರಿಂದ ಸ್ವಾಗತ, ಬೆ. 9ರಿಂದ ಮಾತಾಜಿ ಚೈತನ್ಯಮಯಿ ಅವರಿಂದ ಮಾತೃತ್ವದ ಮಮತೆಯ ಮಡಿಲು–ಶ್ರೀಮಾತೆ ಶಾರದಾದೇವಿ, ಬೆ. 9.20ರಿಂದ ಮಾತಾಜೀ ತ್ಯಾಗಮಯೀ ಅವರಿಂದ ಭಕ್ತ–ಸಾಧಕರ ಗುರುವಾಗಿ ಶ್ರೀಮಾತೆ, ಬೆ. 9.40ಕ್ಕೆ ಮಾತಾಜೀ ಯೋಗಾ ನಂದಮಯೀ ಅವರಿಂದ ಶ್ರೀ ಗುರುವರ್ಯನಂ ತಿಳಿದ ನೀ ಮಹಿಮಳಮ್ಮ, ಬೆ.10ಕ್ಕೆ ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್ ಅವರಿಂದ ಭಾಷಣ, ಬೆ.10.35ಕ್ಕೆ ಸ್ವಾಮಿ ನಿತ್ಯಸ್ಥಾನಂದಜೀ ಮಹಾರಾಜ್ ಅವರಿಂದ ಶ್ರೀ ರಾಮಕೃಷ್ಣರ ಅವತರಣದ ಉದ್ದೇಶ ಮತ್ತು ವ್ಯಾಪ್ತಿ; ಬೆ. 10.50ಕ್ಕೆ ಸ್ವಾಮಿ ವೀರೇಶಾನಂದಜೀ ಮಹಾರಾಜ್ ಅವರಿಂದ ಋಷಿ ಸಂಸ್ಕೃತಿಯ ಪುನರುತ್ಥಾನ ಮತ್ತು ಧರ್ಮಜಾಗೃತಿ; ಬೆ.11.10ರಿಂದ ಸಾಹಿತಿ ಡಾ.ಸಿ.ಪಿ. ಕೃಷ್ಣಕುಮಾರ್ ಅವರಿಂದ ಭಾಷಣ, ಬೆ. 11.20ಕ್ಕೆ ನಾಡೋಜ ಡಾ.ಹಂಪಾ ನಾಗರಾಜಯ್ಯ ಅವರಿಂದ ರಾಮಕೃಷ್ಣ–ವಿವೇಕಾನಂದ ಭಾವಧಾರೆಯ ಔಚಿತ್ಯ; ಬೆ.11.45ಕ್ಕೆ ಮಾಜಿ ಶಾಸಕ ಡಿ.ಆರ್.ಪಟೇಲ್ ಅವರಿಂದ ಕಿರು ಭಾಷಣ, ಸಾಂಸ್ಕೃತಿಕ ಕಾರ್ಯಕ್ರಮ, ಮ.12ಕ್ಕೆ ಏಕವ್ಯಕ್ತಿ ತಾಳಮದ್ದಳೆ, ಆಕಾಶವಾಣಿ ಕಾರ್ಯಕ್ರಮ ನಿರ್ವಾಹಕ ದಿವಾಕರ್ ಜಿ.ಹೆಗಡೆ ಅವರಿಂದ ಭಾರತೀಯ ಸಂಸ್ಕೃತಿ ಮತ್ತು ಸ್ವಾಮಿ ವಿವೇಕಾನಂದರು ಕುರಿತು ಉಪನ್ಯಾಸ, ಮ.12.40ಕ್ಕೆ ಸ್ವಾಮೀಜಿಯವರಿಗೆ ಯತಿಪೂಜೆ, ಮಾತಾಜೀಯವರಿಗೆ ಮಾತೃಪೂಜೆ, ದಿವ್ಯತ್ರಯ ದರ್ಶನಧಾರೆ ಭಾಗ–5, ಮ. 2.30ರಿಂದ ಸ್ವಾಮಿ ಸರ್ವದರ್ಶನಾನಂದಜೀ ಮಹಾರಾಜ್ ಅವರಿಂದ ಭಜನೆ, ಸ್ವಾಮಿ ಮಹೇಶ್ವರಾನಂದಜೀ ಮಹಾರಾಜ್ ಅವರಿಂದ ಸ್ವಾಗತ, ಮ. 2.45ಕ್ಕೆ ಸ್ವಾಮಿ ಜ್ಞಾನಯೋಗಾನಂದಜೀ ಮಹಾರಾಜ್ ಅವರಿಂದ ಶ್ರೀರಾಮಕೃಷ್ಣ ವಚನವೇದದ ಸಾರಸೂಚಿ, ಮ. 3.05ಕ್ಕೆ ಸ್ವಾಮಿ ಪ್ರಕಾಶಾನಂದಜೀ ಮಹಾರಾಜ್ ಅವರಿಂದ ಶ್ರೀರಾಮಕೃಷ್ಣರ ದೈವತ್ವ–ನೇರ ಶಿಷ್ಯರು ಕಂಡಂತೆ, ಮ. 3.25ಕ್ಕೆ ಸ್ವಾಮಿ ಅಮೂರ್ತಾನಂದಜೀ ಮಹಾರಾಜ್ ಅವರಿಮದ ಸ್ವಾಮಿ ವಿವೇಕಾನಂದರು ಪರಿವ್ರಾಜಕರಾಗಿ ಕಂಡ ಭಾರತ, ಮ. 3.45ಕ್ಕೆ ವಿವೇಕಹಂಸ ಬಳಗ, ಬೆಂಗಳೂರು ಅವರಿಂದ ಭಜನೆ, ಸಂಜೆ 5ರಿಂದ ಸಮಾರೋಪ ಸಮಾರಂಭ, ಸಾನ್ನಿಧ್ಯ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಡಾ.ನಿರ್ಮಲಾನಂದನಾಥ ಮಹಾಸ್ವಾಮೀಜಿ, ಅಧ್ಯಕ್ಷತೆ: ಶ್ರೀರಾಮಕೃಷ್ಣ ಆಶ್ರಮದ ಅಧ್ಯಕ್ಷ ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್, ಉಪಸ್ಥಿತರು: ಸ್ವಾಮಿ ನಿರ್ಭಯಾನಂದ ಸರಸ್ವತಿ, ಸ್ವಾಮಿ ತ್ಯಾಗೀಶ್ವರಾ ನಂದಜೀ ಮಹಾರಾಜ್, ಸ್ವಾಮಿ ಬೋಧ ಸ್ವರೂಪಾನಂದಜೀ ಮಹಾರಾಜ್, ಸ್ವಾಮಿ ವಿನಿಶ್ಚಲಾನಂದಜೀ ಮಹಾರಾಜ್, ಸ್ವಾಮಿ ವೀರೇಶಾನಂದ ಸರಸ್ವತಿ, ಸ್ವಾಮಿ ಪ್ರಕಾಶಾನಂದಜೀ ಮಹಾರಾಜ್, ಮುಖ್ಯ ಅತಿಥಿಗಳು: ಸಚಿವ ಹೆಚ್.ಕೆ. ಪಾಟೀಲ್, ಶಾಸಕ ಟಿ.ಎಸ್.ಶ್ರೀವತ್ಸ ಮಾಜಿ ಶಾಸಕ ಎಸ್.ಎ. ರಾಮದಾಸ್, ಕುವೆಂಪು ವಿವಿ ಮಾಜಿ ಕುಲಪತಿ ಪ್ರೊ.ಚಿದಾನಂದಗೌಡ, ಮಾಜಿ ಮೇಯರ್ ಸುನಂದ ಪಾಲನೇತ್ರ, ಪಾಲಿಕೆ ಸದಸ್ಯ ರಮೇಶ್, ರಾಮಕೃಷ್ಣ ಸೇವಾ ಸಂಘದ ಅಧ್ಯಕ್ಷ ಎಂ. ಪಾಪೇಗೌಡ, ಸನ್ಮಾನಿತರು : ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪ ಮಾಲೀಕರಾದ ಗೋವಿಂದೇಗೌಡ, ಸ್ಥಳ: ಜಯಮ್ಮ ಗೋವಿಂದೇಗವಡ ಕಲ್ಯಾಣ ಮಂಟಪ, ಕುವೆಂಪುನಗರ.



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 7 ಭಾನುವಾರ 2024

ಸಂಪುಟ: 44 | ಸಂಚಿಕೆ: 261 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com


₹4





ಶ್ರೀರಾಮನ ಪ್ರಾಣಪ್ರತಿಷ್ಠೆ ಸಮಯಕ್ಕೆ ರಾಜ್ಯದ ದೇವಾಲಯಗಳಲ್ಲೂ ವಿಶೇಷ ಪೂಜೆ

ಮುಜರಾಯಿ ಇಲಾಖೆ ಅಧಿಕಾರಿಗಳಿಗೆ ಸಚಿವ ರಾಮಲಿಂಗರೆಡ್ಡಿ ಸೂಚನೆ



ಬೆಂಗಳೂರು: ಜ. 22 ರಂದು ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ಶ್ರೀರಾಮಮಂದಿರ ಉದ್ಘಾಟನೆ ನೆರವೇರಲಿದೆ. ಇದೇ ಸಂದರ್ಭದಲ್ಲಿ ರಾಜ್ಯದ ನೂರಾರು ದೇವಾಲಯಗಳಲ್ಲಿಯೂ ವಿಶೇಷ ಪೂಜೆ–ಪುನಸ್ಕಾರಗಳು ನೆರವೇರಲಿವೆ.

ಶನಿವಾರ ಬೆಂಗಳೂರಿನಲ್ಲಿ ಮುಜರಾಯಿ ಇಲಾಖೆ ಅಧಿಕಾರಿಗಳ ಸಭೆ ನಡೆಸಿದ ಸಚಿವ ರಾಮಲಿಂಗಾ ರೆಡ್ಡಿ, ಜನವರಿ 22ರಂದು ಅಯೋಧ್ಯೆ ಶ್ರೀರಾಮ ಮಂದಿರದಲ್ಲಿ ಶ್ರೀ ರಾಮನ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ನಡೆಯಲಿದೆ. ಅದೇ ಸಮಯಕ್ಕೆ ಸರಿಯಾಗಿ ರಾಜ್ಯದ ಮುಜರಾಯಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ದೇವಸ್ಥಾನಗಳಲ್ಲೂ ವಿಶೇಷ ಪೂಜೆ ನೆರವೇರಿಸುವ ಮೂಲಕ ವಿಶೇಷ ಗೌರವ ಸಲ್ಲಿಸುವಂತೆ ಸೂಚಿಸಿದ್ದಾರೆ. ಸೋಮವಾರ (ಜ.8) ಈ ಸಂಬಂಧ ಅಧಿಕೃತ ಆದೇಶ ಹೊರ ಬೀಳುವ ಸಾಧ್ಯತೆಯಿದೆ.

ಅಂದು ಮಧ್ಯಾಹ್ನ 12 ಗಂಟೆ 29 ನಿಮಿಷ 8 ಸೆಕೆಂಡ್‌ನಿಂದ 12 ಗಂಟೆ 30 ನಿಮಿಷ 32 ಸೆಕೆಂಡ್ ಸಮಯದಲ್ಲಿ ರಾಜ್ಯಾದ್ಯಂತ ಏಕಕಾಲಕ್ಕೆ ಎಲ್ಲಾ ದೇವಸ್ಥಾನಗಳಲ್ಲಿ ಮಹಾಮಂಗಳಾರತಿ ನೆರವೇರಲಿದೆ. ಅಲ್ಲದೇ ದೇಶಕ್ಕೆ ಮತ್ತು ರಾಜ್ಯಕ್ಕೆ ಶ್ರೀ ರಾಮನ ರಕ್ಷಣೆ ಇರಲೆಂದು ವಿಶೇಷ ಪ್ರಾರ್ಥನೆ ಸಲ್ಲಿಸಲಾಗುತ್ತದೆ.





ಅತಿಥಿ ಉಪನ್ಯಾಸಕರ ಸೇವಾವಧಿ ಅನ್ವಯ

ಗೌರವಧನ ಹೆಚ್ಚಳ


- ಮುಖ್ಯಮಂತ್ರಿ ಭರವಸೆ
- 5 ವರ್ಷಗಳ ಸೇವಾನುಭವಕ್ಕೆ 5 ಸಾವಿರ; 10 ವರ್ಷದವರೆಗೆ 6 ಸಾವಿರ; 15 ವರ್ಷದವರೆಗೆ 7 ಸಾವಿರ; 15 ವರ್ಷ ಮೇಲ್ಪಟ್ಟವರಿಗೆ 8 ಸಾವಿರ ಹೆಚ್ಚಳ
- ಜೊತೆಗೆ 5 ಲಕ್ಷ ಆರೋಗ್ಯ ವಿಮೆ; 60 ವರ್ಷ ಮೇಲ್ಪಟ್ಟ ನಂತರ 5 ಲಕ್ಷ ಇಡುಗಂಟು; ಮಾಸಿಕ 1 ದಿನ ವೇತನ ಸಹಿತ ರಜೆ; 3 ತಿಂಗಳ ವೇತನ ಸಹಿತ ಮಾತೃತ್ವ ರಜೆ



ಬೆಂಗಳೂರು, ಜ.6(ಕೆಎಂಶಿ)– ಅತಿಥಿ ಉಪನ್ಯಾಸಕರಿಗೆ ಸೇವಾನುಭವ ಆಧಾರದ ಮೇಲೆ ಗೌರವ ಧನವನ್ನು 5 ರಿಂದ 8,000 ರೂ.ಗೆ ಹೆಚ್ಚಳ ಮಾಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಘೋಷಿಸಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಉನ್ನತ ಶಿಕ್ಷಣ ಸಚಿವರೂ ಹಾಗೂ ಅತಿಥಿ ಉಪನ್ಯಾಸಕರ ನಿಯೋಗದ ಜೊತೆ ಚರ್ಚೆ ಮಾಡಿದ ನಂತರ ಸರ್ಕಾರದ ನಿರ್ಧಾರವನ್ನು ಪ್ರಕಟಿಸಿದರು.

ಸಭೆಯ ನಂತರ ಸುದ್ದಿಗಾರರಿಗೆ ವಿಷಯ ತಿಳಿಸಿದ ಮುಖ್ಯಮಂತ್ರಿ ಅವರು, ಅತಿಥಿ ಉಪನ್ಯಾಸಕರ ಬಗ್ಗೆ ಸರ್ಕಾರ ಮಾನವೀಯ ಕಾಳಜಿ ಹೊಂದಿದೆ, ಸೇವಾ ಭದ್ರತೆ ನೀಡಲು ಕಾನೂನು ತೊಡಕು ಇರುವುದರಿಂದ ಸಾಧ್ಯವಾಗುವುದಿಲ್ಲ ಎಂದರು. ವಿರೋಧ ಪಕ್ಷದ ನಾಯಕನಾಗಿದ್ದಾಗಲೂ ಅತಿಥಿ ಉಪನ್ಯಾಸಕರ ಪರವಾಗಿ ತಾವು ದನಿ ಎತ್ತಿ ವೇತನ ಹೆಚ್ಚಳಕ್ಕೆ ಒತ್ತಾಯಿಸಿದ್ದನ್ನು ಸ್ಮರಿಸಿಕೊಂಡ ಮುಖ್ಯಮಂತ್ರಿಗಳು, ಇದೀಗ ಎರಡೇ ವರ್ಷದೊಳಗೆ ನಮ್ಮ ಸರ್ಕಾರ ಮತ್ತೆ ನಿಮ್ಮ ವೇತನ ಹೆಚ್ಚಳಕ್ಕೆ ಮುಂದಾಗಿದೆ, ಸರ್ಕಾರ ಅತಿಥಿ ಉಪನ್ಯಾಸಕರ ಬೇಡಿಕೆಗಳನ್ನು ಅತ್ಯಂತ ಸಹಾನುಭೂತಿಯಿಂದ ಪರಿಗಣಿಸಿದೆ.




ಐದು ವರ್ಷಕ್ಕಿಂತ ಕಡಿಮೆ ಸೇವಾನುಭವ ಹೊಂದಿದವರಿಗೆ 5 ಸಾವಿರ ರೂ., 5 ರಿಂದ 10 ವರ್ಷದ ಸೇವಾನುಭವ ಹೊಂದಿದವರಿಗೆ 6 ಸಾವಿರ ರೂ., 10 ರಿಂದ 15 ವರ್ಷದ ಸೇವಾನುಭವ ಹೊಂದಿದವರಿಗೆ 7 ಸಾವಿರ ರೂ. ಹಾಗೂ 15 ವರ್ಷಕ್ಕಿಂತ ಹೆಚ್ಚಿನ ಸೇವಾನುಭವ ಹೊಂದಿದವರಿಗೆ 8 ಸಾವಿರ ● 6ನೇ ಪುಟಕ್ಕೆ

ಅಯೋಧ್ಯೆ ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆಗೆ ಕಾವೇರಿ ತೀರ್ಥ



ಅಯೋಧ್ಯೆಯಲ್ಲಿ ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆ ಅಭಿಷೇಕಕ್ಕೆ ವಿಹೆಚ್‌ಪಿ ಪದಾಧಿಕಾರಿಗಳು ತಲಕಾವೇರಿಯಲ್ಲಿ ಪವಿತ್ರ ತೀರ್ಥವನ್ನು ಸ್ವೀಕರಿಸಿದರು.

ಮಡಿಕೇರಿ,ಜ.6– ಅಯೋಧ್ಯೆಯಲ್ಲಿ ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆ ಸಂದರ್ಭ ಅಭಿಷೇಕಕ್ಕೆ ದೇಶಾದ್ಯಂತ ಪವಿತ್ರ ಸಪ್ತ ನದಿಗಳ ತೀರ್ಥವನ್ನು ಸಂಗ್ರಹಿಸಲಾಗುತ್ತಿದೆ. ದಕ್ಷಿಣ ಭಾರತದ ಪುಣ್ಯನದಿ ಕಾವೇರಿ ಮಾತೆಯ ಪವಿತ್ರ ತೀರ್ಥವನ್ನು ಅಖಿಲ ಭಾರತೀಯ ಸಂತ ಸಮಿತಿಯ ಕರ್ನಾಟಕ, ತಮಿಳುನಾಡು ಹಾಗೂ ಕೊಡಗು ಜಿಲ್ಲಾ ಘಟಕ, ಕೊಡಗು ಜಿಲ್ಲಾ ವಿಶ್ವ ಹಿಂದೂ ಪರಿಷತ್ ಪದಾಧಿಕಾರಿಗಳು ತಲಕಾವೇರಿಯಲ್ಲಿ ಸ್ವೀಕರಿಸಿದರು.



ತಲಕಾವೇರಿಯಲ್ಲಿ ತಮಿಳುನಾಡು ಮಯಿಲಾಡುತುರೈ ಜಿಲ್ಲೆಯ ಧರ್ಮಾಪುರಂ ಅಧೀನಂನ ಪೀಠಾಧಿಪತಿ ಮಾಸಿಲಾಮಣಿ ದೇಸಿಗ ಜ್ಞಾನ ಸಂಬಂಧ ಸ್ವಾಮೀಜಿ ಅವರು ಹೋಮ ಹವನದೊಂದಿಗೆ ಕಾವೇರಿ ಮಾತೆಯ ನಾಮ ಜಪ ಮಾಡಿ, ವಿಶೇಷ ಪೂಜೆ ಸಲ್ಲಿಸುವ ಮೂಲಕ ಪವಿತ್ರ ತೀರ್ಥವನ್ನು ಬ್ರಹ್ಮಕುಂಡಿಕೆಯಿಂದ ತಲಕಾವೇರಿ ದೇವಾಲಯದ ಪ್ರಧಾನ ಅರ್ಚಕರಿಂದ ಸ್ವೀಕರಿಸಿದರು. ಈ ಸಂದರ್ಭ ಧರ್ಮಾಪುರಂ ಅಧೀನಂನ ಪೀಠಾಧಿಪತಿ ಮಾಸಿಲಾಮಣಿ ದೇಸಿಗ ಜ್ಞಾನ ಸಂಬಂಧ ಸ್ವಾಮೀಜಿ ● 9ನೇ ಪುಟಕ್ಕೆ

ಹಾಸನದಲ್ಲಿ ಶ್ರೀಲಂಕಾ ಮಾದರಿ ಆನೆ ಧಾಮ






ಕೆ.ಎನ್.ರಾಜಣ್ಣ

ಹಾಸನ, ಜ.6–ಜಿಲ್ಲೆಯ ಕಾಡಂಚಿನ ಭಾಗದ ಜನರನ್ನು ಅಕ್ಷರಶಃ ಜೀವ ಭಯದಲ್ಲಿ ಮುಳುಗಿಸಿರುವ ಕಾಡಾನೆ ಹಾವಳಿಗೆ ಸರಣಿಯಾಗಿ ಜನರು ಬಲಿಯಾಗುತ್ತಿದ್ದಾರೆ. ಸತತ ಎರಡು ದಶಕಗಳಿಂದ ಕಾಡಾನೆ ಜೊತೆಗೆ ಸಂಘರ್ಷ ಮಾಡಿಕೊಂಡೇ ಜೀವನ ಸಾಗಿಸಿದ ಜನರು ಇದೀಗ ಹಿಂಡು ಹಿಂಡಾಗಿ ದಾಳಿಯಿಡುತ್ತಾ ಅಪಾಯ ತಂದೊಡ್ಡುತ್ತಿರೊ ಗಜಪಡೆ ಯನ್ನು ನಿಯಂತ್ರಣ ಮಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಬೇಲೂರು ತಾಲೂಕಿನ ಮತ್ತಾವರ ಗ್ರಾಮದಲ್ಲಿ ಶನಿವಾರ ಕಾರ್ಮಿಕ ಕಾಡಾನೆ ದಾಳಿಗೆ ಬಲಿಯಾದ ಬಳಿಕ ನಡೆದ ಬೃಹತ್ ಹೋರಾಟ ಆರಂಭವಾಗಿದೆ. ನಂತರ ಶನಿವಾರ ಮೃತ ಕಾರ್ಮಿಕನ ಮನೆಗೆ ಆಗಮಿಸಿದ್ದ ಉಸ್ತುವಾರಿ ಸಚಿವ ಕೆ.ಎನ್.ರಾಜಣ್ಣ ಹಾಸನ ಜಿಲ್ಲೆಯಲ್ಲೂ ಶ್ರೀಲಂಕಾ ಮಾದರಿಯಲ್ಲಿ ಆನೆ ಧಾಮ ನಿರ್ಮಾಣ ಮಾಡುವ ಬಗ್ಗೆ ಪ್ರಸ್ತಾಪಿಸಿದ್ದಾರೆ. ಜತೆಗೆ, ಭಾನುವಾರದಿಂದಲೇ ಜಿಲ್ಲೆಯ ಪುಂಡಾನೆಗಳ ಸೆರೆಗೆ ಕಾರ್ಯಾಚರಣೆ ಆರಂಭಿಸುವುದಾಗಿ ಹೇಳಿದ್ದಾರೆ. ಹಾಸನ ಜಿಲ್ಲೆಯ ಸಕಲೇಶಪುರ, ಆಲೂರು ಹಾಗೂ ಬೇಲೂರು ತಾಲೂಕಿನ ಕಾಡಂಚಿನ ಜನರನ್ನ ಆತಂಕಕ್ಕೆ ದೂಡಿರುವ ಕಾಡಾನೆಗಳ ಸಮಸ್ಯೆಗೆ ಮುಕ್ತಿಹಾಡೋ ಬಗ್ಗೆ ಕಡೆಗೂ ಸರ್ಕಾರ ಮನಸ್ಸು ಮಾಡಿರೊದಾಗಿ ಹೇಳಿಕೊಂಡಿದೆ. ಜನವರಿ 4ರ ಸಂಜೆ ಕಾಡಾನೆ ದಾಳಿಗೆ ಬಲಿಯಾಗಿದ್ದ ಬೇಲೂರು ತಾಲೂಕಿನ ಮತ್ತಾವರ ಗ್ರಾಮದ ಕಾರ್ಮಿಕ ವಸಂತ್ ಮನೆಗೆ ಇಂದು ಭೇಟಿ ನೀಡಿ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದ ಹಾಸನ ಜಿಲ್ಲಾ ಉಸ್ತುವಾರಿ ● 6ನೇ ಪುಟಕ್ಕೆ

ಮೈಸೂರು ಪ್ರವಾಸೋದ್ಯಮಕ್ಕೆ ಒತ್ತಾಸೆಯಾಗಿ ಜ.26ರಿಂದ ಮೂರು ದಿನ ‘ಮೈಸೂರು ಫೆಸ್ಟ್’

ಚಿತ್ರಸಂತೆ, ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆ: ವಿಶೇಷ ಖಾದ್ಯಗಳ ಮಳಿಗೆ; ಹಲವು ಮನರಂಜನೆ; ಮೈಸೂರಿನ ಕಲೆ, ಸಂಸ್ಕೃತಿ, ಪ್ರವಾಸಿ ತಾಣಗಳ ಬಗ್ಗೆ ಸಮಗ್ರ ಮಾಹಿತಿ



ಮೈಸೂರು ವಿಶ್ವವಿದ್ಯಾಲಯದ ಬಯಲು ರಂಗಮಂದಿರ

ಮೈಸೂರು, ಜ.6– ಮೂರು ದಿನಗಳ ಕಾಲ ಮೈಸೂರು ಫೆಸ್ಟ್–2024 ಕಾರ್ಯಕ್ರಮವನ್ನು ಮೈಸೂರು ವಿಶ್ವವಿದ್ಯಾಲಯದ ಬಯಲು ರಂಗಮಂದಿರದಲ್ಲಿ ಆಯೋಜಿಸಲಾಗುತ್ತಿದ್ದು, ಮೈಸೂರಿನ ಕಲೆ, ಸಂಸ್ಕೃತಿ ಮತ್ತು ಪ್ರವಾಸಿತಾಣಗಳ ಬಗ್ಗೆ ಪ್ರವಾಸಿಗರಿಗೆ ಮಾಹಿತಿ ನೀಡಲು ಇದು ಒಂದು ಉತ್ತಮ ವೇದಿಕೆಯಾಗಲಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ ತಿಳಿಸಿದರು. ಇಂದು ಪ್ರವಾಸೋದ್ಯಮ ಇಲಾಖೆಯ ಮಯೂರ ಹೋಟೆಲ್‌ನಲ್ಲಿ ● 9ನೇ ಪುಟಕ್ಕೆ

> ಮೈಸೂರಿನ ಪ್ರಮುಖ ಪ್ರವಾಸಿ ಸ್ಥಳಗಳು, ಹೋಟೆಲ್, ವಿಮಾನ ನಿಲ್ದಾಣ, ರೈಲ್ವೆ ಹಾಗೂ ಮೈಸೂರಿನ ಪ್ರಮುಖ ವೃತ್ತ ಹಾಗೂ ರಸ್ತೆಗಳಲ್ಲಿ ಸ್ವಯಂ ಪ್ರೇರಿತರಾಗಿ ಲೋಗೋವನ್ನು ಪ್ರದರ್ಶಿಸಲು ಮುಂದಾಗಬೇಕು. ನೇರ ಪಾಲುದಾರರು ಬ್ರಾಂಡ್ ಮೈಸೂರು ಲೋಗೋ ಹಾಗೂ ಮೈಸೂರು ಫೆಸ್ಟ್ 2024 ಕಾರ್ಯಕ್ರಮದ ಕುರಿತು ಹೆಚ್ಚಿನ ರೀತಿಯಲ್ಲಿ ವಿವಿಧ ಮಾಧ್ಯಮಗಳ ಮೂಲಕ ಪ್ರಚಾರ ಮಾಡಬೇಕು ಜೊತೆಗೆ ಈ ಬಾರಿಯ ಮೈಸೂರು ಫೆಸ್ಟ್‌ನಲ್ಲಿ ಒಂದೇ ಸೂರಿನಲ್ಲಿ ಮೈಸೂರು ಬ್ರಾಂಡ್ ಉತ್ಪನ್ನಗಳನ್ನು ರಿಯಾಯಿತಿ ದರದಲ್ಲಿ ಮಾರಾಟ ಮಾಡುವ ಮಳಿಗೆಗಳನ್ನು ತೆರೆಯಲಾಗು ವುದು. ಜೊತೆಗೆ ಪ್ರವಾಸೋದ್ಯಮ ಇಲಾಖೆಯಿಂದ ವಿವಿಧ ಪ್ರವಾಸಿ ಸ್ಥಳಗಳನ್ನು ವೀಕ್ಷಿಸಲು ಬರುವ ಪ್ರವಾಸಿಗರಿಗೆ ಬ್ರಾಂಡ್ ಮೈಸೂರು ಫೆಸ್ಟ್ ಬಗ್ಗೆ ಹೆಚ್ಚಿನ ಮಾಹಿತಿಯನ್ನು ನೀಡಲು ಪ್ರವಾಸಿ ತಾಣಗಳಲ್ಲಿ ಪೋಸ್ಟರ್, ಬ್ಯಾನರ್‌ಗಳನ್ನು ಅಳವಡಿಸಲಾಗುವುದು.
>
> – ಎಂ.ಕೆ. ಸವಿತಾ, ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕಿ



ಲೋಕಸಭಾ ಚುನಾವಣೆಯಲ್ಲಿ ನಿರೀಕ್ಷಿತ ಫಲಿತಾಂಶ ಬಂದರೆ ಮಹತ್ತರ ರಾಜಕೀಯ ಬದಲಾವಣೆ

- ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭವಿಷ್ಯ
- ಸದ್ಯಕ್ಕೆ ರಾಜ್ಯದ 28 ಕ್ಷೇತ್ರದಲ್ಲೂ ಬಿಜೆಪಿ ಗೆಲ್ಲುವ ವಾತಾವರಣವಿದೆ
- ಹಳೇ ಮೈಸೂರು ಭಾಗದಲ್ಲಿ ಅಧಿಕ ಸ್ಥಾನ ಗೆದ್ದರೆ ಬಿಜೆಪಿಗೆ ಬಹುಮತ

ಮೈಸೂರು, ಜ.6(ಎಸ್‌ಬಿಡಿ)–ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದಲ್ಲಿ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹ ಫಲಿತಾಂಶವನ್ನು ಬಿಜೆಪಿ ಸಾಧಿಸಲಿದ್ದು, ಇದನ್ನು ತಡೆಯಲು ಸಾಧ್ಯವಿಲ್ಲ. ಆ ಮೂಲಕ ರಾಜ್ಯದ ರಾಜಕೀಯದಲ್ಲಿ ಊಹಿಸಲಾಗದ ಬದಲಾವಣೆ ಆಗಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ಧಾರ್ಮಿಕ ಕಾರ್ಯಕ್ರಮಗಳ ನಿಮಿತ್ತ ಶನಿವಾರ ಮೈಸೂರಿಗೆ ಆಗಮಿಸಿದ್ದ ಅವರು, ಪಕ್ಷದ ಕಚೇರಿಗೆ ಭೇಟಿ ನೀಡಿ, ನಗರ ಹಾಗೂ ಜಿಲ್ಲಾ ಘಟಕಗಳಿಂದ ಅಭಿನಂದನೆ ಸ್ವೀಕರಿಸಿದ ಬಳಿಕ ನೆರೆದಿದ್ದ ಮುಖಂಡರು ಹಾಗೂ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದರು.

ಇಡೀ ದೇಶದ ಜನ ಪ್ರಧಾನಿ ಮೋದಿ ಅವರ ಕಡೆ ನೋಡುತ್ತಿದ್ದಾರೆ. ರಾಜ್ಯದಲ್ಲೂ ಬದಲಾವಣೆ ಕಾಣುತ್ತಿದ್ದು ಎಲ್ಲಾ 28 ಕ್ಷೇತ್ರಗಳಲ್ಲೂ ಬಿಜೆಪಿ ಗೆಲ್ಲಬಹುದೆಂಬ ವಾತಾವರಣ ನಿರ್ಮಾಣವಾಗಿದೆ. ರಾಜ್ಯದ ಇತಿಹಾಸದ ಪುಟಗಳಲ್ಲಿ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹ ಗೆಲುವನ್ನು ಬಿಜೆಪಿ ಸಾಧಿಸುವುದು ನಿಶ್ಚಿತ. ಇದನ್ನು ತಡೆಯಲು ಸಾಧ್ಯವಿಲ್ಲ. ನಾವು ಅಂದುಕೊಂಡಂತೆ ಫಲಿತಾಂಶ ಬಂದರೆ ನಂತರ ರಾಜ್ಯದ ರಾಜಕೀಯ ಬದಲಾವಣೆ ಹೇಗಾಗುತ್ತದೆ, ಪರಿಣಾಮಗಳೇನಾಗುತ್ತವೆ ಎಂಬುದನ್ನು ಊಹಿಸಿಕೊಳ್ಳಲು ಸಾಧ್ಯವಿಲ್ಲ. ಆ ರೀತಿಯ ಬದಲಾವಣೆ ಆಗುತ್ತದೆ ಎಂದರು.

ಮನಃಸ್ಥಿತಿ ಬದಲಾಗಬೇಕು: ನಾವು ನಮ್ಮ ಗುರಿ ತಲುಪಬೇಕಾದರೆ ನಮ್ಮ ಪಕ್ಷದ ಮುಖಂಡರ ಮಾನಸಿಕ ಸ್ಥಿತಿ ಬದಲಾವಣೆಯಾಗಬೇಕು. ನಾವು ಕೇವಲ ಒಂದು ಜಾತಿ ಅಥವಾ ವರ್ಗಕ್ಕೆ ಸೀಮಿತವಾಗಿ ಯೋಚಿಸಿದರೆ ಪಕ್ಷ ಬೆಳೆಯಲು ಸಾಧ್ಯವಿಲ್ಲ. ನಮ್ಮ ಕಾರ್ಯಕರ್ತರು ವಿಧಾನಸಭೆ ಚುನಾವಣೆ, ಲೋಕಸಭಾ ಚುನಾವಣೆಯಲ್ಲಿ ತಾವೇ ಅಭ್ಯರ್ಥಿಗಳು ಎನ್ನುವಂತೆ ಸೇನಾನಿಯಂತೆ ಹಗಲು ರಾತ್ರಿ ದುಡಿಯುತ್ತಾರೆ. ಹಾಗೆಯೇ ಕಾರ್ಯಕರ್ತರ ಚುನಾವಣೆಗಳಾದ ಜಿಲ್ಲಾ ಪಂಚಾಯ್ತಿ, ತಾಲೂಕು ಪಂಚಾಯ್ತಿ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನೂ ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಈ ಚುನಾವಣೆಗಳು ಕಾರ್ಯಕರ್ತರಿಗೆ ಶಕ್ತಿ ನೀಡುತ್ತವೆ. ಇದರಿಂದ ಪಕ್ಷದ ಬೇರು ಇನ್ನೂ ಗಟ್ಟಿಯಾಗಿ ಪಕ್ಷ ಮತ್ತಷ್ಟು ಯಶಸ್ಸು ಗಳಿಸಲು ಸಾಧ್ಯವಿದೆ ಎಂದು ಅಭಿಪ್ರಾಯಿಸಿದರು.

ಹಳೇ ಮೈಸೂರಲ್ಲಿ ಗೆಲ್ಲಲೇಬೇಕು: ಪಕ್ಷದ ಪದಾಧಿಕಾರಿಗಳ ನೇಮಕದಲ್ಲಿ ಹಳೇ ಮೈಸೂರು ಭಾಗಕ್ಕೆ ಪ್ರಾತಿನಿಧ್ಯ ನೀಡಿದ್ದಾರೆಂಬ ಶಾಸಕ ಟಿ.ಎಸ್.ಶ್ರೀವತ್ಸ ಅವರ ಹೇಳಿಕೆ ಉಲ್ಲೇಖಿಸಿ ಮಾತನಾಡಿದ ವಿಜಯೇಂದ್ರ, ಮುಂದಿನ ದಿನಗಳಲ್ಲಿ ಬಿಜೆಪಿ ಸ್ಪಷ್ಟ ಬಹುಮತದೊಂದಿಗೆ ರಾಜ್ಯದಲ್ಲಿ ಅಧಿಕಾರಕ್ಕೆ ಬರಬೇಕಾದರೆ ಹಳೇ ಮೈಸೂರು ಭಾಗದಲ್ಲಿ ಅತೀ ಹೆಚ್ಚು ಸ್ಥಾನಗಳನ್ನು ಗೆಲ್ಲಲೇಬೇಕಿದೆ. ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು ಹಾಗೂ ಹಾಸನ ಈ ಭಾಗದಲ್ಲಿ ಹೆಚ್ಚು ಸ್ಥಾನದಲ್ಲಿ ಗೆದ್ದರೆ ಮಾತ್ರ ಬಿಜೆಪಿ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬಂದು ● 9ನೇ ಪುಟಕ್ಕೆ



ಮೈಸೂರಿನ ಬಿಜೆಪಿ ಕಚೇರಿಗೆ ಶನಿವಾರ ಭೇಟಿ ನೀಡಿದ್ದ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರನ್ನು ನಗರ ಹಾಗೂ ಜಿಲ್ಲಾ ಘಟಕದ ಪರವಾಗಿ ನಗರಾಧ್ಯಕ್ಷರೂ ಆದ ಶಾಸಕ ಟಿ.ಎಸ್.ಶ್ರೀವತ್ಸ ಅಭಿನಂದಿಸಿದರು. ಮಾಜಿ ಶಾಸಕರಾದ ಎಸ್.ಎ.ರಾಮದಾಸ್, ಎಲ್.ನಾಗೇಂದ್ರ, ಪಕ್ಷದ ರಾಜ್ಯ ಪದಾಧಿಕಾರಿಗಳಾದ ಪ್ರೀತಂ ಗೌಡ, ಎನ್.ಮಹೇಶ್, ಓಬಿಸಿ ಮೋರ್ಚಾದ ಆರ್.ರಘು, ಅಲ್ಪಸಂಖ್ಯಾತ ಮೋರ್ಚಾದ ಅನಿಲ್ ಥಾಮಸ್, ಮಾಜಿ ಎಂಎಲ್‌ಸಿ ಸಿದ್ದರಾಜು, ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್ ಮತ್ತಿತರರು ಉಪಸ್ಥಿತರಿದ್ದರು.

ಕಾಂಗ್ರೆಸ್ ಗ್ಯಾರಂಟಿ ಗಾಡಿ ಪಂಕ್ಚರ್...

> ದೇಶದಲ್ಲೇ ಒಂದು ಸರ್ಕಾರ ಆರೇಳು ತಿಂಗಳಲ್ಲೇ ಜನಪ್ರಿಯತೆ ಕಳೆದುಕೊಂಡಿದೆ ಎಂದರೆ ಅದು ಕರ್ನಾಟಕದ ಕಾಂಗ್ರೆಸ್ ಸರ್ಕಾರ. ಮಧ್ಯಪ್ರದೇಶ, ರಾಜಸ್ಥಾನ, ಛತ್ತೀಸ್‌ಘಡ ವಿಧಾನಸಭಾ ಚುನಾವಣೆ ಫಲಿತಾಂಶದ ನಂತರವಂತೂ ಕಾಂಗ್ರೆಸ್ ಗ್ಯಾರಂಟಿ ಗಾಡಿ ಕೂಡ ಪಂಕ್ಚರ್ ಆಗಿದೆ. ಕಾಂಗ್ರೆಸ್ ಪಕ್ಷದವರು ಉತ್ಸಾಹ ಕಳೆದುಕೊಂಡಿದ್ದಾರೆ. ಹಾಗಾಗಿ ಸತೀಶ್ ಜಾರಕಿಹೊಳಿ ಒಬ್ಬರು ಸಿಎಂ, ಒಬ್ಬರು ಡಿಸಿಎಂ ಸಾಕಾಗುವುದಿಲ್ಲ. ಮುಂದಿನ ಲೋಕಸಭಾ ಚುನಾವಣೆ ಎದುರಿಸಲು ಐದು ಡಿಸಿಎಂಗಳು ಬೇಕು ಎಂದು ಗಲಾಟೆ ಶುರು ಮಾಡಿದ್ದಾರೆ. –ಬಿ.ವೈ.ವಿಜಯೇಂದ್ರ

ನಕ್ಕರೆ ಅದೇ ಸ್ವರ್ಗ

ಆತ : ಸಾರ್, ನೀವು ಕೊಟ್ಟ ಲಕೋಟೆ ಅಂಚೆ ಡಬ್ಬದಲ್ಲಿ ಹಾಕಿ ಬಂದೆ. ಅದರ ಮೇಲೆ ವಿಳಾಸ ಬರೆದಿರಲಿಲ್ಲ

ಅವರು : ಮೊದಲೇ ಯಾಕೆ ಹೇಳಬಾರದಿತ್ತು!

ಆತ : ನೀವು ಯಾರಿಗೆ ಪತ್ರ ಕಳಿಸ್ತಿದ್ದೀರಿ ಅನ್ನೋದು ನನಗೆ ಸಹ ತಿಳಿಯಬಾರದು ಅಂತ ನೀವು ವಿಳಾಸ ಬರೆದಿಲ್ಲ ಅಂದುಕೊಂಡೆ ಸಾರ್!

ಮೈಸೂರು ಮಿತ್ರ

ಭಾನುವಾರ, 7 ಜನವರಿ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಬುದ್ಧಿವಂತರು ತಾವು ಇಚ್ಛಾಪೂರ್ವಕವಾಗಿ ಕೈಗೊಂಡ ಕಾರ್ಯವನ್ನು ಕೈಗೂಡುವವರೆಗೂ ಬಿಡುವುದಿಲ್ಲ –ಸಮಯೋಚಿತ ಪದ್ಯಮಾಲಿಕಾ

ವೇದ ಸುಳ್ಳಾದರೂ { ಒಪ್ಪವಿಲ್ಲದ ಮಾತು
ಗಾದೆ ಸುಳ್ಳಾಗದು { ತುಪ್ಪವಿಲ್ಲದ ಊಟ

ನಿಮ್ಮ ಪತ್ರಗಳು

ಮೈಸೂರು ವಿಮಾನ ನಿಲ್ದಾಣಕ್ಕೆ ನಾಲ್ವಡಿಯವರ ಹೆಸರು ಇಡಲು ಸರ್ಕಾರ ಮುಂದಾಗಲಿ!

ಮಾನ್ಯರೆ,

ರಾಜ್ಯದ ನಾಲ್ಕೂ ವಿಮಾನ ನಿಲ್ದಾಣಗಳಿಗೆ ರಾಜ್ಯದ ಮಹಾನ್ ಸಾಧಕರ ಹೆಸರನ್ನು ಇಡಲು ವಿಧಾನಸಭೆ ಹಾಗೂ ವಿಧಾನಪರಿಷತ್‌ನಲ್ಲಿ ಸರ್ವಾನುಮತದಿಂದ ಒಪ್ಪಿಗೆ ಸೂಚಿಸಿ ಕೇಂದ್ರಕ್ಕೆ ಕಳುಹಿಸಲು ತೀರ್ಮಾನಿಸಲಾಗಿದೆ. ಸದ್ಯ ಕುತೂಹಲದ ಸಂಗತಿಯೆಂದರೆ ಮೈಸೂರು ವಿಮಾನ ನಿಲ್ದಾಣಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರ್ ಅಥವಾ ಟಿಪ್ಪು ಸುಲ್ತಾನ್ ಹೆಸರಿಡಬೇಕು ಎಂದು ಚರ್ಚೆಯಾಗುತ್ತಿದೆ. ಈ ಬಗ್ಗೆ ಹೀಗಾಗಲೇ ಎಲ್ಲಾ ವಿವಿಧ ವಲಯಗಳ ಗಣ್ಯರಿಂದ ಸಾಕಷ್ಟು ಪರ ವಿರೋಧ ಅಭಿಪ್ರಾಯಗಳು ವ್ಯಕ್ತವಾಗಿದೆ. ಮೈಸೂರು ವಿಮಾನ ನಿಲ್ದಾಣಕ್ಕೆ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಹೆಸರು ಅತ್ಯಂತ ಹೆಚ್ಚು ಸೂಕ್ತ. ಮೈಸೂರು ರಾಜ್ಯದ ಸರ್ವತೋಮುಖ ಅಭಿವೃದ್ಧಿ ಮತ್ತು ಇವರ ಕಾಲದಲ್ಲಿ ಇಡೀ ಭರತ ಖಂಡದಲ್ಲಿ ಯಾವ ಸಂಸ್ಥಾನವೂ ಕಾಣದ ಅಭಿವೃದ್ಧಿಯನ್ನು ಮೈಸೂರು ರಾಜ್ಯವು ಕಂಡಿದ್ದರಿಂದ ಈ ಸಂಸ್ಥಾನಕ್ಕೆ 'ಮಾದರಿ ಮೈಸೂರು' ಎಂಬ ಕೀರ್ತಿ ಕೂಡ ಆಗಿನ ಕಾಲದಲ್ಲೇ ಗಾಂಧೀಜಿಯವರಿಂದ ಸಿಕ್ಕಿತ್ತು. ಇಡೀ ದೇಶವೇ ಹಾಹಾಕಾರ ಹಾಗೂ ಬರಗಾಲದಿಂದ ತೀವ್ರವಾಗಿ ತತ್ತರಿಸಿದಂತ ಸಂದರ್ಭದಲ್ಲೂ ಮೈಸೂರು ಸಂಸ್ಥಾನ ಮಾತ್ರ ಯಾವುದೇ ತೊಂದರೆಗೆ ಒಳಗಾಗದೆ ಜನಗಳಿಗೆ ಇನ್ನಷ್ಟು ಹತ್ತಿರವಾಗಿ ಆಡಳಿತ ಕೊಟ್ಟ ಮಾದರಿಯಾಗಿತ್ತು. ಇದನ್ನು ಅರಿತ ಗಾಂಧೀಜಿ ಒಮ್ಮೆ ನಾಲ್ವಡಿ ಕೃಷ್ಣರಾಜ ಒಡೆಯರ್ ಕುರಿತು ರಾಜರ್ಷಿ ಎಂಬ ಬಿರುದು ನೀಡಿ ಇಡೀ ದೇಶದಲ್ಲಿ ಆಳ್ವಿಕೆಗೆ ಅತ್ಯುತ್ತಮ ಉದಾಹರಣೆ ಎಂದರೆ ಮೈಸೂರು ಸಂಸ್ಥಾನದ ನಾಲ್ವಡಿ ಅವರ ರೀತಿ ಜನಗಳಿಗೆ ಅನುಕೂಲವಾಗುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಅಂತ ಹೇಳಿದ್ದು ಇವರ ನಿಸ್ವಾರ್ಥ ಸೇವೆಗೆ ಹಿಡಿದ ಕೈಗನ್ನಡಿ. ಜನಗಳಿಗಾಗಿ ಅಪಾರವಾದ ತ್ಯಾಗ ಮಾಡಿ ಕೆಆರ್‌ಎಸ್ ಅಣೆಕಟ್ಟು ಕಟ್ಟುವ ಸಮಯದಲ್ಲಿ ತನ್ನ ತಾಯಿ ಹಾಗೂ ಹೆಂಡತಿಯ ಒಡವೆಗಳನ್ನು ಮುಂಬೈಗೆ ಹೋಗಿ ಆ ಚಿನ್ನಾಭರಣಗಳನ್ನು ಮಾರಿ ಕೆಆರ್‌ಎಸ್ ಅಣೆಕಟ್ಟು ಕಟ್ಟಿಸಿಕೊಟ್ಟಿದ್ದು ಇತಿಹಾಸ. ಮೈಸೂರಿನ ಜಿಲ್ಲಾಧಿಕಾರಿ ಕಚೇರಿ, ಜಗನ್ಮೋಹನ್ ಪ್ಯಾಲೇಸ್, ಲಲಿತ್ ಮಹಲ್ ಇಂತಹ ಎಷ್ಟೋ ಅಸಂಖ್ಯಾತ ಕಟ್ಟಡಗಳು ದೂರದ ಇಂಗ್ಲೆಂಡಿನ ಲಂಡನ್ ನಗರದಲ್ಲಿ ಇರುವಂತಹ ಕಟ್ಟಡಗಳೊಂದಿಗೆ ಸಾಮ್ಯತೆ ಕಂಡುಬರುತ್ತದೆ.! ಇಂತಹ ಅದ್ವಿತೀಯ ಸಾಧನೆ ಮಾಡಿ ದೂರದೃಷ್ಟಿಯ ಚಾಣಾಕ್ಷತನದಿಂದ ನಾಲ್ವಡಿಯವರು ಎಲ್ಲರಿಗೂ ಪ್ರಿಯರಾಗಿದ್ದಾರೆ..!

ಮತ್ತೊಂದು ಪ್ರಮುಖ ಅಂಶ ದಿವಾನರುಗಳಾಗಿದ್ದ ವಿಶ್ವೇಶ್ವರಯ್ಯ, ಮಿರ್ಜಾ ಇಸ್ಮಾಯಿಲ್, ಶೇಷಾದ್ರಿ ಅಯ್ಯರ್, ಪೂರ್ಣಯ್ಯ, ಸಿ.ರಂಗಾಚಾರ್ಲು ಇಂತಹ ಎಷ್ಟೋ ಮಹನೀಯರನ್ನು ನೆನೆಯುತ್ತೇವೆ. ಇವರ ಹಿಂದೆ ಇದ್ದಂತಹ ಒಬ್ಬ ದೂರ ದೃಷ್ಟಿಯುಳ್ಳ ಆಡಳಿತಗಾರ ನಾಲ್ವಡಿ ಕೃಷ್ಣರಾಜ ಒಡೆಯರು ಎಂಬುದು ಎಷ್ಟು ಜನಕ್ಕೆ ಗೊತ್ತು? ಬೆಂಗಳೂರಿಗರು ಹೇಗೆ ಕೆಂಪೇಗೌಡರ ಹೆಸರನ್ನು ಸ್ಮರಿಸುತ್ತಾರೆ ಹಾಗೆ ಕೂಡ ಮೈಸೂರನ್ನು ಸ್ಮರಿಸಲು ನಾಲ್ವಡಿ ಕೃಷ್ಣರಾಜ ಒಡೆಯರ್ ಹೆಸರಿನಲ್ಲಿ ಮೈಸೂರಿನ ವಿಮಾನ ನಿಲ್ದಾಣಕ್ಕೆ ಇಂತಹ ಮಹಾತ್ಮನ ಹೆಸರಿಡಲು ಸರ್ಕಾರ ಚಿಂತಿಸಿ ಕ್ರಮ ಕೈಗೊಳ್ಳಬೇಕು.

ಬೆಂಗಳೂರು ಹೊರತುಪಡಿಸಿದರೆ ಎಲ್ಲಾ ವಲಯಗಳಲ್ಲೂ ಮೈಸೂರು ಇಡೀ ರಾಜ್ಯದಲ್ಲೇ ಅತ್ಯಂತ ಜನಪ್ರಿಯ ನಗರ. ಹಾಗೆಯೇ, ವಿಶ್ವ ಮಟ್ಟದಲ್ಲೂ ಮೈಸೂರು ಮಾನ್ಯತೆ ಪಡೆದಿದೆ ಎಂದರೆ ಅದಕ್ಕೆ ನಾಲ್ವಡಿ ಅವರ ಅಪಾರ ಶ್ರಮವೇ ಕಾರಣ. ಮುಂದಿನ ಪೀಳಿಗೆ ಇವರ ನಿಸ್ವಾರ್ಥ ಕಾರ್ಯಗಳನ್ನು ಸ್ಮರಿಸಲು ಸರ್ಕಾರ "ನಾಲ್ವಡಿ ಕೃಷ್ಣರಾಜ ಒಡೆಯರ್ ಮೈಸೂರು ವಿಮಾನ ನಿಲ್ದಾಣ" ಎಂದು ಹೆಸರಿಟ್ಟು ಅವರ ಅಜರಾಮರ ಕಾರ್ಯಗಳನ್ನು ಗೌರವಿಸಲಿ. **– ಅನಿಲ್ ಕುಮಾರ್, ನಂಜನಗೂಡು**

ಬಸ್ ಟಿಕೆಟ್‌ನಲ್ಲಿ ಧಾರ್ಮಿಕ ತಾರತಮ್ಯವೇ?

ಮಾನ್ಯರೆ,

ಭಾರತ ದೇಶವು ವಿವಿಧತೆಯಲ್ಲಿ ಏಕತೆ ಸಾರಿ ಇಡೀ ವಿಶ್ವಕ್ಕೆ ಮಾದರಿಯಾಗಿರುವ ದೇಶವಾಗಿದೆ. ಇಂತಹ ದೇಶದಲ್ಲಿರುವ ಕರ್ನಾಟಕ ರಾಜ್ಯದಲ್ಲಿ 2023ರ ಮೇ ತಿಂಗಳಲ್ಲಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯನವರ ಸರ್ಕಾರವು ರಾಜ್ಯದ ಸರ್ಕಾರಿ ಬಸ್ಸುಗಳಲ್ಲಿ ಕ್ರಿಸ್‌ಮಸ್ ಹಬ್ಬದ ದಿನದಂದು ಪ್ರಯಾಣ ಮಾಡಿದ ಪ್ರಯಾಣಿಕರಿಗೆ ಡಿಸೆಂಬರ್ 25ನೇ ದಿನದಂದು "ಬಸ್ ಟಿಕೆಟ್ ನೀಡುವಾಗ ಟಿಕೆಟ್‌ನಲ್ಲಿ Merry Christmas ಎಂದು ಪ್ರಿಂಟ್ ಮಾಡಿರುವುದರಿಂದ ರಾಜ್ಯದಾದ್ಯಂತ ಗಣೇಶ ಹಬ್ಬ, ದೀಪಾವಳಿ ಹಬ್ಬ, ಈದ್ ಮಿಲಾದ್ ದಸರಾ ಹಬ್ಬದ ಜೊತೆಗೆ ಇನ್ನಿತರ ಹಬ್ಬಗಳು ಕಳೆದವು. ಯಾವ ಹಬ್ಬಗಳ ಸಂದರ್ಭದಲ್ಲಿ ಈ ರೀತಿ ಮಾಡದೆ ಕ್ರಿಸ್‌ಮಸ್ ಹಬ್ಬದಲ್ಲಿ ಈ ಘಟನೆ ನಡೆದಿರುವುದರಿಂದ ರಾಜ್ಯದಲ್ಲಿರುವ ಇನ್ನಿತರ ಧರ್ಮದ ಜನರು ಧಾರ್ಮಿಕ ಭಾವನೆಗಳಿಂದ ಧಕ್ಕೆ ಉಂಟಾಗಿ ಜನರ ಮನಸ್ಥಿತಿಗಳು ಕೆರಳುತ್ತದೆ. ಆದ್ದರಿಂದ ಕೂಡಲೇ ರಾಜ್ಯ ಸರ್ಕಾರವು ರಾಜ್ಯದಲ್ಲಿ ಆಚರಣೆ ಮಾಡುವ ಪ್ರಮುಖ ಹಬ್ಬಗಳಲ್ಲಿ ಒಂದೇ ಸಮಾನವಾಗಿ ಪ್ರಿಂಟ್ ಮಾಡಲಿ ಅಥವಾ ಯಾವುದೇ ರೀತಿಯ ಹಬ್ಬದ ಶುಭಾಶಯ ಸಂದೇಶಗಳನ್ನು ಬಸ್ ಟಿಕೆಟ್ ಹಂಚಿಕೆಯಲ್ಲಿ ಬೇಡ. ಸಾರಿಗೆ ಸಚಿವರು ಹಾಗೂ ರಾಜ್ಯ ಸರ್ಕಾರವು ಇಂತಹ ಘಟನೆಗಳಿಂದ ಸಾರ್ವಜನಿಕರಲ್ಲಿ ಅಹಿತಕರ ಘಟನೆಗಳು ನಡೆಯುವ ಸಾಧ್ಯತೆ ಇರುವುದನ್ನು ಗಮನಿಸಿ, ಯಾವುದೇ ರೀತಿಯ ತೊಂದರೆಯಾಗದಂತೆ ಜಾಗ್ರತೆಯಿಂದ ಕರ್ತವ್ಯ ನಿರ್ವಹಿಸಬೇಕು.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು

ಬ್ಲಾಕ್‌ಮೇಲ್ ತಂತ್ರ, ಸರ್ಕಾರಿ ಸೇವೆಗೆ ಪೆಟ್ಟು

ಮಾನ್ಯರೆ,

ಪ್ರಾಂಶುಪಾಲರು ಕಿರುಕುಳ ನೀಡಿದರು ಎಂದು ಆರೋಪಿಸಿ ಮೈಸೂರು ಯುವರಾಜ ಕಾಲೇಜಿನ ಪ್ರಥಮ ದರ್ಜೆ ಗುಮಾಸ್ತ ಮಾತ್ರೆಗಳನ್ನು ನುಂಗಿ ಆತ್ಮಹತ್ಯೆಗೆ ಯತ್ನಿಸಿದರು ಎಂದು ಮಾಧ್ಯಮದಲ್ಲಿ ವರದಿಯಾಗಿದೆ. ಇದು ಅಪಾಯಕಾರಿ ಬೆಳವಣಿಗೆ. ಒಬ್ಬ ವಿದ್ಯಾವಂತನಾಗಿ ವಿದ್ಯಾರ್ಥಿಗಳಿಗೆ ಬುದ್ಧಿ ಹೇಳಬೇಕಾದವರು ಈ ರೀತಿ ಮಾಡಿದರೆ ಇದು ಇತರರಿಗೂ ಪ್ರೇರೇಪಣೆಯಾಗುತ್ತದೆ. ಇತ್ತೀಚೆಗೆ ಎಲ್ಲಾ ಇಲಾಖೆಗಳಲ್ಲಿಯೋ ಇಂತಹದ್ದೆ ನಾಟಕ ಶುರುವಾಗಿ ಬಿಟ್ಟಿದೆ. ಮೇಲಧಿಕಾರಿಗಳು ಅಧೀನ ನೌಕರರಿಗೆ ಕೆಲಸ ಹೇಳುವುದೇ ಕಷ್ಟವಾಗಿದೆ. ಹೇಳಿದ ಕೆಲಸ ಮಾಡದವರಿಗೆ ಸರ್ಕಾರಿ ಉದ್ಯೋಗವಾದರೂ ಏಕೆ? ಸಂಬಳ ಯಾಕೆ ಬೇಕು. ಒಂದೊಮ್ಮೆ ಉದ್ದೇಶಪೂರ್ವಕವಾಗಿ ಕಿರುಕುಳ ನೀಡಿದ್ದರೆ ಮೇಲಧಿಕಾರಿಗಳಿಗೆ ದೂರು ನೀಡಬಹುದಲ್ಲವೆ. ಅವರು ನಿರಾಕರಿಸಿದರೆ ಪೊಲೀಸ್ ಇಲಾಖೆ, ನ್ಯಾಯಾಲಯದ ಮೊರೆ ಹೋಗಬಹುದಲ್ಲವೇ. ಅದನ್ನು ಬಿಟ್ಟು ಆತ್ಮಹತ್ಯೆಯಂತಹ ನೀಚ ಕೆಲಸಕ್ಕೆ ಕೈ ಹಾಕುವುದು ಸರಿಯಲ್ಲ. ಇದಲ್ಲದೆ ಸೋಮಾರಿಗಳಿಗೆ ರಾಜಕಾರಣಿಗಳು ಶಿಫಾರಸು ಮಾಡುವುದನ್ನು ಬಿಡಬೇಕು. ಹೋಗಿ ಸರಿಯಾಗಿ ಕೆಲಸ ಮಾಡು ಎಂದು ಹೇಳಬೇಕಿದೆ. ಇಲ್ಲದಿದ್ದರೆ ಸಾರ್ವಜನಿಕ ಸೇವೆಗೆ ಪೆಟ್ಟು ಬೀಳುವುದು ಖಚಿತ.ಇಂತಹ ಪ್ರಕರಣದಲ್ಲಿ ಸರ್ಕಾರ ದಿಟ್ಟ ಕ್ರಮ ವಹಿಸಬೇಕು.

–ದಡದಹಳ್ಳಿ ರಮೇಶ್, ಚಂದಕವಾಡಿ ಹೋಬಳಿ, ಚಾಮರಾಜನಗರ ಜಿಲ್ಲೆ.

ನಮ್ಮ ಮೈಸೂರಿನ ಅಸಾಮಾನ್ಯರು



ಮಹಾರಾಜ ಮುಮ್ಮಡಿ ಕೃಷ್ಣರಾಜ ಒಡೆಯರಿಂದ ಹಿಡಿದು ಯದುವಂಶದ ಕೊನೆಯ ಮಹಾರಾಜರಾದ ಜಯಚಾಮರಾಜ ಒಡೆಯರ ಆಡಳಿತದ ಅವಧಿಯವರೆಗೆ ಅನೇಕ ಶ್ರೇಷ್ಠ ಮಹನೀಯರು ಮೈಸೂರು ರಾಜ್ಯದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದಾರೆ. ಅಂತಹ ಕೆಲವರ ಹೆಸರುಗಳನ್ನು ಮೈಸೂರು ಚರಿತ್ರೆಗೆ ಸಂಬಂಧಪಟ್ಟ ಇತಿಹಾಸದ ಪುಸ್ತಕಗಳಲ್ಲಿ ಪ್ರಸ್ತಾಪಿಸಿರುವುದನ್ನು ನಾವು ಕಾಣುತ್ತೇವೆ. ಆಡಳಿತದ ಪ್ರಮುಖ ಹುದ್ದೆಯಲ್ಲಿದ್ದು ಗಣನೀಯ ಸೇವೆ ಸಲ್ಲಿಸಿದ್ದ ಕೆಲವರ ಹೆಸರುಗಳು ಅವುಗಳಲ್ಲಿ ಕಂಡು ಬಂದರೂ, ಅವರಂತೆಯೇ ಸೇವೆ ಸಲ್ಲಿಸಿರುವ ಇತರ ನೂರಾರು ಮಂದಿ ಎಲ್ಲಿಯೂ ಪ್ರಸ್ತಾಪಗೊಳ್ಳದೆ ಎಲೆ ಮರೆಕಾಯಿಯಾಗಿ ಉಳಿದು ಹೋಗಿದ್ದಾರೆ. ನೆನಪಿನ ಅಂಗಳದಿಂದ ಜಾರಿಹೋಗಿದ್ದಾರೆ. ಹಾಗೆ ಸೇವೆ ಸಲ್ಲಿಸಿದವರಲ್ಲಿ ಹಲವಾರು ಮಂದಿ ಅಂದಿಗೆ ಖ್ಯಾತನಾಮರಾಗಿದ್ದರೂ ಇಂದು ಅವರ ಬಗ್ಗೆ ನಮಗೆ ಹೆಚ್ಚು ತಿಳಿಯದೆ ಹೋಗಿದೆ. ಮೈಸೂರಿನ ಅಭಿವೃದ್ಧಿಗೆ ಶ್ರಮಿಸಿದ ಹಲವಾರು ಮಹನೀಯರು ಎಲೆಮರೆಯ ಕಾಯಿಗಳಂತೆ ಉಳಿದುಹೋಗಿದ್ದಾರೆ. ನೆನಪಿನಿಂದ ಅಳಿಸಿಹೋಗಿದ್ದಾರೆ. ಕೆಲವರ ಸೇವೆಯನ್ನಾದರೂ ಇಲ್ಲಿ ಗುರುತಿಸುವ ಪ್ರಯತ್ನ ನನ್ನದು. ಇಂತಹ ಪ್ರಯತ್ನ ಬಹಳ ಹಿಂದೆಯೇ ಪ್ರಾರಂಭಿಸುವ ಉದ್ದೇಶ ಹೊಂದಿದ್ದರೂ, ಅದು ಈಗ ಸಾಧ್ಯವಾಗುತ್ತಿದೆ. ನೆನಪಿನಂಗಳದಿಂದ ಮರೆಯಾದ ಮಹನೀಯರ ಪರಿಚಯ ಒಂದು ಮಾಲಿಕೆಯಾಗಿ ಪ್ರಕಟಗೊಳ್ಳಲಿದೆ. ಅವು 'ಮೈಸೂರು ಮಿತ್ರ' ಓದುಗರಿಗೆ ಮೆಚ್ಚುಗೆಯಾದರೆ, ನನಗೆ ಬರೆದ ತೃಪ್ತಿ.

4. ಶ್ರೇಷ್ಠ ಪ್ರತಿಭಾನ್ವಿತ ಅಧಿಕಾರಿ ಆರ್. ವೆಂಕಟರಾವ್





ಗೌರಿ ಸತ್ಯ
ಹಿರಿಯ ಪತ್ರಕರ್ತರು
ಮೊ: 8762788685

ಮೈಸೂರಿನ ಆಡಳಿತದಲ್ಲಿ ಒಂದು ಕಾಲಕ್ಕೆ ಪ್ರತಿಭಾನ್ವಿತ ಅಧಿಕಾರಿಗಳೇ ಹೆಚ್ಚಾಗಿ ಅಧಿಕಾರದಲ್ಲಿದ್ದರು. ಮಹಾರಾಜರ ಸರ್ಕಾರದಲ್ಲಿ ಒಂದಲ್ಲ ಒಂದು ಹುದ್ದೆಯಲ್ಲಿ ಅವರು ನಿರತರಾಗಿ ಅತ್ಯುತ್ತಮ ಸೇವೆ ಸಲ್ಲಿಸಿದರು. ಹಿರಿಯ ಆಂಗ್ಲ ಅಧಿಕಾರಿಗಳೂ ಅವರ ಕಾರ್ಯನಿಷ್ಠತೆಯನ್ನು ಮೆಚ್ಚಿ ಪ್ರಶಂಸಿಸಿದರು. ಅವರು ಮಹಾರಾಜರ ಆಳ್ವಿಕೆಗೆ ಕೀರ್ತಿ ತಂದುದಲ್ಲದೆ ತಾವೂ ಕೀರ್ತಿ ಗಳಿಸಿದರು. ಅಂತಹ ಅಧಿಕಾರಿಗಳಲ್ಲಿ ಒಬ್ಬರು ಆರ್. ವೆಂಕಟರಾವ್.

ವೆಂಕಟರಾವ್, ಮೈಸೂರಿನಲ್ಲಿ ಸೇವೆ ಸಲ್ಲಿಸಿದರು. ಜೊತೆಗೆ ತಿರುವಾಂಕೂರು, ಹೈದರಾಬಾದ್ ರಾಜ್ಯಗಳಲ್ಲೂ ಕರ್ತವ್ಯ ನಿರ್ವಹಿಸಿದರು. ದೇಶದ ಶ್ರೇಷ್ಠ ಆಡಳಿತಗಾರರಲ್ಲಿ ಒಬ್ಬರಾಗಿದ್ದ ಅವರು ತಿರುವಾಂಕೂರಿಗೆ ಎರಡು ಬಾರಿ ದಿವಾನರಾಗಿ ಸೇವೆ ಸಲ್ಲಿಸಿದರು. ಮೊದಲ ಬಾರಿಗೆ 1821–29ರಲ್ಲೂ, ಎರಡನೆಯ ಬಾರಿ 1838–39ರಲ್ಲೂ ಅವರ ಸೇವೆ ತಿರುವಾಂಕೂರಿಗೆ ಸಂದಿತು.

ವೆಂಕಟರಾವ್ ತಂಜಾವೂರಿನ ಮರಾಠ ಸಂಸ್ಥಾನದ ಕುಂಭಕೋಣಂನಲ್ಲಿ ಜನಿಸಿದರು. ತಂಜಾವೂರು ಮರಾಠ ದೇಶಸ್ಥ ಮಾಧ್ವ ಕುಟುಂಬವೊಂದರಲ್ಲಿ ಅವರು ಹುಟ್ಟಿದಾಗ ಟಿ. ವೆಂಕಟರಾವ್ ಎಂದು ಹೆಸರಿಟ್ಟಿದ್ದರು. ಅವರ ಪೂರ್ವದ ಮರಾಠ ಮಾಧ್ವ ಕುಟುಂಬ ಬಿಜಾಪುರ ಜಿಲ್ಲೆಯಿಂದ ಬಂದು ಅಲ್ಲಿ ನೆಲೆಸಿತ್ತು. ಅವರ ತಂದೆಯ ಹೆಸರು ಗುಂಡೋಪಂತ್ ಕುಂಭಕೋಣಂ. ಅವರ ಸಹೋದರ ಆರ್. ರಂಗರಾವು. ಸರ್ ಟಿ. ಮಾಧವರಾವ್ ಅವರಿಗೆ ತಂದೆಯ ಕಡೆಯ ಸೋದರ ಮಾವ. ಅವರ ಪುತ್ರ ಆರ್. ರಘುನಾಥರಾವ್.

ಮದ್ರಾಸ್ ಪ್ರೆಸಿಡೆನ್ಸಿಯಲ್ಲಿ ತಮ್ಮ ಓದನ್ನು ಮುಗಿಸಿದ ನಂತರ ವೆಂಕಟರಾವ್ ಬ್ರಿಟಿಷ್ ಸರ್ಕಾರದಲ್ಲಿ ಸೇವೆಗೆ ಸೇರಿ 1819ರಲ್ಲಿ ತಿರುವಾಂಕೂರು ರಾಜ್ಯದಲ್ಲಿ ಸೇವೆ ಪ್ರಾರಂಭಿಸಿದರು. ಪ್ರಾರಂಭದಲ್ಲಿ ಅಲ್ಲಿನ ಬ್ರಿಟಿಷ್ ರೆಸಿಡೆಂಟ್ ಕರ್ನಲ್ ಮ್ಯಾಕ್‌ಡೊವೆಲ್ ಅವರ ಸಹಾಯಕ ಅಧಿಕಾರಿಯಾಗಿ ನೇಮಕಗೊಂಡರು. ಕೆಲಸಕ್ಕೆ ಸೇರಿದ್ದರ ಹೊಸದರಲ್ಲಿಯೇ ಅವರ ಸೇವೆ ಎಷ್ಟು ಉತ್ತಮವಾಗಿತ್ತೆಂದರೆ ಅದು ತಿರುವಾಂಕೂರಿನ ರೀಜೆಂಟ್ ರಾಣಿಯನ್ನೂ ಮೆಚ್ಚಿಸಿತು. ಅದಕ್ಕೆ ಮನ್ನಣೆ ದೊರೆತು ಅವರನ್ನು ತಿರುವಾಂಕೂರು ರಾಜ್ಯದ ಒಂದು ವಿಭಾಗದ 'ದಿವಾನ್ ಪೇಶ್ಕಾರ್' ಅಥವಾ ರಾಜ್ಯಪಾಲರನ್ನಾಗಿ ನೇಮಿಸಲಾಯಿತು. ದಿವಾನ್ ಪೇಶ್ಕಾರ್ ಹುದ್ದೆಯಲ್ಲಿದ್ದಾಗ ವೆಂಕಟರಾವ್ ಅವರು ತಿರುವಾಂಕೂರಿನ ಪ್ರಸಿದ್ಧ ಪದ್ಮನಾಭ ದೇವಸ್ಥಾನವನ್ನು ರಿಪೇರಿ ಮಾಡಿ ಅಭಿವೃದ್ಧಿಗೊಳಿಸಿದರು. ಸಿಪಾಯಿಗಳ 'ಡ್ರೆಸ್ ಕೋಡ್'ನಲ್ಲಿ ಬದಲಾವಣೆ ತಂದರು.

1821ರಲ್ಲಿ ದಿವಾನ್ ರಾಯರೆಡ್ಡಿ ರಾವ್ ಅವರು ರೀಜೆಂಟ್ ರಾಣಿ ಕೊಟ್ಟ ಎರಡು ಗ್ರಾಮಗಳ ಜಾಗೀರನ್ನು ತೆಗೆದುಕೊಂಡರು. ಇದು ಹಗರಣವೊಂದನ್ನು ಎಬ್ಬಿಸಿ ರಾಯರೆಡ್ಡಿ ದಿವಾನ್ ಹುದ್ದೆಗೆ ರಾಜೀನಾಮೆ ನೀಡಬೇಕಾಯಿತು. ರಾಯರೆಡ್ಡಿ ಅವರ ರಾಜೀನಾಮೆಯಿಂದ ತೆರವಾದ ಜಾಗಕ್ಕೆ ಕೂಡಲೇ ಅವರ ಬಂಧುವಾದ ವೆಂಕಟರಾವ್ ಅವರನ್ನು ನೇಮಿಸಲಾಯಿತು. ಇವರ ನೇಮಕಕ್ಕೆ ಬ್ರಿಟಿಷ್ ರೆಸಿಡೆಂಟ್ ಬೆಂಬಲ ನೀಡಿದರು.

ಅಧಿಕಾರ ವಹಿಸಿಕೊಂಡ ಕೂಡಲೇ ವೆಂಕಟರಾವ್ ಕೆಲವು ತೆರಿಗೆಗಳನ್ನು ರದ್ದು ಮಾಡಿದರು. ಕ್ವಿಲಾನ್‌ನಲ್ಲಿ ನಿಂತು ಹಲವಾರು ನೀರಾವರಿ ಯೋಜನೆಗಳನ್ನು ವ್ಯವಸ್ಥೆಗೊಳಿಸಿದರು. ಕದಿನಂಗುಲಂ ಹಿನ್ನೀರಿನ ಯೋಜನೆಯನ್ನು ಅವರ ಅವಧಿಯಲ್ಲಿ ಜಾರಿಗೊಳಿಸಲಾಯಿತು.

1834ರಲ್ಲಿ ವೆಂಕಟರಾವ್ ಅವರನ್ನು ಮೈಸೂರಿನ ಚೀಫ್ ಕಮಿಷನರ್ ಅವರ 'ಹೆಡ್ ಶಿರಸ್ತೆದಾರ್' ಆಗಿ ನೇಮಿಸಲಾಯಿತು. ಈ ಸ್ಥಾನದಲ್ಲಿ ಅವರು ನಾಲ್ಕು ವರ್ಷಗಳ ಕಾಲ ಸೇವೆ ಸಲ್ಲಿಸಿದರು. ನಂತರ ಅವರನ್ನು ತಿರುವಾಂಕೂರಿಗೆ ವರ್ಗಾಯಿಸಿ ಅಲ್ಲಿನ ದಿವಾನರ ಕಮಿಷನರ್ ಅವರ 'ನೇಟಿವ್ ಅಸಿಸ್ಟೆಂಟ್' ಆಗಿ ನೇಮಿಸಲಾಯಿತು. 1840ರಲ್ಲಿ ಅವರನ್ನು ಮತ್ತೆ ಮೈಸೂರಿಗೆ ವರ್ಗಾಯಿಸಲಾಗಿ ಅವರು ಇಲ್ಲಿನ ಚೀಫ್ ಕಮಿಷನರ್ ಅವರ ವಿಶೇಷ ಸಹಾಯಾಧಿಕಾರಿಯಾಗಿ ನೇಮಕಗೊಂಡರು. 1842ರಲ್ಲಿ ವೆಂಕಟರಾವ್ ಅವರನ್ನು ಹೈದರಾಬಾದಿನ ದಿವಾನರನ್ನಾಗಿ ನೇಮಿಸಲಾಯಿತು. 1843ರಲ್ಲಿ ಅವರು ಬೆಂಗಳೂರಿಗೆ ಬಂದಿದ್ದಾಗ ಅವರ ಆರೋಗ್ಯ ಕೆಟ್ಟು ಅವರು ಆರು ತಿಂಗಳ ಕಾಲ ರಜೆಯಲ್ಲಿ ತೆರಳಿದರು.

ರಜೆಯಿಂದ ಹಿಂದಿರುಗಿ ಬಂದ ಮೇಲೆ ಲಾರ್ಡ್ ಎಡೆನ್‌ಬೊರೋ ಅವರು ವೆಂಕಟರಾವ್ ಅವರ ಸೇವೆಯನ್ನು ಹೈದರಾಬಾದಿನ ರೆಸಿಡೆಂಟ್ ಆಗಿದ್ದ ಜನರಲ್ ಜೆ.ಎಸ್.ಫ್ರೇಸರ್‌ಗೆ ವಹಿಸಿಕೊಡಲು ನಿರ್ಧರಿಸಿ, 'ಮಹಾನ್ ಪ್ರತಿಭೆಯ ವ್ಯಕ್ತಿ ಎಂದು ಅವರನ್ನು ಪ್ರಶಂಸಿಸಿದರು. 'ಮೊದಲ ಶ್ರೇಣಿಯ ಆಡಳಿತ ಕೌಶಲ್ಯವನ್ನು ಹೊಂದಿದ್ದಾರೆ' ಎಂದು ಪುರಸ್ಕರಿಸಿದರು. ನಂತರ ವೆಂಕಟರಾವ್ ಅವರನ್ನು ಫ್ರೇಸರ್ ಅವರು ಚಂದೂಲಾಲ್ ಅವರ ಜಾಗದಲ್ಲಿ ದಿವಾನರನ್ನಾಗಿ ನೇಮಿಸಿದರು.

ಜನರಲ್ ಫ್ರೇಸರ್ ಅವರೊಂದಿಗೆ ಮಾತನಾಡಿದ ಮೇಲೆ ಲಾರ್ಡ್ ವಿಲಿಯಂ ಬೆಂಟಿಂಕ್ ಇಂತಹ ವ್ಯಕ್ತಿಗಳನ್ನು ಭಾರತೀಯ ಸುಪ್ರೀಂ ಕೌನ್ಸಿಲ್ಲಿನ ನೇಮಿಸಬಹುದಾಗಿದೆ ಎಂದು ಉದ್ಗರಿಸಿದರು. ಹೈದರಾಬಾದಿನ ಆರ್ಥಿಕ ಪರಿಸ್ಥಿತಿಯಲ್ಲಿ ತೀವ್ರ ರೀತಿಯ ಪರಿಷ್ಕರಣೆ ತರಲು ಅವರ ಶಕ್ತಿ ಮತ್ತು ಸಾಮರ್ಥ್ಯದ ಬಗ್ಗೆ ಫ್ರೇಸರ್ ಅವರಿಗೆ ಸಂಪೂರ್ಣ ನಂಬಿಕೆಯಿತ್ತು. ಮಾರ್ಕ್ ಕಬ್ಬನ್, ವೆಂಕಟರಾವ್ ಅವರ ಸಾಮರ್ಥ್ಯದ ಬಗ್ಗೆ ಜನರಲ್ ಫ್ರೇಸರ್ ಅವರ ಅಭಿಪ್ರಾಯವನ್ನು ಸಂಪೂರ್ಣವಾಗಿ ಸಮರ್ಥಿಸಿದ್ದರು.


ವೆಂಕಟರಾವ್ ಅವರು ಹೈದರಾಬಾದಿಗೆ ತೆರಳಿದ ಮೇಲೆ ತೀವ್ರ ರೀತಿಯ ಅನಾರೋಗ್ಯಕ್ಕೆ ಒಳಗಾದರು. ಮತ್ತೆ ಬೆಂಗಳೂರಿಗೆ ವಾಪಸ್ ಬಂದು ಅಲ್ಲಿಯೇ ಜುಲೈ 1848ರಲ್ಲಿ ನಿಧನರಾದರು. ಅವರು ಚೀಫ್ ಕಮಿಷನರ್ ಅವರ ಸ್ಥಳೀಯ ಸಹಾಯಕರಾಗಿ ತೋರಿದ ಅಪರಿಮಿತ ಹುರುಪು, ಸಾಮರ್ಥ್ಯ ಮತ್ತು ನ್ಯಾಯಪರ ನಿಷ್ಠೆಗಾಗಿ ಭಾರತ ಸರ್ಕಾರ ಅವರಿಗೆ 1938ರಲ್ಲಿ 'ರಾಯ ರಾಯ ರಾಯಿ' ಬಿರುದನ್ನು ಕೊಟ್ಟು ಗೌರವಿಸಿತ್ತು. ಅವರ ಪುತ್ರ ದಿವಾನ್ ಬಹದೂರ್ ರಘುನಾಥ ರಾವ್ ಇಂದೋರಿನ ದಿವಾನರಾಗಿ ಸೇವೆ ಸಲ್ಲಿಸಿದ್ದರು.

ರಾಮಕೃಷ್ಣ ಪರಮಹಂಸರು–ವಿವೇಕಾನಂದರು ಗುರು–ಶಿಷ್ಯ ಪರಂಪರೆಯ ಶ್ರೇಷ್ಠತೆ ಪ್ರತೀಕ

- ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಭಿಮತ
- ರಾಮಕೃಷ್ಣ-ವಿವೇಕಾನಂದ ಭಾವಪ್ರಚಾರ ಪರಿಷತ್‌ನ 9ನೇ ವಾರ್ಷಿಕ ಸಮ್ಮೇಳನದಲ್ಲಿ ಭಾಗಿ
- ಸಮೃದ್ಧ, ಶಕ್ತಿಶಾಲಿ ಭಾರತ ಪರಮಹಂಸರು, ವಿವೇಕಾನಂದರ ಕನಸು; ಮೋದಿಯವರಿಂದ ನನಸಾಗಿದೆ



ಮೈಸೂರಿನ ಕುವೆಂಪುನಗರದಲ್ಲಿರುವ ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪದಲ್ಲಿ ರಾಮಕೃಷ್ಣ–ವಿವೇಕಾನಂದ ಭಾವಪ್ರಚಾರ ಪರಿಷತ್‌ನ 9ನೇ ವಾರ್ಷಿಕ ಸಮ್ಮೇಳನದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭಾಗವಹಿಸಿ, ಮಾತನಾಡಿದರು. ಮೈಸೂರು ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್, ಶಾಸಕ ಟಿ.ಎಸ್.ಶ್ರೀವತ್ಸ ಮತ್ತಿತರರು ಉಪಸ್ಥಿತರಿದ್ದರು.



ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸಭಿಕರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು,ಜ.6(ಎಂಕೆ)–ದಿವ್ಯ ಚೇತನರಾದ ರಾಮಕೃಷ್ಣ ಪರಮಹಂಸರು ಹಾಗೂ ಸ್ವಾಮಿ ವಿವೇಕಾನಂದರು ದೇಶದ ಇತಿಹಾಸದಲ್ಲಿನ ಗುರು–ಶಿಷ್ಯ ಪರಂಪರೆ, ಪಾವಿತ್ರ್ಯತೆ ಮತ್ತು ಶ್ರೇಷ್ಠತೆಯ ಪ್ರತೀಕವಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸ್ಮರಿಸಿದರು.

ಮೈಸೂರಿನ ಕುವೆಂಪುನಗರದಲ್ಲಿರುವ ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪದಲ್ಲಿ ರಾಮಕೃಷ್ಣ–ವಿವೇಕಾನಂದ ಭಾವಪ್ರಚಾರ ಪರಿಷತ್‌ನ 9ನೇ ವಾರ್ಷಿಕ ಸಮ್ಮೇಳನದಲ್ಲಿ ಮಾತನಾಡಿದ ಅವರು, ಜೀವನದಲ್ಲಿ ಪ್ರತಿಯೊಬ್ಬರಿಗೆ ಗುರಿ ಮತ್ತು ಗುರು ಎರಡೂ ಇರಬೇಕಾಗುತ್ತದೆ. ಗುರಿಯನ್ನು ತಲುಪಬೇಕಾದರೆ ಗುರುವಿನ ಮಾರ್ಗದರ್ಶನ ಮತ್ತು ಆಶೀರ್ವಾದ ಅತ್ಯಂತ ಅವಶ್ಯಕವಾಗಿದೆ. ಭಾರತದ ಇತಿಹಾಸದಲ್ಲಿ ದಿವ್ಯ ಚೇತನರಾದ ರಾಮಕೃಷ್ಣ ಪರಮಹಂಸರು ಹಾಗೂ ಸ್ವಾಮಿ ವಿವೇಕಾನಂದರು ಗುರು–ಶಿಷ್ಯ ಪರಂಪರೆ, ಪಾವಿತ್ರ್ಯತೆ ಮತ್ತು ಶ್ರೇಷ್ಠತೆಯ ಪ್ರತೀಕವಾಗಿದ್ದಾರೆ ಎಂದರು.

ಭಗವಂತನ ಅಸ್ತಿತ್ವ ಮನುಷ್ಯನ ನಡೆ, ನುಡಿಯಲ್ಲಿದೆ ಎಂಬುದನ್ನು ಅತ್ಯಂತ ಸರಳವಾಗಿ ನಮಗೆ ತಿಳಿಸಿಕೊಟ್ಟಿದ್ದು ಪೂಜ್ಯ ರಾಮಕೃಷ್ಣ ಪರಮಹಂಸರು. ಅವರನ್ನು ವಿಷ್ಣುವಿನ ಅವತಾರ ಎಂದು ಸಹ ಹೇಳಲಿದ್ದು, ಹತ್ತು–ಹಲವು ಪವಾಡಗಳಿಗೆ ಸಾಕ್ಷಿಯಾಗಿದ್ದಾರೆ ಎಂದು ತಿಳಿದಿದ್ದೇವೆ. ಸ್ವತಃ ಮಹಾಕಾಳಿ ದರ್ಶನ ಪಡೆದುಕೊಂಡಿದ್ದರೂ ಎಂಬುದನ್ನು ಸಹ ಅರಿತಿದ್ದೇವೆ. ಜೀವನದಲ್ಲಿ ಸರಳತೆ ಅಳವಡಿಸಿಕೊಂಡರೆ ದೇವರೆ ನಮ್ಮನ್ನು ಹುಡುಕಿಕೊಂಡು ಬರುತ್ತಾರೆ ಎಂಬುದನ್ನು ರಾಮಕೃಷ್ಣ ಪರಮಹಂಸರು ತಿಳಿಸಿದ್ದಾರೆ ಎಂದರು.

> **ಯುವ ಪೀಳಿಗೆಗೆ ದಾರಿದೀಪ...**
>
> "ಮೈಸೂರಿನಲ್ಲಿ ನಿರ್ಮಾಣವಾಗುತ್ತಿರುವ 'ವಿವೇಕ ಸ್ಮಾರಕವು ಬರೀ ಸ್ಮಾರಕವಾಗಿರುವುದಷ್ಟೇ ಅಲ್ಲದೆ ಮುಂದಿನ ಯುವ ಪೀಳಿಗೆಗೆ ದಾರಿದೀಪವಾಗಲಿದೆ. ರಾಮಕೃಷ್ಣ ಆಶ್ರಮ ತಪಸ್ಸಿನ ರೀತಿಯಲ್ಲಿ ವಿವೇಕ ಸ್ಮಾರಕ ನಿರ್ಮಿಸುತ್ತಿದ್ದು, ಸಂಪೂರ್ಣ ಬೆಂಬಲ ನೀಡಲಾಗುವುದು.
>
> **–ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ**

ರಾಮಕೃಷ್ಣ ಪರಮಹಂಸರು ಯಾರ ಹೃದಯದಲ್ಲಿ ಮನುಷ್ಯತ್ವ ಅಡಗಿದೆಯೋ ಅಂತಹವರಲ್ಲಿ ನೆಲೆಸಿದ್ದಾರೆ. ಹಾಗೆಯೇ ಎಲ್ಲಿ ಸ್ವಾಭಿಮಾನ, ಆತ್ಮಶುದ್ಧಿ ಇರುತ್ತದೋ ಮತ್ತು ದೇಶಭಕ್ತಿ ಅಡಗಿದೆಯೋ ಅಲ್ಲಿ ಸ್ವಾಮಿ ವಿವೇಕಾನಂದರು ಇರುತ್ತಾರೆ. ಸೂರ್ಯ–ಚಂದ್ರ ಇರುವರೆಗೂ ರಾಮಕೃಷ್ಣ ಪರಮಹಂಸರ, ಸ್ವಾಮಿ ವಿವೇಕಾನಂದರ ದಿವ್ಯ ವಾಣಿ ಸದಾ ನಮ್ಮನ್ನು ಎಚ್ಚರಿಸಲಿದೆ ಎಂದು ತಿಳಿಸಿದರು.

ಪ್ರೇರಣಾ ಶಕ್ತಿ: ಭಾರತವನ್ನು ಸಮೃದ್ಧ, ಶಕ್ತಿಶಾಲಿ ರಾಷ್ಟ್ರವನ್ನಾಗಿಸುವ ರಾಮಕೃಷ್ಣ ಪರಮಹಂಸರ ಹಾಗೂ ಸ್ವಾಮಿ ವಿವೇಕಾನಂದರ ಕನಸನ್ನು ನನಸಾಗಿಸುವ ಕೆಲಸವನ್ನು ದೇಶದ ಪ್ರಧಾನಿಗಳಾದ ನರೇಂದ್ರ ಮೋದಿಯವರು ಮಾಡುತ್ತಿದ್ದಾರೆ. ಕಳೆದ ಒಂಬತ್ತೂವರೆ ವರ್ಷದಲ್ಲಿ ವಿಶ್ರಾಂತಿ ತೆಗೆದುಕೊಳ್ಳದೆ ಭಾರತವನ್ನು ಸಮೃದ್ಧ, ಶಕ್ತಿಶಾಲಿ ರಾಷ್ಟ್ರವನ್ನಾಗಿ ಮಾಡುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿರುವ ಅವರಿಗೆ ರಾಮಕೃಷ್ಣ ಪರಮಹಂಸರು ಹಾಗೂ ಸ್ವಾಮಿ ವಿವೇಕಾನಂದರು ಪ್ರೇರಣಾ ಶಕ್ತಿಯಾಗಿದ್ದಾರೆ ಎಂದರು.

ಇನ್ನಷ್ಟು ಗಟ್ಟಿಗೊಳಿಸಬೇಕಿದೆ: ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ನಮ್ಮ ಜಿಲ್ಲೆಯಲ್ಲಿ ಆಗಬಾರದೇ ಆಗುತ್ತಿದೆ. ನಂಜನಗೂಡಿನಲ್ಲಿ ನಂಜುಂಡೇಶ್ವರ ಸ್ವಾಮಿ ಅಪಮಾನ ಮಾಡಲಾಗಿದೆ. ಇದಕ್ಕೆಲ್ಲಾ ಕಡಿವಾಣ ಹಾಕಬೇಕಾದರೆ, ಹಿಂದೂ ಧರ್ಮವನ್ನು ಇನ್ನಷ್ಟು ಗಟ್ಟಿಗೊಳಿಸಬೇಕಾಗಿದೆ. ಇದಕ್ಕೆ ಪೂರಕವಾಗಿ ಬಿಜೆಪಿ ಕೆಲಸ ಮಾಡುತ್ತಿದೆ. ರಾಮಮಂದಿರ ನಿರ್ಮಾಣವಾಗುತ್ತಿದ್ದು, ಜಗತ್ತೇ ನಮ್ಮ ದೇಶದ ಕಡೆ ನೋಡುತ್ತಿದೆ ಎಂದು ಹೇಳಿದರು.

ಇದಕ್ಕೂ ಮುನ್ನ ಮಂಗಳೂರು ರಾಮಕೃಷ್ಣ ಮಠದ ಅಧ್ಯಕ್ಷರಾದ ಸ್ವಾಮಿ ಜಿತಕಾಮಾನಂದಜೀ ಮಹಾರಾಜ್ 'ಪತಿತೋದ್ಧಾರಕ ಶ್ರೀ ರಾಮಕೃಷ್ಣ', ನಿವೃತ್ತ ಪ್ರಾಧ್ಯಾಪಕ ಹೆಚ್.ಎನ್.ಮುರಳೀಧರ್ 'ನಿರ್ಭೀತಿ ಮತ್ತು ಶಕ್ತಿ– ಸ್ವಾಮಿ ವಿವೇಕಾನಂದರ ಮಂತ್ರಗಳು', ತುಮಕೂರು ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ಸ್ವಾಮಿ ವೀರೇಶಾನಂದ ಸರಸ್ವತೀ 'ಮಾನವ ಮಿತ್ರ ವಿವೇಕಾನಂದ' ಹಾಗೂ ಹಲಸೂರು ರಾಮಕೃಷ್ಣ ಮಠದ ಅಧ್ಯಕ್ಷರಾದ ಸ್ವಾಮಿ ಬೋಧಸ್ವರೂಪನಂದಜೀ ಮಹಾರಾಜ್ 'ರಾಮಕೃಷ್ಣ ಭಾವಧಾರೆಯ ಧ್ಯೇಯೋದ್ದೇಶಗಳು' ಕುರಿತು ಉಪನ್ಯಾಸ ನೀಡಿದರು. ಈ ವೇಳೆ ಹಿರಿಯ ವಕೀಲ ಅರುಣ್‌ಕುಮಾರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ವಿವೇಕ ಸ್ಮಾರಕ: ಸತ್ಯಮೇವ ಜಯತೇ..!

ಮೈಸೂರಿನಲ್ಲಿ 'ವಿವೇಕ ಸ್ಮಾರಕ' ನಿರ್ಮಿಸುವ ವಿಚಾರದಲ್ಲಿ ಸತ್ಯಮೇವ ಜಯತೇ ಆಗಿದೆ. ನಾವುಗಳು ನ್ಯಾಯದ ದಾರಿಯಲ್ಲಿ ಗೆದ್ದಿದ್ದೇವೆ ಎಂದು ಮೈಸೂರು ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್ ಹೇಳಿದರು.

ಸ್ವಾಮಿ ವಿವೇಕಾನಂದರು ಮೈಸೂರಿನಲ್ಲಿ ಇದ್ದಂತಹ ಜಾಗದಲ್ಲಿ 'ವಿವೇಕ ಸ್ಮಾರಕ' ನಿರ್ಮಾಣಕ್ಕೆ ಸರ್ಕಾರವೇ ರಾಮಕೃಷ್ಣ ಆಶ್ರಮವನ್ನು ಕರೆದು ಅವಕಾಶ ಕೊಟ್ಟಿದ್ದು. ನಿನ್ನೆ–ಮೊನ್ನೆ ಹುಟ್ಟಿದ ಖಾಸಗಿ ಸಂಸ್ಥೆಗೆ ಕೊಡಲು ಸಾಧ್ಯವಿಲ್ಲ ಎಂದಿದ್ದರು. ನಂತರವೇ ಸರ್ಕಾರಕ್ಕೆ ಆಶ್ರಮದಿಂದ ಮನವಿ ಮಾಡಲಾಯಿತು. ಅದಕ್ಕೂ ಮುಂಚೆ ಯಡಿಯೂರಪ್ಪ ಅವರೇ ರಾಮಕೃಷ್ಣ ವಿದ್ಯಾಶಾಲೆಗೆ ಭೇಟಿ ನೀಡಿದ್ದಾಗ ಬಜೆಟ್‌ನಲ್ಲಿ 5 ಕೋಟಿ ಮೀಸಲಿಡುವುದಾಗಿ ಹೇಳಿದ್ದರು. ಅದರಂತೆ ಆಯಿತು ಎಂದು ಸ್ಮರಿಸಿದರು.

ವಿವೇಕಾನಂದರು ನೆಲೆಸಿದ್ದ ಜಾಗ ಮೊದಲು ಅಂಧಕಾರದಲ್ಲಿ ಮುಳುಗಿತ್ತು. ಅಲ್ಲಿ ಎಲ್ಲಾ ಬಗೆಯ ಕಸ ತ್ಯಾಜ್ಯವನ್ನು ಸುರಿಯಲಾಗಿತ್ತು. ಇದನ್ನು ಗಮನಿಸಿದ್ದ ಸದ್ವಿದ್ಯಾ ಶಾಲೆ ಟ್ರಸ್ಟಿ ಸತ್ಯನಾರಾಯಣ ಎಂಬುವರು ಇದು ಸ್ವಾಮಿ ವಿವೇಕಾನಂದರು ತಂಗಿದ್ದ ಸ್ಥಳ. ಇಲ್ಲಿ ಕಸ ಹಾಕಬೇಡಿ, ಗಲೀಜು ಮಾಡಬೇಡಿ ಎಂದು ದೊಡ್ಡದಾಗಿ ಫ್ಲೆಕ್ಸ್ ಹಾಕಿದ್ದರು. ನಂತರ ಅದು ಚಿತ್ರ ಸಹಿತ ರಾಷ್ಟ್ರ ಮಟ್ಟದಲ್ಲಿ ಸುದ್ದಿಯಾಯಿತು. ಬಳಿಕ ನಗರಪಾಲಿಕೆಯಿಂದ ಸ್ಥಳವನ್ನು ಸ್ವಚ್ಛಗೊಳಿಸಲಾಯಿತು. 2012ರಲ್ಲಿ ನಡೆದ ಭಾರತೀಯ ಆಧ್ಯಾತ್ಮಿಕ ಸಮ್ಮಿಲನ ಕಾರ್ಯಕ್ರಮದಲ್ಲಿ ಸರ್ಕಾರವೇ ಅಧಿಕೃತವಾಗಿ ಆ ಸ್ಥಳವನ್ನು ರಾಮಕೃಷ್ಣ ಆಶ್ರಮಕ್ಕೆ ಕೊಟ್ಟಂತಹ ಶಿಲಾನ್ಯಾಸವೂ ಅಲ್ಲಿದೆ. ಆಗ ಅರಮನೆ ಎದುರು ವಿವೇಕ ಪಾದ ಸ್ಪರ್ಶ ಸ್ಮರಣ ಸಮಾರಂಭವೂ ನಡೆದಿತ್ತು. ಎಲ್ಲಾ ರಾಜಕೀಯ ಜನಪ್ರತಿನಿಧಿಗಳು, 300ಕ್ಕೂ ಹೆಚ್ಚು ಸ್ವಾಮೀಜಿಗಳು ಸೇರಿದ್ದರು. ಅದಾದ ಬಳಿಕ ಶುರುವಾಗಿದ್ದು ಗಲಾಟೆ ಎಂದು ವಿವೇಕ ಸ್ಮಾರಕ ನಿರ್ಮಾಣದ ಹಿನ್ನೆಲೆಯನ್ನು ಬಿಚ್ಚಿಟ್ಟರು.

ಭಾರತೀಯ ಸನಾತನ ಸಂಸ್ಕೃತಿಯಲ್ಲಿ ಸದ್ವಿಚಾರವನ್ನು ವಿರೋಧಿಸುವ ಸ್ವಾತಂತ್ರ್ಯವೂ ನಮ್ಮಲ್ಲಿದೆ ಎಂಬುದನ್ನರಿತು ಏನೇ ಬಂದರೂ ನಮಗೆ ಸಾಧ್ಯವಾಗಿರುವುದನ್ನು ಮಾಡೋಣವೆಂದು ಮಾತುಕತೆ ಮತ್ತು ತಾಳ್ಮೆಯಿಂದ, ಯಾವುದೇ ರೀತಿಯ ಗೂಂಡಾಗಿರಿಗೆ ಹೋಗದ, ಎಲ್ಲವನ್ನೂ ತಾಳಿಕೊಂಡು ಮತ್ತು ಸ್ವಾಮಿ ವಿವೇಕಾನಂದರನ್ನು ಮನಸ್ಸಿನಲ್ಲಿಟ್ಟುಕೊಂಡು, ಜನರಿಗೆ, ಮುಂದಿನ ಯುವ ಪೀಳಿಗೆಗಾಗಿ 'ವಿವೇಕಾ ಸ್ಮಾರಕ' ನಿರ್ಮಿಸಲು ಮುಂದಾದೆವು. ಸರ್ವಜನರ ಹಿತವನ್ನು ಬಯಸುವುದು ರಾಮಕೃಷ್ಣ ಆಶ್ರಮದ ಪರಂಪರೆಯಾಗಿದೆ. ಎದುರಾದ ವಿಘ್ನಗಳನ್ನು ಅರ್ಥಮಾಡಿಕೊಂಡು ಮುಂದುವರೆಯುತ್ತಿದ್ದೇವೆ ಎಂದು ತಿಳಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮಲ್ಲಿಕಾರ್ಜುನ ಖರ್ಗೆಯವರ ಬಗ್ಗೆ ಜಿ.ಟಿ.ದೇವೇಗೌಡರು ಹಗುರವಾಗಿ ಮಾತನಾಡಿಲ್ಲ

ಜೆಡಿಎಸ್ ರಾಜ್ಯ ವಕ್ತಾರ ರವಿಚಂದ್ರೇಗೌಡ ಸ್ಪಷ್ಟನೆ

ಮೈಸೂರು,ಜ.6(ಬಿಎಲ್‌ಯು)– ಶಾಸಕ ಜಿ.ಟಿ.ದೇವೇಗೌಡರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬಗ್ಗೆ ಹಗುರವಾಗಿ ಮಾತನಾಡಿಲ್ಲ ಎಂದು ಜೆಡಿಎಸ್ ರಾಜ್ಯ ವಕ್ತಾರ ಎನ್.ಆರ್.ರವಿಚಂದ್ರೇಗೌಡ ಸ್ಪಷ್ಟಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜಕೀಯ ದುರುದ್ದೇಶದಿಂದ ಕೆಲವರು ಜಿ.ಟಿ.ದೇವೇಗೌಡರ ಹೇಳಿಕೆಯನ್ನು ತಿರುಚಿ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

ಎನ್‌ಡಿಎ ನೇತೃತ್ವ ವಹಿಸಿರುವ ನರೇಂದ್ರ ಮೋದಿ ಅವರೇ ಮತ್ತೆ ಪ್ರಧಾನಿಯಾಗುತ್ತಾರೆ. ಈ ದೇಶದಲ್ಲಿ ಮೋದಿಗೆ ಸಮನಾದ ನಾಯಕರಿಲ್ಲ ಎಂದು ಜಿ.ಟಿ.ದೇವೇಗೌಡರು ಹೇಳಿಕೆ ನೀಡಿದ್ದರು. ಆದರೆ ಜಿ.ಟಿ.ದೇವೇಗೌಡರ ಈ ಹೇಳಿಕೆಯನ್ನು ತಿರುಚಿ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ರವಿಚಂದ್ರೇಗೌಡ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಹುಲ್ ಗಾಂಧಿ ಅವರೇ ಮುಂದಿನ ಪ್ರಧಾನಿಯಾಗಲಿ ಎಂದು ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಹೇಳಿ, ಅವರೇ ಮಲ್ಲಿಕಾರ್ಜುನ ಖರ್ಗೆ ಅವರನ್ನು ಅವಮಾನಿಸಿದ್ದಾರೆ. ಈ ಬಗ್ಗೆ ಚಕಾರ ಎತ್ತದ ಕಾಂಗ್ರೆಸ್ ಮುಖಂಡರು, ಜಿ.ಟಿ.ದೇವೇಗೌಡರ ಬಗ್ಗೆ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.



ಸ್ವಂತ ಬಲದಿಂದ ಜೆಡಿಎಸ್ ಅಧಿಕಾರಕ್ಕೆ ಬರುವುದಿಲ್ಲ ಎಂದು ಕಾಂಗ್ರೆಸ್‌ನವರು ಹೇಳಿದ್ದಾರೆ. ಹಾಗಾದರೆ 2019ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ವಿರೋಧ ಪಕ್ಷದಲ್ಲಿ ಕೂರುವಷ್ಟು ಸ್ಥಾನ ಬರಲಿಲ್ಲ. ಹೀಗಿರುವಾಗ ಜೆಡಿಎಸ್ ಬಗ್ಗೆ ಹಗುರವಾಗಿ ಮಾತನಾಡುವುದು ಸರಿಯಲ್ಲ. ಮತ್ತೊಮ್ಮೆ ಜೆಡಿಎಸ್ ಬಗ್ಗೆ ಹಗುರವಾಗಿ ಮಾತನಾಡಿದರೆ ಕಾಂಗ್ರೆಸ್ ವಿರುದ್ಧ ತೀವ್ರ ರೀತಿಯ ಹೋರಾಟ ಮಾಡಬೇಕಾಗುತ್ತದೆ ಎಂದು ರವಿಚಂದ್ರೇಗೌಡ ಎಚ್ಚರಿಸಿದ್ದಾರೆ.

ಗೋಪಾಲಗೌಡ ಆಸ್ಪತ್ರೆಯಲ್ಲಿ ಮಾರಕ ಸೆಪ್ ಸಿಸ್ ಕುರಿತು ಜಾಗೃತಿ ಕಾರ್ಯಕ್ರಮ

ಮೈಸೂರು,ಜ.6–ಇಂಡಿಯನ್ ಸೊಸೈಟಿ ಆಫ್ ಕ್ರಿಟಿಕಲ್ ಕೇರ್ ಮೆಡಿಸಿನ್ (ಐಎಸ್ ಸಿಸಿಎಂ) ವತಿಯಿಂದ ಮೈಸೂರಿನ ಶಾಂತವೇರಿ ಗೋಪಾಲಗೌಡ ಮೆಮೋರಿಯಲ್ ಆಸ್ಪತ್ರೆಯಲ್ಲಿ ಸೆಪ್ ಸಿಸ್ ಕುರಿತು ಜಾಗೃತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.



ಡಾ.ಸಂತೃಪ್ತ್

ಈ ವೇಳೆ ಗೋಪಾಲಗೌಡ ಶಾಂತವೇರಿ ಆಸ್ಪತ್ರೆ ನಿರ್ದೇಶಕ ಡಾ.ಹೆಚ್.ವಿ.ಸಂತೃಪ್ತ್ ಮಾತನಾಡಿ, ಸೆಪ್‌ಸಿಸ್ ಎನ್ನುವುದು ಸೋಂಕಿಗೆ ದೇಹದ ತೀವ್ರ ಪ್ರತಿಕ್ರಿಯೆಯಾಗಿದೆ. ಇದು ಜೀವಕ್ಕೆ ಅಪಾಯಕಾರಿ ವೈದ್ಯಕೀಯ ತುರ್ತುಸ್ಥಿತಿಯಾಗಿದೆ. ನೀವು ಈಗಾಗಲೇ ಹೊಂದಿರುವ ಸೋಂಕು ನಿಮ್ಮ ದೇಹದಾದ್ಯಂತ ಸರಣಿ ಕ್ರಿಯೆಯನ್ನು ಪ್ರಚೋದಿಸಿದಾಗ ಸೆಪ್‌ಸಿಸ್ ಸಂಭವಿಸುತ್ತದೆ. ಸೆಪ್‌ಸಿಸ್ ಕಾರಣವಾಗುವ ಸೋಂಕುಗಳು ಹೆಚ್ಚಾಗಿ ಶ್ವಾಸಕೋಶ, ಮೂತ್ರದ ಪ್ರದೇಶ, ಚರ್ಮ ಅಥವಾ ಜಠರದ ಕರುಳಿನ ಪ್ರದೇಶದಲ್ಲಿ ಪ್ರಾರಂಭವಾಗುತ್ತವೆ. ಸಕಾಲಿಕ ಚಿಕಿತ್ಸೆಯಿಲ್ಲದೆ, ಸೆಪ್‌ಸಿಸ್ ತ್ವರಿತವಾಗಿ ಅಂಗಾಂಶ ಹಾನಿ, ಅಂಗ ವೈಫಲ್ಯ ಮತ್ತು ಸಾವಿಗೂ ಕಾರಣವಾಗಬಹುದು ಎಂದರು.

ಸೆಪ್‌ಸಿಸ್ ಹೊಂದಿರುವ ವ್ಯಕ್ತಿಯು ಅಧಿಕ ಹೃದಯ ಬಡಿತ, ದುರ್ಬಲ ನಾಡಿ ಗೊಂದಲ, ತೀವ್ರ ನೋವು, ಅಸ್ವಸ್ಥತೆ ಜ್ವರ, ನಡುಕ, ತುಂಬಾ ಶೀತದ ಭಾವನೆ, ಉಸಿರಾಟದ ತೊಂದರೆ, ಬೆವರುವ ಚರ್ಮಬಾಧೆ ಹೊಂದಿರುತ್ತಾರೆ. ಇಂತಹವರು ಕೂಡಲೇ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಮೂವರು ಡಿಸಿಎಂ ವರಿಷ್ಠರ ತೀರ್ಮಾನವೇ ಅಂತಿಮ

ಬೆಂಗಳೂರು, ಜ.6(ಕೆಎಂಶಿ)– ಮೂವರು ಉಪಮುಖ್ಯಮಂತ್ರಿ ನೇಮಕ ಸಂಬಂಧ ವರಿಷ್ಠರ ತೀರ್ಮಾನವೇ ಅಂತಿಮ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ಸಹೋದ್ಯೋಗಿ ಸತೀಶ ಜಾರಕಿಹೊಳಿ ನಿವಾಸದಲ್ಲಿ ಊಟಕ್ಕೆ ಸೇರಿದ್ದೆವು, ಅಲ್ಲಿ ರಾಜಕೀಯ ವಿಚಾರ ಚರ್ಚೆ ಆಗಿದೆ. ಆದರೆ ಉಪಮುಖ್ಯಮಂತ್ರಿ ಬಗ್ಗೆ ಚರ್ಚೆ ನಡೆದಿಲ್ಲ ಎಂದರು.

ಸಚಿವ ರಾಜಣ್ಣ ನೀಡಿರುವ ಹೇಳಿಕೆ ಅವರ ವೈಯಕ್ತಿಕವಾದದ್ದು, ಅವರ ದೃಷ್ಟಿಯಿಂದ ಒಳ್ಳೆಯದಿರಬಹುದು. ಪಕ್ಷ ಸಂಘಟನೆ ಮತ್ತು ಮುಂಬರುವ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಇಂತಹ ಹೇಳಿಕೆ ನೀಡಿರಬಹುದು. ಆದರ ಈ ವಿಷಯದಲ್ಲಿ ವರಿಷ್ಠರ ತೀರ್ಮಾನವೇ ಅಂತಿಮ ಎಂದರು.

ಮದುವೆ ಆಗುವುದಾಗಿ ನಂಬಿಸಿ ಅತ್ಯಾಚಾರ; ಹೋಟೆಲ್ ಉದ್ಯಮಿ ವಿರುದ್ಧ ಪ್ರಕರಣ ದಾಖಲಿಸಿದ ಉದ್ಯೋಗಿ!

ಮೈಸೂರು, ಜ.6– ಮದುವೆಯಾಗುವುದಾಗಿ ನಂಬಿಸಿ ತನ್ನ ಮೇಲೆ ಅತ್ಯಾಚಾರವೆಸಗಿ ವಂಚಿಸಿರುವುದಾಗಿ ಮೈಸೂರಿನ ಖಾಸಗಿ ಹೋಟೆಲ್‌ವೊಂದರ ಮಾಜಿ ಮಹಿಳಾ ಸಿಬ್ಬಂದಿ ಪೊಲೀಸರಿಗೆ ದೂರು ಸಲ್ಲಿಸಿದ್ದಾರೆ. ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿರುವ ಪ್ರತಿಷ್ಠಿತ ಹೋಟೆಲ್‌ನ ಮ್ಯಾನೇಜ್‌ಮೆಂಟ್ ಉಸ್ತುವಾರಿ ವಹಿಸಿಕೊಂಡಿದ್ದ ಪ್ರೀತಂ ಪುರಾಣಿಕ್ ಅತ್ಯಾಚಾರ ಆರೋಪಕ್ಕೆ ಗುರಿಯಾದವರಾಗಿದ್ದು, ಈತನಿಗೆ ಸಹಕರಿಸಿದ ಆರೋಪದ ಮೇರೆಗೆ ತಂದೆಯೂ ಆದ ಹೋಟೆಲ್ ಮಾಲೀಕ ಕೃಷ್ಣದಾಸ್ ಪುರಾಣಿಕ್ ವಿರುದ್ಧ ಪ್ರಕರಣ ದಾಖಲಾಗಿದೆ.

ವಿವರ: 27 ವರ್ಷ ವಯಸ್ಸಿನ ಯುವತಿ ಈ ಹೋಟೆಲ್‌ನಲ್ಲಿ 2014ರಿಂದ ಕೆಲಸ ಮಾಡುತ್ತಿದ್ದು, ಈಕೆಯನ್ನು ಪ್ರೀತಿಸುವುದಾಗಿ ಪ್ರೀತಂ ಪುರಾಣಿಕ್ ದುಂಬಾಲು ಬಿದ್ದಿದ್ದು, ಆಕೆ 2018ರಲ್ಲಿ ಆತನ ಪ್ರೀತಿಯನ್ನು ಒಪ್ಪಿಕೊಂಡರಂತೆ. ಅಂದಿನಿಂದ ಹೋಟೆಲ್‌ನ ಮೇಲಂತಸ್ತಿನಲ್ಲಿರುವ ಸ್ಪಾನಲ್ಲಿ ಮದುವೆಯಾಗುವುದಾಗಿ ನಂಬಿಸಿ ಬಲವಂತವಾಗಿ ಈಕೆಯೊಂದಿಗೆ ಲೈಂಗಿಕ ಕ್ರಿಯೆ ನಡೆಸಿದ್ದಾನೆ ಎಂದು ಆರೋಪಿಸಲಾಗಿದೆ. ಇದರ ಫಲವಾಗಿ 2022ರಲ್ಲಿ ಗರ್ಭವತಿಯಾದಾಗ ಮಾತ್ರೆ ಕೊಟ್ಟು ಗರ್ಭಪಾತ ಮಾಡಿಸಿದ್ದ ಎಂದು ಆರೋಪಿಸಲಾಗಿದ್ದು, 2023ರ ಏಪ್ರಿಲ್‌ನಲ್ಲಿ ಮದುವೆಯಾಗುವಂತೆ ಒತ್ತಾಯ ಮಾಡಿದಾಗಲೂ ಖಂಡಿತವಾಗಿಯೂ ಮದುವೆಯಾಗುವುದಾಗಿ ಹೇಳುತ್ತಿದ್ದ ಆತ, ಯುವತಿಯನ್ನು ನಗ್ನವಾಗಿ ವಿಡಿಯೋ ಮತ್ತು ಫೋಟೋ ತೆಗೆದು ಅದನ್ನು ಸಾಮಾಜಿಕ ಜಾಲತಾಣದಲ್ಲಿ ಅಪ್‌ಲೋಡ್ ಮಾಡುವುದಾಗಿ ಬೆದರಿಸಿ ಆಕೆಯ ಮೇಲೆ ನಿರಂತರವಾಗಿ ಅತ್ಯಾಚಾರವೆಸಗುತ್ತಿದ್ದ.

2023ರ ನವೆಂಬರ್ 3ರಂದು ಬೆಳಗ್ಗೆ ತಾನು ಮತ್ತೆ ಗರ್ಭವತಿಯಾಗಿರುವುದಾಗಿಯೂ ತನ್ನನ್ನು ಮದುವೆ ಮಾಡಿಕೊಳ್ಳಬೇಕೆಂದು ಹೇಳಿದಾಗ ಪ್ರೀತಂ ಪುರಾಣಿಕ್ ಮತ್ತು ಆತನ ತಂದೆ ಕೃಷ್ಣದಾಸ ಪುರಾಣಿಕ್ ತನ್ನನ್ನು ಜಾತಿ ನಿಂದನೆ ಮಾಡಿ ಹೋಟೆಲ್‌ನಿಂದ ಹೊರಹಾಕಿದ್ದಾರೆ ಎಂದು ಯುವತಿ ನೀಡಿರುವ ದೂರನ್ನು ದಾಖಲಿಸಿಕೊಂಡಿರುವ ಎನ್‌ಆರ್ ಠಾಣೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.



ಮೈಸೂರು ತಾಲೂಕು ತಹಸೀಲ್ದಾರ್‌ರಾಗಿ ಅಧಿಕಾರ ಸ್ವೀಕರಿಸಿದ ಕೆ.ಎಂ. ಮಹೇಶ್ ಕುಮಾರ್ ಅವರನ್ನು ಮೆಲ್ಲಹಳ್ಳಿ ಕಾಂಗ್ರೆಸ್ ಮುಖಂಡ ರವಿ ಎನ್.ಗೌಡ ಆತ್ಮೀಯವಾಗಿ ಅಭಿನಂದಿಸಿದರು.

ಕೋಣಗಳ್ಳಿಯಲ್ಲಿ ಚಿರತೆ ಮರಿಗಳು ಪತ್ತೆ



ಮೈಸೂರು, ಜ.6(ಬಿಎಲ್‌ಯು)– ಮೈಸೂರಿನ ತಿ.ನರಸೀಪುರ ತಾಲೂಕು ಕೋಣಗಳ್ಳಿಯಲ್ಲಿ ಎರಡು ಚಿರತೆ ಮರಿಗಳು ಪತ್ತೆಯಾಗಿವೆ. ತಾಯಿಯಿಂದ ಬೇರ್ಪಟ್ಟಿದ್ದ ಈ ಚಿರತೆ ಮರಿಗಳ ಬಗ್ಗೆ ಸ್ಥಳೀಯರು ನಿನ್ನೆ ರಾತ್ರಿ ಅರಣ್ಯ ಇಲಾಖೆಯವರಿಗೆ ತಿಳಿಸಿದ್ದರು. ಕೂಡಲೇ ಸ್ಥಳಕ್ಕೆ ಧಾವಿಸಿದ ಅರಣ್ಯ ಇಲಾಖೆ ಸಿಬ್ಬಂದಿ 2 ತಿಂಗಳ ಎರಡು ಚಿರತೆ ಮರಿಗಳನ್ನು ವಶಕ್ಕೆ ಪಡೆದು ಆರೈಕೆ ಮಾಡುತ್ತಿದ್ದಾರೆ.

ಇದೇ ವೇಳೆ ತಾಯಿ ಚಿರತೆ ಸೆರೆಗೆ ಅರಣ್ಯ ಇಲಾಖೆಯವರು ಸ್ಥಳದಲ್ಲಿ ಬೋನು ಇರಿಸಿದ್ದಾರೆ. ಚಿರತೆ ಮರಿಗಳ ಪತ್ತೆಯಿಂದ ಭಯಭೀತರಾಗಿರುವ ಗ್ರಾಮಸ್ಥರು, ಕೂಡಲೇ ತಾಯಿ ಚಿರತೆಯನ್ನು ಸೆರೆ ಹಿಡಿಯುವಂತೆ ಅರಣ್ಯ ಇಲಾಖೆ ಅಧಿಕಾರಿಗಳನ್ನು ಆಗ್ರಹಿಸಿದ್ದಾರೆ.

ಸಂಸತ್ ಭವನದ ಭದ್ರತಾ ಲೋಪ ಪ್ರಕರಣ

ಮೈಸೂರಿನ ಮನೋರಂಜನ್ ಸೇರಿದಂತೆ ಐವರು ಆರೋಪಿಗಳ ಪಾಲಿಗ್ರಾಫ್ ಟೆಸ್ಟ್; ಕೋರ್ಟ್ ಸಮ್ಮತಿ



ಮೈಸೂರು,ಜ.6(ಬಿಎಲ್‌ಯು)–ಸಂಸತ್ ಭವನದ ಲೋಕಸಭೆಯ ಕಲಾಪದೊಳಗೆ ನುಗ್ಗಿ ಕಲರ್ ಸ್ಮೋಕ್ ಸ್ಫೋಟಿಸಿದ ಮೈಸೂರಿನ ಮನೋರಂಜನ್ ಸೇರಿದಂತೆ ಐವರು ಆರೋಪಿಗಳಿಗೆ ಪಾಲಿಗ್ರಾಫ್ ಟೆಸ್ಟ್ ನಡೆಸಲು ದೆಹಲಿಯ ಪಟಿಯಾಲ ಹೌಸ್ ಕೋರ್ಟ್ ಒಪ್ಪಿಗೆ ಸೂಚಿಸಿದೆ.

ಲೋಕಸಭೆಯ ಕಲಾಪದೊಳಗೆ ನುಗ್ಗಿ ಕಲರ್ ಸ್ಮೋಕ್ ಸ್ಫೋಟಿಸಿದ ಆರೋಪಿಗಳು ತಮ್ಮ ಹಿಂದಿರುವ ಸಂಘಟನೆ ಹಾಗೂ ಕಾಣದ ಕೈಗಳ ಬಗ್ಗೆ ಈ ತನಕ ಯಾವುದೇ ವಿವರ ನೀಡುತ್ತಿಲ್ಲ. ಹಾಗಾಗಿ ಪಾಲಿಗ್ರಾಫ್ ಟೆಸ್ಟ್‌ಗೆ ಒಳಪಡಿಸಲು ಒಪ್ಪಿಗೆ ನೀಡುವಂತೆ ದೆಹಲಿ ಪೊಲೀಸರ ವಿಶೇಷ ತಂಡ ನ್ಯಾಯಾಲಯಕ್ಕೆ ಮನವಿ ಮಾಡಿತ್ತು. ಈ ಬಗ್ಗೆ ಜ.2ರವರೆಗೆ ವಾದ–ಪ್ರತಿವಾದ ಆಲಿಸಿದ ದೆಹಲಿಯ ಪಟಿಯಾಲ ಹೌಸ್ ಕೋರ್ಟ್‌ನ ಹೆಚ್ಚುವರಿ ಸೆಷನ್ ನ್ಯಾಯಾಲಯ ಆದೇಶ ಕಾಯ್ದಿರಿಸಿತ್ತು. ಮಾನಸಿಕ ತಜ್ಞರ ಶಿಫಾರಸು ಅವಲೋಕಿಸಿದ ನ್ಯಾಯಾಲಯದ ನ್ಯಾಯಾಧೀಶ ಹರ್ದೀಪ್ ಕೌರ್, ಐವರು ಆರೋಪಿಗಳಿಗೆ ಪಾಲಿಗ್ರಾಫ್ ಟೆಸ್ಟ್‌ಗೆ ಸಮ್ಮತಿ ಸೂಚಿಸಿದರು.

ಈ ಎಲ್ಲ ಪ್ರಕ್ರಿಯೆಗಳನ್ನು ನಡೆಸಬೇಕಾಗಿರುವ ಕಾರಣ ಆರೋಪಿಗಳನ್ನು ಜ.13ರವರೆಗೆ ಪೊಲೀಸ್ ಕಸ್ಟಡಿಗೆ ನೀಡಿದರು. ಪಾಲಿಗ್ರಾಫ್ ಟೆಸ್ಟ್ ನಡೆಸಿದ ನಂತರ ಜ.13ರಂದು ಆರೋಪಿಗಳನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸುವಂತೆಯೂ ನ್ಯಾಯಾಧೀಶರು ದೆಹಲಿ ಪೊಲೀಸರ ವಿಶೇಷ ತಂಡಕ್ಕೆ ಸೂಚಿಸಿದ್ದಾರೆ. ಆದರೆ ಈ ಪ್ರಕರಣದ ಏಕೈಕ ಮಹಿಳಾ ಆರೋಪಿಯಾಗಿರುವ ನೀಲಂ ಆಜಾದ್ ಪಾಲಿಗ್ರಾಫ್ ಟೆಸ್ಟ್‌ಗೆ ಒಳಪಡಲು ನಿರಾಕರಿಸಿದ್ದಾಳೆ. ಈ ಹಿನ್ನೆಲೆ ಸದ್ಯಕ್ಕೆ ಆಕೆಯನ್ನು ಪಾಲಿಗ್ರಾಫ್ ಟೆಸ್ಟ್‌ಗೆ ಒಳಪಡಿಸಲು ನ್ಯಾಯಾಲಯ ಸಮ್ಮತಿ ಸೂಚಿಸಿಲ್ಲ. ತಮಗೆ ಜಾಮೀನು ನೀಡುವಂತೆ ನೀಲಂ ಆಜಾದ್ ಸಲ್ಲಿಸಿರುವ ಜಾಮೀನು ಅರ್ಜಿ ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿದೆ. ನ್ಯಾಯಾಲಯದ ಆದೇಶದ ಮೇರೆಗೆ ದೆಹಲಿ ಪೊಲೀಸರ ವಿಶೇಷ ತಂಡ ಪ್ರಕರಣದ ಆರೋಪಿಗಳಾದ ಡಿ.ಮನೋರಂಜನ್, ಸಾಗರ್ ಶರ್ಮಾ, ಅಮೋಲ್ ಶಿಂಧೆ, ಲಲಿತ್ ಝಾ ಹಾಗೂ ಮಹೇಶ್ ಕುಮಾವತ್‌ರನ್ನು ಪಾಲಿಗ್ರಾಫ್ ಟೆಸ್ಟ್‌ಗೆ ಒಳಪಡಿಸಲಿದ್ದಾರೆ.

ಈ ಇಬ್ಬರಿಗೆ ಪಾಲಿಗ್ರಾಫ್ ಜೊತೆಗೆ ಬ್ರೈನ್ ಮ್ಯಾಪಿಂಗ್; ನಾರ್ಕೋ ಅನಾಲಿಸಿಸ್ ಟೆಸ್ಟ್

ಸಂಸತ್ ಭವನದ ಲೋಕಸಭೆಯ ಕಲಾಪದ ವೇಳೆ ನುಗ್ಗಿ ಕಲರ್ ಸ್ಮೋಕ್ ಸ್ಫೋಟಿಸಿದ ಪ್ರಕರಣದ ಮಾಸ್ಟರ್ ಮೈಂಡ್‌ಗಳಾದ ಮನೋರಂಜನ್ ಹಾಗೂ ಸಾಗರ್ ಶರ್ಮಾನನ್ನು ಪಾಲಿಗ್ರಾಫ್ ಟೆಸ್ಟ್ ಜೊತೆಗೆ ಬ್ರೈನ್ ಮ್ಯಾಪಿಂಗ್ ಹಾಗೂ ನಾರ್ಕೋ ಅನಾಲಿಸಿಸ್ ಟೆಸ್ಟ್‌ಗೂ ಒಳಪಡಿಸಲು ದೆಹಲಿಯ ಪಟಿಯಾಲ ಹೌಸ್ ಕೋರ್ಟ್‌ನ ಹೆಚ್ಚುವರಿ ಸೆಷನ್ ನ್ಯಾಯಾಲಯದ ನ್ಯಾಯಾಧೀಶ ಹರ್ದೀಪ್ ಕೌರ್ ಒಪ್ಪಿಗೆ ಸೂಚಿಸಿದ್ದಾರೆ.

ಮಾನಸಿಕ ತಜ್ಞರ ಶಿಫಾರಸು ವರದಿಯನ್ನು ಆಧರಿಸಿ ಈ ಇಬ್ಬರಿಗೆ ಪಾಲಿಗ್ರಾಫ್ ಜೊತೆಗೆ ಬ್ರೈನ್ ಮ್ಯಾಪಿಂಗ್ ಹಾಗೂ ನಾರ್ಕೋ ಅನಾಲಿಸಿಸ್ ಟೆಸ್ಟ್ ಮಾಡಿಸಲು ನ್ಯಾಯಾಧೀಶರು ಸಮ್ಮತಿಸಿದ್ದಾರೆ. ಈ ಪ್ರಕರಣದಲ್ಲಿ ನಾಲ್ವರು ಸಂಸತ್ ಭವನದ ಹೊರಗಿದ್ದರೆ, ಮನೋರಂಜನ್ ಹಾಗೂ ಸಾಗರ್ ಶರ್ಮಾ ಸಂಸತ್ ಭವನದೊಳಗೆ ನುಗ್ಗಿದ್ದರು. ಈ ಹಿನ್ನೆಲೆಯಲ್ಲಿ ಇವರಿಬ್ಬರನ್ನು ಪ್ರಕರಣದ ಮಾಸ್ಟರ್ ಮೈಂಡ್ ಎಂದು ಪರಿಗಣಿಸಿರುವ ದೆಹಲಿ ಪೊಲೀಸರ ವಿಶೇಷ ತಂಡ, ರಹಸ್ಯ ಭೇದಿಸಲು ಈ ಇಬ್ಬರನ್ನು ಮೂರೂ ಪರೀಕ್ಷೆ ಮಾಡುವ ಅವಶ್ಯಕತೆ ಇದೆ ಎಂದು ನ್ಯಾಯಾಲಯಕ್ಕೆ ಮನವರಿಕೆ ಮಾಡಿಕೊಟ್ಟಿದ್ದರು.

ಪಾಲಿಗ್ರಾಫ್ ಟೆಸ್ಟ್, ಬ್ರೈನ್ ಮ್ಯಾಪಿಂಗ್ ಹಾಗೂ ನಾರ್ಕೋ ಅನಾಲಿಸಿಸ್ ಟೆಸ್ಟ್‌ನಿಂದ ಬಯಲಾಗುವ ಸತ್ಯಗಳಿಂದ ಈ ಪ್ರಕರಣ ಮತ್ತೊಂದು ತಿರುವು ಪಡೆಯುವ ಸಾಧ್ಯತೆ ಇದೆ. ಆರು ಜನರಿಂದ ಕೃತ್ಯ ಮಾಡಿಸಿ ತಲೆಮರೆಸಿಕೊಂಡಿರುವರು ಪೊಲೀಸರ ಅತಿಥಿಯಾಗುವ ಸಾಧ್ಯತೆ ಕೂಡ ಇದೆ.





ನಾರ್ಕೋ ಅನಾಲಿಸಿಸ್, ಬ್ರೈನ್ ಮ್ಯಾಪಿಂಗ್ ಟೆಸ್ಟ್ ಎಂದರೇನು...

ಆರೋಪಿಯ ಸುಳ್ಳು ಪತ್ತೆ ಮಾಡಲು ನಾರ್ಕೋ ಅನಾಲಿಸಿಸ್ ಪರೀಕ್ಷೆ ಆಧುನಿಕ ವೈಜ್ಞಾನಿಕ ವಿಧಾನವಾಗಿದೆ. ಸೋಡಿಯಂ ಪೆಂಟೋಥಾಲ್ ಔಷಧಿಯನ್ನು ಆರೋಪಿ ದೇಹಕ್ಕೆ ಚುಚ್ಚಲಾಗುತ್ತದೆ. ಅದು ಆರೋಪಿಯ ಸಂಮೋಹನ ಅಥವಾ ನಿದ್ರಾಜನಕ ಸ್ಥಿತಿಗೆ ತರುತ್ತದೆ. ಇದರಲ್ಲಿ ಆರೋಪಿ ಕಲ್ಪನೆ ತಟಸ್ಥಗೊಳಿಸಲಾಗುತ್ತದೆ. ಇದು ಅಲ್ಪಾವಧಿಯ ಅರವಳಿಕೆಯಾಗಿದೆ.

ಈ ಸಂಮೋಹನ ಸ್ಥಿತಿಯಲ್ಲಿ ಆರೋಪಿ ಸುಳ್ಳು ಹೇಳಲು ಅಸಮರ್ಥನೆಂದು ಅರ್ಥೈಸಿಕೊಳ್ಳಲಾಗುತ್ತದೆ. ಈ ವೇಳೆ ಆರೋಪಿ ಸತ್ಯವಾದ ಮಾಹಿತಿಯನ್ನು ಬಹಿರಂಗಪಡಿಸುವ ಸಾಧ್ಯತೆ ಇರುತ್ತದೆ.

ಬ್ರೈನ್ ಮ್ಯಾಪಿಂಗ್ ಪರೀಕ್ಷೆಯನ್ನು ಪಿ–300 ಪರೀಕ್ಷೆ ಎಂಬ ವೈಜ್ಞಾನಿಕ ಹೆಸರಿನಿಂದಲೂ ಕರೆಯ ಲಾಗುತ್ತದೆ. ಆರೋಪಿಯನ್ನು ಮೊದಲು ವಿಚಾರಣೆಗೊಳಪಡಿಸಲಾಗುತ್ತದೆ. ತರುವಾಯ ಆತ ಮಾಹಿತಿ ಮರೆ ಮಾಚುತ್ತಿದ್ದಾನೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲಾಗುತ್ತದೆ. ಬ್ರೈನ್ ಮ್ಯಾಪಿಂಗ್‌ನಲ್ಲಿ 32 ಚಾನಲ್ ನ್ಯೂರೋ ಸ್ಕ್ಯಾನ್ ಕಾರ್ಡಿಂಗ್ ಸಿಸ್ಟಂ ಮೂಲಕ ಆರೋಪಿಯಿಂದ ಪ್ರಕ್ರಿಯೆ ಪಡೆದು ಕೊಳ್ಳಲಾಗುವುದು. ಪಾಲಿಗ್ರಾಫ್ ಪರೀಕ್ಷೆ ಕೂಡ ಸುಳ್ಳು ಪತ್ತೆಯ ವೈಜ್ಞಾನಿಕ ವಿಧಾನವಾಗಿದೆ. ಈ ಮೂರು ಪರೀಕ್ಷೆಗೆ ಆರೋಪಿಗಳನ್ನು ಒಳಪಡಿಸುವ ಮುನ್ನ ಆರೋಪಿ ಇದಕ್ಕೆ ಸಮರ್ಥ ಎಂಬ ಮಾನಸಿಕ ತಜ್ಞರ ವರದಿಯನ್ನು ಆಧರಿಸಿ ನ್ಯಾಯಾಧೀಶರು ತೀರ್ಮಾನ ಕೈಗೊಳ್ಳುತ್ತಾರೆ.

ಮೈಸೂರಿಗೆ ದೆಹಲಿ ಪೊಲೀಸರ ಹೊಸ ತಂಡ ಆಗಮನ

ಸಂಸತ್ ಭವನದೊಳಗೆ ನುಗ್ಗಿದ್ದ ಮನೋರಂಜನ್ ಬಗ್ಗೆ ತನಿಖೆ ಮಾಡಲು ದೆಹಲಿ ಪೊಲೀಸರ ಹೊಸ ತಂಡ ಮೈಸೂರಿಗೆ ಆಗಮಿಸಿದೆ. ತಂಡದ ನಾಲ್ವರು ಅಧಿಕಾರಿಗಳು ಸುಮಾರು 13 ದಿನಗಳ ಕಾಲ ಮೈಸೂರಿನಲ್ಲಿ ವಾಸ್ತವ್ಯ ಹೂಡಿದ್ದರು. ಆ ವೇಳೆ ಮನೋರಂಜನ್‌ಗೆ ಸಂಬಂಧಿಸಿದಂತೆ ಬಹಳಷ್ಟು ಮಾಹಿತಿಗಳನ್ನು ಕಲೆ ಹಾಕಿದ್ದರು. ಮನೋರಂಜನ್ ಕುಟುಂಬಸ್ಥರು, ಸ್ನೇಹಿತರನ್ನು ವಿಚಾರಣೆ ಮಾಡಿದ್ದರು. ತರುವಾಯ ದೆಹಲಿಗೆ ವಾಪಸಾದರು. ಆದರೆ ದೆಹಲಿ ಪೊಲೀಸರ ಹೊಸ ತಂಡದ ನಾಲ್ವರು ಅಧಿಕಾರಿಗಳು ಈಗ ಮೈಸೂರಲ್ಲಿ ವಾಸ್ತವ್ಯ ಹೂಡಿದ್ದಾರೆ. ಆದರೆ ಇವರು ಯಾರ ಮೇಲೆ ಕಣ್ಣಿಟ್ಟಿದ್ದಾರೆ, ಯಾವ ವಿಚಾರ ಕೆದಕುತ್ತಿದ್ದಾರೆ ಎಂಬ ಮಾಹಿತಿಗಳು ಲಭ್ಯವಿಲ್ಲ.

61ನೇ ದಿನಕ್ಕೆ ಕಾಲಿಟ್ಟ ಕಾವೇರಿ ಕ್ರಿಯಾ ಸಮಿತಿ ಧರಣಿ



ತಮಿಳುನಾಡಿಗೆ ಕಾವೇರಿ ನೀರು ಬಿಡುವುದನ್ನು ವಿರೋಧಿಸಿ ಕಾವೇರಿ ಕ್ರಿಯಾ ಸಮಿತಿ ಸದಸ್ಯರು ಮೈಸೂರಿನ ಪುರಭವನದ ಬಳಿ ಶನಿವಾರವೂ ಪ್ರತಿಭಟನೆ ನಡೆಸಿದರು. ಬಿಜೆಪಿ ಮುಖಂಡ ಜಯಪ್ರಕಾಶ್, ಮೂಗೂರು ನಂಜುಂಡಸ್ವಾಮಿ ಇನ್ನಿತರರಿದ್ದಾರೆ.

ಮೈಸೂರು, ಜ.6(ಬಿಎಲ್‌ಯು)– ತಮಿಳುನಾಡಿಗೆ ಕಾವೇರಿ ನೀರು ಬಿಡುತ್ತಿರುವುದನ್ನು ವಿರೋಧಿಸಿ ಕಾವೇರಿ ಕ್ರಿಯಾ ಸಮಿತಿಯವರು ಮೈಸೂರಿನ ಪುರಭವನದ ಬಳಿ ನಡೆಸುತ್ತಿರುವ ಧರಣಿ 61ನೇ ದಿನಕ್ಕೆ ಕಾಲಿಟ್ಟಿದೆ.

ಈ ವೇಳೆ ಮಾತನಾಡಿದ ಸಮಿತಿ ಅಧ್ಯಕ್ಷ ಜಯಪ್ರಕಾಶ್, ಹೆಚ್ಚುವರಿ ಕಾವೇರಿ ನೀರು ಬಳಸಿಕೊಳ್ಳಲು ತಮಿಳುನಾಡು ಸರ್ಕಾರ ಕಾವೇರಿ, ಗುಂಡಾರ್ ನದಿ ಜೋಡಣೆ ಮಾಡುತ್ತಿದೆ. ಈ ಸಂಬಂಧ ಭೂಸ್ವಾಧೀನ ಪ್ರಕ್ರಿಯೆ ನಡೆಸುತ್ತಿದೆ. ಕರ್ನಾಟಕ ಸರ್ಕಾರ ಈ ಯೋಜನೆ ತಡೆಯಬೇಕು ಎಂದು ಆಗ್ರಹಿಸಿದರು.

ತಮಿಳುನಾಡು ಸರ್ಕಾರದ ಈ ಕ್ರಮ ಕಾವೇರಿ ನ್ಯಾಯಾಧಿಕರಣ ತೀರ್ಪಿನ ಸ್ಪಷ್ಟ ಉಲ್ಲಂಘನೆಯಾಗಿದ್ದು, ಕರ್ನಾಟಕ ಸರ್ಕಾರ ಈ ಬಗ್ಗೆ ಕಾನೂನು ಹೋರಾಟ ಮಾಡಬೇಕೆಂದು ಒತ್ತಾಯಿಸಿದರು.

ಕನ್ನಡಪರ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ, ರೈತ ಸಂಘದ ಸಿಂಧುವಳ್ಳಿ ಶಿವಕುಮಾರ್, ಪುಟ್ಟೇಗೌಡ ಬಸವರಾಜ್, ಲೋಕೇಶ್ ಗೌಡ, ಗಾಣಿಗನಕೊಪ್ಪಲು ನಾಗರಾಜು, ಶಿವನಾಯ್ಕರ್, ಪೈಲ್ವಾನ್ ಬಾಲಾಜಿ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.



ಮೈಸೂರಿನ ಪಡುವಾರಹಳ್ಳಿಯಲ್ಲಿ ಅಯೋಧ್ಯೆಯ ಶ್ರೀ ರಾಮಮಂದಿರದ ಮಂತ್ರಾಕ್ಷತೆ ಮತ್ತು ಕರಪತ್ರವನ್ನು ಮನೆ ಮನೆಗೆ ವಿತರಿಸಲಾಯಿತು. ಪಾಲಿಕೆ ಮಾಜಿ ಸದಸ್ಯ ಚಿಕ್ಕವೆಂಕಟು, ಬಿಜೆಪಿ ವಾರ್ಡ್ ಅಧ್ಯಕ್ಷ ಮಂಜು, ಆರ್‌ಎಸ್‌ಎಸ್‌ನ ಶಿವಪ್ಪ, ಜನತಾ ಸೊಸೈಟಿ ನಿರ್ದೇಶಕರಾದ ಸಿ.ಡಿ. ಕುಮಾರ್, ಸಂತೋಷ್, ಮುಖಂಡರಾದ ಯೋಗಾನಂದ, ಛಾಯಾಪ್ರಸಾದ್, ಗೋಪಾಲಸ್ವಾಮಿ, ಶಿವರಾಜ್, ವೇಣು, ಗೌತಮ್, ಭೈರಪ್ಪ, ರಾಮಣ್ಣ ಇನ್ನಿತರರು ಉಪಸ್ಥಿತರಿದ್ದರು.

ಮುಕ್ತ ವಿವಿ ಪರೀಕ್ಷಾ ಶುಲ್ಕ ಪಾವತಿಸಲು ಸೂಚನೆ

ಮೈಸೂರು,ಜ.6–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2021–22ನೇ ಶೈಕ್ಷಣಿಕ ಸಾಲಿನಲ್ಲಿ (ಜುಲೈ/ಜನವರಿ ಆವೃತ್ತಿಗಳ) ಪ್ರಥಮ ಸೆಮಿಸ್ಟರ್ ಪದವಿಗೆ ಪ್ರವೇಶಾತಿ ಪಡೆದು 2022–23ನೇ ಶೈಕ್ಷಣಿಕ ಸಾಲಿನಲ್ಲಿ ದ್ವಿತೀಯ ವರ್ಷಕ್ಕೆ ಪ್ರವೇಶಾತಿ ಪಡೆದ ತೃತೀಯ ಸೆಮಿಸ್ಟರ್‌ನ (ಜುಲೈ, ಜನವರಿ ಆವೃತ್ತಿಗಳ) ವಿದ್ಯಾರ್ಥಿಗಳಿಗೆ ಫೆಬ್ರವರಿ–2024ರ ಮಾಹೆಯಲ್ಲಿ ನಡೆಯುವ ಸ್ನಾತಕ (ಯುಜಿ) ಮತ್ತು ಸ್ನಾತಕೋತ್ತರ (ಪಿಜಿ) ಕಾರ್ಯಕ್ರಮಗಳ ವಿದ್ಯಾರ್ಥಿಗಳಿಗೆ ಸೆಮಿಸ್ಟರ್ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸುವಂತೆ ತಿಳಿಸಲಾಗಿದೆ. ಪರೀಕ್ಷಾ ಶುಲ್ಕವನ್ನು ಪಾವತಿಸಲು ದಂಡ ಶುಲ್ಕವಿಲ್ಲದೆ ಜ.13 ಹಾಗೂ 200 ರೂ. ದಂಡ ಶುಲ್ಕದೊಂದಿಗೆ ಪಾವತಿಸಲು ಜ.23ರವರೆಗೆ ಅವಕಾಶವಿರುತ್ತದೆ. ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.ksoumysuru.ac.in ಹಾಗೂ ದೂ.ಸಂ: 8800335638 ಸಂಪರ್ಕಿಸಿ.



ಮೈಸೂರಿನ ಕನಕದಾಸ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಜೆ.ರಾಜೇಶ್, ಉಪಾಧ್ಯಕ್ಷ ಎಂ.ಧರ್ಮೇಂದ್ರ ಅವರು ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅವರನ್ನು ಭೇಟಿ ಮಾಡಿ, ಅಭಿನಂದಿಸಿದರು. ಮುಖಂಡರಾದ ವಿಶ್ವನಾಥ್ (ವಿಶ್ವ), ಉತ್ತನಹಳ್ಳಿ ಶಿವಣ್ಣ, ಸಂಘದ ಮಾಜಿ ಅಧ್ಯಕ್ಷ ಮಹೇಶ್ ಉಪಸ್ಥಿತರಿದ್ದರು.

ಪೊಲೀಸ್ ಪಬ್ಲಿಕ್ ಶಾಲೆ: ವಿವಿಧ ಶಿಕ್ಷಕರ ಹುದ್ದೆಗಳಿಗೆ ಅರ್ಜಿ

ಮೈಸೂರು.ಜ.6– ನಗರದ ಜಲಪುರಿಯಲ್ಲಿರುವ ಕರ್ನಾಟಕ ಸ್ಟೇಟ್ ಪೊಲೀಸ್ ವೆಲ್‌ಫೇರ್ ಅಂಡ್ ಎಜ್ಯೂಕೇಷನ್ ಟ್ರಸ್ಟ್ ವತಿಯಿಂದ ನಡೆಸುತ್ತಿರುವ ಪೊಲೀಸ್ ಪಬ್ಲಿಕ್ ಸ್ಕೂಲ್‌ಗೆ 2024–25 ನೇ ಸಾಲಿಗೆ ಪ್ರಿನ್ಸಿಪಾಲ್, ಪ್ರಿ–ಪ್ರೈಮರಿ ಟೀಚರ್ಸ್, ಪ್ರೈಮರಿ ಟೀಚರ್ಸ್, ಮಿಡ್ಲ್ ಸ್ಕೂಲ್ ಟೀಚರ್ಸ್, ಸೆಕಂಡರಿ ಸ್ಕೂಲ್ ಟೀಚರ್ಸ್, ಮತ್ತು ಸೀನಿಯರ್ ಸೆಕಂಡರಿ ಸ್ಕೂಲ್ ಟೀಚರ್ಸ್ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅತ್ಯುತ್ತಮ ಸಂವಹನ ಕೌಶಲ್ಯಗಳೊಂದಿಗೆ ವಿಷಯದ ಜ್ಞಾನ, ದೃಷ್ಟಿ, ಸೃಜನಶೀಲತೆ ಮತ್ತು ವಿಧಾನದ ಸ್ವಂತಿಕೆ ಅಗತ್ಯವಾಗಿರುತ್ತದೆ. ಆಸಕ್ತರು 10 ದಿನಗಳೊಳಗೆ ವಿವರವಾದ ಸ್ವ–ವಿವರಳೊಂದಿಗೆ ಪೊಲೀಸ್ ಸಾರ್ವಜನಿಕ ಶಾಲೆ, ಮಹದೇವಪುರ ಮುಖ್ಯ ರಸ್ತೆ, ಜಲಪುರಿ, ಮೈಸೂರು–570019. (ದೂ.ಸಂ. 0821/2459900 ಇಮೇಲ್: policepublicschool resumes @gmail.comಗೆ ಕಳುಹಿಸಬಹುದು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ಹಾಗು ಪೊಲೀಸ್ ಪಬ್ಲಿಕ್ ಶಾಲೆಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನ್ಯಾ.ಎ.ಜೆ.ಸದಾಶಿವ ಆಯೋಗ ವರದಿ ಜಾರಿಗೊಳಿಸಿ ಆದಿ ದ್ರಾವಿಡ ಸಮುದಾಯಕ್ಕೆ ಒಳ ಮೀಸಲಾತಿ ಕಲ್ಪಿಸಿ

ಅಖಿಲ ಕರ್ನಾಟಕ ಡಾ.ಬಿ.ಆರ್.ಅಂಬೇಡ್ಕರ್ ಆದಿ ದ್ರಾವಿಡ ಪೌರಕಾರ್ಮಿಕ ಜನಾಂಗದ ಅಭಿವೃದ್ಧಿ ಟ್ರಸ್ಟ್ ಆಗ್ರಹ

ಮೈಸೂರು, ಜ.6(ಜಿಎ)–ಸರ್ಕಾರ ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗದ ವರದಿಯನ್ನು ಅಂಗೀಕರಿಸಿ ಒಳ ಮೀಸಲಾತಿಯನ್ನು ಆದಿ ದ್ರಾವಿಡ ಸಮುದಾಯಕ್ಕೆ ನೀಡಬೇಕೆಂದು ಅಖಿಲ ಕರ್ನಾಟಕ ಡಾ.ಬಿ.ಆರ್.ಅಂಬೇಡ್ಕರ್ ಆದಿ ದ್ರಾವಿಡ ಪೌರಕಾರ್ಮಿಕ ಜನಾಂಗದ ಅಭಿವೃದ್ಧಿ ಟ್ರಸ್ಟ್ ಆಗ್ರಹಿಸಿದೆ.

ನಗರದ ದಿ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಈಗಿರುವ ಮೀಸಲಾತಿಯು ಆದಿ ದ್ರಾವಿಡ ಸಮುದಾಯಕ್ಕೆ ಸಮರ್ಪಕವಾಗಿ ದೊರೆಯದಿರುವ ಹಿನ್ನೆಲೆಯಲ್ಲಿ ವೈಜ್ಞಾನಿಕವಾಗಿ ಒಳ ಮೀಸಲಾತಿಯನ್ನು ಜಾರಿಗೆ ತರಬೇಕೆಂದು ಆಗ್ರಹಿಸಿ ಅದರಿಂದಾಗುವ ಅನುಕೂಲಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

ಟ್ರಸ್ಟ್ ಮಾರ್ಗದರ್ಶಕ ಬಿ.ಎಸ್.ಸುಬ್ರಹ್ಮಣ್ಯ ಮಾತನಾಡಿ, ಸ್ವಾತಂತ್ರ್ಯ ಬಂದು 76 ವರ್ಷ ಕಳೆದರೂ ಪೌರಕಾರ್ಮಿಕರು ಆರ್ಥಿಕ, ಶೈಕ್ಷಣಿಕ, ರಾಜಕೀಯವಾಗಿ ತೀರಾ ಹಿಂದುಳಿದಿದ್ದಾರೆ. ಸಮುದಾಯದ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಲೇ ಇದೆ ಎಂದು ಬೇಸರ ವ್ಯಕ್ತಪಡಿಸಿದರು.



ಮೈಸೂರಿನ ದಿ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಅಖಿಲ ಕರ್ನಾಟಕ ಡಾ.ಬಿ.ಆರ್.ಅಂಬೇಡ್ಕರ್ ಆದಿ ದ್ರಾವಿಡ ಪೌರಕಾರ್ಮಿಕ ಜನಾಂಗದ ಅಭಿವೃದ್ಧಿ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ಸಭೆಯಲ್ಲಿ ಆದಿ ದ್ರಾವಿಡ ಮಹಾಸಂಘದ ರಾಜ್ಯಾಧ್ಯಕ್ಷ ಶ್ರೀನಿವಾಸ್, ಗೌರವಾಧ್ಯಕ್ಷ ಎನ್.ಮಾರ, ಪಳನಿ, ಗೌರವ ಸಲಹೆಗಾರ ಬಿ.ರಾಜು, ಮುಖಂಡ ನಂಜಪ್ಪ, ಸಂಘದ ಪ್ರಧಾನ ಕಾರ್ಯದರ್ಶಿ ವಡಿವೇಲು, ಮಂಜುನಾಥ್, ಬಾಲು, ಮಹಾದೇವ್, ಟ್ರಸ್ಟಿ ಪ್ರಧಾನ ಕಾರ್ಯದರ್ಶಿ ಸುರೇಶ್ ಭಾಗವಹಿಸಿದ್ದರು.

ಸ್ವಾತಂತ್ರ್ಯ ಪೂರ್ವದಲ್ಲಿ 6 ಜಾತಿಗಳು ಮಾತ್ರ ಮೀಸಲಾತಿಗೆ ಅರ್ಹರಾಗಿದ್ದವು. ಕಾಲ ಕಮ್ರೇಣ ನೂರೊಂದು ಜಾತಿ ಸೇರ್ಪಡೆಯಾದವು. ಇದರಿಂದ ಪೌರಕಾರ್ಮಿಕ ಸಮುದಾಯ ಮೀಸಲಾತಿಯಿಂದ ವಂಚಿತವಾಗಿದೆ. ಹೀಗಾಗಿ ಹೀಗಿರುವ ಮೀಸಲಾತಿಯಿಂದ ಸಮುದಾಯದ ಏಳಿಗೆ ಸಾಧ್ಯವಿಲ್ಲ. ಒಳ ಮೀಸಲಾತಿ ಜಾರಿಯಿಂದ ಸಮುದಾಯದ ಏಳಿಗೆಯಾಗಲಿದೆ. ಈಗಲೂ ಸಮುದಾಯ ಎಚ್ಚೆತ್ತುಕೊಳ್ಳದಿದ್ದರೆ ಒಳ ಮೀಸಲಾತಿಯಲ್ಲಿಯೂ ಮೋಸವಾಗಲಿದೆ. ಸಮುದಾಯದ ವಿದ್ಯಾರ್ಥಿಗಳು ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಮುಂದಿನ ಪೀಳಿಗೆ ಪೌರಕಾರ್ಮಿಕರ ವೃತ್ತಿಗೆ ಬರಬಾರದು ಎಂದರು.

ಬಳಿಕ ಸಭೆಯಲ್ಲಿ ಸಮುದಾಯದ ಏಳಿಗೆಗಾಗಿ ಸವಲತ್ತು ಕಲ್ಪಿಸಲು ಸರ್ಕಾರ ಮತ್ತು ಜಿಲ್ಲಾಡಳಿತ ಸಮರ್ಪಕ ಯೋಜನೆಗಳನ್ನು ರೂಪಿಸಬೇಕು. ರಾಜಕೀಯ ಕ್ಷೇತ್ರದಲ್ಲಿ ಸಫಾಯಿ ಕರ್ಮಚಾರಿ ಆಯೋಗ ಮತ್ತು ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನವನ್ನು ಆದಿ ದ್ರಾವಿಡ ಸಮುದಾಯಕ್ಕೆ ನೀಡಬೇಕು. ಆದಿ ದ್ರಾವಿಡ ಅಭಿವೃದ್ಧಿ ನಿಗಮ ಮಂಡಳಿ ಸ್ಥಾಪಿಸಬೇಕು, ಆದಿ ದ್ರಾವಿಡ ಸಮುದಾಯ ಭವನಕ್ಕೆ ಸಿಎ ನಿವೇಶನಗಳನ್ನು ಒದಗಿಸಬೇಕು, ಸಮುದಾಯದ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ವ್ಯವಸ್ಥೆ ಕಲ್ಪಿಸಬೇಕು. ಆದಿ ದ್ರಾವಿಡ ಜನಾಂಗದವರಿಗೆ ನೀಡುತ್ತಿರುವ ಸವಲತ್ತುಗಳ ಬಗ್ಗೆ ಆಯಾ ಜಿಲ್ಲೆಗಳ ಸಮಾಜ ಕಲ್ಯಾಣ ಇಲಾಖೆಯಿಂದ ಶ್ವೇತ ಪತ್ರ ಹೊರಡಿಸಬೇಕು ಮತ್ತು ಕರ್ತವ್ಯದ ವೇಳೆ ಮರಣ ಹೊಂದಿದ 59 ಮಂದಿಯ ಕುಟುಂಬಕ್ಕೆ ಶೀಘ್ರ ಪರಿಹಾರ ಹಾಗೂ ಉದ್ಯೋಗ ನೀಡಬೇಕೆಂದು 8 ನಿರ್ಣಯಗಳನ್ನು ಮಂಡಿಸಿ, ಆಗ್ರಹಿಸಿದರು.

ಸಭೆಯಲ್ಲಿ ಆದಿ ದ್ರಾವಿಡ ಮಹಾಸಂಘದ ರಾಜ್ಯಾಧ್ಯಕ್ಷ ಶ್ರೀನಿವಾಸ್, ಆದಿ ದ್ರಾವಿಡ ಮಹಾಸಂಘದ ಗೌರವಾಧ್ಯಕ್ಷ ಎನ್.ಮಾರ, ಪಳನಿ, ಗೌರವ ಸಲಹೆಗಾರ ಬಿ.ರಾಜು, ಮುಖಂಡ ನಂಜಪ್ಪ, ಆದಿ ದ್ರಾವಿಡ ಸಂಘದ ಪ್ರಧಾನ ಕಾರ್ಯದರ್ಶಿ ವಡಿವೇಲು, ಮಂಜುನಾಥ್, ಬಾಲು, ಮಹಾದೇವ್, ಟ್ರಸ್ಟಿ ಪ್ರಧಾನ ಕಾರ್ಯದರ್ಶಿ ಸುರೇಶ್, ಆರ್ಟಿಸ್ಟ್ ನಾಗರಾಜು, ಪ್ರವೀಣ್ ತೇಜ್, ಕುಮಾರ್ ರಿಯೋ ಮುಂತಾದವರು ಸಭೆಯಲ್ಲಿ ಹಾಜರಿದ್ದರು.

ಜನಸಾಮಾನ್ಯರ ಸಮಸ್ಯೆಗಳಿಗೆ ಶೀಘ್ರ ಪರಿಹಾರ

ಮಂಡ್ಯ, ಜ.6– ಸಾರ್ವಜನಿಕರ ಕುಂದು ಕೊರತೆ ನಿವಾರಣೆಗಾಗಿ ಜನತಾ ದರ್ಶನ ಕಾರ್ಯಕ್ರಮ ಆಯೋಜಿಸಿ ಸಮಸ್ಯೆಗಳನ್ನು ನಿಯಮಾನುಸಾರ ಪರಿಹರಿಸಲಾಗುವುದು. ಜನತಾ ದರ್ಶನವನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಶಾಸಕ ಶಾಸಕ ಗಣಿಗ ರವಿಕುಮಾರ್ ತಿಳಿಸಿದರು.

ತಾಲೂಕಿನ ಬಸರಾಳು ಗ್ರಾಮದ ಕರ್ನಾಟಕ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ನಡೆದ ತಾಲೂಕು ಮಟ್ಟದ ಜನತಾ ದರ್ಶನ ಹಾಗೂ ಆರೋಗ್ಯ ಶಿಬಿರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಗೃಹ ಲಕ್ಷ್ಮಿ, ಗೃಹ ಜ್ಯೋತಿ ಸೇರಿದಂತೆ ಸರ್ಕಾರದ ಯಾವುದೇ ಯೋಜನೆಗೆ ಸಂಬಂಧಿಸಿದಂತೆ ಸಮಸ್ಯೆಗಳಿದ್ದರೆ ಅರ್ಜಿ ಸಲ್ಲಿಸಿ ಪರಿಹರಿಸಿಕೊಳ್ಳಿ ಎಂದರು.

ಸಾರ್ವಜನಿಕರ ಬೇಡಿಕೆಯಂತೆ ಬಸರಾಳಿನಲ್ಲಿ 50 ಲಕ್ಷ ರೂ. ವೆಚ್ಚದಲ್ಲಿ ಬಸ್ ನಿಲ್ದಾಣ ನಿರ್ಮಿಸಲು ಕ್ರಮ ವಹಿಸಲಾಗಿದ್ದು, ಶೀಘ್ರ ಶಂಕುಸ್ಥಾಪನೆ ನೆರವೇರಿಸಲಾಗುವುದು. ಅಲ್ಲದೇ ಎನ್‌ಹೆಚ್ ವತಿಯಿಂದ ಕೋಡಿಕೊಪ್ಪಲಿನಿಂದ ಬಿಳಿದೇಗಲು ವರೆಗೆ 5 ಕೋಟಿ ವೆಚ್ಚದಲ್ಲಿ ರಸ್ತೆ ನಿರ್ಮಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಚಿಕ್ಕಮಂಡ್ಯದಿಂದ ಬಿಳಿದೇಗಲುವರೆಗೆ ರಸ್ತೆ ಕಾಮಗಾರಿಗಾಗಿ 12 ಕೋಟಿ ರೂ. ಅನ್ನು ಎಸ್‌ಹೆಚ್ ಅಲ್ಲಿ ತೆಗೆದುಕೊಂಡಿದ್ದೇವೆ. ಈ ರಸ್ತೆಯು ಟೆಂಡರ್ ಹಂತದಲ್ಲಿದ್ದು, ಕಾಮಗಾರಿಯನ್ನು ಶೀಘ್ರದಲ್ಲಿ ಆರಂಭಿಸುತ್ತೇವೆ ಎಂದರು.

ಬರಗಾಲದಲ್ಲೂ ಬಸರಾಳು ಕೆರೆಗೆ ನೀರು ತುಂಬಿಸಲು ವಿಶೇಷ ಕಾಳಜಿ ವಹಿಸಿ ಹೇಮಾವತಿ ಹಾಗೂ ಕೆಆರ್‌ಎಸ್ ಅಣೆಕಟ್ಟೆ ಮೂಲಕ ನೀರು ಒದಗಿಸಿದ್ದಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಗೆ ಧನ್ಯವಾದ ಸಲ್ಲಿಸುತ್ತೇನೆ. ಜನತಾ ದರ್ಶನ ಕಾರ್ಯಕ್ರಮದ ಜೊತೆಗೆ ಚಾಮುಂಡೇಶ್ವರಿ ಆಸ್ಪತ್ರೆ ಸಹಯೋಗದೊಂದಿಗೆ ಉಚಿತ ಬೃಹತ್ ಆರೋಗ್ಯ ಶಿಬಿರ ಏರ್ಪಡಿಸಲಾಗಿದೆ. ಜನರು ಆರೋಗ್ಯದ ಸಮಸ್ಯೆಗಳನ್ನು ವೈದ್ಯರ ಬಳಿ ತಿಳಿಸಿ ಚಿಕಿತ್ಸೆ ಪಡೆದುಕೊಳ್ಳಿ ಎಂದರು.

50 ಬೆಡ್‌ಗಳನ್ನು ಒಳಗೊಂಡ ಸರ್ಕಾರಿ ಆಸ್ಪತ್ರೆಯನ್ನು ನಿರ್ಮಿಸಲಾಗುವುದು. ಜನತಾ ದರ್ಶನದಲ್ಲಿ ಸ್ವೀಕೃತವಾಗುವ ಅರ್ಜಿಗಳು, ಸಮಸ್ಯೆಗಳನ್ನು 15 ದಿನದೊಳಗೆ ಬಗೆಹರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ, ಜನತಾ ದರ್ಶನ ಎಂದರೆ ಜನರ ಸಮಸ್ಯೆಗಳನ್ನು ಆಲಿಸಿ ಪರಿಹಾರ ಕಂಡುಕೊಳ್ಳುವ ವೇದಿಕೆಯಾಗಿದೆ. ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಒಂದು ಬಾರಿ ಜನತಾ ದರ್ಶನ ಕಾರ್ಯಕ್ರಮ ಮಾಡಿದ್ದೇವೆ. ಜನತಾ ದರ್ಶನದ ಜೊತೆಗೆ ಬಸರಾಳಿನಲ್ಲಿ ಉಚಿತ ಆರೋಗ್ಯ ತಪಾಸಣೆ ಆಯೋಜಿಸಲಾಗಿದೆ ಇದರ ಸದುಪಯೋಗ ಪಡೆದುಕೊಳ್ಳಿ ಎಂದರು. ಸರ್ಕಾರದ ಪ್ರಮುಖ ಯೋಜನೆಗಳಿಗೆ ಸಂಬಂಧಿಸಿದ ಇಲಾಖೆಯ ಎಲ್ಲಾ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ. ಸರ್ಕಾರದ ಯೋಜನೆಗಳಿಗೆ ಸಂಬಂಧಿಸಿದ ಮಾಹಿತಿ ಅಥವಾ ಸಂದೇಹಗಳಿದ್ದಲ್ಲಿ ನೇರವಾಗಿ ಇಲಾಖಾ ಅಧಿಕಾರಿಗಳನ್ನು ಸಂಪರ್ಕಿಸಿ. ಜಿಲ್ಲಾ ಅಥವಾ ತಾಲೂಕು ಕಚೇರಿಗಳಿಗೆ ಜನಸಾಮಾನ್ಯರು ಸುತ್ತಬಾರದು. ಆಡಳಿತ ವ್ಯವಸ್ಥೆ ಜನರ ಹತ್ತಿರ ಸುತ್ತಬೇಕು ಎಂಬುದು ಜನತಾ ದರ್ಶನದ ಉದ್ದೇಶ ಎಂದರು.

ಮೃತಪಟ್ಟ ರೈತ ಕುಟುಂಬದವರಿಗೆ ಪೌತಿ ಖಾತೆ ನೋಂದಣಿಗೆ ತಹಸೀಲ್ದಾರ್ ಕಚೇರಿ ಅಧಿಕಾರಿಗಳು ಗ್ರಾಪಂ ಮಟ್ಟದಲ್ಲಿ ಪೌತಿ ಖಾತಾ ಆಂದೋಲನ ನಡೆಸುತ್ತಿದ್ದಾರೆ.ಜಿಲ್ಲೆಯ ಎಲ್ಲಾ ತಾಲೂಕನ್ನು ಬರ ಪೀಡಿತ ಎಂದು ಘೋಷಿಸಲಾಗಿದ್ದು, ಬರ ಪರಿಹಾರ ಪಡೆಯಲು ರೈತರು ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಂಡು ವಿವರ ಅಪ್‌ಲೋಡ್ ಮಾಡಬೇಕು. ರೈತರು ಈಗ ಫ್ರೂಟ್ಸ್‌ನಲ್ಲಿ ನೋಂದಣಿ ಮಾಡಿಕೊಳ್ಳದೇ ಬೆಳೆ ಪರಿಹಾರ ಬಂದ ಸಂದರ್ಭದಲ್ಲಿ ಕಚೇರಿಗಳ ಅಲೆದಾಟ ನಡೆಸಿದರೆ ಯಾವುದೇ ಪ್ರಯೋಜನವಿಲ್ಲ ಎಂದರು.

ಜನತಾ ದರ್ಶನ, ಆರೋಗ್ಯ ಶಿಬಿರದಲ್ಲಿ ಶಾಸಕ ಪಿ.ರವಿಕುಮಾರ್



ಮಂಡ್ಯ ತಾಲೂಕಿನ ಬಸರಾಳು ಕರ್ನಾಟಕ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ನಡೆದ ತಾಲೂಕು ಮಟ್ಟದ ಜನತಾ ದರ್ಶನ ಹಾಗೂ ಆರೋಗ್ಯ ಶಿಬಿರದಲ್ಲಿ ಸಾರ್ವಜನಿಕರ ಸಮಸ್ಯೆಗಳನ್ನು ಶಾಸಕ ಪಿ.ರವಿಕುಮಾರ್ ಆಲಿಸಿದರು.

ಇದೇ ಸಂದರ್ಭ ಬಸರಾಳಿನಲ್ಲಿ ಕೂಸಿನ ಮನೆಯನ್ನು ಶಾಸಕರು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್, ಎಸಿ ಶಿವಮೂರ್ತಿ, ಮಂಡ್ಯ ಇಓ ಎಂ.ಎಸ್.ವೀಣಾ, ತಹಸೀಲ್ದಾರ್ ಶಿವಕುಮಾರ್ ಬಿರಾದಾರ್, ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಮೋಹನ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕಾವೇರಿ ನದಿ, ಕಾಲುವೆ ಏರಿ ಮೇಲೆ ಬೇಲಿ ನಿರ್ಮಾಣ ಆರೋಪ

ಗ್ರಾಮ ಪಂಚಾಯಿತಿ ಸದಸ್ಯರಿಂದ ದೂರು ಸಲ್ಲಿಕೆ



ಅಕ್ರಮವಾಗಿ ಬೇಲಿ ನಿರ್ಮಿಸಲಾಗುತ್ತಿದೆ ಎಂದು ಆರೋಪಿಸಿ ಗ್ರಾಪಂ ಸದಸ್ಯರು ಕಾನೀನಿ ಮುಖ್ಯ ಕಾರ್ಯಪಾಲಕ ಅಭಿಯಂತರ ಜಯಂತ್ ಅವರಿಗೆ ದೂರು ಸಲ್ಲಿಸಿದರು.

ಶ್ರೀರಂಗಪಟ್ಟಣ, ಜ.6– ಯಡತಿಟ್ಟು ಗ್ರಾಮದ ಬಳಿ ಕಾವೇರಿ ನದಿ ಮತ್ತು ಕಾಲುವೆ ಏರಿ ಮೇಲೆ ಅಕ್ರಮವಾಗಿ ಬೇಲಿ ನಿರ್ಮಿಸಲಾಗುತ್ತಿದೆ ಎಂದು ಆರೋಪಿಸಿ ಗ್ರಾಪಂ ಸದಸ್ಯರು ಹಾಗೂ ಗ್ರಾಮಸ್ಥರು ಕೆಆರ್‌ಎಸ್‌ನ ಕಾವೇರಿ ನೀರಾವರಿ ನಿಗಮದ ಮುಖ್ಯ ಕಾರ್ಯಪಾಲಕ ಅಭಿಯಂತರ ಜಯಂತ್ ಅವರಿಗೆ ದೂರು ಸಲ್ಲಿಸಿದರು.

ಖಾಸಗಿ ವ್ಯಕ್ತಿಗಳು ಕಿರುವಿದ್ಯುತ್ ಪ್ಲಾಂಟ್ ನಿರ್ಮಿಸುವ ಸಲುವಾಗಿ ಯಡಮುರಿಯಲ್ಲಿ ನದಿ ಮತ್ತು ಕಾಲುವೆ ಏರಿ ಮೇಲೆ ಅಕ್ರಮವಾಗಿ ತಂತಿಬೇಲಿ ನಿರ್ಮಿಸುತ್ತಿದ್ದಾರೆ. ಇದರಿಂದ ಜಾನುವಾರುಗಳು, ಸಾರ್ಜನಿಕರಿಗೆ ತೊಂದರೆಯಾಗುತ್ತಿದೆ. ಅಲ್ಲದೆ ಪ್ರಸ್ತುತ ಬರಗಾಲ ಇರುವುದರಿಂದ ಜಾನುವಾರುಗಳು ನೀರು ಕುಡಿಯಲು ಮತ್ತು ಏರಿ ಮೇಲಿನ ಹುಲ್ಲನ್ನು ತಿನ್ನಲು ಹೋಗುತ್ತವೆ. ಆದರೆ, ಬೇಲಿ ನಿರ್ಮಿಸುವುದರಿಂದ ಜಾನುವಾರುಗಳಿಗೆ ತಂತಿಯ ಮುಳ್ಳುಗಳು ಚುಚ್ಚುತ್ತವೆ ಎಂದು ದೂರಿದ್ದಾರೆ. ದೂರು ಸ್ವೀಕರಿಸಿ ಮಾತನಾಡಿದ ಮುಖ್ಯ ಕಾರ್ಯಪಾಲಕ ಅಭಿಯಂತರ ಜಯಂತ್, ಚುನಾಯಿತ ಜನಪ್ರತಿನಿಧಿಗಳು ಹಾಗೂ ಗ್ರಾಮಸ್ಥರಿಂದ ಈ ವಿಚಾರ ನನ್ನ ಗಮನಕ್ಕೆ ಬಂದಿದೆ. ತಕ್ಷಣ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲಾಗುವುದು. ಒಂದು ವೇಳೆ ಕಾನೂನು ಉಲ್ಲಂಘಿಸಿ ತಂತಿಬೇಲಿ ನಿರ್ಮಿಸಿದ್ದರೆ ಕ್ರಮವಹಿಸುವುದಾಗಿ ಭರವಸೆ ನೀಡಿದರು.

ಈ ವೇಳೆ ಕೆಆರ್‌ಎಸ್ ಗ್ರಾಪಂ ಉಪಾಧ್ಯಕ್ಷ ರವಿ, ಸದಸ್ಯರಾದ ಎಂ.ಸಿ. ಮಂಜುನಾಥ್, ಸಿ.ಮಂಜುನಾಥ್, ನರಸಿಂಹ, ನಾಗೇಂದ್ರ, ಬಂಗಾರಪ್ಪ, ಪುಟ್ಟೇಗೌಡ, ತಾಪಂ ಮಾಜಿ ಉಪಾಧ್ಯಕ್ಷ ವೈರಮುಡಿ, ಮುಖಂಡರಾದ ನಂಜುಂಡ, ಧನಂಜಯ್ಯ, ಅಭಿಷೇಕ್, ನಂದೀಶ್ ಇತರರಿದ್ದರು.

ಕರವೇ ರಾಜ್ಯಾಧ್ಯಕ್ಷರ ಬಿಡುಗಡೆಗೆ ಒತ್ತಾಯಿಸಿ ಪಂಜಿನ ಮೆರವಣಿಗೆ

ಕೆ.ಆರ್.ಪೇಟೆ, ಜ.6– ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಸೇರಿದಂತೆ ನೂರಾರು ಕನ್ನಡಪರ ಹೋರಾಟಗಾರರನ್ನು ಬಿಡುಗಡೆಗೊಳಿಸುವಂತೆ ಒತ್ತಾಯಿಸಿ ತಾಲೂಕು ಕರವೇ ಕಾರ್ಯಕರ್ತರು ಶುಕ್ರವಾರ ಸಂಜೆ ಪಂಜಿನ ಮೆರವಣಿಗೆ ನಡೆಸಿದರು.

ಪಟ್ಟಣದ ಪ್ರವಾಸಿ ಮಂದಿರದಿಂದ ಬೊಮ್ಮೇಗೌಡ ವೃತ್ತದವರೆಗೆ ಪಂಜಿನ ಮೆರವಣಿಗೆ ನಡೆಸಿದ ನೂರಾರು ಪದಾಧಿಕಾರಿಗಳು ಮಾನವ ಸರಪಳಿ ನಿರ್ಮಿಸಿ ಕೆಲಕಾಲ ಮೈಸೂರು–ಶಿವಮೊಗ್ಗ ಹೆದ್ದಾರಿ ಬಂದ್ ಮಾಡಿ, ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕು ಕರವೇ ಅಧ್ಯಕ್ಷ ಡಿ.ಎಸ್.ವೇಣು ಮಾತನಾಡಿ, ಕರ್ನಾಟಕದಲ್ಲಿ ಕನ್ನಡ ಭಾಷೆಗೆ ಅನ್ಯಾಯವಾದರೇ ಕೈಕಟ್ಟಿ ಕೂರಬೇಕಾ. ಕನ್ನಡದ ಬಗ್ಗೆ ತಾತ್ಸಾರ ತೋರುವ ಪರಭಾಷಿಕರನ್ನು ಬಂಧಿಸುವ ಬದಲು ಕನ್ನಡಪರ ಹೋರಾಟಗಾರ ನಾರಾಯಣಗೌಡರನ್ನು ಬಂಧಿಸಿರುವ ರಾಜ್ಯ ಸರ್ಕಾರ ನಾಡವಿರೋಧಿ ಧೋರಣೆ ಅನುಸರಿಸುತ್ತಿದೆ. ಬೆಳಗಾವಿಯಲ್ಲಿ ಎಂಇಎಸ್‌ನ ಐದಾರು ಶಾಸಕರು ಆಯ್ಕೆಯಾಗುತ್ತಿದ್ದರು. ಇದನ್ನು ಮಟ್ಟಹಾಕಿ ಕನ್ನಡಿಗರು ಆಯ್ಕೆಯಾಗುವಂತೆ ಮಾಡಿದ್ದು ನಮ್ಮ ಕರವೇ ರಾಜ್ಯಾಧ್ಯಕ್ಷ ನಾರಾಯಣಗೌಡರು. ಇದನ್ನು ಸರ್ಕಾರ ಅರ್ಥ ಮಾಡಿಕೊಳ್ಳಬೇಕು. ಕೂಡಲೇ ನಮ್ಮ ನಾಯಕ ಟಿ.ಎ. ನಾರಾಯಣಗೌಡರನ್ನು ಬಿಡುಗಡೆಗೊಳಿಸಬೇಕು ಎಂದು ಒತ್ತಾಯಿಸಿದರು.

ತಾಲೂಕು ಕರವೇ ಪದವೀಧರ ಘಟಕದ ಅಧ್ಯಕ್ಷ ಸಿ.ಬಿ.ಚೇತನ್ ಕುಮಾರ್ ಮಾತನಾಡಿ, ರಾಜ್ಯ ರಾಜಧಾನಿಯಲ್ಲಿ ಪರಭಾಷಿಕರ ಹಾವಳಿ ಜಾಸ್ತಿಯಾಗಿದೆ. ಪರಭಾಷಿಕರು ರಾಜಧಾನಿ ಬೆಂಗಳೂರನ್ನು ಕೇಂದ್ರಾಡಳಿತ ಪ್ರದೇಶ ಮಾಡಲು ಹುನ್ನಾರ ನಡೆಸುತ್ತಿದ್ದಾರೆ. ಕನ್ನಡ ಭಾಷೆ ಕಡೆಗಣಿಸಿ ಹಿಂದಿ, ಇಂಗ್ಲಿಷ್ ಭಾಷೆ ವೈಭವೀಕರಣ ನಡೆಯುತ್ತಿದೆ. ಆ ಮೂಲಕ ಕನ್ನಡ ಭಾಷೆಗೆ ಅವಮಾನ ಮಾಡಲಾಗುತ್ತಿದೆ. ಕನ್ನಡ ಭಾಷೆ ನಾಮಫಲಕ ಅಳವಡಿಸದೇ ಕನ್ನಡಿಗರ ಮೇಲೆ ದಬ್ಬಾಳಿಕೆ ಮಾಡುತ್ತಿರುವುದರ ವಿರುದ್ಧ ಅಭಿಯಾನ ನಡೆಸಿ ಹೋರಾಟ ನಡೆಸಿದ ಕರವೇ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡರು ಸೇರಿದಂತೆ ನೂರಾರು ಹೋರಾಟಗಾರರನ್ನು ಬಂಧಿಸಿ ಹೋರಾಟ ಹತ್ತಿಕ್ಕುವ ಕೆಲಸ ಮಾಡುತ್ತಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಕೂಡಲೇ ನಾರಾಯಣಗೌಡರನ್ನು ಬಿಡುಗಡೆ ಮಾಡದಿದ್ದರೇ ಕರ್ನಾಟಕ ಬಂದ್‌ಗೆ ಕರೆ ನೀಡಬೇಕಾಗುತ್ತದೆ. ಇದರಿಂದ ಆಗುವ ನಷ್ಟಕ್ಕೆ ಸರ್ಕಾರವೇ ಹೊಣೆ ಎಂದು ಎಚ್ಚರಿಸಿದರು. ಪ್ರತಿಭಟನೆಯಲ್ಲಿ ಕರವೇ ಜಿಲ್ಲಾ ಉಪಾಧ್ಯಕ್ಷ ಗುರುಮೂರ್ತಿ, ತಾಲೂಕು ಕಾರ್ಯದರ್ಶಿ ಟೆಂಪೋ ಶ್ರೀನಿವಾಸ್, ಸಂಘಟನಾ ಕಾರ್ಯದರ್ಶಿಗಳಾದ ಗೋಪಿ, ಸ್ವಾಮಿ, ಯುವ ಘಟಕದ ಅಧ್ಯಕ್ಷ ಆನಂದ್, ಕಾರ್ಯದರ್ಶಿ ಸುನೀಲ್, ಹೋಬಳಿ ಘಟಕದ ಅಧ್ಯಕ್ಷ ಚನ್ನೇಗೌಡ, ಕಸಬಾ ಹೋಬಳಿ ಘಟಕದ ಅಧ್ಯಕ್ಷ ಅನಿಲ್, ಸುನೀಲ್, ನಗರ ಘಟಕದ ಅಧ್ಯಕ್ಷ ಮದನ್, ಅಭಿಷೇಕ್, ಗೋಪಿ, ಚನ್ನೇಗೌಡ, ಸಂತೆಬಾಚಹಳ್ಳಿ ಹೋಬಳಿ ಘಟಕದ ಅಧ್ಯಕ್ಷ ಸಾಗರ್, ಸ್ವಾಮಿ, ನಂಜುಂಡಪ್ಪ, ಗೋಪಿ, ಅಪ್ಪು ಬ್ರಿಗೇಡ್ ಅಧ್ಯಕ್ಷ ಮಹೇಶ್, ಕಿಕ್ಕೇರಿ ಹೋಬಳಿ ಘಟಕದ ಅಧ್ಯಕ್ಷ ಸುರೇಶ್, ಶಿವು, ಯೋಗೇಶ್, ಗೋವಿಂದ್, ಕರಸೇ ಅಧ್ಯಕ್ಷ ಪ್ರಶಾಂತ್ ಗೌಡ, ಕಾರ್ಯದರ್ಶಿ ಅರವಿಂದ್, ಯುವ ಘಟಕದ ಅಧ್ಯಕ್ಷ ಅಭಿ, ಕಾರ್ಯದರ್ಶಿ ಪವನ್, ತಾಲೂಕು ಹಂದಿಜೋಗಿ ಸಂಘಟನೆ ಅಧ್ಯಕ್ಷ ಎಲ್.ಆರ್.ಸ್ವಾಮಿ, ಗೌರವಾಧ್ಯಕ್ಷ ಸ್ವಾಮಿ, ಉಪಾಧ್ಯಕ್ಷ ಶಿವಣ್ಣ, ಪ್ರಧಾನ ಕಾರ್ಯದರ್ಶಿ ಸ್ವಾಮಿಜೋಗಿ, ಹೆಚ್.ವಿ.ಕೃಷ್ಣಯ್ಯ, ಸಂಘಟನಾ ಕಾರ್ಯದರ್ಶಿ ಕಿರಣ್, ಹೇಮಂತ್ ಕುಮಾರ್ ಸೇರಿದಂತೆ ಇತರರಿದ್ದರು.



ಕರವೇ ರಾಜ್ಯಾಧ್ಯಕ್ಷ ನಾರಾಯಣಗೌಡರ ಬಿಡುಗಡೆಗೆ ಒತ್ತಾಯಿಸಿ ಕೆ.ಆರ್.ಪೇಟೆಯಲ್ಲಿ ಕರವೇ ಕಾರ್ಯಕರ್ತರು ಪಂಜಿನ ಮೆರವಣಿಗೆ ನಡೆಸಿದರು.

ಸರ್ಕಾರದ ವಿರುದ್ಧ ಹೋರಾಟಕ್ಕೆ ನೌಕರರು ಸಿದ್ಧರಿರಬೇಕು

ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಷಡಕ್ಷರಿ ಕರೆ



ಮಂಡ್ಯ, ಜ.6– ಏಳನೇ ವೇತನ ಆಯೋಗದ ವರದಿ ಅನುಷ್ಠಾನ, ಹಳೇ ಪಿಂಚಣಿ ವ್ಯವಸ್ಥೆ ಮರು ಜಾರಿ ಹಾಗೂ ಆರೋಗ್ಯ ವಿಮೆ ಸೌಲಭ್ಯ ಕಲ್ಪಿಸಲು ಸರ್ಕಾರ ವಿಳಂಬ ಮಾಡುತ್ತಿರುವುದರಿಂದ ನೌಕರರು ಹೋರಾಟಕ್ಕೆ ಸಿದ್ಧರಿರಬೇಕು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಷಡಕ್ಷರಿ ಕರೆ ನೀಡಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯಕಾರಣಿ ಸಭೆ ಉದ್ಘಾಟಿಸಿ ಮಾತನಾಡಿ, 7ನೇ ವೇತನ ಆಯೋಗ ರಚಿಸಿ ವರ್ಷಗಳು ಕಳೆದಿವೆ. 2 ಬಾರಿ ಅವಧಿ ವಿಸ್ತರಣೆ ಮಾಡಿದ್ದು, ಇದರಿಂದ ಬಹಳ ವಿಳಂಬವಾಗಿದೆ. ಆಯೋಗಕ್ಕೆ ಮಾ.15 ರವರೆಗೆ ಕಾಲಾವಕಾಶ ನೀಡಲಾಗಿದೆ. ನಮಗೆ ತಿಳಿದಿರುವ ಮಾಹಿತಿ ಪ್ರಕಾರ ಆಯೋಗ ಕೆಲಸವನ್ನು ಸಂಪೂರ್ಣವಾಗಿ ಮುಗಿಸಿದೆ. ವರದಿ ತರಿಸಿಕೊಂಡು ಅನುಷ್ಠಾನ ಮಾಡಬಹುದು. ಆದರೆ ಸರ್ಕಾರ ಇಂತಹ ಕೆಲಸ ಮಾಡುತ್ತಿಲ್ಲ ಎಂದರು.

ಹೊಸ ಪಿಂಚಣಿ ವ್ಯವಸ್ಥೆ ರದ್ದು ಮಾಡಿ ಹಳೆ ಪಿಂಚಣಿ ವ್ಯವಸ್ಥೆ ಜಾರಿಗೆ ಹೋರಾಟ ಮಾಡಿದ್ದೆವು. ಆದರೆ ಸರ್ಕಾರ ವಿಳಂಬ ಧೋರಣೆ ಅನುಸರಿಸುತ್ತಿದೆ. ಆರೋಗ್ಯ ವಿಮೆ ಸೌಲಭ್ಯಕ್ಕೆ ಮನವಿ ಮಾಡಿದ್ದು, ಅದು ಕೂಡ ವಿಳಂಬವಾಗಿದೆ. ಇಂತಹ ಸಂದರ್ಭದಲ್ಲಿ ಹೋರಾಟದ ಮೂಲಕ ಹಕ್ಕುಗಳನ್ನು ಪಡೆಯಲು ಮುಂದಾಗಬೇಕಾಗಿದೆ ಎಂದರು.

ಮುಖ್ಯಮಂತ್ರಿ ಜೊತೆ ಮಾತುಕತೆ ನಡೆಸಲು ಕಾಲಾವಕಾಶ ಕೋರಿದ್ದು, ಅವರು ಅವಕಾಶ ನೀಡಿದರೆ ಮುಖ್ಯಮಂತ್ರಿಗಳನ್ನು ಭೇಟಿಯಾಗಿ ಚರ್ಚೆ ನಡೆಸಲಾಗುವುದು. ನಂತರ ನೌಕರರ ರಾಜ್ಯ ಸಮ್ಮೇಳನ ನಡೆಸಿ ಎರಡೂವರೆ ಲಕ್ಷ ನೌಕರರನ್ನು ಸೇರಿಸಿ ಶಕ್ತಿ ಪ್ರದರ್ಶನ ಮಾಡುವ ಮೂಲಕ ಸರ್ಕಾರದ ಮೇಲೆ ಒತ್ತಡ ಹಾಕಬೇಕೆ ಅಥವಾ ಹೋರಾಟದ ಹಾದಿ ಹಿಡಿಯಬೇಕಾ ಎಂಬುದರ ಬಗ್ಗೆ ಎಲ್ಲರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದರು. ಈ ವೇಳೆ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ್, ತಿಮ್ಮೇಗೌಡ, ಖಜಾಂಚಿ ಸಿದ್ದರಾಮು, ಹಿರಿಯ ಉಪಾಧ್ಯಕ್ಷ ರುದ್ರಪ್ಪ, ಬಸವರಾಜ್, ಗಿರಿಗೌಡ, ಮೋಹನ್, ಮಾಲತೇಶ್, ಹೇಮಲತಾ, ದಿನೇಶ್, ಸಿದ್ದೇಶ್, ಕಾರ್ಯದರ್ಶಿ ಸದಾನಂದ, ಮಂಡ್ಯ ಜಿಲ್ಲಾಧ್ಯಕ್ಷ ಶಂಭುಗೌಡ ಹಾಗೂ ರಾಜ್ಯದ ಎಲ್ಲಾ ಜಿಲ್ಲೆಯ ಅಧ್ಯಕ್ಷರು ವೇದಿಕೆಯಲ್ಲಿದ್ದರು.

ಮೈಸೂರಿನ ಭವ್ಯ ಪರಂಪರೆ ಪಸರಿಸಿದ ಹೆರಿಟೇಜ್ ವಾಕ್



ಮೈಸೂರು,ಜ.6(ಪಿಎಂ)– ಮೈಸೂರು ಅರಮನೆ, ಪುರಭವನ, ದೇವರಾಜ ಮಾರುಕಟ್ಟೆ ಸೇರಿದಂತೆ ಮೈಸೂರಿನ ಪಾರಂಪರಿಕ ಕಟ್ಟಡಗಳ ವೈಶಿಷ್ಟ್ಯ ಪೂರ್ಣ ನಿರ್ಮಾಣ ನೋಡುತ್ತಾ ಅವುಗಳ ಇತಿಹಾಸ ಅರಿಯುವ ಕೌತುಕ ಅಲ್ಲಿದ್ದವರಲ್ಲಿ ಗೋಚರಿಸುತ್ತಿತ್ತು.

ಹೆಜ್ಜೆ ಹಾಕುತ್ತ ಪಾರಂಪರಿಕ ಕಟ್ಟಡಗಳ ನಿರ್ಮಾಣದ ವೈವಿಶಿಷ್ಟ್ಯ ತಿಳಿದು ಅವರು ಪುಳಕಿತರಾದರು. ಆ ಮೂಲಕ ಅವುಗಳ ಸಂರಕ್ಷಣೆಯ ಸಂದೇಶ ಸಾರುವ ಮಹತ್ವದ ಕಾಯಕಕ್ಕೆ ಕೈಜೋಡಿಸಿದರು. ಇದು ಶನಿವಾರ ಮೈಸೂರಿನಲ್ಲಿ ನಡೆದ ಹೆರಿಟೇಜ್ ವಾಕ್‌ನ (ಪಾರಂಪರಿಕ ನಡಿಗೆ) ಚಿತ್ರಣ. ಮೈಸೂರಿನ ಒಡೆಯರ್ ಸೆಂಟರ್ ಫಾರ್ ಆರ್ಕಿಟೆಕ್ಚರ್‌ನ ಹೆರಿಟೇಜ್ ಕ್ಲಬ್ ವತಿಯಿಂದ ನಡೆದ ಈ ಪಾರಂಪರಿಕ ನಡಿಗೆಯಲ್ಲಿ ವಿದೇಶಿಗರೂ ಸೇರಿದಂತೆ 20ಕ್ಕೂ ಹೆಚ್ಚು ಮಂದಿ ವಿವಿಧ ಸ್ಥಳದ ಆಸಕ್ತರು ಪಾಲ್ಗೊಂಡು ಪಾರಂಪರಿಕ ನಗರಿ ವೈಭವ ಅರಿತು ಸಂಭ್ರಮಿಸಿದರು.

ಸದರಿ ಹೆರಿಟೇಜ್ ಕ್ಲಬ್ ವತಿಯಿಂದ ವಾರಕ್ಕೊಂದು ದಿನ ನಗರದಲ್ಲಿ ಪಾರಂಪರಿಕ ನಡಿಗೆ ಕಾರ್ಯಕ್ರಮ ಆಯೋಜಿಸಿ, ಆಸಕ್ತರಿಗೆ ಮೈಸೂರಿನ ಇತಿಹಾಸ ತಿಳಿಸುವ ಕಾಯಕ ನಡೆಸುತ್ತಿದೆ. ಮೈಸೂರಿನ ಇತಿಹಾಸ, ಪಾರಂಪರಿಕ ಕಟ್ಟಡಗಳ ಮಹತ್ವದ ಬಗ್ಗೆ ಜನತೆಗೆ ಶಿಕ್ಷಣ ನೀಡುವ ಉದ್ದೇಶದಿಂದ ಈ ಕಾರ್ಯಕ್ರಮ ನಡೆಸಿಕೊಂಡು ಬರಲಾಗುತ್ತಿದೆ. 'ಜೀವಂತ ಪರಂಪರೆಯ ಭಾಗವಾಗಿ ಮಾರುಕಟ್ಟೆಗಳು' ಕುರಿತು ಹಮ್ಮಿಕೊಂಡಿದ್ದ ವಿಶೇಷ ವಿಚಾರಗೋಷ್ಠಿಯ ಭಾಗವಾಗಿಯೂ ಇಂದು ಈ ವಿಶೇಷ ರೀತಿಯ ಪಾರಂಪರಿಕ ನಡಿಗೆ ಹಮ್ಮಿಕೊಳ್ಳಲಾಗಿತ್ತು.

ಮೈಸೂರು ಅರಮನೆಯ ಜಯಮಾರ್ತಾಂಡ ದ್ವಾರದಿಂದ ಆರಂಭಗೊಂಡ ನಡಿಗೆಯು, ಮೈಸೂರಿನ ಪ್ರಮುಖ ವೃತ್ತಗಳು, ಪಾರಂಪರಿಕ ಕಟ್ಟಡಗಳನ್ನು ವೀಕ್ಷಣೆಯೊಂದಿಗೆ ದೇವರಾಜ ಮಾರುಕಟ್ಟೆ ತಲುಪಿ ಅಂತ್ಯಗೊಂಡಿತು. ಹೆರಿಟೇಜ್ ಕ್ಲಬ್‌ನ ಅಪರ್ಣಾ ಆಚಾರ್ಯ, ಆರ್.ಪುಲಕಿತ್, ಅಧ್ಯಾಪಕಿ ಜೂಲೀ ಆನ್ ತರಕನ್ ನಡಿಗೆಯಲ್ಲಿ ಭಾಗವಹಿಸಿದ್ದವರಿಗೆ ಮಾಹಿತಿ ನೀಡಿದರು.

ಮೂರನೇ ಪುಟದಿಂದ

ಗೌರವಧನ ಹೆಚ್ಚಳ

ರೂ.ಗಳಷ್ಟು ಗೌರವಧನ ಹೆಚ್ಚಳ ಮಾಡಲು ಸರ್ಕಾರ ಸಿದ್ಧವಿದೆ. ಇದರೊಂದಿಗೆ ಅತಿಥಿ ಉಪನ್ಯಾಸಕರ ಆರೋಗ್ಯದ ದೃಷ್ಟಿಯಿಂದ ವಾರ್ಷಿಕ 5 ಲಕ್ಷ ರೂ.ಗಳ ಆರೋಗ್ಯ ವಿಮಾ ಸೌಲಭ್ಯ ಅನುಷ್ಠಾನ, ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ, 60 ವರ್ಷ ಮೀರಿದ ನಂತರದಲ್ಲಿ ಭದ್ರತೆ ರೂಪದಲ್ಲಿ ಗರಿಷ್ಠ 5 ಲಕ್ಷ ರೂ. ಇಡುಗಂಟು ನೀಡುವುದು, ವಾರಕ್ಕೆ 15 ಗಂಟೆಗೂ ಹೆಚ್ಚಿನ ಕಾರ್ಯಭಾರ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ಮಾಸಿಕ ಒಂದು ದಿನ ವೇತನ ಸಹಿತ ರಜೆ ನೀಡುವುದು ಹಾಗೂ 3 ತಿಂಗಳ ವೇತನ ಸಹಿತ ಮಾತೃತ್ವ ರಜೆ ನೀಡಲು ಮುಖ್ಯಮಂತ್ರಿಗಳು ಒಪ್ಪಿಗೆ ಸೂಚಿಸಿದರು. ಇದರೊಂದಿಗೆ ನೇಮಕಾತಿಯಲ್ಲಿ ಸೇವಾನುಭವ ಆಧರಿಸಿ, ವೇಟೇಜ್ ನೀಡುವುದು, ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದ ಸ್ಥಳದಲ್ಲಿಯೇ ಕಾರ್ಯಭಾರವಿದ್ದಲ್ಲಿ, ನಂತರದ ವರ್ಷವೂ ಅಲ್ಲಿಯೇ ಅವರ ಸೇವೆಯನ್ನು ಮುಂದುವರೆಸುವುದು ಸೇರಿದಂತೆ ಕೌನ್ಸಿಲಿಂಗ್ ಪ್ರಕ್ರಿಯೆ ಸರಳೀಕರಣಗೊಳಿಸಲು ಸಹ ಸಮ್ಮತಿಸಿ, ಕೂಡಲೇ ಪ್ರತಿಭಟನೆಯನ್ನು ಹಿಂದಕ್ಕೆ ಪಡೆದು ಕರ್ತವ್ಯಕ್ಕೆ ಹಾಜರಾಗುವಂತೆ ಪ್ರತಿಭಟನಾನಿರತ ಅತಿಥಿ ಉಪನ್ಯಾಸಕರಿಗೆ ಮುಖ್ಯಮಂತ್ರಿ ಮನವಿ ಮಾಡಿದರು.

ಹಾಸನದಲ್ಲಿ ಶ್ರೀಲಂಕಾ ಮಾದರಿ ಆನೆ ಧಾಮ

ಸಚಿವ ಕೆ.ಎನ್.ರಾಜಣ್ಣ ಅವರು, ಆನೆ ಹಾವಳಿ ತಡೆ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ವಸಂತ್ ಮನೆ ಬಳಿ ಅವರ ಪತ್ನಿ ಮಕ್ಕಳನ್ನ ಭೇಟಿಯಾದ ರಾಜಣ್ಣರಿಗೆ ಜನರು ನಿತ್ಯವೂ ಕಾಡಾನೆಯಿಂದ ಜನರು ಎದುರಿಸುತ್ತಿರೋ ಸಮಸ್ಯೆಯನ್ನ ತೆರೆದಿಟ್ಟರು. ಜನರು ಕೂಲಿ ಕೆಲಸಕ್ಕೆ ಹೋಗಲು ಆಗ್ತಿಲ್ಲ, ಫಸಲಿಗೆ ಬಂದ ಬೆಳೆಯನ್ನ ಕಟಾವು ಮಾಡಲಾಗ್ತಿಲ್ಲ, ಗ್ರಾಮದೊಳಗೆ ಎಂಟ್ರಿಯಾಗಿ ಮನೆಗಳ ಮುಂದೆಯೇ ಪ್ರತ್ಯಕ್ಷವಾಗೋ ಸಲಗಗಳು ಜೀವ ಭಯ ತಂದೊಡ್ಡುತ್ತಿವೆ ಎಂದು ಅಳಲು ತೋಡಿಕೊಂಡರು.

ಕುಂಬಾರಕೊಪ್ಪಲು ಸರ್ಕಾರಿ ಶಾಲೆಯಲ್ಲಿ ಸ್ಮಾರ್ಟ್ ಕ್ಲಾಸ್ ಉದ್ಘಾಟಿಸಿದ ಶಾಸಕ ಹರೀಶ್‌ಗೌಡ



ಮೈಸೂರಿನ ಕುಂಬಾರಕೊಪ್ಪಲು ಸರ್ಕಾರಿ ಪ್ರೌಢಶಾಲೆಯಲ್ಲಿ 'ಸ್ಮಾರ್ಟ್ ಕ್ಲಾಸ್' ಸೌಲಭ್ಯ ಉದ್ಘಾಟಿಸಿದ ಶಾಸಕ ಕೆ.ಹರೀಶ್ ಗೌಡರು, ಸ್ಮಾರ್ಟ್ ಬೋರ್ಡ್ ಬಳಕೆಯನ್ನು ವೀಕ್ಷಿಸಿದರು.

ಮೈಸೂರು, ಜ.6(ಎಸ್‌ಬಿಡಿ)– ಮೈಸೂರಿನ ಕುಂಬಾರಕೊಪ್ಪಲು ಸರ್ಕಾರಿ ಪ್ರೌಢ ಶಾಲೆಯಲ್ಲಿ 'ಸ್ಮಾರ್ಟ್ ಕ್ಲಾಸ್' ಸೌಲಭ್ಯವನ್ನು ಚಾಮರಾಜ ಕ್ಷೇತ್ರದ ಶಾಸಕ ಕೆ. ಹರೀಶ್ ಗೌಡ ಶನಿವಾರ ಉದ್ಘಾಟಿಸಿದರು.

ಮೈಸೂರಿನ ಜೆಕೆ ಟೈರ್ ಅಂಡ್ ಇಂಡಸ್ಟ್ರೀಸ್ ಲಿಮಿಟೆಡ್, ಭಾರತದ ಗ್ರಾಮೀಣ ಶಿಕ್ಷಣ ಅಭಿವೃದ್ಧಿ ಮತ್ತು ಆವಿಷ್ಕಾರಿ ತಂತ್ರಜ್ಞಾನಗಳ ಕೇಂದ್ರ (CREDIT-I)ದ ಸಹಯೋಗದಲ್ಲಿ ಸಿಎಸ್‌ಆರ್ ನಿಧಿಯಡಿ ಕಲ್ಪಿಸಲಾಗಿರುವ 'ಸ್ಮಾರ್ಟ್ ಕ್ಲಾಸ್' ಸೌಲಭ್ಯವನ್ನು ಉದ್ಘಾಟಿಸಿದ ಶಾಸಕರು, ಇದೇ ವೇಳೆ ಇಲ್ಲಿನ ಕುವೆಂಪು ರಂಗಮಂದಿರದಲ್ಲಿ ಜೀವನೋಪಾಯ ಆಪ್ತ ಸಮಾಲೋಚನೆ ಕಾರ್ಯಕ್ರಮದಲ್ಲಿ ಭಾಗಿಯಾದರು.

ತರಗತಿಯಲ್ಲಿ ಕುಳಿತು ಸ್ಮಾರ್ಟ್ ಕ್ಲಾಸ್ ಬೋರ್ಡ್ ಬಳಕೆಯನ್ನು ವೀಕ್ಷಿಸಿದರಲ್ಲದೆ, ಅದರ ಉಪಯೋಗದ ಬಗ್ಗೆ ಶಿಕ್ಷಕರಿಂದ ಹೆಚ್ಚಿನ ಮಾಹಿತಿ ಪಡೆದರು. ಕ್ಷೇತ್ರದ ಬೇರೆ ಶಾಲೆಗಳಿಗೂ ಈ ಮಾದರಿಯ ಅತ್ಯಾಧುನಿಕ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು. ಈ ಶಾಲೆಗೆ ಅವಶ್ಯವಿರುವ ಇಂಟರ್‌ನೆಟ್ ಸೌಲಭ್ಯವನ್ನು ವೈಯಕ್ತಿಕವಾಗಿ ಕಲ್ಪಿಸಿಕೊಡುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಜೆ.ಕೆ.ಟೈರ್ಸ್ ಅಂಡ್ ಇಂಡಸ್ಟ್ರೀಸ್ ಲಿಮಿಟೆಡ್ ಉಪಾಧ್ಯಕ್ಷ ವಿ.ಈಶ್ವರ ರಾವ್, ಸೀನಿಯರ್ ಜನರಲ್ ಮ್ಯಾನೇಜರ್(ಹೆಚ್.ಆರ್& ಐ.ಆರ್) ಆರ್.ಜಗದೀಶ, ಮೈಸೂರು ಉತ್ತರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಕೃಷ್ಣ, ಹಾಸನ ಸರ್ಕಾರಿ ಗೃಹ ವಿಜ್ಞಾನ ಕಾಲೇಜಿನ ಮನೋವಿಜ್ಞಾನ ವಿಭಾಗದ ಮುಖ್ಯಸ್ಥರಾದ ಪ್ರೊ..ಎಂ.ಎಸ್. ಮನೋನ್ಮಣಿ, ಕ್ರೆಡಿಟ್ –ಐ ವ್ಯವಸ್ಥಾಪಕ ಟ್ರಸ್ಟಿ ಹಾಗೂ ಸಿಇಓ ಡಾ.ಎಂ.ಪಿ.ವರ್ಷ, ಕುಂಬಾರ ಕೊಪ್ಪಲು ಸರ್ಕಾರಿ ಪ್ರೌಢ ಶಾಲೆ ಮುಖ್ಯ ಶಿಕ್ಷಕಿ ಆರ್.ಯೋಗಲಕ್ಷ್ಮಿ ಮತ್ತಿತರರು ಉಪಸ್ಥಿತರಿದ್ದರು.

ನಾನು ದೇವೇಗೌಡರ ಶಿಷ್ಯ, ರಾಜಕೀಯ ಅನುಯಾಯಿ

ಅಶೋಕ್ ಮೇಲೆ ನನಗೆ ಅಸಮಾಧಾನವಿಲ್ಲ: ವಿ.ಸೋಮಣ್ಣ



ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡರನ್ನು ಮಾಜಿ ಸಚಿವ ವಿ. ಸೋಮಣ್ಣ ಅಭಿನಂದಿಸಿದರು. ಈ ವೇಳೆ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಉಪಸ್ಥಿತರಿದ್ದರು.

ಬೆಂಗಳೂರು: ಮಾಜಿ ಸಚಿವ ವಿ ಸೋಮಣ್ಣ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರನ್ನು ಅವರ ಪದ್ಮನಾಭನಗರದ ನಿವಾಸದಲ್ಲಿ ಭೇಟಿ ಮಾಡಿದ್ದಾರೆ. ಈ ವೇಳೆ ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ಕೂಡ ಉಪಸ್ಥಿತರಿದ್ದರು.

ಭೇಟಿ ಬಳಿಕ ಪ್ರತಿಕ್ರಿಯಿಸಿರುವ ವಿ.ಸೋಮಣ್ಣ, ದೇವೇಗೌಡರನ್ನು ಭೇಟಿಯಾಗಿದ್ದಕ್ಕೆ ಸಂತೋಷವಾಗಿದೆ. ದೇವೇಗೌಡರ ತಂತ್ರಗಾರಿಕೆ ಕಲಿಯಬೇಕು. ನಾನು ಸೋತ ಬಳಿಕ ನನಗೆ ಕರೆ ಮಾಡಿ ಮಾತಾಡಿದ್ದರು. ಅವರು ನನ್ನ ಗುರುಗಳು. ನಾನು ಅವರ ಶಿಷ್ಯ. 1983ರಲ್ಲಿ ನಾನು ರಾಜಕೀಯಕ್ಕೆ ಬಂದಾಗ ಅವರ ಅನುಯಾಯಿ ಆಗಿದ್ದೆ ಎಂದು ಹೇಳಿದ್ದಾರೆ.

ಅಚ್ಚರಿಯ ಬೆಳವಣಿಗೆಯಲ್ಲಿ ಜೆಡಿಎಸ್ ವರಿಷ್ಠ ನಾಯಕರನ್ನು ಬಿಜೆಪಿ ನಾಯಕ ವಿ.ಸೋಮಣ್ಣ ಭೇಟಿಯಾಗಿ ರಾಜಕೀಯ ವಿಚಾರದ ಕುರಿತು ಮಹತ್ವದ ಮಾತುಕತೆ ನಡೆಸಿದ್ದಾರೆ. ವಿಧಾನ ಸಭೆ ಚುನಾವಣೆಯ ನಂತರ ಪಕ್ಷದ ನಡೆಗೆ ಅಸಮಾಧಾನಗೊಂಡಿರುವ ಸೋಮಣ್ಣ, ರಾಜ್ಯ ಬಿಜೆಪಿ ನಾಯಕರಿಂದ ಅಂತರ ಕಾಯ್ದುಕೊಂಡಿದ್ದು, ಇದೀಗ ಪದ್ಮನಾಭನಗರದಲ್ಲಿರುವ ಮಾಜಿ ಪ್ರಧಾನಿ ದೇವೇಗೌಡರ ನಿವಾಸಕ್ಕೆ ಆಗಮಿಸಿ ಮಾತುಕತೆ ನಡೆಸಿ ಅಚ್ಚರಿ ಮೂಡಿಸಿದ್ದಾರೆ. ಜನತಾ ಪರಿವಾರದಲ್ಲೇ ಬೆಳೆದು ವಲಸೆ ಹೋಗಿದ್ದರೂ ಸೋಮಣ್ಣರನ್ನು ಗೌಡರ ಕುಟುಂಬ ಆತ್ಮೀಯವಾಗಿ ನಿವಾಸಕ್ಕೆ ಬರಮಾಡಿಕೊಂಡಿತು. ಈ ಸಂದರ್ಭದಲ್ಲಿ ಪ್ರಸ್ತುತ ರಾಜಕಾರಣದ ಬಗ್ಗೆ ಮಾತುಕತೆ ನಡೆಸಲಾಗಿದೆ. ಸದ್ಯದ ಬಿಜೆಪಿಯಲ್ಲಿನ ವ್ಯವಸ್ಥೆಗೆ ಮುನಿಸಿಕೊಂಡಿರುವ ಸೋಮಣ್ಣ ತಮ್ಮ ರಾಜಕೀಯ ಭವಿಷ್ಯದ ಕುರಿತು ಮಾತುಕತೆ ನಡೆಸಿದ್ದಾರೆ ಎನ್ನಲಾಗಿದೆ. ಸದ್ಯದಲ್ಲೇ ದೆಹಲಿಗೂ ತೆರಳಿ ಬಿಜೆಪಿ ಹೈಕಮಾಂಡ್ ನಾಯಕರ ಭೇಟಿ ಮಾಡಲಿದ್ದು, ಅದಕ್ಕೂ ಮುನ್ನ ದಳಪತಿಗಳ ಜೊತೆ ಮಾತುಕತೆ ನಡೆಸಿದ್ದಾರೆ.

ಗೌಡರ ಭೇಟಿಯ ನಂತರ ಮಾಧ್ಯಮಗಳ ಜೊತೆ ಮಾತನಾಡಿದ ಸೋಮಣ್ಣ ನನಗೆ ರಾಜಕೀಯ ಗೊತ್ತಾಗಿದ್ದೇ ದೇವೇಗೌಡರಿಂದ. ನಾನು ಹೊಟ್ಟೆಪಾಡಿಗೆ ಬೆಂಗಳೂರಿಗೆ ಬಂದಿದ್ದೆ. 1976–77ರಲ್ಲಿ ಗೌಡರ ಭೇಟಿಯಾಯಿತು. ನಂತರ 30 ವರ್ಷಕ್ಕೂ ಹೆಚ್ಚು ಕಾಲ ನಾನು ಅವರ ಶಿಷ್ಯನಾಗಿ ರಾಜಕಾರಣದಲ್ಲಿ ಕೆಲಸ ಮಾಡಿಕೊಂಡು ಬಂದಿದ್ದೇನೆ. ಗೌಡರ ಪುತ್ರರಾದ ಹೆಚ್.ಡಿ.ಕುಮಾರಸ್ವಾಮಿ ಮತ್ತು ಹೆಚ್.ಡಿ. ರೇವಣ್ಣ ಇಬ್ಬರು ನನಗೆ ಸಹೋದರರಂತಿದ್ದಾರೆ.

ನಾನು ಸ್ವಲ್ಪ ಗೊಂದಲಕ್ಕೆ ಸಂದರ್ಭದಲ್ಲಿ ನನ್ನ ನೋವು ಹಂಚಿಕೊಂಡ ಕುಟುಂಬವೆಂದರೆ ಅದು ಗೌಡರ ಕುಟುಂಬ. ನನಗೆ ಸಮಾಧಾನ ಮಾಡಿ ಧೈರ್ಯವಾಗಿ ಪರಿಸ್ಥಿತಿ ಎದುರಿಸುವಂತೆ ದೇವೇಗೌಡರು ಸಲಹೆ ನೀಡಿದ್ದರು. ಅವರ ರಾಜಕೀಯ ವೈಖರಿ, ದೂರದೃಷ್ಟಿ, ರಾಷ್ಟ್ರದ ನಿರ್ವಹಣೆ, ರಾಜ್ಯದ ದೊಂಬರಾಟದ ಬಗ್ಗೆ ಅವರು ಒಂದು ಗಂಟೆ ಮಾತನಾಡಿದರು. ದೇಶದ ಭವಿಷ್ಯದಲ್ಲಿ ಮೋದಿ ಕಾರ್ಯವೈಖರಿಯನ್ನು ಮಾಜಿ ಪ್ರಧಾನಿಯಾಗಿ ಹೇಳುತ್ತಿರುವುದು ಅವರ ನಿಷ್ಕಲ್ಮಶತೆಗೆ ಕೈಗನ್ನಡಿಯಾಗಿದೆ. ಅವರ ಮೇಲಿನ ನನ್ನ ನಂಬಿಕೆ ದುಪ್ಪಟ್ಟಾಗಿದೆ ಎಂದು ತಿಳಿಸಿದರು.

ನಮ್ಮಂತಹವರ ಮೇಲೆ ಗದಾಪ್ರಹಾರ ಆದರೆ ಪರಿಣಾಮ ಆಗುತ್ತದೆ. ಎಷ್ಟರ ಮಟ್ಟಿಗೆ ಪರಿಣಾಮ ಆಗುತ್ತದೆ ಅಂತಾ ಚಿಂತನೆ ಮಾಡಬೇಕು. ವಿಜಯೇಂದ್ರ ಅವರಿಗೆ ಒಳ್ಳೆಯದಾಗಲಿ. ಹಿಂದಿನದ್ದೇ ನಡೆಸಿಕೊಂಡು ಹೋಗುತ್ತೇನೆ ಎಂಬುದನ್ನು ಬಿಡಬೇಕು. ಚಾಮರಾಜನಗರ ಜಿಲ್ಲೆಗೆ ಬಿ.ವೈ.ವಿಜಯೇಂದ್ರ ಭೇಟಿ ನೀಡುತ್ತಿರುವ ವಿಚಾರವಾಗಿ ಮಾತನಾಡಿದ ಅವರು ವಿಜಯೇಂದ್ರ ರಾಜ್ಯಾಧ್ಯಕ್ಷರು, ಎಲ್ಲಿಗೆ ಬೇಕಾದರೂ ಹೋಗಲಿ ಎಂದು ಮಾತನಾಡಿದರು.

ನನ್ನ ಮತ್ತು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಧ್ಯೆ ಸಣ್ಣ ಭಿನ್ನಾಭಿಪ್ರಾಯ ಸಹ ಇಲ್ಲ. ವಿಪಕ್ಷ ನಾಯಕ ಅಶೋಕ್ ನನ್ನ ಭೇಟಿಗೆ ಪ್ರಯತ್ನ ಮಾಡಿದ್ದರು. ನಾನು ಮತ್ತು ಅಶೋಕ್ ಸ್ನೇಹಿತರು. ಅಶೋಕ್ ಮೊದಲು ಶಾಸಕನಾದಾಗ ನಾನು ಮಂತ್ರಿಯಾಗಿದ್ದೆ. ವಿಪಕ್ಷ ನಾಯಕ ಅಶೋಕ್ ನನಗಿಂತ 14 ವರ್ಷ ಚಿಕ್ಕವರು. ಅಶೋಕ್ ಮೇಲೆ ನನಗೆ ಪ್ರೀತಿ, ವಿಶ್ವಾಸ ಇದೆ. ನಮ್ಮವರಿಂದಲೇ ನೋವಾದಾಗ ನನ್ನ ಭಾವನೆ ಹೇಳಿಕೊಂಡಿದ್ದೇನೆ. ಸಂಕ್ರಾಂತಿ ಬಳಿಕ ಎಲ್ಲವೂ ಸುಖಾಂತ್ಯವಾಗಬೇಕು ಎಂದರು.

ಪದೇ ಪದೆ ಕೋಮುಗಲಭೆ ಬಗ್ಗೆ ಪ್ರಸ್ತಾಪಿಸುವ ಹರಿಪ್ರಸಾದರಿಗೆ ಮಂಪರು ಪರೀಕ್ಷೆ ಅವಶ್ಯ

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆಗ್ರಹ

ಮೈಸೂರು, ಜ.6(ಎಸ್‌ಬಿಡಿ)– ಪದೇ ಪದೆ ಕೋಮುಗಲಭೆ ಬಗ್ಗೆ ಮಾತನಾಡುತ್ತಿರುವ ಕಾಂಗ್ರೆಸ್ ನಾಯಕ ಬಿ.ಕೆ.ಹರಿಪ್ರಸಾದ್ ಅವರನ್ನು ಮಂಪರು ಪರೀಕ್ಷೆಗೆ ಒಳಪಡಿಸುವ ಅಗತ್ಯವಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಮೈಸೂರು ಬಿಜೆಪಿ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಜ್ಯದಲ್ಲಿ ಕೋಮುಗಲಭೆ ಸೃಷ್ಟಿಸಿ, ಧರ್ಮಗಳ ನಡುವೆ ಬೆಂಕಿ ಹಚ್ಚುವ ಕೆಲಸಕ್ಕೆ ಕೈ ಹಾಕಿದೆ ಎಂಬ ಎಂಎಲ್‌ಸಿ ಬಿ.ಕೆ.ಹರಿಪ್ರಸಾದ್ ಅವರ ಆರೋಪಕ್ಕೆ ಪ್ರತಿಕ್ರಿಯಿಸಿ, ಪದೇ ಪದೆ ಈ ರೀತಿಯ ಹೇಳಿಕೆ ನೀಡುತ್ತಿದ್ದಾರೆ ಎಂದರೆ ಬಿ.ಕೆ.ಹರಿಪ್ರಸಾದ್ ಅವರನ್ನು ಮಂಪರು ಪರೀಕ್ಷೆಗೆ ಒಳಪಡಿಸುವ ನಿರ್ಧಾರವನ್ನು ಶೀಘ್ರದಲ್ಲೇ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿಗಳಲ್ಲಿ ಆಗ್ರಹಿಸುತ್ತೇನೆ ಎಂದರು.

ಕಾಂಗ್ರೆಸ್ ಸರ್ಕಾರ ಆಡಳಿತವಿದ್ದಾಗಲೆಲ್ಲಾ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡುತ್ತದೆ. ಜೊತೆಗೆ ಕಾಂಗ್ರೆಸ್ ಶಾಸಕರು, ಸಚಿವರ ಹೇಳಿಕೆ ನೋಡಿದರೆ ಸಮಾಜ ಒಡೆಯುವ ಹಾಗೂ ಅಶಾಂತಿ ಮೂಡಿಸುವ ಕೆಲಸ ಸರ್ಕಾರದಿಂದ ಆಗುತ್ತಿದೆ ಎನ್ನಿಸುತ್ತಿದೆ. ಡಿ.ಜೆ.ಹಳ್ಳಿ, ಕೆ.ಜೆ.ಹಳ್ಳಿ ಗಲಭೆ ಕೇಸ್ ಸಂಬಂಧ ಬಂಧಿತರಾಗಿದ್ದ ಕುಟುಂಬದವರ್‍ಯಾರೂ ಮನವಿ ಕೊಟ್ಟಿರಲಿಲ್ಲ. ಕಾಂಗ್ರೆಸ್ ಪಕ್ಷದವರೇ ಕುಟುಂಬಸ್ಥರ ಮೂಲಕ ಮನವಿ ಪಡೆದುಕೊಂಡಿದ್ದಾರೆ. ಒಂದು ಕಡೆ ಹಿಂದೂ ಕಾರ್ಯಕರ್ತರನ್ನು ಬೆದರಿಸುವುದು, ಮತ್ತೊಂದು ಕಡೆ ಅಲ್ಪಸಂಖ್ಯಾತರನ್ನು ಓಲೈಸುವ ಕೆಲಸ ದೊಡ್ಡ ಮಟ್ಟದಲ್ಲಿ ಆಗುತ್ತಿದೆ. ಹಿಂದೂ ಕಾರ್ಯಕರ್ತರನ್ನು ಒಳಗೆ ಹಾಕುವುದು, ಠಾಣೆಗೆ ಬೆಂಕಿ ಹಚ್ಚಿದವರನ್ನು ಅಮಾಯಕರೆಂದು ಬಿಂಬಿಸುವ ನಡೆ ಖಂಡನೀಯ ಎಂದು ಕಿಡಿಕಾರಿದರು.

ಮಹಾರಾಜ ಕಾಲೇಜು ನಿವೃತ್ತ ಪ್ರಾಧ್ಯಾಪಕಿ ಡಾ.ಪ್ರಮಿಳಾ ಬಿ.ಕುಣ್ಣೂರು ನಿಧನ



ಮೈಸೂರು,ಜ.6– ಮೈಸೂರಿನ ಮಹಾರಾಜ ಕಾಲೇಜು ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗದ ನಿವೃತ್ತ ಮುಖ್ಯಸ್ಥೆ ಡಾ. ಪ್ರಮಿಳಾ ಬಿ. ಕುಣ್ಣೂರು(62) ಅವರು ಹುಬ್ಬಳ್ಳಿ ವಿದ್ಯಾನಗರದ ನಿವಾಸದಲ್ಲಿ ಹೃದಯಾಘಾತದಿಂದ ಶನಿವಾರ ನಿಧನರಾದರು.

ಇವರು ಕುಟುಂಬದವರು, ಸಂಬಂಧಿಕರು, ಸ್ನೇಹಿತರು ಹಾಗೂ ಅಪಾರ ವಿದ್ಯಾರ್ಥಿ ಬಳಗವನ್ನು ಅಗಲಿದ್ದು, ಶನಿವಾರ ಸಂಜೆ ಅಂತ್ಯಕ್ರಿಯೆ ನಡೆಯಿತು ಎಂದು ಮೂಲಗಳು ತಿಳಿಸಿವೆ.

ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ವಿಭಾಗದ ಮೊದಲ ಬ್ಯಾಚ್(1982) ವಿದ್ಯಾರ್ಥಿನಿಯಾದ ಇವರು, ಈ ವಿಭಾಗದಿಂದ ಪಿಹೆಚ್.ಡಿ ಪಡೆದ ಮೊದಲಿಗರು. ಕರ್ನಾಟಕ ವಿವಿಯಲ್ಲಿ ಅತಿಥಿ ಅಧ್ಯಾಪಕರಾಗಿ ವೃತ್ತಿಜೀವನವನ್ನು ಪ್ರಾರಂಭಿಸಿದ ಇವರು ನಂತರ ಮೈಸೂರು ವಿಶ್ವವಿದ್ಯಾನಿಲಯದ ಮಹಾರಾಜ ಕಾಲೇಜಿನಲ್ಲಿ 1994ರಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ನೇಮಕಗೊಂಡು ಸುದೀರ್ಘ ಸೇವೆ ಸಲ್ಲಿಸಿದ್ದರು. ನಿವೃತ್ತಿ ನಂತರ ಇವರು ಹುಬ್ಬಳ್ಳಿಯಲ್ಲಿ ನೆಲೆಸಿದ್ದರು.

ಮೂರನೇ ಬಾರಿಯೂ ಮೋದಿ ಪ್ರಧಾನಿಯಾಗುವುದು ಶತಸಿದ್ಧ

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ

ಚಾಮರಾಜನಗರ, ಜ.6– ನರೇಂದ್ರ ಮೋದಿ ಅವರು 3ನೇ ಬಾರಿಯೂ ದೇಶದ ಪ್ರಧಾನಿಯಾಗುವುದನ್ನು ತಡೆಯಲು ಯಾವ ಶಕ್ತಿಯಿಂದಲೂ ಸಾಧ್ಯವಿಲ್ಲ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅಚಲ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ಡಾ. ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಶನಿವಾರ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚೆಗೆ ನಡೆದ 5 ರಾಜ್ಯಗಳ ಚುನಾವಣಾ ಫಲಿತಾಂಶ ಇಡೀ ದೇಶವಷ್ಟೇ ಅಲ್ಲ. ಕರ್ನಾಟಕದಲ್ಲೂ ಬಿಜೆಪಿ ಅಧಿಕಾರಕ್ಕೆ ಬರುವಂತಹ ಅಲೆ ಸೃಷ್ಟಿಯಾಗಿದೆ. ಮಧ್ಯಪ್ರದೇಶ, ರಾಜಸ್ಥಾನ, ಛತ್ತೀಸ್‌ಗಢ ರಾಜ್ಯಗಳಲ್ಲಿ ಬಿಜೆಪಿ ಗೆದ್ದಿದೆ. ಇದರಿಂದ ಪಕ್ಷ ಕಾರ್ಯಕರ್ತರಲ್ಲಿ ಉತ್ಸಾಹ, ಹುರುಪು ಬಂದಿದೆ. ಹೀಗಾಗಿ ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲೂ ಬಿಜೆಪಿ ಜಯಭೇರಿ ಬಾರಿಸಲಿದೆ. ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಒಂಭತ್ತೂವರೆ ವರ್ಷಗಳಿಂದಲೂ ಆಡಳಿತ ನಡೆಸುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಭ್ರಷ್ಟಾಚಾರ ರಹಿತ ಆಡಳಿತ ನಡೆಸಿದ್ದಾರೆ. ಅವರ ಮೇಲೆ ಯಾವುದೇ ಭ್ರಷ್ಟಾಚಾರದ ಆರೋಪ ಇಲ್ಲ. ಮೋದಿಯವರು 3ನೇ ಬಾರಿಯೂ ದೇಶದ ಪ್ರಧಾನಿಯಾಗುತ್ತಾರೆ. ಅದನ್ನು ಯಾವುದೇ ಶಕ್ತಿಯೂ ತಡೆಯಲು ಸಾಧ್ಯವಿಲ್ಲ ಎಂದರು. ರಾಜ್ಯದಲ್ಲಿ ಸರ್ಕಾರ ರಚನೆಯಾಗಿ 7 ತಿಂಗಳು ಕಳೆದಿದೆ. ಚಾಮರಾಜನಗರ ವಿಧಾನಸಭಾ ಕ್ಷೇತ್ರ ಸೇರಿದಂತೆ ರಾಜ್ಯದ ಯಾವುದೇ ಕ್ಷೇತ್ರದ ಅಭಿವೃದ್ಧಿಗೆ ಒಂದು ರೂಪಾಯಿ ಅನುದಾನ ಕೊಟ್ಟಿಲ್ಲ. ಸಿದ್ದರಾಮಯ್ಯನವರ ಆತ್ಮೀಯ ಮಿತ್ರರಿಂದ ಚಾಮರಾಜನಗರ ಅಭಿವೃದ್ಧಿಗೆ ಒಂದು ರೂಪಾಯಿ ಅನುದಾನ ತರಲು ಸಾಧ್ಯವಾಗಿದೆಯಾ ಎಂದು ಪ್ರಶ್ನಿಸಿದರು.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರು ನನ್ನನ್ನು ಬಿಜೆಪಿ ರಾಜ್ಯಾಧ್ಯಕ್ಷರನ್ನಾಗಿ ನೇಮಕ ಮಾಡಿದ ಬಳಿಕ ನಮ್ಮ ತಂದೆ ಯಡಿಯೂರಪ್ಪನವರ ಆಶೀರ್ವಾದ ಪಡೆಯಲು ಹೋದಾಗ ರಾಜ್ಯದಲ್ಲಿ ಅನೇಕ ಹಿರಿಯರಿದ್ದರೂ ಪಕ್ಷ ನಿನ್ನನ್ನು ಗುರುತಿಸಿ ದೊಡ್ಡ ಜವಾಬ್ದಾರಿ ಕೊಟ್ಟಿದೆ. ಒಂದು ದಿನವೂ ಮನೆಯಲ್ಲಿ ಕೂರದೇ ರಾಜ್ಯಾದ್ಯಂತ ಪ್ರವಾಸ ಮಾಡಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಸ್ಥಾನಗಳಲ್ಲೂ ಬಿಜೆಪಿ ಗೆಲ್ಲಿಸುವ ಮೂಲಕ ನರೇಂದ್ರ ಮೋದಿಯವರ ಕೈ ಬಲಪಡಿಸುವಂತೆ ಹೇಳಿದ್ದಾರೆ. ಅದರಂತೆ ನಾನೂ ಕೂಡ ರಾಜ್ಯಾದ್ಯಂತ ಪ್ರವಾಸ ಕೈಗೊಂಡಿದ್ದೇನೆ ಎಂದರು.

“ವಿಧಾನಸಭೆ ಚುನಾವಣೆಯಲ್ಲಿ ಏನೇನು ನಡೆದಿದೆ ಎಂಬುದರ ಬಗ್ಗೆ ನಾನು ಚರ್ಚೆ ಮಾಡುವುದಕ್ಕೆ ಹೋಗುವುದಿಲ್ಲ. ಆದರೆ, ಭವಿಷ್ಯದ ಬಗ್ಗೆ ವಿಶ್ವಾಸ ಇರಿಸಿಕೊಂಡಿದ್ದೇನೆ. ಆರೇಳು ತಿಂಗಳ ಹಿಂದೆ ರಾಜ್ಯದಲ್ಲಿ ಯಾವ ರೀತಿಯ ವಾತಾವರಣ ಇತ್ತು. ಈಗ ಹೇಗೆ ಬದಲಾವಣೆಯಾಗಿದೆ. ಇತ್ತೀಚೆಗೆ ನಡೆದ ಪಂಚರಾಜ್ಯ ಚುನಾವಣೆಯ ಫಲಿತಾಂಶ ಇಡೀ ದೇಶದಲ್ಲಿ ಮಾತ್ರವಲ್ಲದೆ, ರಾಜ್ಯದಲ್ಲೂ ಬಿಜೆಪಿ ಪರವಾಗಿ ಅಲೆ ಸೃಷ್ಟಿಸುವಂತೆ ಮಾಡಿದೆ.
–ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷ.

ಮೋದಿಯವರು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ರೈತರಿಗೆ 6 ಸಾವಿರ ಕೊಡುವ ಯೋಜನೆ ಜಾರಿಗೆ ಮಾಡಿದ್ದರು. ಅದಕ್ಕೆ ಪೂರಕವಾಗಿ ಬಿ.ಎಸ್.ಯಡಿಯೂರಪ್ಪನವರು ಮುಖ್ಯಮಂತ್ರಿಯಾಗಿದ್ದ ವೇಳೆ 4 ಸಾವಿರ ನೀಡುವ ಯೋಜನೆ ಜಾರಿಗೆ ತಂದರು. ಆದರೆ ಇಂದಿನ ಪುಕ್ಕಟೆ ಯೋಜನೆಗಳ ಬಗ್ಗೆ ಭಾಷಣ ಮಾಡುವ ಕಾಂಗ್ರೆಸ್ ನಾಯಕರು ರೈತರ ಹೊಟ್ಟೆ ಮೇಲೆ ಹೊಡೆಯುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.



ಚಾಮರಾಜನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಶನಿವಾರ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯನ್ನು ರಾಜ್ಯ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಉದ್ಘಾಟಿಸಿದರು. ಚಿತ್ರದಲ್ಲಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್, ಜಿಲ್ಲಾಧ್ಯಕ್ಷ ಜಿ.ನಾರಾಯಣಪ್ರಸಾದ್, ಮಾಜಿ ಶಾಸಕ ನಿರಂಜನ್‌ಕುಮಾರ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್‌ಗೌಡ, ಉಪಾಧ್ಯಕ್ಷ ರಾಜೇಂದ್ರ, ಮಾಜಿ ಸಚಿವ ಕೋಟೆ ಎಂ.ಶಿವಣ್ಣ, ಹಿಂದುಳಿದ ವರ್ಗಗಳ ಅಧ್ಯಕ್ಷ ರಘುಕೌಟಿಲ್ಯ, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಮಹದೇವಯ್ಯ, ಮಾಜಿ ಶಾಸಕ ಎಸ್.ಬಾಲರಾಜು ಇನ್ನಿತರರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್, ಜಿಲ್ಲಾಧ್ಯಕ್ಷ ಜಿ.ನಾರಾಯಣಪ್ರಸಾದ್, ಮಾಜಿ ಶಾಸಕ ನಿರಂಜನ್‌ಕುಮಾರ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್‌ಗೌಡ, ಉಪಾಧ್ಯಕ್ಷ ರಾಜೇಂದ್ರ, ಮಾಜಿ ಸಚಿವ ಕೋಟೆ ಎಂ.ಶಿವಣ್ಣ, ಹಿಂದುಳಿದ ವರ್ಗಗಳ ಅಧ್ಯಕ್ಷ ರಘುಕೌಟಿಲ್ಯ, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಮಹದೇವಯ್ಯ, ಮಾಜಿ ಶಾಸಕ ಎಸ್.ಬಾಲರಾಜು, ಮುಖಂಡರಾದ ಹಿರಿಯ ವಕೀಲ ಅರುಣ್‌ಕುಮಾರ್, ಎಂ.ರುದ್ರೇಶ್, ನಿಜಗುಣರಾಜು, ವೆಂಕಟೇಶ್, ಕೆ.ಶಿವರಾಂ, ನೂರೊಂದುಶೆಟ್ಟಿ, ದತ್ತೇಶ್, ಅಯ್ಯನಪುರ ಶಿವಕುಮಾರ್ ಇದ್ದರು.

ನಜರ್‌ಬಾದ್‌ನಲ್ಲಿ ಶಾಸಕ ಕೆ.ಹರೀಶ್‌ಗೌಡರಿಂದ ಜನ ಸಂಪರ್ಕ ಸಭೆ



ಮೈಸೂರಿನ ನಜರ್‌ಬಾದ್‌ನಲ್ಲಿರುವ ನಿಂಬುಜಾದೇವಿ ದೇವಾಲಯ ಸಭಾಂಗಣದಲ್ಲಿ ಶನಿವಾರ ನಡೆದ 40ನೇ ವಾರ್ಡ್‌ನ ಜನಸ್ಪಂದನ ಸಭೆಯಲ್ಲಿ ಶಾಸಕ ಕೆ.ಹರೀಶ್‌ಗೌಡ ಅಹವಾಲು ಸ್ವೀಕರಿಸಿ ಮಾತನಾಡಿದರು.

ಮೈಸೂರು, ಜ.6(ಎಂಟಿವೈ)– ಮೈಸೂರಿನ ಚಾಮರಾಜ ಕ್ಷೇತ್ರ ವ್ಯಾಪ್ತಿಯ ಪಾಲಿಕೆಯ 40ನೇ ವಾರ್ಡ್‌ನಲ್ಲಿ ಶಾಸಕ ಕೆ.ಹರೀಶ್‌ಗೌಡ ನಡೆಸಿದ ಜನಸ್ಪಂದನ ಕಾರ್ಯಕ್ರಮದಲ್ಲಿ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ 64 ಮಂದಿ ಅರ್ಜಿ ಸಲ್ಲಿಸಿದರೆ, ಹಲವು ಮಂದಿ ವೈಯಕ್ತಿಕ ಸಮಸ್ಯೆ ಮುಂದಿಟ್ಟುಕೊಂಡು ಮನವಿ ಸಲ್ಲಿಸಿದರು.

ಮೈಸೂರಿನ ನಜ್ಜರ್‌ಬಾದ್‌ನಲ್ಲಿರುವ ನಿಂಬುಜಾದೇವಿ ದೇವಾಲಯದ ಆವರಣದಲ್ಲಿ ಶನಿವಾರ ಮೈಸೂರು ಮಹಾನಗರ ಪಾಲಿಕೆ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳ ಉಪಸ್ಥಿತಿಯಲ್ಲಿ ನಡೆದ ಜನಸಂಪರ್ಕ ಸಭೆಯಲ್ಲಿ ಪಿಂಚಣಿ, ಪಡಿತರ ಚೀಟಿ, ಗೃಹಲಕ್ಷ್ಮಿ ಯೋಜನೆಯ ಹಣ, ಡಯಾಲಿಸಿಸ್‌ಗಾಗಿ ಆರ್ಥಿಕ ನೆರವು, ರಸ್ತೆಗೆ ಮೋರಿ ಮಾಡಿಸುವುದಕ್ಕೆ ಸಂಬಂಧಿಸಿದಂತೆ ಅಹವಾಲು ಸಲ್ಲಿಸಲಾಯಿತು. ಅಲ್ಲದೆ, ಹಲವು ಮಂದಿ ಗೃಹಲಕ್ಷ್ಮಿ ಯೋಜನೆಯ ಹಣ ಬಂದಿಲ್ಲ ಎಂದು ಮೌಖಿಕವಾಗಿ ದೂರು ನೀಡಿ, ಪರಿಶೀಲಿಸುವಂತೆ ಕೋರಿದರು. ಈ ವೇಳೆ ಶಾಸಕ ಕೆ.ಹರೀಶ್‌ಗೌಡ ಮಾತನಾಡಿ, ರಾಜ್ಯ ಸರ್ಕಾರ ಜನರ ಬಳಿಗೆ ಆಡಳಿತ ಕೊಂಡೊಯ್ದು, ಅವರ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಹಾಕುತ್ತಿದೆ. ಅದರ ಭಾಗವಾಗಿ ಮೈಸೂರಿನ ಚಾಮರಾಜ ಕ್ಷೇತ್ರದ ಶಾಸಕನಾಗಿ, ಕ್ಷೇತ್ರದ ಜನರ ಸಮಸ್ಯೆ ಆಲಿಸುವ ನಿಟ್ಟಿನಲ್ಲಿ ಹಂತಹಂತವಾಗಿ ವಾರ್ಡ್‌ವಾರು ಜನಸ್ಪಂದನ ಕಾರ್ಯಕ್ರಮ ನಡೆಸಲು ಉದ್ದೇಶಿಸಿದ್ದೇನೆ. ಇಂದು ಪಾಲಿಕೆಯ 40ನೇ ವಾರ್ಡ್‌ಗೆ ಸಂಬಂಧಿಸಿದ ನಜ್ಜರ್‌ಬಾದ್ ಹಾಗೂ ಇನ್ನಿತರ ಬಡಾವಣೆಗಳಿಗೆ ಸೀಮಿತವಾಗಿ ಅಹವಾಲು ಸ್ವೀಕರಿಸಿ, ಸಾಧ್ಯವಾದಷ್ಟು ಬೇಗ ಸಮಸ್ಯೆಯನ್ನು ಬಗೆಹರಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಮೈಸೂರು ಮಹಾನಗರ ಪಾಲಿಕೆ, ಕಂದಾಯ, ಚೆಸ್ಕಾಂ, ಆಹಾರ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಆಗಮಿಸಿದ್ದು, ಯಾವುದೇ ಅಡೆತಡೆಯಿಲ್ಲದೆ ಇತ್ಯರ್ಥಪಡಿಸಬಹುದಾದ ಸಮಸ್ಯೆಗಳನ್ನು ಶೀಘ್ರವೇ ಬಗೆಹರಿಸುವುದಾಗಿ ಭರವಸೆ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಜನಪರ ಆಡಳಿತ ನೀಡುತ್ತಿದೆ. ಅದಕ್ಕೆ ಪೂರಕವಾಗಿ ನಾನು ಕ್ಷೇತ್ರದಲ್ಲಿರುವ ಪ್ರತಿಯೊಂದು ವಾರ್ಡ್‌ಗಳಿಗೂ ಹೋಗಿ ನಾಗರಿಕ ಸಮಸ್ಯೆಗಳನ್ನು ಗುರುತು ಮಾಡಿ, ಅವುಗಳನ್ನು ಕಾಲಮಿತಿಯೊಳಗೆ ಇತ್ಯರ್ಥ ಮಾಡಲು ಕ್ರಮ ಕೈಗೊಳ್ಳುತ್ತೇನೆ ಎಂದರು.

ಈ ಸಂದರ್ಭದಲ್ಲಿ ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಅಶದ್ ಉರ್ ರೆಹಮಾನ್ ಷರೀಫ್ ಹಾಗೂ ಇನ್ನಿತರ ಅಧಿಕಾರಿಗಳು ಪಾಲ್ಗೊಂಡಿದ್ದರು. ಅಲ್ಲದೆ 40ನೇ ವಾರ್ಡ್‌ನ ಕಾಂಗ್ರೆಸ್ ಸಮಿತಿ ಮೋಹನ್, ಕುಮಾರ್ ಗೌಡ, ಕಾಂಗ್ರೆಸ್ ಮುಖಂಡರಾದ ವರದರಾಜ, ಎಸ್.ಆರ್.ರವಿಕುಮಾರ್, ಮಹೇಶ್, ಈರೇಗೌಡ, ಯಶೋಧ, ಶ್ರೀಧರ್ ಹಾಗೂ ಹಲವಾರು ಮುಖಂಡರು ಉಪಸ್ಥಿತರಿದ್ದರು.

ನಾಗರಿಕ ಸುರಕ್ಷತಾ ಕಾಯ್ದೆ ವಿರೋಧಿಸಿ ಪ್ರತಿಭಟನೆ

ಚಾಲಕರಿಗೆ ಮಾರಕವಾಗಿರುವ ಕಾಯ್ದೆ ರದ್ದತಿಗೆ ಆಗ್ರಹ

ಮೈಸೂರು, ಜ.6(ಜಿಎ)–ಕೇಂದ್ರ ಸರ್ಕಾರ ಜಾರಿಗೆ ತರಲು ಹೊರಟಿರುವ ನಾಗರಿಕ ಸುರಕ್ಷತಾ ಕಾಯ್ದೆ ವಿರೋಧಿಸಿ ಕರ್ನಾಟಕ ಚಾಲಕರ ಒಕ್ಕೂಟದಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು. ಕೇಂದ್ರ ಗೃಹಮಂತ್ರಿ ಅಮಿತ್ ಶಾ ಅವರು ಡಿ.25ರಂದು ಸಂಸತ್ತಿನಲ್ಲಿ ಚಾಲಕರ ವಿರೋಧಿಯಾದ ಅವೈಜ್ಞಾನಿಕ ಮಸೂದೆಯನ್ನು ಮಂಡನೆ ಮಾಡಿದ್ದಾರೆ. ಅದು ಈಗಾಗಲೇ ರಾಷ್ಟ್ರಪತಿಗಳ ಅಂಕಿತಕ್ಕೂ ಹೋಗಿದೆ. ಓರ್ವ ಚಾಲಕ ಅಪಘಾತ ಮಾಡಿದರೆ ಗಾಯಗೊಂಡವರನ್ನು ರಸ್ತೆಯಲ್ಲೇ ಬಿಟ್ಟು ಹೋಗುವಂತಿಲ್ಲ. ಸ್ಥಳದಲ್ಲೇ ಇದ್ದು ಚಿಕಿತ್ಸೆ ಕೊಡಿಸಬೇಕು. ಮಹಜರು ಸಂದರ್ಭದಲ್ಲಿ ಸ್ಥಳದಲ್ಲಿರದಿದ್ದರೆ 10 ಲಕ್ಷ ರೂ ದಂಡ ವಿಧಿಸಬಹುದಾದ ಕಾನೂನು ತರಲು ಮುಂದಾಗಿದ್ದಾರೆ. ಇದು ಚಾಲಕರನ್ನು ಪರೋಕ್ಷವಾಗಿ ಕೊಲ್ಲುವ ಪ್ರಯತ್ನ. ಅಪಘಾತದ ಸಂದರ್ಭದಲ್ಲಿ ಸಾರ್ವಜನಿರು ಚಾಲಕರನ್ನು ಥಳಿಸಿ ಕೊಲೆ ಮಾಡಿರುವ ಸಾಕಷ್ಟು ಉದಾಹರಣೆಗಳಿವೆ. ಈ ಕಾನೂನು ಜಾರಿಯಾದರೆ ಚಾಲಕರ ಮೇಲಿನ ಹಲ್ಲೆ ಪ್ರಕರಣಗಳು ಹೆಚ್ಚಾಗುತ್ತವೆ ಎಂದು ಕಿಡಿಕಾರಿದರು.

ಹೊರ ರಾಜ್ಯದ ಪರ್ಮಿಟ್‌ಗಳನ್ನು ನಿಲ್ಲಿಸಬೇಕು. ಸಾರಿಗೆ ಇಲಾಖೆಯಿಂದ ಮೈಸೂರು ಜಿಲ್ಲೆಯ ಎಲ್ಲಾ ಆಟೋರಿಕ್ಷಾ ಚಾಲಕರಿಗೆ ಚಾಲನ ಪರವಾನಗಿ ಬ್ಯಾಡ್ಜ್ ವಿತರಿಸಬೇಕು. ಮೈಸೂರು ಪ್ರವಾಸಿ ತಾಣವಾಗಿರುವುದರಿಂದ ನಗರದ ಆಟೋರಿಕ್ಷಾಗಳ ಅಂತರದ ಪರ್ಮಿಟ್‌ನ್ನು 25–30 ಕಿ.ಮಿ ವರೆಗೂ ವಿಸ್ತರಿಸಬೇಕು. ಆಟೋರಿಕ್ಷದವರಿಗೆ ಮಾರಕವಾಗಿರುವ ರ್‍ಯಾಪಿಡೋ, ಉಬರ್, ಓಲಾ ಬೈಕ್ ಟ್ಯಾಕ್ಸಿಗಳನ್ನು ಬ್ಯಾನ್ ಮಾಡಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಮುರುಗನ್.ಜಿ, ಪ್ರಧಾನ ಕಾರ್ಯದರ್ಶಿ ವಿನಾಯಕ.ಪಿ, ನಗರಾಧ್ಯಕ್ಷ ಸತ್ಯನಾರಾಯಣ್‌ಸಿಂಗ್, ಪದಾಧಿಕಾರಿಗಳಾದ ಶಿವಕುಮಾರ್, ಸುರೇಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.



ಸುರಕ್ಷತಾ ಕಾಯ್ದೆ ವಿರೋಧಿಸಿ ಕರ್ನಾಟಕ ಚಾಲಕರ ಒಕ್ಕೂಟದಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಕಾಂತರಾಜು ಆಯೋಗದ ವರದಿ ಅನುಷ್ಠಾನಕ್ಕೆ ಮಡಿವಾಳರ ವಿರೋಧ



ಮೈಸೂರು ತಾಲೂಕು ವೀರ ಮಡಿವಾಳರ ಸಂಘದ ದಿನದರ್ಶಿಕೆ ಬಿಡುಗಡೆಗೊಳಿಸಲಾಯಿತು.

ಮೈಸೂರು,ಜ.6(ಜಿಎ)–ಕಾಂತರಾಜು ಆಯೋಗದ ಜಾತಿ ಜನಗಣತಿ ಸಮೀಕ್ಷೆ ವೇಳೆ ಸಮೀಕ್ಷಾಕಾರರು ರಾಜ್ಯದ ಹಲವೆಡೆ ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ನಡೆಸಿಲ್ಲ. ಕುಳಿತಲ್ಲಿಯೇ ಅಂಕಿ ಅಂಶ ತುಂಬಿದ್ದಾರೆ. ಹೀಗಾಗಿ ಮಡಿವಾಳ ಸಮುದಾಯದ ಜನಸಂಖ್ಯೆ ಬಗ್ಗೆ ನಿಖರ ಮಾಹಿತಿ ಅದರಲ್ಲಿರುವ ಸಾಧ್ಯತೆ ಇಲ್ಲ. ಹೀಗಾಗಿ ಆ ವರದಿ ಜಾರಿಯನ್ನು ತಾವು ವಿರೋಧಿಸುವುದಾಗಿ ಮೈಸೂರು ತಾಲೂಕು ವೀರ ಮಡಿವಾಳರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚನ್ನಕೇಶವ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸಂಘದ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿ, ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸಮುದಾಯದ ಸಂಖ್ಯೆ ಸುಮಾರು 18 ರಿಂದ 20 ಲಕ್ಷ ಇದೆ. ಸಮೀಕ್ಷೆಯನ್ನು ಯಾರು ಯಾವಾಗ ಮಾಡಿದರು ಎಂಬುದು ತಮ್ಮಂತಹ ಮುಖಂಡರಿಗೇ ತಿಳಿದಿಲ್ಲ. ತಮ್ಮ ಮನೆಗಳಿಗೂ ಬಂದಿಲ್ಲ. ಹೀಗಾಗಿ ಗ್ರಾಮಗಳಲ್ಲಿ ಸಮರ್ಪಕವಾಗಿ ನಡೆದಿರಲು ಸಾಧ್ಯವಿಲ್ಲ. ಹೀಗಾಗಿ ಮುಖ್ಯಮಂತ್ರಿಗಳು ವರದಿ ತಿರಸ್ಕರಿಸಬೇಕು ಎಂದು ಆಗ್ರಹಿಸಿದರು. ಸಮುದಾಯಕ್ಕೆ ಸಂಬಂಧಿಸಿದಂತೆ ಪ್ರೊ. ಅನ್ನಪೂರ್ಣಮ್ಮನವರ ವರದಿಯನ್ನು ಜಾರಿಗೊಳಿಸಿ ಮಡಿವಾಳರನ್ನು ಪರಿಶಿಷ್ಟ ಜಾತಿಗೆ ಸೇರ್ಪಡೆ ಮಾಡಬೇಕು. ಈ ಕುರಿತು ಈಗಾಗಲೇ ಜಿಲ್ಲಾಧಿಕಾರಿ ಹಾಗೂ ಇನ್ನಿತರರಿಗೆ ಮನವಿ ಸಲ್ಲಿಸಲಾಗಿದೆ. ಕೂಡಲೇ ಈ ಬಗ್ಗೆ ಗಮನಹರಿಸದಿದ್ದಲ್ಲಿ ಪ್ರತಿಭಟನೆ ಹಾಗೂ ಮುಂಬರುವ ಚುನಾವಣೆ ಬಹಿಷ್ಕಾರದಂತಹ ಕಠಿಣ ನಿರ್ಧಾರ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು. ಪದಾಧಿಕಾರಿಗಳಾದ ಎಸ್.ಜೆ. ಪ್ರಶಾಂತ್, ಎಸ್.ಮಾದುರಾಜ್, ದುದ್ದಗೆರೆ ಶಿವಣ್ಣ, ದುದ್ದಗೆರೆ ಜಯರಾಂ, ಬೆಳವಾಡಿ ಮಾದೇವಣ್ಣ ಮತ್ತಿತರರಿದ್ದರು.

ಕರಸೇವಕ ಶ್ರೀಕಾಂತ್ ಪೂಜಾರಿ ಜೈಲಿನಿಂದ ಬಿಡುಗಡೆ



ಹುಬ್ಬಳ್ಳಿ,ಜ.6–ಹುಬ್ಬಳ್ಳಿಯಲ್ಲಿ 1992ರಲ್ಲಿ ನಡೆದ ರಾಮಜನ್ಮ ಭೂಮಿ ಕುರಿತ ಹೋರಾಟದಲ್ಲಿ ಭಾಗಿಯಾಗಿದ್ದ ಕರಸೇವಕ ಶ್ರೀಕಾಂತ ಪೂಜಾರಿಯನ್ನು 31 ವರ್ಷಗಳ ನಂತರ ರಾಮಮಂದಿರ ಉದ್ಘಾಟನೆ ವೇಳೆಗೆ ಕಾಂಗ್ರೆಸ್ ಸರ್ಕಾರ ಬಂಧಿಸಿ ಜೈಲಿಗಟ್ಟಿತ್ತು. ಆದರೆ, ಒಂದು ವಾರ ಕಾಲ ಜೈಲಿನಲ್ಲಿದ್ದ ಶ್ರೀಕಾಂತ ಪೂಜಾರಿ ಅವರಿಗೆ ನಿನ್ನೆ ಜಾಮೀನು ಲಭ್ಯವಾಗಿದ್ದು, ಇಂದು ಜೈಲಿನಿಂದ ಬಿಡುಗಡೆ ಮಾಡಲಾಗಿದೆ.

ಜೈಲಿನಿಂದ ಬಿಡುಗಡೆಯಾಗಿ ಹೊರಬಂದು ಮಾಧ್ಯಮಗಳೊಂದಿಗೆ ಮಾತನಾಡಿದ ಶ್ರೀಕಾಂತ ಪೂಜಾರಿ, ಹುಬ್ಬಳ್ಳಿಯ ಪೊಲೀಸರು ಮಾರ್ಕೆಟ್‌ಗೆ ಕರೆದುಕೊಂಡು ಹೋಗುವುದಾಗಿ ತಿಳಿಸಿ ಡಿ.29ರಂದು ನನ್ನನ್ನು ಬರಲು ಹೇಳಿದರು. ನಾನು ಬೆಳಗಾವಿಯಲ್ಲಿದ್ದವನು ಬಂದು ಪೊಲೀಸರನ್ನು ಭೇಟಿಯಾದಾಗ ಜೈಲಿಗೆ ಕರೆದುಕೊಂಡು ಹೋದರು. ನನಗೆ ಯಾವುದೇ ನೋಟಿಸ್ ಅಥವಾ ಸಮನ್ಸ್ ಕೂಡ ನೀಡದೇ ಅರೆಸ್ಟ್ ಮಾಡಿದ್ದಾರೆ ಎಂದರು.

ನನ್ನ ಮೇಲೆ ಯಾವುದೇ ಕೇಸ್‌ಗಳಿಲ್ಲ ಎಂದು ಹೇಳಿದರೂ ಕೇಳಿದೆ, ನಿಂದು ಜಾಸ್ತಿ ಆಗಿದೆ ಮಗನಾ ಜೈಲಿಗೆ ನಡಿ ಎಂದು ಬಂಧಿಸಿದರು. ನನ್ನ ಮೇಲಿರುವ ಎಲ್ಲ ಕೇಸ್‌ಗಳು ಖುಲಾಸೆ ಮಾಡಿಕೊಂಡೇ ನಾನು ಜೈಲಿನಿಂದ ಹೊರಗಿದ್ದೇನೆ. ಆದರೆ, ಈ ಕೇಸನ್ನು ಮುಂದಿಟ್ಟುಕೊಂಡು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ನಾನು ಜೈಲಿಗೆ ಹೋದ ನಂತರ ಬಿಜೆಪಿ ನಾಯಕರು, ಮುಖಂಡರು, ಹಿಂದೂ ಸಂಘಟನೆಗಳ ಕಾರ್ಯಕರ್ತರು ಪ್ರತಿಭಟನೆ ಮಾಡಿ ಬಿಡುಗಡೆಗೆ ಆಗ್ರಹಿಸಿದ್ದಾರೆ. ಅವರೆಲ್ಲರಿಗೂ ನಾನು ಧನ್ಯವಾದ ಹೇಳುತ್ತೇನೆ. ಇನ್ನು ಜ.22ರಂದು ನಡೆಯುವ ಅಯೋಧ್ಯೆಯ ರಾಮ ಮಂದಿರ ಉದ್ಘಾಟನಾ ಕಾರ್ಯಕ್ರಮಕ್ಕೂ ನಾನು ಹೋಗುತ್ತೇನೆ ಎಂದು ತಿಳಿಸಿದರು.

ಜ.5ರಂದೇ ಜಾಮೀನು ಮಂಜೂರು: ಹುಬ್ಬಳ್ಳಿಯ 1ನೇ ಜಿಲ್ಲಾ ಹೆಚ್ಚುವರಿ ನ್ಯಾಯಾಲಯದಿಂದ ಜ.5ರಂದು ಶ್ರೀಕಾಂತ ಪೂಜಾರಿಗೆ ಜಾಮೀನು ಮಂಜೂರು ಮಾಡಲಾಗಿತ್ತು. ಆದರೆ, ನಿನ್ನೆ ಜಾಮೀನು ವಾರಂಟ್ ಪೊಲೀಸರ ಕೈಗೆ ತಲುಪುವುದು ವಿಳಂಬವಾದ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆ ಬಿಡುಗಡೆ ಮಾಡಲಾಗಿದೆ.

ಮೈಸೂರಲ್ಲಿ ವೈಭವದಿಂದ ನೆರವೇರಿದ ಇಸ್ಕಾನ್‌ನ ಶ್ರೀಕೃಷ್ಣ ಬಲರಾಮ ರಥಯಾತ್ರೆ

ರಥಯಾತ್ರೆಯು ಆಧ್ಯಾತ್ಮಿಕ ಮೌಲ್ಯ ಬಿತ್ತಲಿದೆ; ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ

ಮೈಸೂರು,ಜ.6(ಪಿಎಂ)–ಇಸ್ಕಾನ್ ಮೈಸೂರು ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ ಶ್ರೀಕೃಷ್ಣ ಬಲರಾಮರ ರಥಯಾತ್ರೆಯು ಅಪಾರ ಭಕ್ತರ ನಡುವೆ ವೈಭವದಿಂದ ನೆರವೇರಿತು. ಶ್ರೀಕೃಷ್ಣ ಬಲರಾಮರ ವಿಗ್ರಹಗಳನ್ನು ಹೊತ್ತ ಬೃಹತ್ ರಥವು ಮೈಸೂರಿನ ಹೃದಯ ಭಾಗದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಭಕ್ತರು ಭಕ್ತಿಭಾವದ ಪರಾಕಾಷ್ಠೆ ಮೆರೆಯುವಂತಾಯಿತು.

ಮೈಸೂರು ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಎದುರು ಇಸ್ಕಾನ್ ಮೈಸೂರು ಅಧ್ಯಕ್ಷ ಶ್ರೀಸ್ತೋಕ ಕೃಷ್ಣಸ್ವಾಮಿ ಅವರ ಸಾನ್ನಿಧ್ಯದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಇನ್ನಿತರ ಗಣ್ಯರು ರಥಯಾತ್ರೆಗೆ ಚಾಲನೆ ನೀಡಿದರು.

ಇದಕ್ಕೂ ಮುನ್ನ ಇಲ್ಲಿ ಹಮ್ಮಿಕೊಂಡಿದ್ದ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಬಿ.ವೈ.ವಿಜಯೇಂದ್ರ ಮಾತನಾಡಿ, ಇಸ್ಕಾನ್ ಪ್ರತಿವರ್ಷ ಕೂಡ ಶ್ರೀಕೃಷ್ಣ ಬಲರಾಮರ ರಥಯಾತ್ರೆಯನ್ನು ಅತ್ಯಂತ ಉತ್ಸಾಹದಿಂದ ನಡೆಸುತ್ತಿದೆ. ಈ ಬಾರಿ 26ನೇ ವರ್ಷದ ರಥಯಾತ್ರೆ ನಡೆಯುತ್ತಿದ್ದು, ಮೈಸೂರಿನ ರಾಜಬೀದಿಗಳಲ್ಲಿ ಸಂಚರಿಸುವ ಮೂಲಕ ಭಕ್ತರಲ್ಲಿ ಆಧ್ಯಾತ್ಮಿಕ ಮೌಲ್ಯಗಳನ್ನು ಬಿತ್ತಲಿದೆ. ಇದೊಂದು ಸಂತಸ ಮತ್ತು ಭಕ್ತಿಯ ಸಂಕೇತ ಎಂದು ಬಣ್ಣಿಸಿದರು.

ಕಳೆದ ವಾರವಷ್ಟೇ ಇಸ್ಕಾನ್ ಅಧ್ಯಕ್ಷರಾದ ಶ್ರೀ ಮಧು ಪಂಡಿತ ದಾಸರನ್ನು ಬೆಂಗಳೂರಿನ ಇಸ್ಕಾನ್ ದೇವಸ್ಥಾನದಲ್ಲಿ ಭೇಟಿ ಮಾಡಿದ್ದೆ. ಅವರ ಆಶೀರ್ವಾದ ಮತ್ತು ಮಾರ್ಗದರ್ಶನ ಪಡೆದುಕೊಂಡೆ. ಇದೇ ವೇಳೆ ಅವರ ಜೊತೆಯಲ್ಲಿ ಕೂತು ಮಧ್ಯಾಹ್ನದ ಭೋಜನ ಸ್ವೀಕರಿಸುವ ಸೌಭಾಗ್ಯ ಒದಗಿಬಂದಿತು ಎಂದು ಹರ್ಷ ವ್ಯಕ್ತಪಡಿಸಿದರು. ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಮೈಸೂರಿನಲ್ಲಿ ಇಸ್ಕಾನ್ ನನ್ನ ಕೆಆರ್ ಕ್ಷೇತ್ರದಲ್ಲಿದ್ದು, ಇದು ನಮ್ಮ ಸೌಭಾಗ್ಯ ಎಂದು ನುಡಿದರು.

ಇಸ್ಕಾನ್ ಮೈಸೂರು ಅಧ್ಯಕ್ಷ ಶ್ರೀ ಸ್ತೋಕ ಕೃಷ್ಣಸ್ವಾಮಿ ಮಾತನಾಡಿ, ಇಸ್ಕಾನ್ ಸಂಸ್ಥಾಪಕ ಶ್ರೀಲ ಪ್ರಭುಪಾದರು 1967ರಲ್ಲಿ ಈ ರಥಯಾತ್ರೆಯನ್ನು ಅಮೆರಿಕದಲ್ಲಿ ಪ್ರಾರಂಭ ಮಾಡಿದರು. ಆ ಮೂಲಕ ಈ ಉತ್ಸವಕ್ಕೆ ಆನಂದದ ಉತ್ಸವವೆಂದು ಕರೆದರು. ಈ ಯಾತ್ರೆಯಲ್ಲಿ ದೇವತೆಗಳು ದೇವಸ್ಥಾನದಿಂದ ಹೊರಬಂದು ಭಕ್ತರಿಗೆ ದರ್ಶನ ನೀಡುವುದು ವಿಶೇಷ. ಹಾಗಾಗಿ ಇದು ದೇವರೇ ಭಕ್ತರಲ್ಲಿಗೆ ಬರುವ ಉತ್ಸವ. ಆ ಮೂಲಕ ಭಕ್ತರ ಮನಸ್ಸಿನಲ್ಲಿರುವ ಎಲ್ಲಾ ಕಲ್ಮಶವನ್ನು ಭಗವಂತನು ಸಂಪೂರ್ಣವಾಗಿ ತೆಗೆದು ಅವರ ದುಃಖಗಳನ್ನು ದೂರ ಮಾಡುತ್ತಾನೆ ಎಂದು ನುಡಿದರು. ರಥಯಾತ್ರೆ ವೇಳೆ ಭಕ್ತರಿಗೆ ಪ್ರಸಾದ ವಿತರಣೆ ಮಾಡಲಾಗುತ್ತದೆ. ಕೃಷ್ಣ ಈ ಪ್ರಸಾದ ಸವಿದಿರುತ್ತಾನೆ. ಹಾಗಾಗಿ ಪ್ರಸಾದಕ್ಕೆ ಕೃಷ್ಣನ ಎಂಜಲು ಮಿಶ್ರಣವಾಗಿರುತ್ತದೆ. ಕೃಷ್ಣನ ಎಂಜಲು ತೆಗೆದುಕೊಂಡರೆ ನಮ್ಮಲ್ಲಿ ಕೃಷ್ಣಪ್ರೇಮ ಬರಲಿದೆ. ಆ ಮೂಲಕ ಕೃಷ್ಣನು ನಮ್ಮ ಬದುಕನ್ನು ಆನಂದಮಯ ಮಾಡಲಿದ್ದಾನೆ ಎಂದು ಹೇಳಿದರು.

ದೇವಾಲಯ ತಲುಪಿ ಸಮಾಪ್ತಿ: ಚಾಮರಾಜ ಒಡೆಯರ್ ವೃತ್ತ, ದೊಡ್ಡ ಗಡಿಯಾರ ವೃತ್ತ, ಗಾಂಧಿ ಚೌಕ, ಚಿಕ್ಕ ಗಡಿಯಾರ ವೃತ್ತ, ಡಿ.ದೇವರಾಜ ಅರಸು ರಸ್ತೆ, ನಾರಾಯಣಶಾಸ್ತ್ರಿ ರಸ್ತೆ, ಚಾಮರಾಜ ಜೋಡಿ ರಸ್ತೆ, ರಾಮಸ್ವಾಮಿ ವೃತ್ತ, ಜೆಎಲ್‌ಬಿ ರಸ್ತೆ ಸೇರಿದಂತೆ ಮೊದಲಾದ ರಸ್ತೆಗಳಲ್ಲಿ ಸಂಚರಿಸಿದ ರಥಯಾತ್ರೆಯು ಜಯನಗರದ ಇಸ್ಕಾನ್ ದೇವಸ್ಥಾನ ತಲುಪಿ ಸಮಾಪ್ತಿಗೊಂಡಿತು. ವಿಧಾನಪರಿಷತ್ ಮಾಜಿ ಸದಸ್ಯ ಗೋ.ಮಧುಸೂದನ್, ಮಾಜಿ ಸಚಿವ ಎನ್.ಮಹೇಶ್, ಮಾಜಿ ಶಾಸಕ ಎಲ್.ನಾಗೇಂದ್ರ ಮತ್ತಿತರರ ಸಭಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು





ಮೈಸೂರಿನಲ್ಲಿ ಶನಿವಾರ ಇಸ್ಕಾನ್‌ನ ಶ್ರೀಕೃಷ್ಣ ಬಲರಾಮರ ರಥಯಾತ್ರೆ ಹೊರಡುವ ಮುನ್ನ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ರಥದ ಮುಂದೆ ಸ್ವಚ್ಛತಾ ಕೆಲಸ ಮಾಡುತ್ತಿರುವುದು. ಮತ್ತೊಂದು ಚಿತ್ರದಲ್ಲಿ ಅಪಾರ ಭಕ್ತರ ನಡುವೆ ರಥಯಾತ್ರೆ ವೈಭವದಿಂದ ಸಾಗುತ್ತಿರುವುದನ್ನು ಕಾಣಬಹುದು.

ಮಥುರಾದಲ್ಲಿ ಕೃಷ್ಣಮಂದಿರ ನಿರ್ಮಾಣ ಪ್ರಕ್ರಿಯೆ ಪ್ರಾರಂಭ: ಮಾಜಿ ಎಂಎಲ್‌ಸಿ ಗೋ.ಮಧುಸೂದನ್

ಮೈಸೂರು,ಜ.6(ಪಿಎಂ)– ಕೆಲವೇ ದಿನಗಳಲ್ಲಿ ಅಯೋಧ್ಯೆಯಲ್ಲಿ ಭವ್ಯವಾದ ರಾಮಮಂದಿರ ಉದ್ಘಾಟನೆಯಾಗಲಿದ್ದು, ಮಥುರಾದಲ್ಲಿ ಕೃಷ್ಣ ಮಂದಿರ ನಿರ್ಮಾಣದ ಪ್ರಕ್ರಿಯೆಯೂ ಈಗಾಗಲೇ ಪ್ರಾರಂಭವಾಗಿದೆ ಎಂದು ವಿಧಾನಪರಿಷತ್ ಮಾಜಿ ಸದಸ್ಯ ಗೋ.ಮಧುಸೂದನ್ ಹೇಳಿದರು.

ಶ್ರೀಕೃಷ್ಣ ಬಲರಾಮರ ರಥಯಾತ್ರೆ ಉದ್ಘಾಟನೆಯ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ 26 ವರ್ಷಗಳಿಂದ ಮೈಸೂರಿನಲ್ಲಿ ನಡೆಯುತ್ತಿರುವ ಈ ರಥಯಾತ್ರೆಯಲ್ಲಿ ಭಾಗವಹಿಸುತ್ತಿದ್ದೇನೆ. ಇನ್ನು ಕೆಲವೇ ದಿನಗಳಲ್ಲಿ ಅಯೋಧ್ಯೆಯಲ್ಲಿ ಭವ್ಯ ರಾಮ ಮಂದಿರದ ಉದ್ಘಾಟನೆಯಾಗಲಿದೆ. ಆ ನಂತರ ಏನು ಎಂದು ಯೋಚನೆ ಮಾಡುತ್ತಿದ್ದೆವು. ಆದರೆ ಭಗವಂತ ಅದಾಗಲೇ ಟೈಮ್‌ಟೇಬಲ್ ಸೆಟ್ ಮಾಡಿದ್ದಾನೆ ಮಥುರಾದಲ್ಲಿ ಕೃಷ್ಣಮಂದಿರ ಸಹ ಉದ್ಘಾಟನೆ ಮಾಡಲು ಅಗತ್ಯ ಪ್ರಕ್ರಿಯೆ ಈಗಾಗಲೇ ಪ್ರಾರಂಭವಾಗಿದೆ. ವಿಶ್ವನಾಥನ ಮಂದಿರ ಸಂಬಂಧ ಬಹುತೇಕ ಮುಗಿಯುವ ಹಂತಕ್ಕೆ ಬಂದಿದೆ ಎಂದು ತಿಳಿಸಿದರು. ಕೃಷ್ಣ ಜನ್ಮಭೂಮಿಯಲ್ಲಿ ಪವಿತ್ರವಾದ ದೇವಸ್ಥಾನ ಸಹ ಆಗುವಂತಹ ದಿನಗಳನ್ನು ನಾವು ನೋಡುತ್ತಿದ್ದೇವೆ. ಇಂದು ರಥಯಾತ್ರೆಯಲ್ಲಿ ಭಗವಂತನಲ್ಲಿ ವಿಶೇಷ ಪ್ರಾರ್ಥನೆ ಮಾಡುತ್ತೇನೆ. ಇದಕ್ಕೆ ಇರುವ ಎಲ್ಲಾ ಅಡೆತಡೆ ದೂರ ಮಾಡಬೇಕೆಂದು ಪ್ರಾರ್ಥಿಸುತ್ತೇನೆ. ನೀನು (ಕೃಷ್ಣ) ಯಾರ್‍ಯಾರನ್ನು ಮರ್ದನ ಮಾಡಿದೆಯೋ, ಹೇಗೇಗೆ ಮರ್ದನ ಮಾಡಿದೆಯೋ ಎಲ್ಲವನ್ನೂ ನಾವು ಕಂಡಿದ್ದೇವೆ. ಇದಕ್ಕೆ ಯಾವುದೇ ತೊಂದರೆ ಇಲ್ಲದ ರೀತಿಯಲ್ಲಿ ನಿನ್ನದೇ ಮಂದಿರ ಕಟ್ಟುವಂತಹ ಸೌಭಾಗ್ಯವನ್ನು ನಮಗೆ ಕೊಡು ಎಂದು ಪ್ರಾರ್ಥನೆ ಮಾಡುತ್ತೇನೆ ಎಂದರು. ಪುರಿ ಜಗನ್ನಾಥದಲ್ಲಿ ಜಗನ್ನಾಥನ ರಥಯಾತ್ರೆ ಹೊರಡುವ ಮುನ್ನ ಅಲ್ಲಿನ ಮಹಾರಾಜರು ಬಂದು ರಥದ ಮುಂದೆ ಸ್ವಚ್ಛತಾ ಕೆಲಸ ಮಾಡುತ್ತಿದ್ದರು. ಅದರ ಮುಂದುವರಿಕೆಯನ್ನೇ ನಮ್ಮ ನೆಚ್ಚಿನ ಪ್ರಧಾನಿ ಮೋದಿ ಪೊರಕೆ ಹಿಡಿದು ಮಾಡುತ್ತಿದ್ದಾರೆ. ಅಂತೆಯೇ ನಿಮ್ಮ ಕೈಯಿಂದ ರಥದ ಮುಂದೆ ಸ್ವಚ್ಛತಾ ಕೆಲಸ ಮಾಡಿ, ಮುಂದೆ ನೀವು ರಾಜರಾಗುವಂತಹ ಸೌಭಾಗ್ಯ ಬರಲಿ ಎಂದು ವಿಜಯೇಂದ್ರರಿಗೆ ಮಹತ್ವಾಕಾಂಕ್ಷೆ ಮಾತುಗಳನ್ನಾಡಿದರು.

ಆಯ್ತು ಆಯ್ತು...: ಇದಕ್ಕೂ ಮುನ್ನ ಶಾಸಕ ಟಿ.ಎಸ್.ಶ್ರೀವತ್ಸ ಅವರ ಭಾಷಣ ಮುಗಿಯುತ್ತಿದ್ದಂತೆ ವಿಜಯೇಂದ್ರ ಅವರು ನಿರ್ಗಮಿಸುತ್ತಾರೆ ಎಂದು ಮೈಕ್‌ನಲ್ಲಿ ಹೇಳಲಾಯಿತು. ಆಗ ವಿಜಯೇಂದ್ರ ಎದ್ದು ನಿಲ್ಲುತ್ತಿದ್ದಂತೆ ಗೋ.ಮಧುಸೂದನ್, ಇನ್ನು ಸ್ವಲ್ಪ ಹೊತ್ತು ಇರುವಂತೆ ಕೋರುತ್ತಾ ಮಾತನಾಡುತ್ತಲೇ ಇದ್ದರು. ಆಗ, ವಿಜಯೇಂದ್ರ, ಆಯ್ತು ಆಯ್ತು... ಎಂದು ನಯವಾಗಿಯೇ ಹೇಳುವ ಮೂಲಕ ಅವರ ಕೋರಿಕೆಯನ್ನು ಗೌರವಿಸಿ ಆಸೀನರಾದರು. ಅಲ್ಲದೆ, ರಥಕ್ಕೆ ಚಾಲನೆ ನೀಡುವ ವೇಳೆ ಪೊರಕೆ ಹಿಡಿದು ರಥದ ಮುಂದೆ ಸ್ವಚ್ಛತಾ ಕಾರ್ಯವನ್ನೂ ಮಾಡಿದರು ವಿಜಯೇಂದ್ರ.

ಬಾಲಕಿ ಮೇಲೆ ಅತ್ಯಾಚಾರವೆಸಗಿದ ಕಾಮುಕನಿಗೆ 20 ವರ್ಷ ಜೈಲು ಶಿಕ್ಷೆ

ಮಡಿಕೇರಿ,ಜ.6– ಸುಂಟಿಕೊಪ್ಪ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಪ್ರಾಪ್ತ ಬಾಲಕಿಯ ಮೇಲಿನ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅಪರಾಧಿಗೆ ಪೋಕ್ಸೋ ಹಾಗೂ ಎಸ್.ಸಿ, ಎಸ್.ಟಿ. ಕಾಯ್ದೆಯಡಿ ಅಪರಾಧವೆಸಗಿದ್ದಕ್ಕಾಗಿ 20 ವರ್ಷಗಳ ಶಿಕ್ಷೆ ವಿಧಿಸಿ 1ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ತೀರ್ಪು ನೀಡಿದೆ. ಅಬ್ದುಲ್ ನಾಸಿರ್ ಎಂಬಾತನೇ ಶಿಕ್ಷೆಗೆ ಗುರಿಯಾದ ಅಪರಾಧಿಯಾಗಿದ್ದು, ನೊಂದ ಬಾಲಕಿಗೆ ಸರ್ಕಾರ ಸೂಕ್ತ ಪರಿಹಾರವನ್ನು ನೀಡಬೇಕೆಂದು ಮಾನ್ಯ ನ್ಯಾಯಾಲಯ ಆದೇಶಿಸಿದೆ.

ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದ ಪರಿಶಿಷ್ಟ ಪಂಗಡಕ್ಕೆ ಸೇರಿದ 11 ವರ್ಷ ಪ್ರಾಯದ ಬಾಲಕಿಯನ್ನು ಸಲುಗೆಯಿಂದ ಮಾತನಾಡಿಸುತ್ತಿದ್ದ ಅಬ್ದುಲ್ ನಾಸಿರ್ ತನ್ನ ಮೊಬೈಲ್ ನಂಬರ್ ನೀಡಿ ನಂತರ ಒಂದು ದಿನ ಆಕೆಯನ್ನು ತನ್ನ ಮನೆಗೆ ಮಧ್ಯರಾತ್ರಿ ಬರಲು ಹೇಳಿ ತನ್ನ ಮನೆಯಲ್ಲಿ ಆಕೆಯನ್ನು ಎರಡು ಬಾರಿ ಅತ್ಯಾಚಾರ ಎಸಗಿದ್ದ. ಆಕೆಯನ್ನು ಪೋಷಕರು ವಿಚಾರಿಸಿದಾಗ ತನ್ನ ಮೇಲೆ ಅಬ್ದುಲ್ ನಾಸಿರ್ ಅತ್ಯಾಚಾರ ಎಸಗಿದ ವಿಚಾರವನ್ನು ತಿಳಿಸಿದ್ದಳು. ಈ ಕುರಿತು ನೊಂದ ಬಾಲಕಿಯ ತಾಯಿ ಸುಂಟಿಕೊಪ್ಪ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಸೋಮವಾರಪೇಟೆಯ ಅಂದಿನ ಡಿವೈಎಸ್‌ಪಿ ಹೆಚ್.ಎಂ.ಶೈಲೇಂದ್ರ ಅವರು ಪ್ರಕರಣದ ತನಿಖೆ ನಡೆಸಿ ಆರೋಪಿ ವಿರುದ್ಧ ದೋಷಾರೋಪಣಾ ಪತ್ರವನ್ನು 1ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶರಾದ ಪ್ರಶಾಂತಿ ಜಿ. ಅವರು ನೊಂದ ಬಾಲಕಿಯ ಸಾಕ್ಷ್ಯ, ವೈದ್ಯಕೀಯ ಸಾಕ್ಷ್ಯ ಹಾಗೂ ಪ್ರಾಸಿಕ್ಯೂಷನ್ ಪರ ಹಾಜರು ಪಡಿಸಿದ ಇತರ ಸಾಕ್ಷ್ಯಾಧಾರಗಳ ಮೇಲೆ ಆರೋಪಿ ಕೃತ್ಯವೆಸಗಿರುವುದು ನಿಸ್ಸಂಶಯವಾಗಿ ಸಾಬೀತಾಗಿದೆ ಎಂದು ತೀರ್ಪು ನೀಡಿ 20 ವರ್ಷಗಳ ಶಿಕ್ಷೆ ಪ್ರಕಟಿಸಿದ್ದಾರೆ. ಈ ಪ್ರಕರಣದಲ್ಲಿ ಪ್ರಾಸಿಕ್ಯೂಷನ್ ಪರ ಸರ್ಕಾರಿ ಅಭಿಯೋಜಕ ದೇವೇಂದ್ರ.ಎನ್.ಪಿ. ಅವರು ವಾದ ಮಂಡಿಸಿದ್ದರು.

ಹುಲಿ ದಾಳಿಗೆ ಹಸು ಬಲಿ



ಮಡಿಕೇರಿ,ಗೋಣಿಕೊಪ್ಪ,ಜ.6– ದಕ್ಷಿಣ ಕೊಡಗಿನಲ್ಲಿ ಮತ್ತೆ ಹುಲಿ ಉಪಟಳ ಕಂಡು ಬಂದಿದ್ದು, ಹಸುವೊಂದು ಸಾವನ್ನಪ್ಪಿದೆ. ಪೊನ್ನಂಪೇಟೆ ತಾಲೂಕಿನ ನಿಡುಗಂಬ ಗ್ರಾಮದಲ್ಲಿ ಹಾಡಹಗಲೇ ದಾಳಿ ಮಾಡಿದ ಹುಲಿಗೆ ಹಸು ಬಲಿಯಾಗಿದೆ.

ಸ್ಥಳೀಯ ನಿವಾಸಿ ಚೆನಿಯಪಂಡ ಬೋಪಣ್ಣಿ ಬೋಪಯ್ಯ ಎಂಬುವವರಿಗೆ ಸೇರಿದ ಹಸುವನ್ನು ಮೇಯಲು ಗದ್ದೆಯಲ್ಲಿ ಬಿಟ್ಟಿದ್ದ ಸಂದರ್ಭ ಹುಲಿ ದಾಳಿ ಮಾಡಿ ಕೊಂದು ಹಾಕಿದೆ. ಗ್ರಾಮದಲ್ಲಿ ಆತಂಕ ಮನೆ ಮಾಡಿದ್ದು, ಅರಣ್ಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದರು. ತಕ್ಷಣ ಹುಲಿಯನ್ನು ಸೆರೆ ಹಿಡಿಯಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಹುಬ್ಬಳ್ಳಿ ಕರಸೇವಕನ ಬಂಧನ ವಿರೋಧಿಸಿ

ಹಿಂದೂ ಜಾಗರಣಾ ವೇದಿಕೆಯಿಂದ ಪ್ರತಿಭಟನೆ

ಮಡಿಕೇರಿ,ಜ.6– ಹುಬ್ಬಳ್ಳಿಯಲ್ಲಿ ಕರ ಸೇವಕರನ್ನು ಬಂಧಿಸಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಮತ್ತು ಪೊಲೀಸರ ಕ್ರಮವನ್ನು ಖಂಡಿಸಿ ಹಿಂದೂ ಜಾಗರಣಾ ವೇದಿಕೆಯ ಕಾರ್ಯಕರ್ತರು ನಗರದ ಡಿವೈಎಸ್‌ಪಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ನಗರದ ಡಿವೈಎಸ್‌ಪಿ ಕಚೇರಿ ಮುಂಭಾಗ ವೇದಿಕೆಯ ಜಿಲ್ಲಾ ಸಂಚಾಲಕ ಕುಕ್ಕೇರ ಅಜಿತ್ ಅವರ ನೇತೃತ್ವದಲ್ಲಿ ಸಂಘಟನೆಯ ಕಾರ್ಯಕರ್ತರು ಮತ್ತು ಬಿಜೆಪಿ ಪ್ರಮುಖರು ಸಮಾವೇಶಗೊಂಡು ಕಾಂಗ್ರೆಸ್ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. 'ನಾವು ರಾಮಭಕ್ತರು, ನಮ್ಮನ್ನು ಕೂಡ ಬಂಧಿಸಿ' ಎಂದು ಘೋಷಣೆಗಳನ್ನು ಕೂಗಿದರು.

ರಾಮ ಜನ್ಮಭೂಮಿ ಹೋರಾಟದ ಹಳೆಯ ಪ್ರಕರಣಗಳಿಗೆ ಮರುಜೀವ ನೀಡುವ ಮೂಲಕ ಹುಬ್ಬಳ್ಳಿಯಲ್ಲಿ ರಾಮಭಕ್ತರನ್ನು ಬಂಧಿಸಿರುವ ಕಾಂಗ್ರೆಸ್ ಸರ್ಕಾರ ಹಿಂದೂ ವಿರೋಧಿ ಧೋರಣೆಯನ್ನು ಅನುಸರಿಸುತ್ತಿದೆ. ಸಮಾಜ ಘಾತುಕ ಮತಾಂಧ ಸಂಘಟನೆಗಳ ಅಪರಾಧ ಪ್ರಕರಣಗಳನ್ನು ಹಿಂದಕ್ಕೆ ಪಡೆದಿರುವ ಸರ್ಕಾರ ಹಿಂದೂಗಳ ವಿಚಾರದಲ್ಲಿ ಭಾವನೆಗಳನ್ನು ಕೆಣಕುತ್ತಿದೆ. ಕಾಂಗ್ರೆಸ್ ಪಕ್ಷದ ಮುಖಂಡ ಬಿ.ಕೆ.ಹರಿಪ್ರಸಾದ್ ಅವರು ಕೋಮು ಪ್ರಚೋದನೆಯ ಹೇಳಿಕೆ ನೀಡಿ ಸಮಾಜದಲ್ಲಿ ಅಶಾಂತಿ ಮೂಡಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ವೇದಿಕೆಯ ಪ್ರಮುಖರು ಆರೋಪಿಸಿದರು.



ಹುಬ್ಬಳ್ಳಿಯಲ್ಲಿ ಕರ ಸೇವಕರನ್ನು ಬಂಧಿಸಿರುವುದನ್ನು ಖಂಡಿಸಿ ಹಿಂದೂ ಜಾಗರಣಾ ವೇದಿಕೆಯ ಕಾರ್ಯಕರ್ತರು ಮಡಿಕೇರಿ ಡಿವೈಎಸ್‌ಪಿ ಕಚೇರಿ ಮುಂಭಾಗ ಶನಿವಾರ ಪ್ರತಿಭಟನೆ ನಡೆಸಿದರು.

ಶ್ರೀರಾಮ ಮಂದಿರಕ್ಕಾಗಿ ಹೋರಾಡಿದ ರಾಮಭಕ್ತರನ್ನು ಮಂದಿರ ಉದ್ಘಾಟನೆಯ ಶುಭ ಸಂದರ್ಭದಲ್ಲೇ ಬಂಧಿಸುತ್ತಿರುವುದು ಖಂಡನೀಯ. ಇದೀಗ ದತ್ತ ಪೀಠದ ವಿಚಾರವನ್ನು ಮುಂದಿಟ್ಟುಕೊಂಡು ಮರು ತನಿಖೆಯ ಹುನ್ನಾರ ನಡೆಸುತ್ತಿದೆ. ರಾಜ್ಯ ಸರ್ಕಾರ ಕಾನೂನು ಮೀರಿ ವರ್ತಿಸುತ್ತಿದ್ದು, ಹಿಂದೂಗಳ ವಿರುದ್ಧದ ಧೋರಣೆ ಹೀಗೆ ಮುಂದುವರೆದರೆ ಹಿಂದೂ ಜಾಗರಣಾ ವೇದಿಕೆ ಹೋರಾಟವನ್ನು ತೀವ್ರಗೊಳಿಸಲಿದೆ ಎಂದು ವೇದಿಕೆಯ ಜಿಲ್ಲಾ ಸಂಚಾಲಕ ಕುಕ್ಕೇರ ಅಜಿತ್ ಎಚ್ಚರಿಕೆ ನೀಡಿದರು. ಬಳಿಕ ಮಡಿಕೇರಿ ಗ್ರಾಮಾಂತರ ಠಾಣಾ ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ ಅವರ ಮೂಲಕ ಪೊಲೀಸ್ ಇಲಾಖೆಗೆ ಪ್ರತಿಭಟನೆಯ ಮನವಿ ಪತ್ರವನ್ನು ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ವೇದಿಕೆ ಸಹ ಸಂಚಾಲಕ ಚೇತನ್ ಶಾಂತಿ ನಿಕೇತನ, ನಗರ ಸಂಚಾಲಕ ದುರ್ಗೇಶ್, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಬಿನ್ ದೇವಯ್ಯ, ಪ್ರಧಾನ ಕಾರ್ಯದರ್ಶಿ ನಾಪಂಡ ಕಾಳಪ್ಪ, ನಗರಾಧ್ಯಕ್ಷ ಮನು ಮಂಜುನಾಥ್, ನಗರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ಎಸ್.ಸಿ.ಸತೀಶ್, ಸದಸ್ಯರಾದ ಉಮೇಶ್ ಸುಬ್ರಮಣಿ, ಕಾಳಚಂಡ ಅಪ್ಪಣ್ಣ, ಪ್ರಮುಖರಾದ ಬಿ.ಕೆ.ಜಗದೀಶ್, ರಮೇಶ್ ಹೊಳ್ಳ, ಕನ್ನಡ ಸಂಪತ್ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ನಾಪೋಕ್ಲುವಿನಲ್ಲಿ ಆಧ್ಯಾತ್ಮಿಕ ಸಂಗಮ

ನಾಪೋಕ್ಲು,ಜ.6– ಎಸ್‌ವೈಎಸ್ ಕೊಡಗು ಜಿಲ್ಲಾ ಸಮಿತಿಯ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಕಫ್ಲುಲ್ ವರಾ ಮಜ್ಲಿಸು ನ್ನೂರ್ ಬೃಹತ್ ಆಧ್ಯಾತ್ಮಿಕ ಸಂಗಮ ಕಾರ್ಯಕ್ರಮ ಶುಕ್ರವಾರ ಸಂಜೆ ಸ್ಥಳೀಯ ಮಾರುಕಟ್ಟೆ ಮೈದಾನದಲ್ಲಿ ವಿಜೃಂಭಣೆಯಿಂದ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಕೊಡಗು ಉಪ ಖಾಝಿಗಳಾದ ಅಬ್ದುಲ್ಲಾ ಉಸ್ತಾದ್ ಮಾತನಾಡಿ, ಆಧ್ಯಾತ್ಮಿಕ ಉಲಮಾ ಒಕ್ಕೂಟದ ಯುವಜನ ಘಟಕವಾದ ಸುನ್ನಿ ಯುವಜನ ಸಂಘ(SYS) ಕಳೆದ 70 ವರ್ಷಗಳಿಂದ ಧಾರ್ಮಿಕ ಮತ್ತು ಶೈಕ್ಷಣಿಕ ಹಾಗೂ ಜನಪರ ಸಮಾಜಮುಖಿ ಕಾರ್ಯಗಳನ್ನು ಯಶಸ್ವಿಯಾಗಿ ನಿರ್ವಹಿಸಿದ ಸಂಘಟನೆಯಾಗಿದೆ. ಶಾಂತಿ ಹಾಗೂ ಸಮಾಧಾನ ಮತ್ತು ಸಹಬಾಳ್ವೆ ಸಾರುವ ಧರ್ಮದ ವಿಶ್ವಾಸ ವಿಚಾರಗಳನ್ನು ಸಮಾಜಕ್ಕೆ ಸಮರ್ಪಿಸಿದ ಸಮಸ್ತ ಸಂಘಟನೆ ಎಂದು ತಮ್ಮ ಅನುಭವ ತಿಳಿಸಿದರು.

ಮಜ್ಲಿಸುನ್ನೂರ್ ನೇತೃತ್ವ ವಹಿಸಿದ್ದ ಪಾಣಕ್ಕಾಡ್ ಮುಹಿನ್ ಅಲಿ ಶಿಹಾಬ್ ತಂಙಳ್ ನೆರೆದ ಜನರನ್ನು ಉದ್ದೇಶಿಸಿ ಮಾತನಾಡಿ, ಆಧ್ಯಾತ್ಮಿಕವಾಗಿ ಜನ ಮನಸ್ಸುಗಳನ್ನು ಶುಚಿಗೊಳಿಸುವುದರ ಮೂಲಕ ಉತ್ತಮ ಸಮಾಜದ ನಿರ್ಮಾಣ ಸಾಧ್ಯ ಎಂದರು.

ಚೆರಿಯಪರಂಬು ದರ್ಗಾ ಝಿಯಾರತ್ ಹಿರಿಯ ವಿದ್ವಾಂಸರಾದ ಹುಸೈನ್ ಮುಸ್ಲಿಯಾರ್ ಕುಂಜಿಲ ಉಸ್ತಾದರು ನೇತೃತ್ವ ವಹಿಸಿದ್ದರು. ಜಿಲ್ಲೆಯ ವಿವಿಧೆಡೆಗಳಿಂದ ಕಾರ್ಯಕ್ರಮಕ್ಕೆ ಆಗಮಿಸಿದ್ದ ನೂರಾರು ಮಂದಿಯನ್ನು ಉದ್ದೇಶಿಸಿ ಮಹ್ ಮೂನ್ ಹುದವಿ ಕೇರಳ ಮುಖ್ಯ ಭಾಷಣ ಮಾಡಿದರು.



SYS ಕೊಡಗು ಜಿಲ್ಲಾ ಸಮಿತಿಯ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಕಫ್ಲುಲ್ ವರಾ ಮಜ್ಲಿಸುನ್ನೂರ್ ಬೃಹತ್ ಆಧ್ಯಾತ್ಮಿಕ ಸಂಗಮ ಕಾರ್ಯಕ್ರಮವನ್ನು ಕೊಡಗು ಉಪ ಖಾಝಿಗಳಾದ ಅಬ್ದುಲ್ಲಾ ಉಸ್ತಾದ್ ಉದ್ಘಾಟಿಸಿ, ಮಾತನಾಡಿದರು.

ಕಾರ್ಯಕ್ರಮದ ಮೊದಲಿಗೆ ಸ್ವಾಗತ ಸಮಿತಿ ಜನರಲ್ ಕನ್ವೀನರ್ ಹಮೀದ್ ಹಾಜಿ ಬೆಟ್ಟಗೇರಿ ಧ್ವಜಾರೋಹಣ ಮಾಡಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ವೈಎಸ್ ಕೊಡಗು ಜಿಲ್ಲಾ ಅಧ್ಯಕ್ಷರಾದ ಸಿಪಿಎಂ ಬಶೀರ್ ಹಾಜಿ ವಹಿಸಿದ್ದರು. ಪ್ರಾಸ್ತಾವಿಕ ಭಾಷಣವನ್ನು ಎಸ್‌ವೈಎಸ್ ಕೊಡಗು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಶ್ರಫ್ ಫೈಝಿ ನಿರ್ವಹಿಸಿದರು.

ಈ ಸಂದರ್ಭ ಮಾಜಿ ಎಂಎಲ್‌ಎ ಇಬ್ರಾಹಿಂ ಮಾಸ್ಟರ್ ಸುಂಟಿಕೊಪ್ಪ, ಜಿಲ್ಲಾ ಪರಿಷತ್ ಮಾಜಿ ಉಪಾಧ್ಯ ಪಿ.ಎಂ. ಖಾಸಿಂ, ವಕ್ ಬೋರ್ಡ್ ಮಾಜಿ ಅಧ್ಯಕ್ಷ ನಾಪೋಕ್ಲು ಪಟ್ಟಣ ಜುಮ್ಮಾ ಮಸೀದಿ ಅಧ್ಯಕ್ಷ ಎಂ.ಎಚ್ ಅಬ್ದುಲ್ ರೆಹಮಾನ್, ಬೋರ್ಡ್ ಮಾಜಿ ಅಧ್ಯಕ್ಷ ಯಾಕುಬ್, ನಾಪೋಕ್ಲು ಜುಮ್ಮಾ ಮಸೀದಿ ಮಾಜಿ ಅಧ್ಯಕ್ಷ ಮಹಮ್ಮದ್ ಹಾಜಿ, ನಾಪೋಕ್ಲು ಜಮಾ ಮಸೀದಿಯ ಮಾಜಿ ಅಧ್ಯಕ್ಷ ಪಿ.ಎಂ ಅಬ್ದುಲ್ ಅಝೀಜ್, ನಾಪೋಕ್ಲು ಗ್ರಾಪಂ ಮಾಜಿ ಉಪಾಧ್ಯಕ್ಷ ಹಾಲಿ ಸದಸ್ಯ ಮೊಹಮ್ಮದ್ ಟಿ.ಎ, ನಾಪೋಕ್ಲು ಪಂಚಾಯಿತಿ ಮಾಜಿ ಅಧ್ಯಕ್ಷ ಇಸ್ಮಾಯಿಲ್ ಕೆ.ಎ, ಹೊದ್ದೂರು ಗ್ರಾಪಂ ಸದಸ್ಯ ಮೈದು ಕೊಟ್ಟಮುಡಿ, ನಾಪೋಕ್ಲು ಪಂಚಾಯಿತಿ ಸದಸ್ಯ ಕುರೇಶಿ, ನಾಪೋಕ್ಲು ಉದ್ಯಮಿ ಮನ್ಸೂರ್ ಆಲಿ ಎಂ.ಎ, SYS ಸಂಘಟಕ ಪಿ ಎಮ್ ರಶೀದ್ ಸೇರಿದಂತೆ ಧರ್ಮ ಗುರುಗಳು ಹಾಗೂ ಇತರ ಸಂಘ ಸಂಸ್ಥೆಯ ಪದಾಧಿಕಾರಿಗಳು, ಸದಸ್ಯರು ಹಾಗೂ ಸಮುದಾಯ ಬಾಂಧವರು ಅಧಿಕ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

ಲೋಕಾಯುಕ್ತರಿಂದ ದೂರು ಅರ್ಜಿ ಸ್ವೀಕಾರ

ಮಡಿಕೇರಿ: ಕರ್ನಾಟಕ ಲೋಕಾಯುಕ್ತ ಮಡಿಕೇರಿಯ ಲೋಕಾಯುಕ್ತ ಅಧಿಕಾರಿಗಳು ಜನವರಿ, 10 ರಂದು ವಿರಾಜಪೇಟೆ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಮತ್ತು ಜನವರಿ, 12 ರಂದು ಮಡಿಕೇರಿ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಆಯಾಯ ದಿನಗಳಂದು ಬೆಳಗ್ಗೆ 11 ಗಂಟೆಯಿಂದ 1 ಗಂಟೆಯವರೆಗೆ ಕರ್ನಾಟಕ ಲೋಕಾಯುಕ್ತ ಕಾಯಿದೆಯಡಿ ದೂರು ಅರ್ಜಿ ವಿತರಿಸಲಿದ್ದಾರೆ.

ಬಾಡಗ ಗ್ರಾಮದಲ್ಲಿ ಕಾಡಾನೆಗಳ ಹಾವಳಿ

ಮಡಿಕೇರಿ,ಜ.6– ಮೂರ್ನಾಡು ಬಾಡಗ ಗ್ರಾಮದಲ್ಲಿ ಕಾಡಾನೆಗಳ ಹಾವಳಿ ಮಿತಿ ಮೀರಿದೆ. ಸ್ಥಳೀಯ ಕೃಷಿಕರ ಗದ್ದೆಗಳಿಗೆ ದಾಳಿ ಮಾಡುತ್ತಿರುವ ಕಾಡಾನೆಗಳ ಹಿಂಡು ಬೆಳೆಯನ್ನು ತಿಂದು ನಾಶಪಡಿಸುತ್ತಿವೆ. ಗ್ರಾಮದ ಕೃಷಿಕ ಪಾಂಡಂಡ ಗಣೇಶ್ ಗಣಪತಿ ಅವರ ಗದ್ದೆಗೆ ನುಗ್ಗಿದ ಕಾಡಾನೆಗಳು ಭತ್ತದ ಬೆಳೆಯನ್ನು ನಾಶಪಡಿಸಿವೆ. ಸುಮಾರು ಎರಡು ಎಕರೆ ಪ್ರದೇಶದಲ್ಲಿ ಕೊಯ್ಲು ಮಾಡಿ ಒಣಗಲು ಬಿಟ್ಟಿದ್ದ ಭತ್ತದ ಫಸಲು ಕಾಡಾನೆ ಪಾಲಾಗಿದೆ. ಅರಣ್ಯ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯ ಗ್ರಾಮಸ್ಥರು ಒತ್ತಾಯಿಸಿದ್ದಾರೆ.



ಕಾಡಾನೆಗಳ ದಾಳಿಯಿಂದ ಹಾಳಾಗಿರುವ ಜಮೀನು.

ಕೊಳಕೇರಿ ಗ್ರಾಮದಲ್ಲಿ ಅಂಗನವಾಡಿ ಕಟ್ಟಡಕ್ಕೆ ಭೂಮಿ ಪೂಜೆ



ನಾಪೋಕ್ಲು ಸಮೀಪದ ಕೊಳಕೇರಿ ಗ್ರಾಮದಲ್ಲಿ ನೂತನ ಅಂಗನವಾಡಿ ಕಟ್ಟಡಕ್ಕೆ ಭೂಮಿ ಪೂಜೆ.

ನಾಪೋಕ್ಲು, ಜ.6– ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಒದಗಿಸಲಾದ ಹದಿನೈದು ಲಕ್ಷ ರೂಪಾಯಿ ಹಾಗೂ ನರೇಗ ಉದ್ಯೋಗ ಖಾತ್ರಿ ಯೋಜನೆ ಅಡಿ ನೀಡಲಾದ 5 ಲಕ್ಷ ಸೇರಿದಂತೆ ಒಟ್ಟು 20 ಲಕ್ಷ ರೂಪಾಯಿ ವೆಚ್ಚದಲ್ಲಿ ಅಂಗನವಾಡಿ ಕಟ್ಟಡ ನಿರ್ಮಿಸಲಾಗುವುದು ಎಂದು ನಾಪೋಕು ಗ್ರಾಮ ಪಂಚಾಯತಿ ಅಧ್ಯಕ್ಷೆ ವನಜಾಕ್ಷಿ ಹೇಳಿದರು.

ಸಮೀಪದ ಕೊಳಕೇರಿ ಗ್ರಾಮದ ಕೂವಲೆ ಕಾಡು ನಿವಾಸಿ ಸಲೀಂ ಹಾಜಿ ಸ್ಥಳ ದಾನ ಕೊಟ್ಟಿರುವ. ಜಾಗದಲ್ಲಿ ಶನಿವಾರ ನೂತನ ಅಂಗನವಾಡಿ ಕಟ್ಟಡಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಈ ಸಂದರ್ಭ ಪಂಚಾಯಿತಿ ಉಪಧ್ಯಕ್ಷ ಹೇಮ ಅರುಣ್, ಗ್ರಾಮ ಪಂಚಾಯತಿ ಸದಸ್ಯರು ಹಾಗೂ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು ಗ್ರಾಮಸ್ಥರು ಉಪಸ್ಥಿತರಿದ್ದರು.

ಚುನಾವಣೆ ಸೋಲಿಗೆ ಪಕ್ಷದ ಹಿರಿಯರೇ ಕಾರಣ

ಪರೋಕ್ಷವಾಗಿ ವಿ.ಸೋಮಣ್ಣ, ಯತ್ನಾಳ್ ವಿರುದ್ಧ ಆಕ್ರೋಶ



ಚಾಮರಾಜನಗರದ ಬಿಜೆಪಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿದರು.

ಚಾಮರಾಜನಗರ, ಜ.6– ಕಳೆದ ವಿಧಾನಸಭೆ ಚುನಾವಣೆಯಲ್ಲಿ ಪಕ್ಷ ಸೋಲಲು ಹಿರಿಯ ನಾಯಕರು ನಾನು, ನಾನು ಎಂದದ್ದೇ ಕಾರಣವಾಯಿತು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೇಸರ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹಿರಿಯ ನಾಯಕರು ಚುನಾವಣೆಗೆ ಮುನ್ನ ನಾವು ಎನ್ನುತ್ತಾರೆ. ಚುನಾವಣೆ ಗೆದ್ದ ಬಳಿಕ ನಾನು, ನಾನು ಎನ್ನುತ್ತಾರೆ. ಅದನ್ನು ಬಿಟ್ಟು, ನಾವೆಲ್ಲರೂ ಒಂದೇ ಎಂದು ತಿಳಿದುಕೊಂಡಿದ್ದರೆ ಚುನಾವಣೆಯಲ್ಲಿ ಸೋಲುತ್ತಿರಲಿಲ್ಲ. ಕಳೆದ ವಿಧಾನಸಭಾ ಚುನಾವಣೆ ಸೋಲಿಗೆ ಬಿಜೆಪಿ ಕಾರಣವಲ್ಲ. ಕಾರ್ಯಕರ್ತರು ಕಾರಣವಲ್ಲ, ನಾಯಕರು ಕಾರಣ ಎಂದು ಪಕ್ಷದ ಕೆಲವು ಹಿರಿಯ ನಾಯಕರ ವಿರುದ್ಧ ಗುಡುಗಿದರು.

ಚಾ.ನಗರ ಹಾಗೂ ವರುಣ ಕ್ಷೇತ್ರಗಳಲ್ಲಿ ಸ್ಪರ್ಧಿಸಿ ಸೋತಿದ್ದ ವಿ.ಸೋಮಣ್ಣ ಅವರು ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ ಆಯ್ಕೆಯಾದ ನಂತರ ಹೈಕಮಾಂಡ್ ವಿರುದ್ಧ ಗರಂ ಆಗಿದ್ದರು. ಅಲ್ಲದೇ ಪಕ್ಷದಿಂದ ಅಂತರ ಕಾಯ್ದುಕೊಂಡಿದ್ದರು. ಈಗ ಅವರು ಸೋತ ಚಾ.ನಗರ ಕ್ಷೇತ್ರದಲ್ಲಿ ನಿಂತು ವಿಜಯೇಂದ್ರ ಪರೋಕ್ಷವಾಗಿ ಸೋಮಣ್ಣ ಮತ್ತು ಯತ್ನಾಳ್ ವಿರುದ್ಧ ಚಾಟಿ ಬೀಸಿದರು. ತಮ್ಮ ಭಾಷಣದಲ್ಲಿ ಹಿರಿಯರು ಎಂದು ಪ್ರಸ್ತಾಪ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಈ ಬಗ್ಗೆ ಪತ್ರಕರ್ತರು ಯಾರನ್ನು ತಾವು ಗುರಿಯಾಗಿಸಿಕೊಂಡು ಈ ವಿಚಾರ ಪ್ರಸ್ತಾಪ ಮಾಡಿದ್ದೀರಿ. ವಿ.ಸೋಮಣ್ಣ ಇಲ್ಲಿ ಸ್ಪರ್ಧೆ ಮಾಡಿ ಸೋತಿದ್ದರು. ವರುಣದಲ್ಲಿಯೂ ಸೋತಿದ್ದಾರೆ. ಅಲ್ಲದೇ ಯತ್ನಾಳ್ ನಿಮ್ಮ ವಿರುದ್ಧ ಟೀಕೆ ಮಾಡುತ್ತಿದ್ದಾರೆ ಎನ್ನುತ್ತಿದ್ದಂತೆ ನಾನು ಹಿರಿಯರು ಎಂದು ಆ ಅರ್ಥದಲ್ಲಿ ಹೇಳಿಲ್ಲ. ನನ್ನನ್ನು ಸೇರಿ ಇನ್ನು ಚೆನ್ನಾಗಿ ಕೆಲಸ ಮಾಡಿದ್ದರೆ ಪಕ್ಷ ಸೋಲುತ್ತಿರಲಿಲ್ಲ ಎಂದೆ ಎಂದು ಹಾರಿಕೆ ಉತ್ತರ ನೀಡಿದರು.

ಅಲ್ಲದೇ ವಿ. ಸೋಮಣ್ಣ ಅವರು ನನ್ನ ಸೋಲಿಗೆ ಯಡಿಯೂರಪ್ಪ ಮತ್ತು ವಿಜಯೇಂದ್ರ ಕಾರಣ. ಅವರು ಇನ್ನು 2 ಬಾರಿ ನನ್ನ ಕ್ಷೇತ್ರಗಳಿಗೆ ಬಂದಿದ್ದರೆ ನಾನು ಗೆಲುತ್ತಿದ್ದೆ ಎಂದಿದ್ದರಲ್ಲಾ ಎಂಬ ಪ್ರಶ್ನೆಗೆ ಮುಂದಿನ ಚುನಾವಣೆಯಲ್ಲಿ 4 ಬಾರಿ ಬರೋಣ ಬಿಡಿ ಎಂದು ತೇಪೆ ಹಾಕಲು ಯತ್ನಿಸಿದರು.

ಚಾಮರಾಜನಗರ ಜಿಲ್ಲೆಯ ಬಿಜೆಪಿಯಲ್ಲಿ ನೀವು ಹಾಗೂ ರಾಜ್ಯ ನಾಯಕರು ಬಂದಾಗ ಮಾತ್ರ ಜೋಶ್ ಇರುತ್ತದೆ. ನಂತರ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರ ಸಂಘಟನೆ ಇರುವುದಿಲ್ಲ. ಇನ್ನು ಬಿಜೆಪಿ ಸೋಲಿಗೆ ಕಾರಣರಾದ ರುದ್ರೇಶನನ್ನು ಜೊತೆಯಲ್ಲಿಟ್ಟುಕೊಂಡು ವಿಜಯೇಂದ್ರ ತಿರುಗುತ್ತಿದ್ದಾರೆ ಎಂಬ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ವಿಜಯೇಂದ್ರ ಜಿಲ್ಲೆಯ ಬಿಜೆಪಿಯಲ್ಲಿ ಗುಂಪುಗಾರಿಕೆ ಇದೆ ಎಂಬುದು ನನಗೂ ತಿಳಿದಿದೆ. ಮುಂದಿನ ದಿನಗಳಲ್ಲಿ ಇದನ್ನು ಸರಿಪಡಿಸಿಕೊಂಡು ಸಂಘಟನೆ ಮಾಡಲಾಗುತ್ತದೆ. ನಾಲ್ಕಕ್ಕೆ ನಾಲ್ಕು ಕ್ಷೇತ್ರಗಳನ್ನು ಗೆಲ್ಲುತ್ತೇವೆ ಎಂದು ಪ್ರತಿಕ್ರಿಯಿಸಿದರು.

ಸೋಮಣ್ಣನಿಗೆ ಸೂಕ್ತ ಸ್ಥಾನ: ಮಾಜಿ ಸಚಿವರಾದ ವಿ.ಸೋಮಣ್ಣ ಯತ್ನಾಳ್ ಅವರ ವಿಚಾರದಲ್ಲಿ ಎಲ್ಲವೂ ಸರಿಯಾಗಿದೆ ಎಂದು ಹೇಳುವುದಿಲ್ಲ. ಸಾಕಷ್ಟು ಬದಲಾವಣೆಯಾಗಿದೆ. ಮುಂದಿನ ದಿನಗಳಲ್ಲಿ ಎಲ್ಲವೂ ಸರಿಯಾಗುತ್ತದೆ. ಸೋಮಣ್ಣ ಅವರ ಸ್ಪರ್ಧೆ ಬಗ್ಗೆ ನನಗೆ ಗೊತ್ತಿಲ್ಲ. ಕೇಂದ್ರದ ವರಿಷ್ಠರು ತೀರ್ಮಾನ ಮಾಡುತ್ತಾರೆ. ಸೋಮಣ್ಣ ಹಿರಿಯರು ಅವರ ಕೊಡುಗೆ ಪಕ್ಷಕ್ಕೆ ಇದೆ. ಅವರು ಎರಡು ಕ್ಷೇತ್ರಗಳಲ್ಲಿ ಗೆಲ್ಲುವ ವಿಶ್ವಾಸ ಇತ್ತು. ಆದರೆ, ಸೋಲಾಗಿದೆ. ಇದಕ್ಕೆ ಬೇರೆ ಬೇರೆ ಕಾರಣ ಇದೆ. ಸೋಮಣ್ಣ ಅವರ ಜೊತೆ ಕುಳಿತು ಚರ್ಚೆ ಮಾಡುತ್ತೇವೆ. ಮುಂದಿನ ಚುನಾವಣೆಯಲ್ಲಿ ಹೆಚ್ಚು ಪ್ರಚಾರ ಮಾಡುತ್ತೇನೆ. ಪಕ್ಷ ಅವರಿಗೆ ಮುಂದೆ ಉತ್ತಮ ಸ್ಥಾನಮಾನ ನೀಡಲಿದೆ ಎಂದರು.

ಕಾಂಗ್ರೆಸ್ ವಿರುದ್ಧ ವಾಗ್ದಾಳಿ: ರಾಜ್ಯ ಸರ್ಕಾರದ ಆಡಳಿತ ವೈಖರಿಯನ್ನು ಜನರು ನೋಡುತ್ತಿದ್ದಾರೆ. ಆರು ತಿಂಗಳಲ್ಲೇ ಅವರಿಗೆ ಭ್ರಮ ನಿರಸನವಾಗಿದೆ. ಯಾಕೆ ಗೆಲ್ಲಿಸಿದೆವೋ ಎಂಬ ಭಾವನೆ ಜನರಲ್ಲಿ ಮೂಡುತ್ತಿದೆ. ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕೆಲಸವಾಗುತ್ತಿಲ್ಲ. ಹೊಸ ಯೋಜನೆ ಜಾರಿಗೆ ತಂದಿಲ್ಲ. ಆಡಳಿತ ಪಕ್ಷದ ಶಾಸಕರಿಗೆ ತಮ್ಮ ಕ್ಷೇತ್ರದಲ್ಲಿ ಓಡಾಡುವುದಕ್ಕೆ ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ವ್ಯಂಗ್ಯವಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್, ರಾಜೇಂದ್ರ, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್‌ಗೌಡ, ರಾಜ್ಯ ಹಿಂದುಳಿದ ಮೋರ್ಚಾ ಅಧ್ಯಕ್ಷ ಆರ್.ರಘು ಕೌಟಿಲ್ಯ, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಜಿಲ್ಲಾಧ್ಯಕ್ಷ ಆರ್. ನಾರಾಯಣ ಪ್ರಸಾದ್, ಮಾಜಿ ಶಾಸಕರಾದ ಎಸ್.ಬಾಲರಾಜ್, ನಿರಂಜನ್ ಕುಮಾರ್ ಮುಖಂಡ ಎಸ್.ಮಹದೇವಯ್ಯ ಹಾಜರಿದ್ದರು.

ಅಯೋಗ್ಯರು, ಮನೆಹಾಳರನ್ನು ಜೊತೆಗಿಟ್ಟುಕೊಳ್ಳಬಾರದು

ವಿಜಯೇಂದ್ರರಿಗೆ ಸೋಮಣ್ಣ ಸಲಹೆ



ಬೆಂಗಳೂರು: ರಾಜಕೀಯವಾಗಿ ಬೆಳೆಯಬೇಕೆಂಬ ಆಸೆ ಇದ್ದರೆ ಅಯೋಗ್ಯರನ್ನು ಹಾಗೂ ಮನೆಹಾಳರನ್ನು ಜೊತೆಗಿಟ್ಟುಕೊಳ್ಳಬಾರದು ಎಂದು ಮಾಜಿ ಸಚಿವ ವಿ. ಸೋಮಣ್ಣ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ಸಲಹೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ವಿಜಯೇಂದ್ರ ಚಿಕ್ಕ ವಯಸ್ಸಿನವರು. ನನ್ನನ್ನು ಸೋಲಿಸಲು ಷಡ್ಯಂತ್ರ ನಡೆಸಿದ ಅಯೋಗ್ಯರು, ಮನೆಹಾಳರು ಅವರೊಂದಿಗೆ ಓಡಾಡುತ್ತಿದ್ದಾರೆ. ಹೀಗಾಗಿ ಅವರಿಗೆ ಈ ಸಲಹೆ ನೀಡಿದ್ದೇನೆ. ಅದನ್ನು ಕೇಳುವುದು, ಬಿಡುವುದು ಅವರಿಗೆ ಸೇರಿದ್ದು ಎಂದರು.

ಪಕ್ಷದಲ್ಲಿದ್ದುಕೊಂಡು ವಿಧಾನಸಭೆ ಚುನಾವಣೆಯಲ್ಲಿ ನನ್ನನ್ನು ಸೋಲಿಸಲು ಕರಪತ್ರ ಹಂಚಿರುವುದು, ವಾಟ್ಸಾಪ್ ಮೆಸೇಜ್ ಕಳುಹಿಸಿರುವುದಕ್ಕೆ ಪುರಾವೆಗಳಿವೆ. ನನ್ನಂತಹ ಹಿರಿಯರಿಗೆ ಆಗಿರುವ ಅನ್ಯಾಯವನ್ನು ಅವರು ಸರಿಪಡಿಸಬೇಕಾಗಿರುವುದು ಅವರ ಕೆಲಸ. ನನಗೆ ಆಗಿರುವ ಅನ್ಯಾಯ ಸರಿಪಡಿಸದಿದ್ದರೆ ಸಿಡಿದೇಳುವುದು ನಿಶ್ಚಿತ ಎಂದು ಸೋಮಣ್ಣ ಎಚ್ಚರಿಕೆ ನೀಡಿದರು.

ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್‌ರೊಂದಿಗೆ ತಮಗೆ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದ ಅವರು, ಅಶೋಕ್ ನನಗಿಂತ 10 ವರ್ಷ ಚಿಕ್ಕವರು. ನಾನು ಮತ್ತು ಅವರು ಬೇರೆ ಬೇರೆ ಪಕ್ಷಗಳಲ್ಲಿದ್ದಾಗಲೂ ಪ್ರೀತಿ, ವಿಶ್ವಾಸದಿಂದ ಇರುತ್ತಿದ್ದೆವು. ಈಗಲೂ ನನಗೆ ಅಶೋಕ್ ಮೇಲೆ ಪ್ರೀತಿ, ವಿಶ್ವಾಸವಿದೆ. ಅದೇ ರೀತಿ ಹೇಗೆ ಬೇಕಾದರೂ ಮಾತನಾಡಿಸುವ ಹಕ್ಕು ಇದೆ ಎಂದು ಸೋಮಣ್ಣ ಹೇಳಿದರು.

ಬಿಜೆಪಿ ರಾಜ್ಯಾಧ್ಯಕ್ಷರಿಗೆ ಅದ್ದೂರಿ ಸ್ವಾಗತ



ಚಾಮರಾಜನಗರ, ಜ.6– ಬಿಜೆಪಿ ರಾಜ್ಯಾಧ್ಯಕ್ಷರಾದ ಬಳಿಕ ಚಾಮರಾಜನಗರಕ್ಕೆ ಮೊದಲ ಬಾರಿಗೆ ಭೇಟಿ ನೀಡಿದ ಬಿ.ವೈ.ವಿಜಯೇಂದ್ರ ಅವರನ್ನು ಜಿಲ್ಲೆಯ ಬಿಜೆಪಿ ಕಾರ್ಯಕರ್ತರು, ಮುಖಂಡರು ಅದ್ದೂರಿಯಾಗಿ ಸ್ವಾಗತಿಸಿದರು.

ನಗರದ ಸಂತೆಮರಹಳ್ಳಿ ವೃತ್ತಕ್ಕೆ ವಿಜಯೇಂದ್ರ ಆಗಮಿಸಿದ ವೇಳೆ ಬೃಹತ್ ಹೂವಿನ ಹಾಗೂ ಸೇಬಿನ ಹಾರ ಹಾಕಲಾಯಿತು. ಬಳಿಕ, ಮಹರ್ಷಿ ವಾಲ್ಮೀಕಿ, ಶ್ರೀರಾಮನ ಭಾವಚಿತ್ರಕ್ಕೆ ಬಿವೈವಿ ಪುಷ್ಪಾರ್ಚನೆ ಸಲ್ಲಿಸಿದರು. ಬಳಿಕ ಅಲ್ಲಿಂದ ತೆರೆದ ವಾಹನದಲ್ಲಿ ರೋಡ್ ಶೋ ನಡೆಸಿದರು. ಭುವನೇಶ್ವರಿ ವೃತ್ತದಲ್ಲೂ ವಿಜಯೇಂದ್ರಗೆ ಕಾರ್ಯಕರ್ತರು ಬೃಹತ್ ಸೇಬಿನ ಹಾರ ಹಾಕಿದರು.

ಹಳೇ ಮೈಸೂರು ಭಾಗದಲ್ಲಿ ವಿಶೇಷವಾಗಿ ಚಾಮರಾಜನಗರದಲ್ಲಿ ಯಡಿಯೂರಪ್ಪ ಮತ್ತು ವಿಜಯೇಂದ್ರಗೆ ಅಪಾರ ಅಭಿಮಾನಿ ಬಳಗವಿದ್ದು, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ವಿಜಯೇಂದ್ರ ಭೇಟಿ ಪಕ್ಷದ ಕಾರ್ಯಕರ್ತರಲ್ಲಿ ಉತ್ಸಾಹ ಇಮ್ಮಡಿ ಗೊಳಿಸಿದೆ.

ಎ.ಎಸ್.ಮಹದೇವಪ್ಪ ನಿಧನ



ಆಲೂರು: ಚಾಮರಾಜನಗರ ತಾಲೂಕಿನ ಆಲೂರು ಗ್ರಾಮದ ನಿವಾಸಿ, ನಿವೃತ್ತ ರೇಷ್ಮೆ ಇಲಾಖೆ ನೌಕರ ಎ.ಎಸ್.ಮಹದೇವಪ್ಪ (83) ಶನಿವಾರ ಮುಂಜಾನೆ ನಿಧನರಾದರು. ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೃತರ ತೋಟದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಾದಕ ದ್ರವ್ಯಗಳ ವಿರುದ್ಧದ ಜಾಗೃತಿ ನಡಿಗೆ, ಓಟಕ್ಕೆ ಚಾಲನೆ

ಚಾಮರಾಜನಗರ: ನಗರದ ಪೇಟೆ ಪ್ರೈಮರಿ ಶಾಲಾವರಣದಲ್ಲಿ ಚಾಮರಾಜನಗರ ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧನಾ ಆಸ್ಪತ್ರೆ ಸಹಯೋಗದಲ್ಲಿ ಶನಿವಾರ ಮಾದಕ ದ್ರವ್ಯಗಳ ಕುರಿತ ಜಾಗೃತಿ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಜಾಗೃತಿ ನಡಿಗೆ ಮತ್ತು ಓಟಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಚಾಲನೆ ನೀಡಿದರು.



ಬಳಿಕ ಮಾತನಾಡಿದ ಅವರು, ಮಾದಕ ದ್ರವ್ಯಗಳು ಯುವಜನತೆಗೆ ಮಾರಕವಾಗಿ ಪರಿಣಮಿಸಿವೆ. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಮಕ್ಕಳು, ಯುವಕರಿಗೆ ಜಾಗೃತಿ ಮೂಡಿಸಲು ಅಭಿಯಾನ ಹಮ್ಮಿಕೊಳ್ಳಲಾಗಿದೆ. ನಾಗರಿಕರು ಮಾದಕ ವಸ್ತುಗಳ ದುಶ್ಚಟಕ್ಕೆ ಒಳಗಾಗದಂತೆ ತಡೆಯುವುದೇ ಅಭಿಯಾನದ ಉದ್ದೇಶ ಎಂದರು.

ಶಾಲಾ–ಕಾಲೇಜುಗಳ ಬಳಿ ಮಾದಕ ವಸ್ತುಗಳ ಮಾರಾಟ ಮಾಡುವುದು ಅಪರಾಧ. ಮಾದಕ ವಸ್ತುಗಳನ್ನು ಸೇವಿಸುವಂತೆ ಯಾವುದೇ ವ್ಯಕ್ತಿ ನಿಮ್ಮನ್ನು ಪ್ರೇರೇಪಿಸಬಹುದು. ಅಂತಹ ಪರಿಸ್ಥಿತಿ ಎದುರಾದರೆ 112ಗೆ ಕರೆ ಮಾಡಿ ಮಾಹಿತಿ ನೀಡಿ. ಸಹಾಯಕ್ಕೆ ಪೊಲೀಸರು ಆಗಮಿಸಲಿದ್ದಾರೆ. ಸಾರ್ವಜನಿಕ ಸುರಕ್ಷತೆ ಪೊಲೀಸರ ಆದ್ಯತೆಯಾಗಿದೆ ಎಂದರು.

ಮಾದಕ ದ್ರವ್ಯಗಳ ಸೇವನೆಯಿಂದ ದೂರ ವಿರಲು ಚಿಂತನೆ ನಡೆಸಬೇಕು. ಮಾದಕ ದ್ರವ್ಯಗಳ ವಿರುದ್ಧ ಜಾಗೃತರಾಗುವ ಮೂಲಕ ಇಡೀ ಸಮಾಜಕ್ಕೆ ಸಂದೇಶ ತಲುಪಬೇಕು. ಉತ್ತಮ ಸಮಾಜ ನಿರ್ಮಾಣವಾಗಬೇಕು ಎಂದರು. ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉದೇಶ್, ಡಿವೈಎಸ್‌ಪಿ ಲಕ್ಷ್ಮಯ್ಯ, ವೈದ್ಯಕೀಯ ವಿಜ್ಞಾನಗಳ ಬೋಧನಾ ಆಸ್ಪತ್ರೆಯ ಡಾ.ಮಾರುತಿ ಇತರರಿದ್ದರು.

ಜಾಗೃತಿ ನಡಿಗೆ ನಗರದ ಪ್ರಮುಖ ರಸ್ತೆಗಳಾದ ಭುವನೇಶ್ವರಿ ವೃತ್ತ, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ, ಸುಲ್ತಾನ್ ಷರೀಫ್ ವೃತ್ತ, ದೊಡ್ಡಂಗಡಿ ಬೀದಿ, ಸಂತೆಮರಹಳ್ಳಿ ವೃತ್ತ, ಡಿವಿಯೇಷನ್ ರಸ್ತೆ ಮೂಲಕ ಸಾಗಿ ಬಳಿಕ ಪೇಟೆ ಪ್ರೈಮರಿ ಶಾಲಾವರಣದಲ್ಲಿ ಅಂತ್ಯಗೊಂಡಿತು. ಜಾಗೃತಿ ನಡಿಗೆಯಲ್ಲಿ ಪೊಲೀಸ್ ಅಧಿಕಾರಿಗಳು, ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



ಸಮಾಜ ಸೇವಕ, ಕೆಪಿಸಿಸಿ ಕಾರ್ಮಿಕ ವಿಭಾಗದ ಕಾರ್ಯದರ್ಶಿ ಜಿ.ಸಿ.ಕಿರಣ್ ಶುಕ್ರವಾರ ರಾತ್ರಿ ಕೊಳ್ಳೇಗಾಲ ತಾಲೂಕಿನ ಮುಳ್ಳೂರು ಗ್ರಾಮಕ್ಕೆ ಭೇಟಿ ನೀಡಿ, ಅನಾರೋಗ್ಯ ಪೀಡಿತ ಕುಟುಂಬಗಳಿಗೆ ವೈಯಕ್ತಿಕ ಧನಸಹಾಯ ಮಾಡಿದರು. ಈ ವೇಳೆ ಗ್ರಾಪಂ ಸದಸ್ಯೆ ಕಾಂತಮ್ಮ, ಮಹಿಳಾ ಸಂಘದ ರಾಜಮ್ಮ, ಜಯಲಕ್ಷ್ಮಿ, ಸುಷ್ಮಾ, ಗಿರಿಜಾ, ಗೀತಾ, ಕಾವ್ಯ, ಪುಟ್ಟಮ್ಮ, ಚಂದ್ರಕಲಾ, ಚಂದ್ರಮ್ಮ ಮುಖಂಡರಾದ ಮಂಜು ಇನ್ನಿತರಿದ್ದರು.

ನಗರಸಭೆ ವಿರುದ್ಧ ಬಿಜೆಪಿ ಪ್ರತಿಭಟನೆ

ಚಾಮರಾಜನಗರ: ಬಿ.ವೈ.ವಿಜಯೇಂದ್ರ ಆಗಮನದ ಹಿನ್ನೆಲೆಯಲ್ಲಿ ನಗರದ ಬಿ. ರಾಚಯ್ಯ ಜೋಡಿರಸ್ತೆಯಲ್ಲಿ ಹಾಕಿದ್ದ ಬಿಜೆಪಿ ಧ್ವಜವನ್ನು ನಗರಸಭೆ ತೆರವುಗೊಳಿಸಿದೆ ಎಂದು ಆರೋಪಿಸಿ ನಗರ ಯುವ ಮೋರ್ಚಾ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಭುವನೇಶ್ವರಿ ವೃತ್ತದಲ್ಲಿ ನಗರ ಮಂಡಲ ಯುವ ಮೋರ್ಚಾ ಅಧ್ಯಕ್ಷ ಆನಂದ್ ಭಗೀರಥ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು, ನಗರಸಭೆ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಆನಂದ್ ಭಗೀರಥ ಮಾತನಾಡಿ, ಪಕ್ಷದ ರಾಜ್ಯಾಧ್ಯಕ್ಷ ವಿಜಯೇಂದ್ರ ಆಗಮನದ ಹಿನ್ನೆಲೆಯಲ್ಲಿ ಸ್ವಾಗತ ಕೋರಲು ಹಾಕಿದ್ದ ಪಕ್ಷದ ಧ್ವಜವನ್ನು ರಾತ್ರೋರಾತ್ರೋ ನಗರಸಭೆ ತೆರವುಗೊಳಿಸುವ ಮೂಲಕ ಕಾಂಗ್ರೆಸ್ ಏಜೆಂಟ್ ರೀತಿ ವರ್ತಿಸುತ್ತಿದೆ ಎಂದು ದೂರಿದರು. ಪ್ರತಿಭಟನೆಯಲ್ಲಿ ಯುವ ಮೋರ್ಚಾ ಜಿಲ್ಲಾ ಪ್ರಧಾನ ಸೂರ್ಯ ಕುಮಾರ್, ಉಪಾಧ್ಯಕ್ಷ ಶಿವುವಿರಾಟ್, ಮೂಡ್ಲುಪುರ ನಂದೀಶ್, ಮಣಿ, ಪೃಥ್ವಿ, ಪ್ರಮೋದ್, ಕೂಸಣ್ಣ ಇತರರಿದ್ದರು.



ಬಿ.ವೈ.ವಿಜಯೇಂದ್ರ ಆಗಮನ ಹಿನ್ನೆಲೆಯಲ್ಲಿ ಚಾಮರಾಜನಗರದ ಬಿ.ರಾಚಯ್ಯ ಜೋಡಿರಸ್ತೆಯಲ್ಲಿ ಹಾಕಿದ್ದ ಬಿಜೆಪಿ ಧ್ವಜವನ್ನು ನಗರಸಭೆ ತೆರವುಗೊಳಿಸಿದೆ ಎಂದು ಆರೋಪಿಸಿ ನಗರ ಯುವ ಮೋರ್ಚಾ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮೂರನೇ ಪುಟದಿಂದ

ಪ್ರತಿಷ್ಠಾಪನೆಗೆ ಕಾವೇರಿ ತೀರ್ಥ

ಮಾತನಾಡಿ, ದೇಶದ ಪವಿತ್ರ ತೀರ್ಥಕ್ಷೇತ್ರಗಳಲ್ಲೊಂದಾದ ತಲಕಾವೇರಿಯಿಂದ ಮರ್ಯಾದ ಪುರುಷೋತಮ ಶ್ರೀರಾಮಚಂದ್ರರು ಜನಿಸಿದ ಅಯೋಧ್ಯೆಯ ರಾಮಮಂದಿರ ಪ್ರತಿಷ್ಠಾಪನೆಗೆ ತೀರ್ಥವನ್ನು ಸಂಗ್ರಹಿಸಿ ಅಭಿಷೇಕಕ್ಕೆ ಕೊಂಡೊಯ್ಯುತ್ತಿರುವುದು 2 ರಾಜ್ಯಗಳಿಗೆ ಅತ್ಯಂತ ಸ್ಮರಣೀಯ ಕ್ಷಣಗಳಲ್ಲೊಂದಾಗಿದೆ. ಕೊಡಗಿನಲ್ಲಿ ಹಿಂದುತ್ವದ ಅಭ್ಯುದಯಕ್ಕಾಗಿ ಮತ್ತು ದೇವಾಲಯಗಳ ಪುನರುಥ್ಥಾನಕ್ಕಾಗಿ ತಮ್ಮ ಮಠದ ವತಿಯಿಂದ ಎಲ್ಲಾ ರೀತಿಯ ಸಹಕಾರವನ್ನು ನೀಡಲಾಗುವುದು. ಅಲ್ಲದೇ ಮುಂದಿನ ದಿನಗಳಲ್ಲಿ ಜಿಲ್ಲೆಗೆ ಅಗತ್ಯವಿರುವ ವೇದ ಅಧ್ಯಯನ ಶಾಲೆ, ಗೋಶಾಲೆ, ವಿದ್ಯಾಮಂದಿರಗಳನ್ನು ಸ್ಥಾಪಿಸಲು ಚಿಂತನೆ ನಡೆಸಲಾಗಿದೆ ಎಂದು ಹೇಳಿದರು.

ಓಂ ಶ್ರೀ ಮಠದ ಗುರುಗಳಾದ ಮಹಾಮಂಡಲೇಶ್ವರ ಶ್ರೀ ವಿದ್ಯಾನಂದ ಸರಸ್ವತಿ ಸ್ವಾಮೀಜಿ ಮಾತನಾಡಿ, ಅಧ್ಯಾತ್ಮಿಕ, ಧಾರ್ಮಿಕ ಹಾಗೂ ಭಾವೈಕ್ಯತೆಯ ಸಂಕೇತವಾಗಿ ಎರಡೂ ರಾಜ್ಯಗಳ ಸಂತರುಗಳ ಸಮ್ಮುಖದಲ್ಲಿ ಕಾವೇರಿ ಮಾತೆಯ ಪವಿತ್ರ ತೀರ್ಥವನ್ನು ಸ್ವೀಕಾರ ಮಾಡಿ ಅಯೋಧ್ಯೆಗೆ ಕಳುಹಿಸಿಕೊಡುವ ಮಹತ್ಕಾರ್ಯವನ್ನು ಈ ದಿನ ಮಾಡಲಾಗಿದೆ ಎಂದರು. ಅಖಿಲ ಭಾರತೀಯ ಸಂತ ಸಮಿತಿಯ ಕೊಡಗು ಜಿಲ್ಲಾಧ್ಯಕ್ಷ ಶ್ರೀರಾಜೇಶ್‌ನಾಥ್‌ಜೀ ಮಾತನಾಡಿ ದೇಶದ ಹಾಗೂ ಹಿಂದೂ ಧರ್ಮೀಯರಿಗೆ ಅತ್ಯಂತ ಪವಿತ್ರವಾದ ಸಪ್ತನದಿಗಳ ಪುಣ್ಯತೀರ್ಥವನ್ನು ಜ.22ರಂದು ಅಯೋಧ್ಯೆಯ ಶ್ರೀರಾಮಮಂದಿರದ ಪ್ರತಿಷ್ಠಾಪನೆಗೆ ತೆಗೆದುಕೊಂಡು ಹೋಗುತ್ತಿರುವುದು ಪವಿತ್ರವಾದ ಕೆಲಸವಾಗಿದೆ. ಈ ಹಿನ್ನೆಲೆಯಲ್ಲಿ ತಲಕಾವೇರಿಯಿಂದ ಪುಣ್ಯತೀರ್ಥವನ್ನು ಸ್ವೀಕರಿಸಿ ಕಳುಹಿಸಿಕೊಡುತ್ತಿರುವುದು ಎಲ್ಲಾ ಹಿಂದೂ ಧರ್ಮೀಯರಿಗೆ ಅತ್ಯಂತ ಹೆಮ್ಮೆಯ ವಿಚಾರವಾಗಿದೆ ಎಂದರು. ಈ ಸಂದರ್ಭ ಅಖಿಲ ಭಾರತೀಯ ಸಂತ ಸಮಿತಿ ರಾಜ್ಯಾಧ್ಯಕ್ಷ ಮಂಗಳೂರಿನ ಓಂ ಶ್ರೀ ಮಠದ ಗುರುಗಳಾದ ಮಹಾಮಂಡಲೇಶ್ವರ ಶ್ರೀ ವಿದ್ಯಾನಂದ ಸರಸ್ವತಿ ಸ್ವಾಮೀಜಿ, ಸಹ ಅಧ್ಯಕ್ಷೆ ಮಾತಾಶ್ರೀ ಶಿವಜ್ಞಾನಮಹಿ ಸರಸ್ವತಿ, ತಮಿಳುನಾಡಿನ ಸಂತ ಸಮಿತಿ ಅಧ್ಯಕ್ಷ ಮಹಾಮಂಡಲೇಶ್ವರ, ಕೋಶಾಧ್ಯಕ್ಷ ಗರುಡ ಮಹಾರಾಜ್, ಸಂತ ಸಮಿತಿ ಕೊಡಗು ಜಿಲ್ಲಾ ಅಧ್ಯಕ್ಷ ಅರಸಿನಕುಪ್ಪೆಯ ಶ್ರೀಮಂಜುನಾಥಸ್ವಾಮಿ ಕ್ಷೇತ್ರದ ಗುರುಗಳಾದ ಶ್ರೀರಾಜೇಶ್‌ನಾಥ್‌ಜೀ, ವಿಹಿಂಪ ಕೊಡಗು ಜಿಲ್ಲಾ ಕಾರ್ಯಾಧ್ಯಕ್ಷ ಸುರೇಶ್, ಕೋಶಾಧಿಕಾರಿ ಸಂಪತ್‌ಕುಮಾರ್, ಕೊಡಗು ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಎ.ಮುರಳೀಧರ್ ಮತ್ತಿತರರು ಹಾಜರಿದ್ದರು.

ಮಹತ್ತರ ರಾಜಕೀಯ ಬದಲಾವಣೆ

ರಾಜ್ಯದ ಅಭಿವೃದ್ಧಿಗೆ ಶ್ರಮಿಸಲು ಸಾಧ್ಯವಿದೆ ಎಂದು ಹೇಳಿದರು. ಪಶ್ಚಿಮ ಬಂಗಾಳದಲ್ಲಿ ಕಮ್ಯುನಿಸ್ಟ್ ಪಕ್ಷಗಳ ಹಾವಳಿ ಹಾಗೂ ಕಾಂಗ್ರೆಸ್ ದಬ್ಬಾಳಿಕೆಯಿಂದಾಗಿ ತಾಲೂಕು, ಜಿಲ್ಲಾ ಪಂಚಾಯ್ತಿ ಚುನಾವಣೆಯಲ್ಲಿ ಗೆಲ್ಲುವುದಕ್ಕೂ ಸಾಧ್ಯವಾಗದ ಕ್ಲಿಷ್ಟಕರ ಪರಿಸ್ಥಿತಿ ಬಿಜೆಪಿಗೆ ನಿರ್ಮಾಣವಾಗಿತ್ತು. ಆದರೆ ಪಕ್ಷದ ನಾಯಕರಾದ ಅಮಿತ್ ಷಾ ಅವರ ದೂರದೃಷ್ಟಿತ್ವ ಹಾಗೂ ಸತತ ಪರಿಶ್ರಮದಿಂದ ಅಲ್ಲಿ 18 ಸಂಸದರನ್ನು ಗೆಲ್ಲಿಸುವಲ್ಲಿ ಪಕ್ಷ ಯಶಸ್ವಿಯಾಗಿದೆ. ಎಲ್ಲಿ ಕಮಲ ಅರಳಲು ಸಾಧ್ಯವೇ ಇಲ್ಲ ಎಂದು ಭಾವಿಸಿದ್ದರೋ ಅಲ್ಲಿ ಬಿಜೆಪಿ ಅಧಿಕೃತ ವಿರೋಧ ಪಕ್ಷವಾಗಿ ಕಾರ್ಯ ನಿರ್ವಹಿಸುತ್ತಿದೆ. ಆ ಪರಿಸ್ಥಿತಿ ಹಳೇ ಮೈಸೂರು ಭಾಗದಲ್ಲಿಲ್ಲ. 1994ರಲ್ಲೇ ನಾಲ್ವರು ಶಾಸಕರಾಗಿದ್ದರು. ನಾವು, ನೀವು ತೀರ್ಮಾನಿಸಿದರೆ ನಿಶ್ಚಿತವಾಗಿ ಬಿಜೆಪಿಗೆ ಭದ್ರಬುನಾದಿ ಹಾಕುವಲ್ಲಿ ಯಶಸ್ವಿಯಾಗಬಹುದು ಎಂದು ಹುರಿದುಂಬಿಸಿದರು. ನಮ್ಮ ಪಕ್ಷ ಸರ್ವ ಸ್ಪರ್ಶಿ, ಸರ್ವ ವ್ಯಾಪಿ. ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯಕ್ರಮ, ಯೋಜನೆಗಳ ಮೂಲಕ. ವಿಶ್ವಕರ್ಮ ಯೋಜನೆ ಯಾರೂ ಊಹಿಸಲು ಸಾಧ್ಯವಿಲ್ಲ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸವಲತ್ತುಗಳು ತಲುಪಬೇಕು ಎಂದು ಕೆಲವರು ಭಾಷಣ ಮಾಡುತ್ತಾರೆ. ಆದರೆ ಮೋದಿಯವರು ನೇರವಾಗಿ 18–19 ಹಿಂದುಳಿದ ಸಮಾಜಗಳಿಗೆ ಬ್ಯಾಂಕ್ ಮೂಲಕ ಆರ್ಥಿಕ ಶಕ್ತಿ ತುಂಬುತ್ತಿದ್ದಾರೆ. ಸ್ವಾವಲಂಬಿ ಜೀವನಕ್ಕೆ ನೆರವಾಗಿದ್ದಾರೆ.

ಜನಪ್ರಿಯತೆ ಮತವಾಗಬೇಕು: ಒಬ್ಬ ರಾಜಕಾರಣಿ ಮುಂದಿನ ಚುನಾವಣೆ ಬಗ್ಗೆ ಆಲೋಚನೆ ಮಾಡುತ್ತಾನೆ. ಆದರೆ ಒಬ್ಬ ರಾಜಕೀಯ ತಜ್ಞ ಮುಂದಿನ ಪೀಳಿಕೆ ಹಾಗೂ ಅವರ ಭವಿಷ್ಯದ ಬಗ್ಗೆ ಚಿಂತನೆ ಮಾಡುತ್ತಾನೆ. ಹಾಗೆಯೇ ನಮ್ಮ ಪ್ರಧಾನಿ ಮೋದಿ ಅವರು 2047ಕ್ಕೆ ವಿಕಸಿತ ಭಾರತವಾಗಿ ಪರಿವರ್ತನೆಯಾಗಬೇಕು, ಅಭಿವೃದ್ಧಿ ರಾಷ್ಟ್ರವಾಗಬೇಕೆಂದು ತಪಸ್ಸಿನಂತೆ ಹಗಲು ರಾತ್ರಿ ಶ್ರಮಿಸುತ್ತಿದ್ದಾರೆ. ಒಂದು ದಿನವೂ ರಜೆ ತೆಗೆದುಕೊಳ್ಳದೆ ವಿಶ್ರಾಂತಿ ಪಡೆಯದೆ ದುಡಿಯುತ್ತಿದ್ದಾರೆ. ಈ ಸಂದರ್ಭದಲ್ಲಿ ನಾವು ಬಿಜೆಪಿ ಕಾರ್ಯಕರ್ತರಾಗಿರುವುದೇ ನಮ್ಮ ಸೌಭಾಗ್ಯ. ಹಾಗಾಗಿ ಮುಂದಿನ ಲೋಕಸಭಾ ಚುನಾವಣೆಯನ್ನು ಬಹಳ ಗಂಭೀರವಾಗಿ ತೆಗೆದುಕೊಳ್ಳಬೇಕು. ಮೋದಿ ಅವರ ಅಲೆ ಇದೆ, ಜನ ಮತ ಹಾಕುತ್ತಾರೆ ಎಂಬ ಸುಮ್ಮನಿರಬಾರದು. ಮೋದಿ ಅವರ ಜನಪ್ರಿಯತೆಯನ್ನು ಮತವಾಗಿ ಪರಿವರ್ತನೆ ಮಾಡುವ ಕೆಲಸ ನಮ್ಮೆಲ್ಲರದ್ದಾಗಿದೆ. ಈ ಕರ್ತವ್ಯವನ್ನು ಯಶಸ್ವಿಯಾಗಿ ನಿರ್ವಹಿಸಿದಾಗ ಮಾತ್ರ ರಾಜ್ಯದಿಂದ 28 ಸಂಸದರನ್ನು ಗೆಲ್ಲಿಸಿ ಮೋದಿಯವರ ಕೈ ಬಲಪಡಿಸಲು ಸಾಧ್ಯವಾಗುತ್ತದೆ. ಆ ನಿಟ್ಟಿನಲ್ಲಿ ಹಗಲು ರಾತ್ರಿ ಶ್ರಮವನ್ನು ಹಾಕೋಣ. ನಿಮ್ಮ ಪ್ರೀತಿ ವಿಶ್ವಾಸಕ್ಕೆ ಧಕ್ಕೆಯಾಗದ ರೀತಿಯಲ್ಲಿ ರಾಜ್ಯಾಧ್ಯಕ್ಷನಾಗಿ, ಕಾರ್ಯಕರ್ತನಾಗಿ ನಿಮ್ಮೊಟ್ಟಿಗೆ ನಾನೂ ದುಡಿಯುತ್ತೇನೆ ಎಂದರು.

ಸಭೆಯಲ್ಲಿ ಬಿಜೆಪಿ ನಗರಾಧ್ಯಕ್ಷರೂ ಆದ ಶಾಸಕ ಟಿ.ಎಸ್.ಶ್ರೀವತ್ಸ, ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ರಾಜ್ಯ ಉಪಾಧ್ಯಕ್ಷರಾದ ಎನ್.ಮಹೇಶ್, ಎಂ.ರಾಜೇಂದ್ರ, ಮಾಜಿ ಶಾಸಕರಾದ ಎಸ್.ಎ.ರಾಮದಾಸ್, ಎಲ್.ನಾಗೇಂದ್ರ, ವಿಧಾನಪರಿಷತ್ ಮಾಜಿ ಸದಸ್ಯರಾದ ತೋಂಟದಾರ್ಯ, ಸಿದ್ದರಾಜು, ಮಾಜಿ ಸಂಸದ ಸಿ.ಹೆಚ್.ವಿಜಯ ಶಂಕರ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ, ಓಬಿಸಿ ಮೋರ್ಚಾ ರಾಜ್ಯಾಧ್ಯಕ್ಷ ಆರ್.ರಘು, ಅಲ್ಪಸಂಖ್ಯಾತ ಮೋರ್ಚಾ ರಾಜ್ಯಾಧ್ಯಕ್ಷ ಡಾ.ಅನಿಲ್ ಥಾಮಸ್, ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೇರಿ, ಮೈಸೂರು ವಿಭಾಗ ಪ್ರಭಾರಿ ಮೈ.ವಿ.ರವಿಶಂಕರ್, ಮಾಜಿ ಶಾಸಕ ಎಸ್.ಬಾಲರಾಜ್, ಮುಖಂಡರಾದ ಸಂದೇಶ್ ಸ್ವಾಮಿ, ವಕೀಲ ಅರುಣ್‌ಕುಮಾರ್, ಹೇಮಂತ್‌ಕುಮಾರ್ ಗೌಡ, ಯಶಸ್ವಿ ಸೋಮಶೇಖರ್, ಬಿ.ವಿ.ಮಂಜುನಾಥ್ ಸೇರಿದಂತೆ ಹಲವು ಮುಖಂಡರು, ಕಾರ್ಯಕರ್ತರು ಸಭೆಯಲ್ಲಿದ್ದರು. ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಮೂರು ದಿನ 'ಮೈಸೂರು ಫೆಸ್ಟ್'

ಮೈಸೂರು ಫೆಸ್ಟ್–2024 ಕಾರ್ಯಕ್ರಮದ ಸಿದ್ದತೆ ಕುರಿತು ನೇರ ಪಾಲುದಾರರೊಂದಿಗೆ ನಡೆದ ಪೂರ್ವಭಾವಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜನವರಿ 26, 27, 28ರಂದು ಕಾರ್ಯಕ್ರಮವನ್ನು ಅಯೋಜಿಸಲಾಗಿದ್ದು, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಜೊತೆಗೆ ಜನವರಿ 26 ರಂದು ಮೈಸೂರು ವಿಶ್ವವಿದ್ಯಾಲಯದ ಮಾನಸ ಗಂಗೋತ್ರಿಯ ಕ್ಲಾಕ್ ಟವರ್ ರಸ್ತೆಯ ಬದಿಯಲ್ಲಿ ಚಿತ್ರಸಂತೆ ಅಯೋಜಿಸಲಾಗುವುದು.

ಚಿತ್ರಸಂತೆ ಜೊತೆಗೆ ಚಿತ್ರಕಲಾ ಸ್ಪರ್ಧೆ ಅಯೋಜಿಸಲಾಗಿದ್ದು ಪ್ರಾವಿಣ್ಯತೆ ಹೊಂದಿರುವ ಕಲಾವಿದರು ಹಾಗೂ ಪ್ರೌಢಶಾಲಾ ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದವರಿಗೆ ಎರಡು ವಿಭಾಗದಲ್ಲಿ ಬಹುಮಾನವನ್ನು ನೀಡಲಾಗುವುದು. ಬೆಳಗ್ಗೆ 11 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಸ್ಥಳೀಯ ಕಲಾತಂಡಗಳಿಂದ ವಿವಿಧ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಮೈಸೂರಿಗೆ ಆಗಮಿಸುವ ಪ್ರವಾಸಿಗರಿಗೆ ಉತ್ತಮ ಮನರಂಜನೆ ಜೊತೆಗೆ ಮೈಸೂರು ಕಲೆ, ಸಂಸ್ಕೃತಿ ಪ್ರೇಕ್ಷಣೀಯ ಸ್ಥಳಗಳ ಬಗ್ಗೆ ಮಾಹಿತಿಯನ್ನು ನೀಡಲಾಗುವುದು ಎಂದರು. ಜನವರಿ 27 ರಂದು ಮೈಸೂರು ಫೆಸ್ಟ್–2024ರ ವೇದಿಕೆ ಕಾರ್ಯಕ್ರಮವನ್ನು ಮೈಸೂರು ವಿಶ್ವವಿದ್ಯಾಲಯದ ಬಯಲು ರಂಗಮಂದಿರದಲ್ಲಿ ಸಂಜೆ 5.30ಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ, ಪ್ರವಾಸೋದ್ಯಮ ಇಲಾಖೆ ಸಚಿವರ ಉಪಸ್ಥಿತಿಯಲ್ಲಿ ಮತ್ತು ಜನಪ್ರತಿನಿಧಿಗಳಿಂದ ಉದ್ಘಾಟಿಸಲಾಗುವುದು. ಸಂಜೆ 6.30 ರ ನಂತರ ಎರಡು ದಿನಗಳ ಕಾಲ ವೇದಿಕೆಯಲ್ಲಿ ವಿವಿಧ ಕಲಾ ತಂಡಗಳಿಂದ ವಿವಿಧ ರೀತಿಯ ನಾಟ್ಯ ಕಲಾಪ್ರಕಾರಗಳ ಕಾರ್ಯಕ್ರಮವನ್ನು ಅಯೋಜಿಲಾಗುವುದು ಎಂದು ತಿಳಿಸಿದರು.

ಮೈಸೂರು ಫೆಸ್ಟ್–2024 ಅಂಗವಾಗಿ ಮೈಸೂರು ವಿಶ್ವವಿದ್ಯಾಲಯದ ಬಯಲು ರಂಗಮಂದಿರದಲ್ಲಿ ಹೊಂದಿಕೊಂಡಂತೆ ಇರುವ ಸ್ಥಳಗಳಲ್ಲಿ ವಿವಿಧ ಉದ್ಯಮಗಳ ಮಳಿಗೆಗಳನ್ನು ಆಯೋಜಿಸಲಾಗುವುದು. ಮಳಿಗೆಗಳಲ್ಲಿ ಮಾರಾಟ ಮತ್ತು ಪ್ರದರ್ಶನಕ್ಕೆ ಅವಕಾಶವನ್ನು ಕಲ್ಪಿಸಿಕೊಡಲಾಗಿದ್ದು, ಜೊತೆಗೆ ಈ ಬಾರಿ ಪಾಲ್ಗೊಳ್ಳುವ ಸ್ಟಾಲ್‌ಗಳಲ್ಲಿ ಹೆಚ್ಚಿನ ರೀತಿಯಾಗಿ ಮೈಸೂರಿನ ಸ್ಥಳೀಯ ವಿಚಾರಗಳನ್ನು ತಿಳಿಸುವಂತಹ ಹಾಗೂ ಪ್ರಾಮುಖ್ಯತೆಯನ್ನು ಸಾರುವಂತಹ ಮಳಿಗೆಗಳಿಗೆ ಅವಕಾಶವನ್ನು ಕಲ್ಪಿಸಲಾಗುವುದು, ಪ್ರಮುಖವಾಗಿ ಮೈಸೂರಿನ ವಿಶೇಷ ಖಾದ್ಯಗಳು ಮತ್ತು ಮೈಸೂರಿನ ಸ್ಥಳೀಯ ಉತ್ಪನ್ನಗಳು ಹಾಗೂ ಮೈಸೂರಿನ ವಿಶೇಷವಾದ ತಿಂಡಿ ತಿನಿಸುಗಳ ಮಳಿಗೆಗಳಿಗೆ ಅವಕಾಶವನ್ನು ಕಲ್ಪಿಸಲಾಗುವುದು. ಮನೆಗಳ ಅಲಂಕಾರಕ್ಕೆ ಸಂಬಂಧಿಸಿದಂತೆ, ಮಕ್ಕಳ ಆಟಿಕೆಗಳಿಗೆ ಸಂಬಂಧಿಸಿದಂತೆ, ಮಹಿಳೆಯರಿಗೆ ಸಂಬಂಧಿಸಿದಂತೆ ಹಾಗೂ ಆರೋಗ್ಯಕ್ಕೆ ಸಂಬಂಧಿಸಿದಂತಹ ಸ್ಟಾಲ್‌ಗಳಿಗೆ ಬ್ರ್ಯಾಂಡ್ ಮೈಸೂರು ಫೆಸ್ಟ್‌ನಲ್ಲಿ ಅವಕಾಶವನ್ನು ನೀಡಲಾಗುವುದು ಎಂದರು. ಸಭೆಯಲ್ಲಿ ಹೋಟೆಲ್ ಮಾಲೀಕರ ಸಂಘದ ನಾರಾಯಣ ಗೌಡ, ಮೈಸೂರು ಸಂಘ ಸಂಸ್ಥೆಗಳ ಒಕ್ಕೂಟ ಅಧ್ಯಕ್ಷ ಪ್ರಶಾಂತ್, ಜಿಎಸ್‌ಎಸ್ ಯೋಗ ಸಂಸ್ಥೆಯ ಅಧ್ಯಕ್ಷ ಶ್ರೀ ಹರಿ, ಚಾಲಕರ ಸಂಘದ ಅಧ್ಯಕ್ಷ ನಾಗರಾಜು, ಡಿ. ದೇವರಾಜು ಅರಸು ರಸ್ತೆ ಅಂಗಡಿ ಮಾಲೀಕರ ಹಾಗೂ ಬಾಡಿಗೆದಾರರ ಸಂಘದ ಅಧ್ಯಕ್ಷ ವೀರಭದ್ರ ಅನುಮೋದಿತ ಮಾರ್ಗದರ್ಶಿ ಸಂಘಗಳ ಅಧ್ಯಕ್ಷ ಎಸ್.ಜೆ.ಅಶೋಕ್ ಹಾಗೂ ಟ್ರಾವೆಲ್ಸ್ ಅಸೋಸಿಯೇಷನ್ ಅಧ್ಯಕ್ಷ ದೇವರಾಜ್, ಮಹಾಲಕ್ಷ್ಮಿ ಸ್ವೀಟ್ ಹೌಸ್, ಭೀಮಾ ಜುಯೆಲರ್ಸ್ ಹಾಗೂ ನಗರ ವಿವಿಧ ಸಂಘ ಸಂಸ್ಥೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಜಿಲ್ಲಾಮಟ್ಟದ ಪ್ರಗತಿ ಪರಿಶೀಲನಾ ಸಭೆ

ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸಿ

ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸೆಲ್ವಕುಮಾರ್ ತಾಕೀತು

ಮೈಸೂರು.ಜ.6(ಎಂಟಿವೈ)–ಮೈಸೂರು ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ವತಿಯಿಂದ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು. ಕಾಮಗಾರಿಯ ಅನುದಾನ ಪೋಲಾದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎಸ್.ಸೆಲ್ವಕುಮಾರ್ ಎಚ್ಚರಿಸಿದ್ದಾರೆ.

ಮೈಸೂರಿನ ಜಿ.ಪಂ. ಸಭಾಂಗಣದಲ್ಲಿ ಶನಿವಾರ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಭಿವೃದ್ಧಿ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿದರೆ ಜನರಿಗೆ ಉಪಯೋಗವಾಗುತ್ತದೆ. ಇಲ್ಲದಿದ್ದರೆ, ಕಾಮಗಾರಿಗೆ ಮೀಸಲಿಟ್ಟ ಅನುದಾನ ವಾಪಸ್ಸಾಗುತ್ತದೆ. ಈ ಹಿನ್ನೆಲೆಯಲ್ಲಿ ನಿಗದಿತ ಎಲ್ಲಾ ಕಾಮಗಾರಿಗಳನ್ನು ಅವಧಿಯೊಳಗೆ ಪೂರ್ಣಗೊಳಿಸಲು ಸಂಬಂಧಿತ ಅಧಿಕಾರಿಗಳು ಮುಂದಾಗಬೇಕು ಎಂದರು.

ಮೈಸೂರು ಗ್ರಾಮಾಂತರ ಪ್ರದೇಶದಲ್ಲಿ ಅಗತ್ಯವಿದ್ದ ಸ್ಥಳದಲ್ಲಿ ಬಸ್ ಶೆಲ್ಟರ್‌ಗಳ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲು ಜಿ.ಪಂ. ಅನುದಾನದಲ್ಲಿ ಕ್ರಿಯಾ ಯೋಜನೆ ರೂಪಿಸಬೇಕು. ಸಾಮಾಜಿಕ ಅರಣ್ಯ ಇಲಾಖೆಯ ವತಿಯಿಂದ ನರೇಗಾ ಯೋಜನೆಯಡಿ ರಸ್ತೆ ಬದಿ ಸಸಿ ನೆಟ್ಟು ಪೋಷಣೆ ಮಾಡಬೇಕು. ನರೇಗಾ ಯೋಜನೆಯಡಿ ಶಾಲಾ ಕಾಂಪೌಂಡ್ ಹಾಗೂ ಶಾಲಾ ಮೈದಾನಗಳ ನಿರ್ಮಾಣಕ್ಕೆ ಹೆಚ್ಚಿನ ಆದ್ಯತೆ ನೀಡುವಂತೆ ಸಲಹೆ ನೀಡಿದರು.

2021– 22ನೇ ಸಾಲಿನಲ್ಲಿ ಶೇ.85 ರಷ್ಟು ಕಾಮಗಾರಿಗಳು ಪೂರ್ಣಗೊಂಡಿದ್ದು ಪೂರ್ಣಗೊಳ್ಳದೆ ಉಳಿದಿರುವ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು. ಲಿಂಕ್ ಡಾಕ್ಯುಮೆಂಟ್ ಅಡಿ ವಿವಿಧ ಇಲಾಖೆಗಳಿಂದ ಕೈಗೊಂಡಿರುವ ಕಾಮಗಾರಿಗಳನ್ನು ಈ ಆರ್ಥಿಕ ವರ್ಷದಲ್ಲಿಯೇ ಮುಗಿಸಬೇಕು. ಕಾಮಗಾರಿಗಳು ಪೂರ್ಣವಾಗದೆ ಹಣ ವಾಪಸ್ ಹೋದರೆ ಆಯಾ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದರು.



ಮೈಸೂರು ಜಿ.ಪಂ ಸಭಾಂಗಣದಲ್ಲಿ ಶನಿವಾರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎಸ್.ಸೆಲ್ವ ಕುಮಾರ್ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಚಿತ್ರದಲ್ಲಿ ಜಿಲ್ಲಾಧಿಕಾರಿ ಡಾ.ಕೆ.ಎಂ.ರಾಜೇಂದ್ರ, ಜಿ.ಪಂ ಸಿಇಓ ಕೆ.ಎಂ ಗಾಯತ್ರಿ ಅವರನ್ನು ಕಾಣಬಹುದು.

> ಶಿಕ್ಷಣ ಇಲಾಖೆ ವತಿಯಿಂದ ವಿವಿಧೆಡೆ ಒಟ್ಟು 37 ಲಕ್ಷ ರೂ. ವೆಚ್ಚದಲ್ಲಿ 9 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವತಿಯಿಂದ ಅಂಗನವಾಡಿ ಕಟ್ಟಡಗಳ ದುರಸ್ತಿ ಕಾರ್ಯಗಳು ಹಾಗೂ ಗ್ರಂಥಾಲಯಗಳ ದುರಸ್ತಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ. ಜಿಲ್ಲಾ ಪಂಚಾಯತ್‌ನ ಅನಿರ್ಬಂಧಿತ ಅನುದಾನದಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಸಂಪರ್ಕ ರಸ್ತೆಗಳು, ಶಾಲಾ ಕಾಂಪೌಂಡ್ ನಿರ್ಮಾಣ, ಅಂಗನವಾಡಿ ಕಟ್ಟಡಗಳ ದುರಸ್ತಿ, ಡಿಜಿಟಲ್ ಲೈಬ್ರರಿಗಳ ನಿರ್ಮಾಣ, ಹಾಸ್ಟೆಲ್‌ಗಳ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ಕೃಷಿ ಹೊಂಡ ನಿರ್ಮಾಣ ಕಾಮಗಾರಿ ಮಾಡಲಾಗುತ್ತಿದೆ.
> -ಕೆ.ಎಂ ಗಾಯತ್ರಿ, ಜಿ.ಪಂ. ಸಿಇಓ

ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಮಾತನಾಡಿ, ಸಾಮಾಜಿಕ ಅರಣ್ಯ ಇಲಾಖೆ ವತಿಯಿಂದ ಶಾಲಾ ಮೈದಾನಗಳಲ್ಲಿ ಹಾಗೂ ಆಸ್ಪತ್ರೆಯ ಮೈದಾನಗಳಲ್ಲಿ ಗಿಡಗಳನ್ನು ನೆಟ್ಟು ಬಯೋ ಫೆನ್ಸಿಂಗ್ ಮಾಡಿ ರಕ್ಷಿಸಲಾಗಿದೆ. ವಿವಿಧ ಇಲಾಖೆಗಳು ಅಭಿವೃದ್ಧಿ ಕಾಮಗಾರಿಗಳನ್ನು ವಿವಿಧ ಏಜೆನ್ಸಿಗಳ ಮೂಲಕ ನಡೆಸುತ್ತಿವೆ. ಅದರ ಬಗ್ಗೆ ಮಾಹಿತಿ ಪಡೆದು, ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ನಡೆಸುವಂತೆ ಹಾಗೂ ಕಾಲ ಕಾಲಕ್ಕೆ ಪರಿಶೀಲನೆ ನಡೆಸುವಂತೆ ಆಯಾ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಮೈಸೂರು ಜಿಲ್ಲೆಯಲ್ಲಿ ಸದ್ಯಕ್ಕೆ ಕುಡಿಯುವ ನೀರಿನ ಸಮಸ್ಯೆ ಕಂಡು ಬಂದಿಲ್ಲ. ನಗರ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಕೊಳವೆ ಬಾವಿಗಳಲ್ಲಿ ಉತ್ತಮ ನೀರು ಇದೆ. ಮುಂದೆ ಕುಡಿಯುವ ನೀರಿನ ಸಮಸ್ಯೆ ಕಂಡು ಬರುವ ಗ್ರಾಮಗಳನ್ನು ಗುರುತಿಸಿದ್ದು, ಸಮಸ್ಯೆ ಉದ್ಭವಿಸಿದರೆ ಖಾಸಗಿ ಬೋರ್ವೆಲ್‌ಗಳನ್ನು ಬಾಡಿಗೆಗೆ ಪಡೆದು ಕುಡಿಯುವ ನೀರನ್ನು ಪೂರೈಸಲು ಉದ್ದೇಶಿಸಲಾಗಿದೆ. ಕೃಷಿ ಇಲಾಖೆಯಿಂದ ರೈತರಿಗೆ ಫ್ರೂಟ್ಸ್ ಐಡಿ ಕ್ರಿಯೇಟ್ ಮಾಡಲಾಗುತ್ತಿದೆ. ಬರ ಪರಿಹಾರ ಪಡೆಯಲು ಫ್ರೂಟ್ ಐಡಿ ಅತ್ಯವಶ್ಯಕವಾಗಿರುತ್ತದೆ. ಬೆಂಬಲ ಬೆಲೆ ಯೋಜನೆಯಡಿ ರಾಗಿ ಮತ್ತು ಭತ್ತವನ್ನು ಖರೀದಿ ಮಾಡಲಾಗುತ್ತಿದೆ. ಬೆಂಬಲ ಬೆಲೆ ಯೋಜನೆಯಡಿ 20 ಸಾವಿರ ರೈತರು ನೋಂದಣಿ ಆಗಿದ್ದಾರೆ ಎಂದು ತಿಳಿಸಿದರು.

ಕೋವಿಡ್ –19 ಕುರಿತು ಪ್ರತಿದಿನ ಸ್ವಾಬ್ ಪರೀಕ್ಷೆ ನಡೆಸಲಾಗುತ್ತಿದೆ. ಕೋವಿಡ್ ಪಾಸಿಟಿವ್ ಕಂಡು ಬಂದರೆ ಚಿಕಿತ್ಸೆ ನೀಡಿ 7 ದಿನ ಐಸೋಲೇಶನ್ ಮಾಡಲಾಗುತ್ತಿದೆ. ಮುಂದೆ ಕೋವಿಡ್ ಹೆಚ್ಚಾದರೆ ಅಗತ್ಯ ಚಿಕಿತ್ಸೆ ನೀಡಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ವಿವರಿಸಿದರು. ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಕ್ರಮ ಕೈಗೊಳ್ಳಲಾಗಿದೆ. ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಸತಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಸ್‌ಎಸ್‌ಎಲ್‌ಸಿ ಮಕ್ಕಳು ಶೇ.100 ರಷ್ಟು ಉತ್ತೀರ್ಣರಾಗಬೇಕು. ಗ್ರಾಮ ಪಂಚಾಯತಿ ಮಟ್ಟದಲ್ಲಿ ಎಸ್.ಎಸ್.ಎಲ್.ಸಿ ಮಕ್ಕಳಿಗೆ ರೀಡಿಂಗ್ ರೂಂ ತೆರೆಯುವಂತೆ ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ತಿಳಿಸಿದರು.

ಜಿ.ಪಂ. ಉಪ ಕಾರ್ಯದರ್ಶಿ ಕೃಷ್ಣ ರಾಜು ಮಾತನಾಡಿ, ಹಸರೀಕರಣ ಕಾಮಗಾರಿಗಳು, ತೋಟಗಾರಿಕೆ ಬೆಳೆಗಳಿಗೆ ಪ್ರೋತ್ಸಾಹ, ಶಾಲಾ ಆಟದ ಮೈದಾನ, ಘನ ತ್ಯಾಜ್ಯ ವಿಲೇವಾರಿ ಘಟಕಗಳ ನಿರ್ಮಾಣ, ಅಂಗನವಾಡಿ ಕಟ್ಟಡಗಳು, ಚರಂಡಿ ಕಾಮಗಾರಿಗಳು, ಸ್ಮಶಾನ ನಿರ್ಮಾಣ ಕಾಮಗಾರಿಗಳು ಸೇರಿದಂತೆ 9000 ಸಾವಿರ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಪಾಲ್ಗೊಂಡು ತಮ್ಮ ಇಲಾಖೆಗಳ ಪ್ರಗತಿ ವರದಿ ಮಂಡಿಸಿದರು.

> ಜಿಲ್ಲೆಯಲ್ಲಿ ಅನಧಿಕೃತ ಕ್ಲಿನಿಕ್‌ಗಳ ಹಾವಳಿ ತಪ್ಪಿಸಲು ಕಠಿಣ ಕ್ರಮ ಕೈಗೊಳ್ಳಲಾಗಿದೆ. ಯುನಾನಿ ಆಯುರ್ವೇದಿಕ್ ಚಿಕಿತ್ಸೆ ನೀಡಲು ವಿದ್ಯಾಭ್ಯಾಸ ಮಾಡಿರುವವರು ಇಂಗ್ಲಿಷ್ ವೈದ್ಯಕೀಯ ಪದ್ಧತಿಯ ಚಿಕಿತ್ಸೆ ನೀಡುವುದು ಅಪರಾಧ. ಈ ಬಗ್ಗೆ ಪರಿಶೀಲನೆ ನಡೆಸಲು ಎಲ್ಲಾ ತಾಲೂಕು ಆರೋಗ್ಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಕೆಪಿಎಂಇ ಆಕ್ಟ್ ಅಡಿ ಹಲವು ಕ್ಲಿನಿಕ್‌ಗಳು ಅನುಮತಿ ಪಡೆಯದೇ ನಡೆಸುತ್ತಿದ್ದು ಕಂಡುಬಂದಿದೆ. ಈ ಬಗ್ಗೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಪರಿಶೀಲನೆ ನಡೆಸಲು ಸೂಚನೆ ನೀಡಲಾಗಿದೆ.
> - ಡಾ. ಕೆ.ವಿ.ರಾಜೇಂದ್ರ, ಜಿಲ್ಲಾಧಿಕಾರಿ

ಬಲಿಷ್ಠ ಕೋಮುಗಳ ನಿಯಂತ್ರಣದಿಂದ ಹೊರಬಂದು ಜಾತಿಗಣತಿ ವರದಿ ಜಾರಿಗೊಳಿಸಿ

ಕಾಯಕ ಸಮಾಜಗಳ ಒಕ್ಕೂಟದಿಂದ ಸಿಎಂಗೆ ಆಗ್ರಹ



ಜಿಲ್ಲಾ ಪತ್ರಕರ್ತರ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಕಾಯಕ ಸಮಾಜಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕೆಸಿ. ಪುಟ್ಟಸಿದ್ದಶೆಟ್ಟಿ ಮಾತನಾಡಿದರು. ಚಿತ್ರದಲ್ಲಿ ಒಕ್ಕೂಟದ ಪದಾಧಿಕಾರಿಗಳಾದ ಕೆಂಪಶೆಟ್ಟಿ ರಮೇಶ್, ದಾಸಪ್ಪಶೆಟ್ಟಿ ಶಿವರಾಜು ಅವರನ್ನು ಕಾಣಬಹುದು

ಮೈಸೂರು, ಜ.6(ಜಿಎ)–ಬಲಿಷ್ಠ ಕೋಮುಗಳ ನಿಯಂತ್ರಣದಲ್ಲಿರುವ ಕಾರಣ ಮುಖ್ಯಮಂತ್ರಿಗಳು ಮತ್ತು ಸರ್ಕಾರದ ವೇಗ ಕಡಿಮೆ ಆಗಿದ್ದು, ಈ ಕೋಮುಗಳವರಿಂದಾಗಿ ಸಿಎಂ ಜಾತಿ ಗಣತಿ ವರದಿ ಜಾರಿ ಕುರಿತು ದೃಢ ನಿರ್ಧಾರ ಕೈಗೊಳ್ಳಲಾಗುತ್ತಿಲ್ಲ. ಆದ್ದರಿಂದ ಸಿಎಂ ಇದರಿಂದ ಹೊರ ಬಂದು ಕೂಡಲೇ ಜಾತಿಗಣತಿ ಜಾರಿಗೆ ಮುಂದಾಗಬೇಕೆಂದು ಕರ್ನಾಟಕ ರಾಜ್ಯ ಕಾಯಕ ಸಮಾಜಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಸಿ. ಪುಟ್ಟಸಿದ್ದಶೆಟ್ಟಿ ಆಗ್ರಹಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದುಳಿದ ವರ್ಗ, ಎಸ್‌ಸಿ, ಎಸ್‌ಟಿಗಳಿಗೆ ನೀಡಿರುವ ಸೌಲಭ್ಯ ಬಲಿಷ್ಠ ಕೋಮುಗಳ ಹಿಡಿತದಿಂದಾಗಿ ಲಭ್ಯವಾಗುತ್ತಿಲ್ಲ. ಈ ಕಾರಣದಿಂದಾಗಿ ಸರ್ಕಾರ ಖಾಲಿ ಇರುವ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳುತ್ತಿಲ್ಲ ಎಂದು ಆರೋಪಿಸಿದರು.

ರಾಜ್ಯದಲ್ಲಿ ಸುಮಾರು 80 ಸಾವಿರ ಖಾಲಿ ಹುದ್ದೆಗಳು ಹಲವಾರು ವರ್ಷಗಳಿಂದ ಖಾಲಿಯಾಗಿಯೇ ಇವೆ. ಶಿಕ್ಷಣ ಇಲಾಖೆಯಲ್ಲಂತೂ ಶೆ.75 ರಷ್ಟು ಹುದ್ದೆಗಳಿಗೆ ತಾತ್ಕಾಲಿಕವಾಗಿರುವ ಅತಿಥಿ ಶಿಕ್ಷಕರಿಂದ ಬೋಧನೆ ಮಾಡಿಸಿಕೊಳ್ಳಲಾಗುತ್ತಿದೆ. ಕಾಲೇಜು ಅಧ್ಯಾಪಕರ ಹುದ್ದೆಗಳಿಗೆ ಅರ್ಹತೆ ಪಡೆದಿರುವವರು ನೇಮಕಾತಿ ಇಲ್ಲದೇ ಬೀದಿ ಪಾಲಾಗಿದ್ದಾರೆ. ಹೀಗಾಗಿ ಕೂಡಲೇ ಇವರ ಸೇವೆ ಕಾಯಂಗೊಳಿಸಬೇಕೆಂದು ಒತ್ತಾಯಿಸಿದರು.

ಮುಖ್ಯಮಂತ್ರಿಗಳು ವಿಧಾನಸಭಾ ಚುನಾವಣೆಗೂ ಮೊದಲು ನೀಡಿದ್ದ ಭರವಸೆಯಿಂದ ಹಿಂದೆ ಸರಿಯುತ್ತಿದ್ದಾರೆ. ಹಳೇ ಪಿಂಚಣಿ ಯೋಜನೆ, ಏಳನೇ ವೇತನ ಆಯೋಗ ಜಾರಿ ಇದರಲ್ಲಿ ಸೇರಿವೆ. ಹೀಗಾಗಿ ಈ ವಿಷಯದಲ್ಲಿಯೂ ನುಡಿದಂತೆ ನಡೆಯದಿದ್ದರೆ ಮುಂಬರುವ ಲೋಕಸಭಾ ಚುನಾವಣೆ ವೇಳೆ ಹೊಡೆತ ಬೀಳಲಿದೆ ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ಕೆಂಪಶೆಟ್ಟಿ, ರಮೇಶ್, ದಾಸಪ್ಪಶೆಟ್ಟಿ ಶಿವರಾಜು ಉಪಸ್ಥಿತರಿದ್ದರು.

ವಿಶ್ವಕರ್ಮ ಅಭಿವೃದ್ಧಿ ನಿಗಮದಿಂದ ಸಾಲಮನ್ನಾಗೆ ಆಗ್ರಹ



ಜಿಲ್ಲಾ ಪತ್ರಕರ್ತರ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ವಿಶ್ವಕರ್ಮ ಅಭಿವೃದ್ಧಿ ನಿಗಮದ ನಾಮ ನಿರ್ದೇಶಿತ ಸದಸ್ಯ ಎ.ಎನ್. ಸಿದ್ದಪ್ಪಾಜಿ ವಿಶ್ವಕರ್ಮ ಮಾತನಾಡಿದರು. ಚಿತ್ರದಲ್ಲಿ ಪದಾಧಿಕಾರಿಗಳಾದ ಸಿದ್ದಾಚಾರಿ, ಮಹೇಶ್, ವೆಂಕಟೇಶ್, ಅರ್ಕೇಶ್ವರಾಚಾರ್ ಅವರನ್ನು ಕಾಣಬಹುದು

ಮೈಸೂರು, ಜ.6(ಜಿಎ)–ವಿಶ್ವಕರ್ಮ ಅಭಿವೃದ್ಧಿ ನಿಗಮ ವಿತರಿಸಿರುವ ಸಾಲ ಮನ್ನಾ ಮಾಡುವ ಮೂಲಕ ಸಿಎಂ ಸಿದ್ದರಾಮಯ್ಯ ಮನೋಸ್ಥೈರ್ಯ ತುಂಬಬೇಕೆಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಜಿಲ್ಲಾ ಘಟಕ ಒತ್ತಾಯಿಸಿದೆ.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಿಗಮದ ನಾಮ ನಿರ್ದೇಶಿತ ಸದಸ್ಯ ಎ.ಎನ್. ಸಿದ್ದಪ್ಪಾಜಿ ವಿಶ್ವಕರ್ಮ, ಕೊರೊನಾದಿಂದಾಗಿ ಲಾಕ್‌ಡೌನ್ ಅವಧಿ ಹಾಗೂ ಯಂತ್ರಗಳ ಆಗಮನದಿಂದಾಗಿ ವಿಶ್ವಕರ್ಮ ಸಮುದಾಯದವರು ತೀರಾ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಇವರಿಗೆ ಈಗ ದುಡಿಯಲು ಕೆಲಸವಿಲ್ಲದೇ ಮಕ್ಕಳನ್ನು ಓದಿಸಲು, ಜೀವನ ನಿರ್ವಹಣೆಯೂ ಕಷ್ಟವಾಗಿದೆ. ಹೀಗಾಗಿ ಜ.7ರಂದು ಬೆಂಗಳೂರಿನ ಶಾಸಕರ ಭವನದಲ್ಲಿ ಮಹಾಸಭಾ ರಾಜ್ಯಾಧ್ಯಕ್ಷ ಹಾಗೂ ವಿಧಾನಪರಿಷತ್ ಸದಸ್ಯರಾದ ಕೆ.ಪಿ. ನಂಜುಂಡಿ ವಿಶ್ವಕರ್ಮ ಅವರ ನೇತೃತ್ವದಲ್ಲಿ ವಿಶ್ವಕರ್ಮ ಅಭಿವೃದ್ಧಿ ನಿಗಮ ವಿತರಿಸಿರುವ ಸಾಲವನ್ನು ಮನ್ನಾ ಮಾಡುವಂತೆ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಲಾಗುತ್ತಿದೆ. ಆದ್ದರಿಂದ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಸಿದ್ದಾಚಾರಿ, ಮಹೇಶ್, ವೆಂಕಟೇಶ್, ಅರ್ಕೇಶ್ವರಾಚಾರ್ ಉಪಸ್ಥಿತರಿದ್ದರು.

ಮೈಸೂರಲ್ಲಿ 'ಚಾಮುಂಡಿ ಮಹಿಳಾ ಸುರಕ್ಷಾ ಪಡೆ' ಕಾರ್ಯಾರಂಭ





ಮೈಸೂರು ಅರಮನೆ ಮುಂಭಾಗ ಶನಿವಾರ ನಡೆದ ಕಾರ್ಯಕ್ರಮದಲ್ಲಿ 'ಚಾಮುಂಡಿ ಮಹಿಳಾ ಸುರಕ್ಷಾ ಪಡೆ'ಗೆ ಪೊಲೀಸ್ ಆಯುಕ್ತ ಬಿ.ರಮೇಶ್ ಬಾನೂತ್, ಡಿಸಿಪಿ ಎಸ್.ಜಾಹ್ನವಿ ಹಸಿರು ನಿಶಾನೆ ಪ್ರದರ್ಶಿಸಿ, ಚಾಲನೆ ನೀಡಿದರು. ಮತ್ತೊಂದು ಚಿತ್ರದಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು.

ಮೈಸೂರು, ಜ.6(ಎಂಟಿವೈ)–ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಮಹಿಳೆಯರು ಹಾಗೂ ಮಕ್ಕಳ ರಕ್ಷಣೆಗಾಗಿ ಮೈಸೂರು ನಗರ ಪೊಲೀಸ್ ಇಲಾಖೆ ವಿಶೇಷ ತರಬೇತಿ ಪಡೆದ ಸಿಬ್ಬಂದಿಯುಳ್ಳ 'ಚಾಮುಂಡಿ ಮಹಿಳಾ ಸುರಕ್ಷಾ ಪಡೆ' ರಚಿಸಿ, ಪಡೆಯನ್ನು ಕಾರ್ಯಾಚರಣೆಗೆ ನಿಯೋಜಿಸಿದೆ.

ಈ ಹಿಂದೆ ಜಾರಿಯಲ್ಲಿದ್ದ 'ಚಾಮುಂಡಿ ಪಡೆ'ಯನ್ನು ಮಾರ್ಪಾಡು ಮಾಡಿ, ಇದೀಗ 'ಚಾಮುಂಡಿ ಮಹಿಳಾ ಸುರಕ್ಷಾ ಪಡೆ' ರಚಿಸಿ ಪುಂಡರಿಂದ ಮಹಿಳೆಯರು ಹಾಗೂ ಮಕ್ಕಳಿಗೆ ಆಗುವ ಕಿರುಕುಳ, ದೌರ್ಜನ್ಯ ತಡೆಗೆ ಮಹಿಳಾ ಪೊಲೀಸ್ ತಂಡ ಸಜ್ಜಾಗಿದೆ. ಇಂದಿನಿಂದ ಮೈಸೂರಲ್ಲಿ ರಸ್ತೆಗಿಳಿದಿರುವ ಚಾಮುಂಡಿ ಮಹಿಳಾ ಸುರಕ್ಷಾ ಪಡೆ ಶಾಲಾ–ಕಾಲೇಜು. ಮಹಿಳಾ ಪಿಜಿ, ವಿದ್ಯಾರ್ಥಿನಿಲಯ, ಜನನಿಬಿಡ ಪ್ರದೇಶ ಸೇರಿದಂತೆ ಮಹಿಳೆಯರು ಹೆಚ್ಚಾಗಿ ಓಡಾಡುವ ಪ್ರದೇಶದಲ್ಲಿ ಗಸ್ತು ತಿರುಗಲಿದ್ದು, ಈ ವೇಳೆ ಮಹಿಳೆಯರು, ಯುವತಿಯರು ಹಾಗೂ ವಿದ್ಯಾರ್ಥಿನಿಯರನ್ನು ಕಾಡುವ ಕಾಮಣ್ಣರ ಹಾವಳಿಗೆ ಕಡಿವಾಣ ಹಾಕಲಿದ್ದಾರೆ.

ಚಾಲನೆ: ಮೈಸೂರು ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯದ ಬಳಿ ಮೈಸೂರು ನಗರ ಪೊಲೀಸ್ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 'ಚಾಮುಂಡಿ ಮಹಿಳಾ ಸುರಕ್ಷಾ ಪಡೆ'ಯ ಎರಡು ವಾಹನಗಳಿಗೆ ನಗರ ಪೊಲೀಸ್ ಆಯುಕ್ತ ರಮೇಶ್ ಬಾನೂತ್ ಹಾಗೂ ಡಿಸಿಪಿ ಎಸ್.ಜಾಹ್ನವಿ ನಿಶಾನೆ ಪ್ರದರ್ಶಿಸುವ ಮೂಲಕ ಚಾಲನೆ ನೀಡಿದರು. ಪಿಂಕ್ ಬಣ್ಣದ ಸ್ಟಿಕ್ಕರ್‌ವುಳ್ಳ ಈ ವಾಹನ ನಿಗದಿತ ಸ್ಥಳದಲ್ಲಿ ಗಸ್ತು ನಡೆಸಲಿದೆ.

ಪ್ರತ್ಯೇಕ ಪಡೆ: ಈ ಪಡೆಯಲ್ಲಿ 40 ಮಂದಿ ಮಹಿಳಾ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದು, ಎರಡು ಪಾಳಿಯಲ್ಲಿ ನಗರದೆಲ್ಲೆಡೆ ಗಸ್ತು ತಿರುಗುವ ಮೂಲಕ ಮಹಿಳೆಯರು, ಯುವತಿಯರು ಹಾಗೂ ವಿದ್ಯಾರ್ಥಿನಿಯರು ಮಾತ್ರವಲ್ಲದೆ, ಮಕ್ಕಳ ರಕ್ಷಣೆಗೆ ಕಾರ್ಯ ನಿರ್ವಹಿಸಲಿದೆ. ಬೆಳಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮತ್ತು ಮಧ್ಯಾಹ್ನ 2 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಈ ಪಡೆ ಕಾರ್ಯ ನಿರ್ವಹಿಸಲಿದ್ದು, ಈ ಮಹಿಳಾ ಪಡೆಯಲ್ಲಿ ಎಸ್‌ಐ–16, ಎಎಸ್‌ಐ–4, ಮಹಿಳಾ ಮುಖ್ಯ ಪೇದೆ, ಪೇದೆ–20 ಇದ್ದಾರೆ. ಎರಡು ವಾಹನಗಳ ಚಾಲಕರನ್ನು ಹೊರತುಪಡಿಸಿದರೆ, ಉಳಿದ ಎಲ್ಲರೂ ಮಹಿಳಾ ಸಿಬ್ಬಂದಿಗಳೇ ಆಗಿರುವುದು ವಿಶೇಷ.

> ಮೈಸೂರು ನಗರದಲ್ಲಿ ಮಹಿಳೆಯರ ರಕ್ಷಣೆಗೆ ಪ್ರತ್ಯೇಕ ಪಡೆಯನ್ನು ರಚಿಸಲಾಗಿದೆ. ಈ ಪಡೆಯಲ್ಲಿ ಕಾರ್ಯನಿರ್ವಹಿಸಲು ಆಯ್ಕೆ ಮಾಡಿರುವ ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ. ತಂಡದ ಸದಸ್ಯರು ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯ ತಡೆಗೆ ಕಾರ್ಯ ನಿರ್ವಹಿಸಲಿದ್ದಾರೆ. ಮಹಿಳೆಯರ ರಕ್ಷಣೆಗೆ ಇರುವ ಕಾನೂನುಗಳ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡಲಿದ್ದಾರೆ. ಇಂದಿನಿಂದಲ್ಲೇ ನಗರದೆಲ್ಲೆಡೆ ಗಸ್ತು ತಿರುಗಲಿದ್ದು, ಪುಂಡರ ಹಾವಳಿ ನಿಯಂತ್ರಿಸಿ ಮಹಿಳೆಯರಿಗೆ ರಕ್ಷಣೆಗೆ ನೀಡಲಿದೆ. ಶಾಲಾ–ಕಾಲೇಜುಗಳಲ್ಲಿ ರ್‍ಯಾಗಿಂಗ್ ತಡೆಗೂ ಚಾಮುಂಡಿ ಮಹಿಳಾ ಸುರಕ್ಷಾ ಪಡೆ ಕಾರ್ಯ ನಿರ್ವಹಿಸಲಿದೆ. ಶಾಲಾ–ಕಾಲೇಜು, ಪಿಜಿ, ಮಹಿಳಾ ಹಾಸ್ಟೆಲ್, ಹೆಚ್ಚು ಮಹಿಳಾ ಉದ್ಯೋಗಿಗಳಿರುವ ಸ್ಥಳ ಸೇರಿದಂತೆ ಜನನಿಬಿಡ ಸ್ಥಳಗಳಲ್ಲಿ ಈ ಪಡೆ ಗಸ್ತು ನಡೆಸುತ್ತದೆ. ಆ ಮೂಲಕ ಮಹಿಳೆಯರು ಮತ್ತು ಮಕ್ಕಳ ರಕ್ಷಣೆಗೆ ಕ್ರಮ ಕೈಗೊಳ್ಳಲಿದೆ
> - ಬಿ.ರಮೇಶ್, ನಗರ ಪೊಲೀಸ್ ಆಯುಕ್ತ

ಪಡೆಯ ಕಾರ್ಯ ಚಟುವಟಿಕೆ: ಶಾಲಾ–ಕಾಲೇಜು ಹೆಣ್ಣು ಮಕ್ಕಳಿಗೆ ಲೈಂಗಿಕ ದೌರ್ಜನ್ಯ, ಬಾಲ್ಯವಿವಾಹ ನಿಷೇಧ, ಕೌಟುಂಬಿಕ ದೌರ್ಜನ್ಯ ಕಾಯಿದೆ ಬಗ್ಗೆ ಜಾಗೃತಿ ಮೂಡಿಸುವುದು. ಬಸ್ ನಿಲ್ದಾಣ, ರೈಲು ನಿಲ್ದಾಣ, ದೇವಸ್ಥಾನ, ಗಾರ್ಮೆಂಟ್ಸ್‌ಗಳ ಬಳಿ ಗಸ್ತು ತಿರುಗುವ ಮೂಲಕ ಮಹಿಳೆಯರಿಗೆ ಪುಂಡರಿಂದ ಆಗುವ ಕಿರುಕುಳ ತಪ್ಪಿಸುವುದು. ಮಹಿಳೆಯರು ಹೆಚ್ಚಾಗಿರುವ ಜನನಿಬಿಡ ಪ್ರದೇಶಗಳಲ್ಲಿ ಅನುಮಾನಾಸ್ಪದವಾಗಿ ಕಂಡುಬರುವವರ ವಶಕ್ಕೆ ಪಡೆದು ಎಚ್ಚರಿಕೆ ನೀಡಲಾಗುವುದು. ಹಾಸ್ಟೆಲ್ ಮತ್ತು ಪಿಜಿಗಳಲ್ಲಿ ವಾಸ್ತವ್ಯವಿರುವ ಮಹಿಳೆಯರು ಮತ್ತು ಮಕ್ಕಳಿಗೆ ಸೂಕ್ತ ಕಾನೂನು ರಕ್ಷಣೆ ಮತ್ತು ನಾನಾ ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸುವುದು. ವಿದ್ಯಾರ್ಥಿನಿಯರಿಗೆ ಆತ್ಮರಕ್ಷಣೆ ಮತ್ತು ಸ್ವರಕ್ಷಣೆ ಕುರಿತು ತಿಳುವಳಿಕೆ ಮೂಡಿಸುವುದು. ಮಾದಕ ವಸ್ತುಗಳಿಂದ ಆಗುವ ದುಷ್ಪರಿಣಾಮದ ಬಗ್ಗೆ ಜಾಗೃತಿ ಮೂಡಿಸುವುದು. ಶಾಲಾ–ಕಾಲೇಜು ಮತ್ತು ಮಹಿಳೆಯರು ಕರ್ತವ್ಯ ನಿರ್ವಹಿಸುವ ಸ್ಥಳಗಳಲ್ಲಿ ಪಡೆಯ ಅಧಿಕಾರಿಗಳು ಸಭೆ ನಡೆಸಿ, ಮುಂಜಾಗ್ರತೆ ವಹಿಸುವುದು. ಸಮಸ್ಯೆಯಾದರೆ ಮಾಹಿತಿ ನೀಡುವಂತೆ ಈ ಪಡೆಯ ಸಿಬ್ಬಂದಿಗಳು ಜಾಗೃತಿ ಮೂಡಿಸಲಿದ್ದಾರೆ.

ಜಾಗೃತಿ ಜಾಥಾ: ಚಾಮುಂಡಿ ಮಹಿಳಾ ಸುರಕ್ಷಾ ಪಡೆಗೆ ಚಾಲನೆ ನೀಡಿದ ಬಳಿಕ, ವಿವಿಧ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾಗೆ ಚಾಲನೆ ನೀಡಲಾಯಿತು. ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗದಿಂದ ಆರಂಭವಾದ ಜಾಥಾ ದೇವರಾಜ ಅರಸ್ ರಸ್ತೆಯ ಮೂಲಕ ಸಾಗಿ, ಮಹಾರಾಜ ಪದವಿ ಪೂರ್ವ ಕಾಲೇಜು ಮೈದಾನ ತಲುಪಿತು. ವಿವಿಧ ಘೋಷಣಾ ಫಲಕ ಹಿಡಿದು ಜಾಥಾದಲ್ಲಿ ಸಾಗಿದ ವಿದ್ಯಾರ್ಥಿಗಳು ಗಮನ ಸೆಳೆದರು. ಅಲ್ಲದೆ, ಮಹಿಳೆಯರು ಮತ್ತು ಮಕ್ಕಳ ರಕ್ಷಣೆಗೆ ಚಾಮುಂಡಿ ಮಹಿಳಾ ಸುರಕ್ಷಾ ಪಡೆ ಕಾರ್ಯಾಚರಣೆ ಆರಂಭಿಸಿರುವ ಮಾಹಿತಿಯನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಡಿಸಿಪಿ ಎಸ್.ಜಾಹ್ನವಿ, ಸಿಎಆರ್ ಡಿಸಿಪಿ ಮಾರುತಿ, ಎಸಿಪಿಗಳಾದ ಶಾಂತಮಲ್ಲಪ್ಪ, ಗಜೇಂದ್ರ ಪ್ರಸಾದ್, ಪರಶುರಾಮಪ್ಪ, ಸಂದೇಶ್ ಕುಮಾರ್, ಚಂದ್ರಶೇಖರ್, ಸುರೇಶ್ ಸೇರಿದಂತೆ ಎಲ್ಲಾ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಕೃಷಿಯಲ್ಲಿ 'ನೈಪುಣ್ಯ' ಮಕ್ಕಳು!









"ಬಿತ್ತುವುದು, ನಾಟಿ ಮಾಡುವುದರಿಂದ ಹಿಡಿದು ಬೆಳೆ ಕಟಾವು ಮಾಡುವವರೆಗೂ ವಿದ್ಯಾರ್ಥಿಗಳದ್ದೇ ಇಲ್ಲಿ ಪಾತ್ರ ಪ್ರಕೃತಿ ಸಹಜವಾದ ಕೃಷಿಯಲ್ಲಿ ಅತ್ಯಂತ ಉತ್ಸಾಹ ಹಾಗೂ ಕುತೂಹಲದಿಂದ ಪಾಲ್ಗೊಂಡು ಕಲಿಕೆಯಲ್ಲಿ ತೊಡಗುತ್ತಾರೆ. ಇದರಿಂದ ಮಕ್ಕಳಿಗೆ ತಾವೇ ಆಹಾರ ಬೆಳೆದಾಗ ಆಹಾರ ಉತ್ಪಾದನೆ ಹಿಂದೆ ಅಡಗಿರುವ ಶ್ರಮದ ಪರಿಚಯವಾಗುತ್ತದೆ. ಕೃಷಿ ಅರ್ಥವಾಗುತ್ತದೆ. ಆಹಾರ ಪೋಲು ಮಾಡಬಾರದೆಂಬ ಅರಿವು ಮೂಡುತ್ತದೆ.
ಕೃಷಿ ಚಟುವಟಿಕೆ ಮಕ್ಕಳ ದೈಹಿಕ, ಮಾನಸಿಕ ಹಾಗೂ ಶೈಕ್ಷಣಿಕ ವಿಚಾರಗಳಲ್ಲಿ ಸರ್ವತೋಮುಖ ಬೆಳವಣಿಗೆಗೆ ನೀರೆರೆಯುತ್ತದೆ.



ರಘು ಆರ್.ಕೌಟಿಲ್ಯ
ನೈಪುಣ್ಯ ಶಾಲೆ ಮುಖ್ಯಸ್ಥರು



ಅಲ್ಲಿ ಶಾಲಾ ಮಕ್ಕಳು ಸ್ಕೇಲ್ ಹಿಡಿದು ಗಣಿತದ ಅಭ್ಯಾಸ ಮಾಡುವುದರ ಜೊತೆಗೆ ಗುದ್ದಲಿ ಹಿಡಿದು ವ್ಯವಸಾಯ ಮಾಡುತ್ತಿದ್ದಾರೆ. ಭಾಷೆಗಳ ವ್ಯಾಕರಣ ಕಲಿಯುವುದರ ಜೊತೆಗೆ ಸಸ್ಯಶಾಸ್ತ್ರದ ಗ್ರಾಮರ್ ಅನ್ನು ಕರಗತ ಮಾಡಿಕೊಳ್ಳುವ ಪ್ರಯತ್ನ ನಡೆಸಿದ್ದಾರೆ. ಲ್ಯಾಬ್‌ನಲ್ಲಿ ಟ್ಯೂಬ್ ಹಿಡಿಯುವ ಪುಟ್ಟ ಕೈಗಳು ಕೆಸರು ಗದ್ದೆಯಲ್ಲಿ ಭತ್ತದ ಪೈರು ನೆಟ್ಟು ಹಸಿರು ಪ್ರೀತಿ ಮೆರೆಯುತ್ತಿವೆ.

ಇಂಥದ್ದೊಂದು ವಿನೂತನ ಕೃಷಿ ಶಿಕ್ಷಣ, ಶೈಕ್ಷಣಿಕ ನಗರಿ ಮೈಸೂರಿನ ಆರ್.ಟಿ.ನಗರದಲ್ಲಿರುವ ನೈಪುಣ್ಯ ಶಾಲೆಯಲ್ಲಿ ಸದ್ದಿಲ್ಲದೆ ನಡೆದಿದೆ. ಇಲ್ಲಿ ಗಣಿತ, ವಿಜ್ಞಾನ, ಸಮಾಜ ಶಾಸ್ತ್ರ, ಭಾಷಾ ವಿಷಯಗಳ ಜೊತೆಗೆ ಭಾರತದ ಮೂಲ ಕಾಯಕ ಕೃಷಿ ಶಿಕ್ಷಣಕ್ಕೂ ಪ್ರಾಮುಖ್ಯತೆ ನೀಡಿರುವುದು ವಿಶೇಷ. ಇಲ್ಲಿನ ಶಿಕ್ಷಕರು ಥಿಯರಿ ಜೊತೆಗೆ ಪ್ರಾಕ್ಟಿಕಲ್‌ಗೂ ಆದ್ಯತೆ ನೀಡಿದ್ದಾರೆ. ಶಾಲೆಯ ವಿಶಾಲವಾದ ಅಂಗಳಕ್ಕೆ ವಿದ್ಯಾರ್ಥಿಗಳನ್ನು ಕರೆದೊಯ್ದು ಸಸ್ಯಗಳ ಬೆಳವಣಿಗೆಗೆ ಸೂರ್ಯ ಕಿರಣಗಳ ಅವಶ್ಯಕತೆ, ಸಸ್ಯಗಳ ಬೇರು, ಕಾಂಡ, ಕಾಯಿ, ಹೂವು, ಹಣ್ಣು, ಎಲೆಗಳ ಬಗ್ಗೆ ಮನದಟ್ಟು ಮಾಡುತ್ತಿದ್ದಾರೆ. ಮಕ್ಕಳ ಕೈಯಲ್ಲೇ ಸಸಿಗಳನ್ನು ನೆಡಿಸಿ, ಆರೈಕೆ ಮಾಡಿಸುವ ಮೂಲಕ ಸಸ್ಯ ವಿಜ್ಞಾನವನ್ನು ಅರ್ಥ ಮಾಡಿಸುತ್ತಿದ್ದಾರೆ. ಮಕ್ಕಳು ಹಿರಿ ಹಿರಿ ಹಿಗ್ಗಿ, ಖುಷಿಯಿಂದ ಕಲಿಯುತ್ತಾರೆ. ತಾವೇ ಸ್ವತಃ ಮಣ್ಣು ಹದಗೊಳಿಸಿ ಬಿತ್ತನೆ ಮಾಡಿ, ಬೆಳೆ ಬೆಳೆಯುತ್ತಿದ್ದಾರೆ.

ಕಳೆದ ಮೂರ್‍ನಾಲ್ಕು ದಶಕಗಳ ಹಿಂದೆ ಗ್ರಾಮೀಣ ಮಕ್ಕಳ ದಿನಚರಿಯಲ್ಲಿ ತಮ್ಮ ಗದ್ದೆಗಳಲ್ಲಿ ಕೆಲಸ ಮಾಡುವ ಆಳುಗಳಿಗೆ ಊಟ ತೆಗೆದುಕೊಂಡು ಹೋಗುವುದು, ರಜಾ ದಿನಗಳಲ್ಲಿ ತಮ್ಮ ಪೋಷಕರೊಂದಿಗೆ ಜಮೀನಿನ ಚಿಕ್ಕಪುಟ್ಟ ಕೆಲಸಗಳಲ್ಲಿ ಪಾಲ್ಗೊಳ್ಳುವುದು ಸಾಮಾನ್ಯವಾಗಿತ್ತು. ಮಕ್ಕಳು ತುಂಬಾ ಖುಷಿಯಿಂದಲೇ ಕೃಷಿ ಚಟುವಟಿಕೆಗಳಲ್ಲಿ ಭಾಗಿಯಾಗುತ್ತಿದ್ದರು. ವ್ಯವಸಾಯ ಮಕ್ಕಳ ದೈಹಿಕ ಹಾಗೂ ಮಾನಸಿಕ ಪ್ರಗತಿಯಲ್ಲಿ ಮುಖ್ಯವಾದ ಪಾತ್ರ ವಹಿಸಿತ್ತು.

ಆದರೆ, ಇತ್ತೀಚಿನ ದಶಕಗಳಲ್ಲಿ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಪೋಷಕರು ನಗರ ಪ್ರದೇಶಗಳಿಗೆ ವಲಸೆ ಬರುತ್ತಿದ್ದಾರೆ. ಇಲ್ಲವೇ ಮಕ್ಕಳನ್ನು ನಗರ ಪ್ರದೇಶಗಳ ಶಾಲಾ-ಕಾಲೇಜುಗಳಿಗೆ ಸೇರಿಸುತ್ತಿದ್ದಾರೆ. ಪೋಷಕರು ಮಕ್ಕಳು ಪರೀಕ್ಷೆಯಲ್ಲಿ ಗಳಿಸುವ ಅಂಕದ ಬೆನ್ನತ್ತಿದ್ದಾರೆ. ನಿಜ, ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಅಂಕ ಬೇಕು. ಹಾಗೆಂದ ಮಾತ್ರಕ್ಕೆ ಅಂಕ ಒಂದೇ ಮುಖ್ಯವೇ? ಕೌಶಲ್ಯ ಬೇಡವೇ? ಬೇಸಾಯ ಎಂಬ ಕೌಶಲ್ಯವನ್ನು ಮಕ್ಕಳಿಗೆ ಹೇಳಿಕೊಡಬೇಡವೇ? ಆಹಾರ ಉತ್ಪಾದನೆಯಲ್ಲಿ ದೇಶವು ಸ್ವಾವಲಂಬನೆ ಸಾಧಿಸುವುದೆಂದರೆ ಏನು? ಅನ್ನದಾತ ಬೆವರು ಸುರಿಸಿ ಬೆಳೆಯುವ ಪರಿ ಹೇಗೆ? ಇವೆಲ್ಲದರ ಪರಿಚಯ ಮಕ್ಕಳಿಗೆ ಆಗಬೇಡವೇ? ಹಾಗಾಗಿಯೇ ನೈಪುಣ್ಯ ಶಾಲೆ ಇಂತಹ ಒಂದು ಮಹತ್ವದ ಕಾರ್ಯಕ್ಕೆ ಕೈ ಹಾಕಿದೆ. ಮಕ್ಕಳಲ್ಲಿ ಕೃಷಿ ಕ್ಷೇತ್ರದ ಬಗ್ಗೆ ಆಸಕ್ತಿ ಬಿತ್ತುವ ಮಹತ್ವದ ಪ್ರಯತ್ನ ನಡೆಸುತ್ತಿದೆ.

ಸಹಯೋಗದಲ್ಲಿ ಕೃಷಿ ಪಾಠ: ನೈಪುಣ್ಯ ಶಾಲೆಯು, ಲಿಟಲ್ ಪ್ಲಾಂಟ್ಸ್ ಆಫ್ ಇಂಡಿಯಾ ಎಂಬ ನವೋದ್ಯಮ ಕಂಪನಿಯ ಸಹಯೋಗದಲ್ಲಿ ವರ್ಷವಿಡೀ ಮಕ್ಕಳಿಗೆ ಕೃಷಿ, ತೋಟಗಾರಿಕೆ ಕುರಿತು ಶೈಕ್ಷಣಿಕ ಕಾರ್ಯಕ್ರಮ ಹಮ್ಮಿಕೊಂಡಿದೆ. ಶೈಕ್ಷಣಿಕ ಪುಸ್ತಕಗಳನ್ನು ಆಧರಿಸಿ ಮಕ್ಕಳ ವಯಸ್ಸಿಗೆ ಅನುಗುಣವಾಗಿ ವಿಷಯವನ್ನು ಬೋಧಿಸಲಾಗುತ್ತಿದೆ. ಶಾಲೆಯ ಆವರಣದಲ್ಲೇ ಅದ್ಭುತವಾದ ಕೈ ತೋಟವನ್ನು ರೂಪಿಸಲಾಗಿದೆ. ಮಕ್ಕಳ ಕೈಯಿಂದಲೇ ಬೆಳೆ ಬೆಳೆಸಲಾಗುತ್ತದೆ. ಪ್ರತಿ ತರಗತಿಗೂ ವಾರಕ್ಕೆ ಒಂದು ಅವಧಿಯನ್ನು ಕೃಷಿ ಪ್ರಾಯೋಗಿಕ ತರಗತಿಗೆ ಮೀಸಲಿಡಲಾಗಿದೆ. ಪ್ರತಿ ವಾರವೂ ವಿದ್ಯಾರ್ಥಿಗಳು ಬೇಸಾಯದ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುತ್ತಾರೆ. ಮಕ್ಕಳೇ ಬೆಳೆದಿರುವ ಬೀನ್ಸ್, ಮೂಲಂಗಿ, ಟೊಮೆಟೊ, ಮೆಣಸಿನಕಾಯಿ, ಗೆಡ್ಡೆಕೋಸು, ಬೀಟ್ರೋಟ್, ಬಾಳೆ, ಸೊಪ್ಪುಗಳು ನಳನಳಿಸುತ್ತಿವೆ. ರಾಗಿ, ಭತ್ತ, ಕಡಲೆ ಕಾಯಿ, ಕಬ್ಬು, ಸೂರ್ಯ ಕಾಂತಿ, ಸೋಯಾಬೀನ್, ತೊಗರಿ ಬೆಳೆ ಕಣ್ಮನ ಸೆಳೆಯುತ್ತವೆ. ಬಿತ್ತುವುದು, ನಾಟಿ ಮಾಡುವುದರಿಂದ ಹಿಡಿದು ಬೆಳೆ ಕಟಾವು ಮಾಡುವವರೆಗೂ ವಿದ್ಯಾರ್ಥಿಗಳದ್ದೇ ಇಲ್ಲಿ ಪಾತ್ರ. ಪ್ರಕೃತಿ ಸಹಜವಾದ ಕೃಷಿಯಲ್ಲಿ ಅತ್ಯಂತ ಉತ್ಸಾಹ ಹಾಗೂ ಕುತೂಹಲದಿಂದ ಪಾಲ್ಗೊಂಡು ಕಲಿಕೆಯಲ್ಲಿ ತೊಡಗುತ್ತಾರೆ. ಇದರಿಂದ ಮಕ್ಕಳಿಗೆ ತಾವೇ ಆಹಾರ ಬೆಳೆದಾಗ ಆಹಾರ ಉತ್ಪಾದನೆ ಹಿಂದೆ ಅಡಗಿರುವ ಶ್ರಮದ ಪರಿಚಯವಾಗುತ್ತದೆ. ಕೃಷಿ ಅರ್ಥವಾಗುತ್ತದೆ. ಆಹಾರ ಪೋಲು ಮಾಡಬಾರದೆಂಬ ಅರಿವು ಮೂಡುತ್ತದೆ.

ಕೃಷಿ ಚಟುವಟಿಕೆ ಮಕ್ಕಳ ದೈಹಿಕ, ಮಾನಸಿಕ ಹಾಗೂ ಶೈಕ್ಷಣಿಕ ವಿಚಾರಗಳಲ್ಲಿ ಸರ್ವತೋಮುಖ ಬೆಳವಣಿಗೆಗೆ ನೀರೆರೆಯುತ್ತದೆ. ಕೈ ತೋಟದಲ್ಲಿ ಕೆಲಸ ಮಾಡುವಾಗ ತಮ್ಮ ಸಂಪೂರ್ಣ ಮನಸ್ಸನ್ನು ಅಲ್ಲಿನ ಚಟುವಟಿಕೆಗಳ ಮೇಲೆ ಕೇಂದ್ರೀಕರಿಸುವುದರಿಂದ ಕಲಿಕೆಯ ಏಕಾಗ್ರತೆಗೆ ಇದು ಸಹಕಾರಿಯಾಗಲಿದೆ. ಕೃಷಿ ಚಟುವಟಿಕೆಗಳಲ್ಲಿ ಸಸ್ಯ ವಿಜ್ಞಾನವನ್ನು ಓದಿ, ನೋಡಿ, ಕೇಳಿ ಹಾಗೂ ಮಾಡಿ ಕಲಿಯುವುದು ಇಲ್ಲಿನ ಪ್ಲಸ್ ಪಾಯಿಂಟ್. ಮಕ್ಕಳು ಮಣ್ಣು ಮುಟ್ಟುವುದರಿಂದ ಕೆಲವು ಬ್ಯಾಕ್ಟೀರಿಯಾಗಳು ರಾಸಾಯನಿಕಗಳಿಂದ ಉತ್ತೇಜಿಸಲ್ಪಡುತ್ತವೆ. ಇದು ನಮ್ಮ ದೇಹದಲ್ಲಿ ಸೆರೋಟೋನಿನ್ ಎಂಬ ಹ್ಯಾಪಿ ಹಾರ್ಮೋನ್ ಹೆಚ್ಚು ಉತ್ಪತ್ತಿ ಮಾಡುತ್ತವೆ. ರೋಗ ನಿರೋಧಕ ಶಕ್ತಿಯೂ ಹೆಚ್ಚಾಗುತ್ತದೆ. ತಾಂತ್ರಿಕ ಜಗತ್ತಿನಲ್ಲಿ ಮಕ್ಕಳು ಕೈಯಲ್ಲಿ ಮೊಬೈಲ್ ಹಿಡಿದು ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವುದರ ಬದಲು ಅವರ ಕೈ ಕೆಸರಾಗುವುದು ಒಳ್ಳೆಯದಲ್ಲವೇ?

ಅಭಿವೃದ್ಧಿ ಹೊಂದಿದ ರಾಷ್ಟ್ರಗಳಲ್ಲಿ ಪ್ರಾಥಮಿಕ ಶಿಕ್ಷಣದ ಹಂತದಿಂದಲೇ ಕೃಷಿ ವಿಷಯವಿದೆ. ಆಫ್ರಿಕಾದ ಕೀನ್ಯಾ, ಉಗಾಂಡ ಮತ್ತಿತರ ದೇಶಗಳಲ್ಲೂ ಕೃಷಿಯು ಶಿಕ್ಷಣದ ಒಂದು ಭಾಗವೇ ಆಗಿದೆ. ಭಾರತದಲ್ಲೂ ಕೃಷಿಯನ್ನು ಪ್ರಾಥಮಿಕ ಶಿಕ್ಷಣದ ಹಂತದಲ್ಲಿ ಬೋಧಿಸುವ ಮಹತ್ವವನ್ನು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ತಿಳಿಸಲಾಗಿದೆ.

ದೇಶದಲ್ಲಿ ಅದರಲ್ಲೂ ಕರ್ನಾಟಕದ ಅನೇಕ ಶಾಲೆಗಳಲ್ಲಿ ಕೃಷಿಯನ್ನು ಮಕ್ಕಳಿಗೆ ಕಲಿಸುವ ಪ್ರಯತ್ನ ನಡೆದಿದೆ. ಆದರೆ, ಕೆಲವು ಹಣ್ಣು, ತರಕಾರಿಗಳನ್ನು ಬೆಳೆಸುವುದಕ್ಕಷ್ಟೇ ಸೀಮಿತವಾಗಿವೆ. ಆದರೆ, ಮೈಸೂರಿನ ನೈಪುಣ್ಯ ಶಾಲೆಯಲ್ಲಿ ಕೃಷಿ ಅಥವಾ ತೋಟಗಾರಿಕೆಯಲ್ಲಿ ಸ್ನಾತಕೋತ್ತರ ಪದವಿ ಪಡೆದವರನ್ನೇ ಶಿಕ್ಷಕರನ್ನಾಗಿ ನೇಮಿಸಲಾಗಿದೆ. ಹೀಗಾಗಿ, ಕೃಷಿ ಕುರಿತು ಪಠ್ಯಕ್ರಮದ ಅನುಗುಣವಾಗಿ ಹಾಗೂ ಪ್ರಾಯೋಗಿಕವಾಗಿ ಬೋಧಿಸುವ ವಿನೂತನ ಶ್ರಮವಾಗಿದ್ದು, ಇದು ದೇಶದಲ್ಲೇ ಪ್ರಥಮ ಪ್ರಯತ್ನ ಎನ್ನಬಹುದು.

ಶಾಲೆಯ ಕೈತೋಟದಲ್ಲಿ ಜೇನು ಸಾಕಲಾಗಿದೆ. ಕೈ ತೋಟದಲ್ಲಿ ಪರೋಪಕಾರಿ ಕೀಟಗಳು, ಸಾವಯವ ಗೊಬ್ಬರ, ಮೈಕ್ರೋಗ್ರೀನ್ಸ್, ಎರೆಹುಳುವಿನ ಪಾತ್ರ, ಜಲಕೃಷಿ, ಮಣ್ಣಿನ ಪಾತ್ರ, ರೇಷ್ಮೆ ಹುಳು ಸಾಕಣೆ, ವಿವಿಧ ಸಸ್ಯಗಳು, ಬೆಳೆಗಳ ಕುರಿತು ಪ್ರಾಯೋಗಿಕ ಶಿಕ್ಷಣವನ್ನು ಕಲಿಸಲಾಗುತ್ತದೆ. ಇದರಿಂದ ಮಕ್ಕಳಲ್ಲಿ ಪ್ರಕೃತಿ ಮತ್ತು ಪ್ರಕೃತಿಯ ಇತರ ಜೀವತಂತುಗಳ ಕುರಿತು ಜೀವನದ ಉದ್ದಕ್ಕೂ ಅನುಕಂಪ ಮೂಡುತ್ತದೆ. ಶಾಲೆಯ ಬಗ್ಗೆಯೂ ಹೆಮ್ಮೆ ಎನ್ನಿಸುತ್ತದೆ.

ಮಕ್ಕಳು ತಾವು ಬೆಳೆದ ತರಕಾರಿಗಳನ್ನು ತಾವೇ ಕಟಾವು ಮಾಡಿ, ತಿನ್ನುತ್ತಾರೆ. ದೇಶದ ಇಂದಿನ ಪೀಳಿಗೆ ಮಕ್ಕಳು ನಮ್ಮ ಪಾರಂಪರಿಕ ಆಹಾರ ಪದ್ಧತಿಯನ್ನು ಮರೆತಿದ್ದಾರೆ. ಬಾಲ್ಯದಲ್ಲಿಯೇ ಕೃಷಿ ಚಟುವಟಿಕೆಗಳಲ್ಲಿ ತೊಡಗುವುದರಿಂದ ಇದು ಉತ್ತಮ ಆಹಾರ ಪದ್ಧತಿಯನ್ನು ರೂಢಿಸುವುದರಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

"ಅನ್ನದಾತನ ಬದುಕು ಇವತ್ತು ದುಸ್ತರ. ಅವರ ನಿಸ್ವಾರ್ಥ ಸೇವೆಯ ಪರಿಚಯವೇ ಮಕ್ಕಳಿಗೆ ಇಲ್ಲ. ಮಕ್ಕಳು ವ್ಯವಸಾಯ ಕಲಿಯುವುದರಿಂದ ಮಣ್ಣಿನ ಮಕ್ಕಳ ಪರಿಶ್ರಮ, ಸೇವೆ ಅರ್ಥವಾಗುತ್ತದೆ. ಹಸಿದ ಹೊಟ್ಟೆಗೆ ಆಹಾರ ನೀಡುವ ಅನ್ನದಾತನ ಬಗ್ಗೆ ಗೌರವ ಇಮ್ಮಡಿ ಆಗುತ್ತದೆ. ಕೃಷಿಯ ಖುಷಿ ಅನುಭವಿಸುತ್ತಾರೆ. ಉನ್ನತ ಶಿಕ್ಷಣದಲ್ಲಿ ಕೃಷಿ ವಿಷಯವನ್ನು ಆಸಕ್ತಿಯಿಂದ ಆಯ್ಕೆ ಮಾಡಿಕೊಂಡು ದೇಶದ ಆಹಾರ ಭದ್ರತೆಗೆ ತಮ್ಮ ಕೊಡುಗೆ ನೀಡಬಲ್ಲವರಾಗುತ್ತಾರೆ. ಕೃಷಿಯನ್ನು ಒಂದು ಉದ್ಯಮವನ್ನಾಗಿ ನೋಡಬಲ್ಲವರಾಗುತ್ತಾರೆ. ಪ್ರಕೃತಿಯ ಜ್ಞಾನ ಪಡೆದು ನಿಸರ್ಗದ ಸಂರಕ್ಷಣೆಗೆ ಹೆಜ್ಜೆ ಇಡಬಲ್ಲವರಾಗುತ್ತಾರೆ. ಪ್ರಾಥಮಿಕ ಶಾಲೆಯ ಹಂತದಲ್ಲೇ ವಿದ್ಯಾರ್ಥಿಗಳಿಗೆ ಕೃಷಿ ಪರಿಚಯಿಸಬೇಕು. ಸ್ವತಃ ಅವರ ಕೈಯಿಂದಲೇ ಬೆಳೆ ಬೆಳೆಯುವುದನ್ನು ಕಲಿಸಬೇಕು. ಇದರಿಂದ ಮಕ್ಕಳು ದೊಡ್ಡವರಾದ ಮೇಲೆ ಕೃಷಿ ಕ್ಷೇತ್ರದಲ್ಲಿ ಆಸಕ್ತಿ ಬೆಳೆಸಿಕೊಂಡು ಆ ನಿಟ್ಟಿನಲ್ಲಿ ಸಾಗಬಹುದು. ಎಲ್ಲರೂ ಡಾಕ್ಟರ್, ಎಂಜಿನಿಯರ್ ಅಂದ್ರೆ ಹೇಗೆ? ಕೃಷಿ ವಿಜ್ಞಾನಿ, ಕೃಷಿಯನ್ನು ಲಾಭದಾಯಕವನ್ನಾಗಿಸುವ ರೈತ ಏಕಾಗಬಾರದು? ಕೃಷಿ ಕ್ಷೇತ್ರವನ್ನು ಒಂದು ಉದ್ಯಮವನ್ನಾಗಿಸುವ ಪಥ ಇವತ್ತೇ ಸಿದ್ಧವಾಗಬೇಕು. ಕೃಷಿ ಒಂದು ಉದ್ಯಮವಾಗಿ ಬೆಳೆಯದಿರುವುದಕ್ಕೆ ಪ್ರಾಥಮಿಕ ಶಾಲಾ ಹಂತದಲ್ಲಿ ಮಕ್ಕಳಿಗೆ ನಾವು ಕೃಷಿ ಚಟುವಟಿಕೆಗಳನ್ನು ಪರಿಚಯಿಸದಿರುವುದೂ ಕೂಡ ಒಂದು ಪ್ರಮುಖ ಕಾರಣ.



-ಡಾ.ಸಿ.ಎ.ದೀಪಕ್
ಭತ್ತದ ತಳಿ ವಿಜ್ಞಾನಿ







ವಾರಭವಿಷ್ಯ
7.01.2024 ರಿಂದ 13.01.2024

ಈ ವಾರದಲ್ಲಿ ಗ್ರಹಗಳ ರಾಶಿ ಸಂಚಾರ:- ರವಿ-ಧನುಸ್ಸು, ಚಂದ್ರ-ತುಲಾ, ವೃಶ್ಚಿಕ, ಧನುಸ್ಸು, ಮಕರ, ಕುಜ-ಧನುಸ್ಸು, ಬುಧ-ಧನುಸ್ಸು, ಗುರು-ಮೇಷ, ಶುಕ್ರ-ವೃಶ್ಚಿಕ, ಶನಿ-ಕುಂಭ, ರಾಹು-ಮೀನ ಮತ್ತು ಕೇತು-ಕನ್ಯಾ.

ವಿ.ಕೇಶವಮೂರ್ತಿ
ಜ್ಯೋತಿಷ್ಯ ವಿದ್ವಾಂಸರು, 'ಭಾವಸಾರ ರತ್ನ'
'ಚೈತನ್ಯಶ್ರೀ ಪ್ರಶಸ್ತಿ ಪುರಸ್ಕೃತರು'
ಕಲ್ಪದ್ರುಮ ಜ್ಯೋತಿಷ್ಯ ಅಧ್ಯಯನ ಕೇಂದ್ರ
ವಿಳಾಸ: 533, 6ನೇ ಕ್ರಾಸ್, ಬೋಗಾದಿ ಉತ್ತರ,
2ನೇ ಹಂತ, ಮೈಸೂರು ನಿರ್ಮಿತಿ ಕೇಂದ್ರ ಹತ್ತಿರ, ಮೈಸೂರು.
ಮೊ.9740973224, 9739548720



ಮೇಷ (ಚು.ಚೆ.ಲ.ಲಿ.ಲು.ಲೆ.ಲೋ.ಅ)
ವಾರದ ಆದಿಗೆ ಶೃಂಗಾರ ಸಾಧನ ವಸ್ತು ವ್ಯಾಪಾರಿಗಳಿಗೆ ಡಿಮ್ಯಾಂಡ್ ಹೆಚ್ಚಾಗಿ ಧನ ಸಂಗ್ರಹವಾಗುವುದು. ಸಮಾಜದಲ್ಲಿ ನಿಮ್ಮ ಖ್ಯಾತಿ ಹೆಚ್ಚಾಗಲಿದೆ. ಆಸ್ತಿಗೆ ಸಂಬಂಧಿಸಿದ ಹೊಸ ಒಪ್ಪಂದಗಳನ್ನು ಮಾಡಿಕೊಳ್ಳುವಾಗ ಎಚ್ಚರವಾಗಿರುವುದು ಅವಶ್ಯ. ಭಾಗ್ಯ ಸ್ಥಾನದಲ್ಲಿ ತ್ರಿಗ್ರಹಯೋಗ ಉಂಟಾಗಿರುವುದರಿಂದ ಅನವಶ್ಯಕ ಹೂಡಿಕೆಗಳಿಂದ ಕೈ ಸುಟ್ಟುಕೊಳ್ಳುವಿರಿ. ಅನಾರೋಗ್ಯದ ಸೂಚನೆ ಇದೆ.
ಶ್ರೀ ಸುಬ್ರಮಣ್ಯಸ್ವಾಮಿ ದರ್ಶನ. ಶುಭ ಸಂಖ್ಯೆ-5.

ವೃಷಭ (ಇ.ಉ.ಎ.ಒ.ವ.ವಿ.ವು.ವೆ.ವೊ)
ನಿರೀಕ್ಷಿತ ಹಣ ಕೈ ಸೇರುವುದು. ಅನಾರೋಗ್ಯದಿಂದ ಮುಕ್ತಿ ಹೊಂದಿ ಸಂತೋಷದಿಂದ ಇರುವಿರಿ. ಅಧಿಕಾರ ವರ್ಗದವರ ಸಹಾಯ ದೊರೆಯುವುದು. ಪುಣ್ಯ ಕೆಲಸಗಳಲ್ಲಿ ಆಸಕ್ತಿ ಮೂಡುವುದು. ಸಂಚಾರಗಳು ಹೆಚ್ಚಲಿದ್ದು ಮಾರ್ಗ ಮಧ್ಯೆ ತೊಂದರೆಗಳು ಉಂಟಾಗುವುದು. ಹಸಿವಿನಿಂದ ಬಳಲುವಿರಿ. ನೆರೆಹೊರೆಯಲ್ಲಿ ಅವಿಶ್ವಾಸವನ್ನು ಎದುರಿಸಬೇಕಾದೀತು. ಆಯುಧ, ಶಸ್ತ್ರಗಳಿಂದ ಜಾಗೃತರಾಗಿರಿ.
ಶ್ರೀ ದೇವೀಸ್ತೋತ್ರ ಪಠಣ. ಶುಭ ಸಂಖ್ಯೆ-2.

ಮಿಥುನ (ಕ.ಕಿ.ಕು.ಘ.ಙ.ಛ.ಕೆ.ಕೊ.ಹ)
ವಾರದ ಆದಿಗೆ ಆಪ್ತ ಸ್ನೇಹಿತರೊಂದಿಗೆ ವಿವಾದಗಳು ದೂರವಾಗುತ್ತವೆ. ವ್ಯಾಪಾರ, ಉದ್ಯೋಗಗಳು ಉತ್ಸಾಹದಾಯಕವಾಗಿ ನಡೆದು ಆರ್ಥಿಕ ಸ್ಥಿತಿ ಉತ್ತಮಗೊಳ್ಳುವುದು. ನೆರೆಹೊರೆಯವರ ವಿಷಯದಲ್ಲಿ ಆಸಕ್ತಿ ತೋರುವುದರಿಂದ ಮೆಚ್ಚುಗೆಗೆ ಪಾತ್ರರಾಗುವಿರಿ. ಸಣ್ಣ ಮಕ್ಕಳ ಆರೋಗ್ಯದಲ್ಲಿ ಜಾಗ್ರತೆ ವಹಿಸಬೇಕು. ವಾರಾಂತ್ಯಕ್ಕೆ ಪಿಕ್‌ನಿಕ್ ಮೂಡ್. ಆದರೆ ಜಲಾಶಯಗಳ ಹತ್ತಿರ ಹುಡುಗಾಟ ಸಲ್ಲದು.
ಶ್ರೀ ವಿಷ್ಣು ಪೂಜಿಸಿ. ಶುಭ ಸಂಖ್ಯೆ-3

ಕಟಕ (ಹೊ.ಹು.ಹೆ.ಹೊ.ಡ.ಡಿ.ಡು)
ವ್ಯವಹಾರದಲ್ಲಿ ಪ್ರಮುಖ ನಿರ್ಧಾರಗಳನ್ನು ಕಾರ್ಯಗತಗೊಳಿಸಲು ಸಮಯ ಸೂಕ್ತವಾಗಿದೆ. ಹೊಸ ವಾಹನ ಖರೀದಿಯ ಯೋಗವಿದೆ. ಸಮಾಜದಲ್ಲಿ ಗೌರವಕ್ಕೆ ಕೊರತೆ ಇರುವುದಿಲ್ಲ. ಸ್ಥಿರಾಸ್ತಿ ಖರೀದಿಯ ವಿಷಯದಲ್ಲಿ ಮೋಸ ಹೋಗುವ ಸಾಧ್ಯತೆ ಇರುತ್ತದೆ. ವಿದ್ಯಾರ್ಥಿಗಳಿಗೆ ಕಠಿಣ ಪರಿಶ್ರಮವಿಲ್ಲದೆ ಫಲ ದೊರೆಯದು. ನ್ಯಾಯಾಲಯ ವಿಚಾರಗಳು ನಿರಾಶಾದಾಯಕವಾಗಿರುತ್ತವೆ.
ಶ್ರೀ ದುರ್ಗಾಸ್ತುತಿ. ಶುಭ ಸಂಖ್ಯೆ-4.

ಸಿಂಹ (ಮ.ಮಿ.ಮು.ಮೊ.ಮೆ.ಟ.ಟಿ.ಟು.ಟೆ)
ಅಂದುಕೊಂಡ ಕಾರ್ಯಗಳನ್ನು ಅಂದುಕೊಂಡ ಸಮಯಕ್ಕೆ ಪೂರ್ಣಗೊಳಿಸುತ್ತೀರಿ. ಹಣಕಾಸಿನ ವಿಷಯದಲ್ಲಿ ಉಂಟಾಗಿದ್ದ ಕಿರಿಕಿರಿಗಳು ನಿವಾರಣೆಯಾಗುವುದು. ನಿರುದ್ಯೋಗಿಗಳಿಗೆ ಶುಭ ವಾರ್ತೆ ಬರುವುದು. ಐಟಿ-ಬಿಟಿ ಅಭ್ಯರ್ಥಿಗಳಿಗೆ ಹೊಸ ಜವಾಬ್ದಾರಿಗಳನ್ನು ನೀಡಲಾಗುತ್ತದೆ. ಬಂಧು ಮಿತ್ರರೊಂದಿಗೆ ಭಿನ್ನಾಭಿಪ್ರಾಯಗಳು ಉಂಟಾದರೂ ಹಿರಿಯರ ಮಧ್ಯಸ್ಥಿಕೆಯಿಂದ ಸುಖಾಂತ್ಯವಾಗುವುದು. ವಾರದ ಕಡೆಗೆ ಧನುರ್ಮಾಸ ಪುಣ್ಯನದಿ ಸ್ನಾನ.
ಶ್ರೀ ಸೂರ್ಯೋಪಾಸನೆ. ಶುಭ ಸಂಖ್ಯೆ-2.

ಕನ್ಯಾ (ಟೊ.ಪ.ಪಿ.ಪು.ಫ.ಣ.ಠ.ಪೆ.ಪೊ)
ವಾರದಾರಂಭಕ್ಕೆ ನಿಮ್ಮ ರಾಶಿಗೆ ಬರುವ ಚಂದ್ರನಿಂದ ಪ್ರಮುಖ ವ್ಯಕ್ತಿಗಳ ಪರಿಚಯವಾಗುತ್ತದೆ. ಮನೆಯ ಒಳಗಿನ ಹಾಗೂ ಹೊರಗಿನ ಪರಿಸ್ಥಿತಿಗಳು ಅನುಕೂಲಕರವಾಗಿ ಮುನ್ನಡೆಯುವುದು. ಮನೆಯಲ್ಲಿ ಸರಸ ಸಮಯವಿರಲಿದೆ. ಜನ್ಮ ಕೇತುವಿನಿಂದ ಅಸಂಗತ ಕೃತ್ಯಗೈಯ್ದು ತೊಂದರೆಗೆ ಸಿಲುಕುವಿರಿ. ಲಾಟರಿ, ಜೂಜುಗಳಿಂದ ನಷ್ಟವಾಗುವುದು. ಆರೋಗ್ಯ ವಿಷಯಗಳಿಗೆ ವೈದ್ಯಕೀಯ ಸಮಾಲೋಚನೆ ಅಗತ್ಯವಿದೆ.
ಓಂ ನಮೋ ನಾರಾಯಣಾಯ ನಮಃ ಮಂತ್ರ ಜಪಿಸಿ. ಶುಭ ಸಂಖ್ಯೆ-9.

ತುಲಾ (ರ.ರಿ.ರು.ರೆ.ರೊ.ತ.ತಿ.ತು.ತೆ)
ಗೃಹ ನಿರ್ಮಾಣದ ಪ್ರಯತ್ನಗಳು ಆಶಾಭಾವನೆಯಿಂದ ಕೂಡಿದೆ. ಯಾವುದೇ ಕೆಲಸಗಳು ಸುಲಲಿತವಾಗಿ ಸಾಗುವುದು. ನಿಮ್ಮ ಮನೋಬಲ ಉಚ್ಚಮಟ್ಟದ್ದಾಗಿರುತ್ತದೆ. ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಬಹುದಾಗಿದೆ. ವಾರ ಮಧ್ಯೆ ಮಿತ್ರರ ಭೇಟಿಯಿಂದ ಪಾರ್ಟಿಗಳು ನಡೆಯಲಿದ್ದು, ಧನ ವ್ಯಯವಾಗುವುದು. ವಧು-ವರಾನ್ವೇಷಣೆ ಪ್ರಯತ್ನಗಳು ಮುಂದುವರೆಯಲಿ. ವಾರಾಂತ್ಯಕ್ಕೆ ಧರ್ಮಕ್ಷೇತ್ರಕ್ಕೆ ಭೇಟಿ.
ಶ್ರೀ ಲಕ್ಷ್ಮೀ ಉಪಾಸನೆ. ಶುಭ ಸಂಖ್ಯೆ-6

ವೃಶ್ಚಿಕ (ತೊ.ನ.ನಿ.ನು.ನೆ.ನೊ.ಯು.ಯಿ.ಯ
ನಿರುದ್ಯೋಗಿಗಳಿಗೆ ಬಹುನಿರೀಕ್ಷಿತ ಅವಕಾಶಗಳು ದೊರೆಯುತ್ತವೆ. ಆತ್ಮೀಯರಿಂದ ಶುಭ ಕಾರ್ಯಕ್ಕೆ ಆಹ್ವಾನಗಳು ಬರುತ್ತವೆ. ಶ್ರೀಮತಿಯಿಂದ ಗೃಹೋಪಯೋಗಿ ವಸ್ತುಗಳ ಖರೀದಿ. ಸ್ವಲ್ಪ ಮಟ್ಟಿಗೆ ಸಾಲಗಳ ತೀರುವಳಿ ಆಗುವುದು. ಕೈಗೊಂಡ ಕೆಲಸಗಳಲ್ಲಿ ವಿಳಂಬ ಉಂಟಾದರೂ ನಿಧಾನವಾಗಿ ಪೂರ್ಣಗೊಳಿಸುತ್ತೀರಿ. ದಿಢೀರ್ ನಿರ್ಧಾರಗಳು ನಿಮ್ಮನ್ನು ಸಂಕಷ್ಟಕ್ಕೆ ದೂಡಬಹುದು.
ಶ್ರೀ ಗಣೇಶ ಅರ್ಚನೆ. ಶುಭ ಸಂಖ್ಯೆ-1.

ಧನುಸ್ಸು (ಯೆ.ಯೊ.ಬ.ಬಿ.ಬು.ಧ.ಭ.ಢ.ಬೆ)
ನಿಂತು ಹೋಗಿದ್ದ ಪ್ರಮುಖ ಕೆಲಸಗಳು ಗುರುಕೃಪೆಯಿಂದ ವೇಗವನ್ನು ಪಡೆದುಕೊಳ್ಳಲಿದೆ. ಸಮಾಜ ಉಪಕಾರಗಳಿಂದ ಜನ ಮೆಚ್ಚುಗೆಗೆ ಪಾತ್ರರಾಗುವಿರಿ. ಆತ್ಮೀಯರ ಅಪರೂಪದ ಆಹ್ವಾನಗಳು ಸಂತೋಷವನ್ನು ತರುತ್ತದೆ. ಸ್ಥಿರಾಸ್ತಿ ವಿಷಯಗಳು ನಿಮಗೆ ಅನುಕೂಲಕರ ಫಲವನ್ನು ನೀಡುತ್ತವೆ. ವಾರಾಂತ್ಯಕ್ಕೆ ಆರೋಗ್ಯದಲ್ಲಿ ವ್ಯತ್ಯಾಸಗಳು ಉಂಟಾಗುವುದು.
ಶ್ರೀ ದತ್ತಗುರು ದರ್ಶನ. ಶುಭ ಸಂಖ್ಯೆ-8.

ಮಕರ (ಬೊ.ಜ.ಜಿ.ಶಿ.ಶು.ಶೆ.ಶೊ.ಗ.ಗಿ.)
ಮನೆಯ ಒಳಗಿನ ಹಾಗೂ ಹೊರಗಿನ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಉಪಕ್ರಮಿಸುವಿರಿ. ಹಳೆಯ ವಾಹನಗಳ ಕ್ರಯ-ವಿಕ್ರಯಗಳಲ್ಲಿ ನಷ್ಟ ಉಂಟಾಗಬಹುದು. ಆಫೀಸ್‌ನಲ್ಲಿ ಸಹೋದ್ಯೋಗಿಗಳ ವಿರೋಧವನ್ನು ಎದುರಿಸಬೇಕಾಗುವುದು. ವಾರಾಂತ್ಯದಲ್ಲಿ ಖರ್ಚುಗಳು ಹೆಚ್ಚಾಗಿ ಸಾಲ ತರಬೇಕಾದ ಸಂದರ್ಭ ಉಂಟಾಗುವುದು. ವಾಹನ ಚಾಲನೆಯಲ್ಲಿ ಎಚ್ಚರಿಕೆ ಅತ್ಯಗತ್ಯ.
ಶ್ರೀ ನವಗ್ರಹ ಸ್ತೋತ್ರ ಪಠಣ. ಶುಭ ಸಂಖ್ಯೆ-7.

ಕುಂಭ (ಗು.ಗೆ.ಗೊ.ಸ.ಸಿ.ಸು.ಸೆ.ಸೊ.ದ)
ವಾರದಾರಂಭಕ್ಕೆ ಹಣಕಾಸಿನ ವ್ಯವಹಾರಗಳು ಆಶಾದಾಯಕವಾಗಿದೆ. ವೃತ್ತಿಪರ ವ್ಯವಹಾರಗಳಲ್ಲಿ ನಿರ್ಣಾಯಕ ನಿರ್ಧಾರಗಳಿಂದ ಲಾಭಾಂಶದಲ್ಲಿ ಹೆಚ್ಚಳವನ್ನು ಹೊಂದುವಿರಿ. ಮನೆಯಲ್ಲಿ ಸೌಹಾರ್ದಯುತ ವಾತಾವರಣ ಇಲ್ಲದೆ ಮನಸ್ಸಿಗೆ ಹಿತವಿರದು. ಉದ್ಯೋಗಾಕಾಂಕ್ಷಿಗಳು ಇನ್ನಷ್ಟು ಪ್ರಯತ್ನಗಳನ್ನು ಮುಂದುವರಿಸಬೇಕಾಗುತ್ತದೆ. ವಾಹನ ಚಾಲನೆಯಲ್ಲಿ ಹುಡುಗಾಟ ಸಲ್ಲದು.
ಶ್ರೀ ಹನುಮಾನ್ ಚಾಲೀಸ ಪಠಿಸಿ. ಶುಭ ಸಂಖ್ಯೆ-3.

ಮೀನ (ದಿ.ದು.ಖ.ಝ.ಥ.ತೆ.ದೊ.ಚ.ಚಿ)
ಗುರುಬಲದಿಂದ ಕನಸು ಕಂಡದ್ದು ನನಸಾಗಬಹುದು. ಹೊಸ ವಸ್ತ್ರ-ವಾಹನ ಮನೆಗೆ ಬರುವ ಯೋಗವಿದೆ. ಗುರು ಹಿರಿಯರ ಸರಿಯಾದ ಮಾರ್ಗದರ್ಶನ ದೊರೆತು ಉನ್ನತ ಸಾಧನೆ ಮಾಡುವ ಅವಕಾಶವಿದೆ. ಶತ್ರುಗಳ ಉಪದ್ರವವನ್ನು ಧೈರ್ಯದಿಂದ ಹಿಮ್ಮೆಟ್ಟಿಸುವಿರಿ. ಹಲವರಿಗೆ ಸಮುದ್ರೋಲ್ಲಂಘನ ಯೋಗವಿದೆ. ರಾಹು-ಕೇತುಗಳು ಅಶುಭರಿದ್ದು ಮಾಡಬಾರದ್ದು ಮಾಡಿ ಆಗಬಾರದ್ದು ಆದೀತು. ದುಡುಕದಿರಿ.
ಶ್ರೀ ರಾಘವೇಂದ್ರ ಪೂಜೆ. ಶುಭ ಸಂಖ್ಯೆ-6.

ಕೋಟೆಯಲ್ಲಿ ಹನುಮ ಜಯಂತಿಯ ಅದ್ದೂರಿ ಶೋಭಾಯಾತ್ರೆ

ಸಾವಿರಾರು ಮಂದಿ ಭಾಗಿ, ಜನಾಕರ್ಷಿಸಿದ ಜಾನಪದ ಕಲಾ ತಂಡಗಳು



ಹೆಚ್.ಡಿ.ಕೋಟೆಯಲ್ಲಿ ಶನಿವಾರ ಹನುಮ ಜಯಂತಿ ಪ್ರಯುಕ್ತ ನಡೆದ ಶೋಭಾಯಾತ್ರೆಯಲ್ಲಿ ಪಾಲ್ಗೊಂಡಿರುವ ಜನಸ್ತೋಮ

> ಕೇಸರಿ ಶಾಲು ಒಂದು ಭಾವೈಕ್ಯತೆಯ ಸಂಬಂಧ ಹೊಂದಿರುವಂತಹ ಶಾಲು. ಆದ್ದರಿಂದ ಕೇಸರಿ ಶಾಲನ್ನು ಹಾಕಿಕೊಳ್ಳುವುದಕ್ಕೆ ಯಾವುದೇ ಜಾತಿ ಧರ್ಮ ಅಡ್ಡಿ ಬರುವುದಿಲ್ಲ. ಎಲ್ಲರೂ ಕೇಸರಿ ಶಾಲನ್ನು ಹಾಕಿಕೊಳ್ಳಬಹುದು. ಕೇಸರಿ ಎಂಬುದು ಒಂದು ಸರ್ವಧರ್ಮದ ಸಂಕೇತ. **-ಅನಿಲ್ ಚಿಕ್ಕಮಾದು,** ಶಾಸಕ

ಹೆಚ್.ಡಿ.ಕೋಟೆ, ಜ.6– ತಾಲೂಕು ಹನುಮ ಸೇವಾ ಸಮಿತಿ ವತಿಯಿಂದ 6ನೇ ವರ್ಷದ ಹನುಮ ಜಯಂತಿ ಅಂಗವಾಗಿ ಅದ್ದೂರಿ ಶೋಭಾಯಾತ್ರೆ ನಡೆಸಲಾಯಿತು.

ಶನಿವಾರ ಪಟ್ಟಣದ ಗದ್ದಿಗೆ ಸರ್ಕಲ್ ಬಳಿ ಇರುವ ಶ್ರೀ ಬಣ್ಣಾರಿ ಅಮ್ಮ ದೇವಸ್ಥಾನದ ಬಳಿಯಿಂದ ಹೊರಟ ಶೋಭಾಯಾತ್ರೆಗೆ ಶ್ರೀ ಮಹದೇವ ಸ್ವಾಮಿಗಳು, ಪಡವಲು ವಿರಕ್ತ ಮಠ ಬಿಡುಗಲು, ಶಾಸಕ ಅನಿಲ್ ಚಿಕ್ಕಮಾದು, ಹನುಮ ಸೇವಾ ಸಮಿತಿ ಅಧ್ಯಕ್ಷ ಡೈರಿ ಶ್ರೀಕಾಂತ್, ಮುಖಂಡರುಗಳು ಉತ್ಸವ ಮೂರ್ತಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದರು.

ಮೆರವಣಿಗೆಯಲ್ಲಿ ಮಂಗಳವಾದ್ಯ ವೀರಗಾಸೆ, ಪೂಜಾ ಕುಣಿತ, ಚಂಡೆ, ನಾರಿ, ಗಾಡಿ ಗೊಂಬೆ, ಚಿಲಿಪಿಲಿ ಗೊಂಬೆ, ಡೊಳ್ಳು ಕುಣಿತ, ಸೇರಿದಂತೆ ಹಲವಾರು ಕಲಾತಂಡಗಳು ಭಾಗವಹಿಸಿ ಎಲ್ಲರ ಗಮನ ಸೆಳೆಯಿತು.

ಹನುಮನ ಮೂರ್ತಿಗಳನ್ನು ಪುಷ್ಪಾಲಂಕಾರಗೊಂಡ ಬೆಳ್ಳಿರಥ ವಾಹನದಲ್ಲಿ ಮೆರವಣಿಗೆ ಮಾಡಲಾಯಿತು. ಶೋಭಾಯಾತ್ರೆಯು ಪಟ್ಟಣದ ಮುಖ್ಯ ರಸ್ತೆ ಮೂಲಕ ಸಾಗಿ ಬಾಪೂಜಿ ವೃತ್ತ ತಲುಪಿ ನಂತರ ಮೊದಲನೇ ಮುಖ್ಯ ರಸ್ತೆ ಮೂಲಕ ವರದರಾಜ ಸ್ವಾಮಿ ದೇವಾಲಯದ ಬಳಿ ಮುಕ್ತಾಯಗೊಂಡಿತು. ಮೆರವಣಿಗೆಯಲ್ಲಿ ಸಾವಿರಾರು ಭಕ್ತಾದಿಗಳು ಪಾಲ್ಗೊಂಡಿದ್ದರು.

ದಾರಿ ಉದ್ದಕ್ಕೂ ಭಕ್ತಾದಿಗಳಿಗೆ, ಸಾರ್ವಜನಿಕರಿಗೆ ಮಜ್ಜಿಗೆ, ಪಾನಕ ನೀಡಿದರು. ಅದರಲ್ಲೂ ಮುಸಲ್ಮಾನರು ಭಕ್ತರಿಗೆ ಮಜ್ಜಿಗೆ ನೀಡಿದ್ದು ವಿಶೇಷವಾಗಿತ್ತು, ಹನುಮ ಭಕ್ತರು ಕೇಸರಿ ಶಲ್ಯ ಧರಿಸಿ ಮಹಿಳೆಯರು, ಡಿಜೆ ಸೌಂಡ್ ಹಾಗೂ ಚಂಡೆಗೆ ವಾದ್ಯಕ್ಕೆ ತಕ್ಕಂತೆ ಹೆಜ್ಜೆ ಹಾಕಿದ್ದು ಎಲ್ಲರ ಗಮನ ಸೆಳೆಯಿತು.


ಜನವರಿ 4ರಂದು ಬೆಳಿಗ್ಗೆ ಪಟ್ಟಣದಲ್ಲಿರುವ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿಯಲ್ಲಿ ಭಕ್ತರು ಹನುಮ ಮಾಲೆ ಧರಿಸಿ, 5ನೇ ತಾರೀಕು ಶುಕ್ರವಾರ ಬೆಳಗ್ಗೆ 9:30ರ ಶುಭ ಮುಹೂರ್ತದಲ್ಲಿ ಪವನ ಹೋಮ ಮಧ್ಯಾಹ್ನ 12 ಗಂಟೆಗೆ ಧಾರ್ಮಿಕ ಸಭೆಯಲ್ಲಿ, ಭಾಷಣಕಾರರಾದ ಇಲವಾಲ ಶ್ರೀ ವೆಂಕಟರಾಮ ಅವರು ಮಾತನಾಡಿದರು. ಮಧ್ಯಾಹ್ನ 1ಕ್ಕೆ ಪ್ರಸಾದ ವಿತರಣೆ ಮಾಡಲಾಯಿತು.

ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ಇಂದು ಅಯೋಧ್ಯೆಯಲ್ಲಿ ರಾಮ ಮಂದಿರವನ್ನು ಪ್ರತಿಷ್ಠಾಪನೆ ಮಾಡುತ್ತಿರುವ ನಮ್ಮ ನೆಚ್ಚಿನ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರಿಗೆ ಧನ್ಯವಾದ ಸಲ್ಲಿಸುತ್ತೇನೆ. ಹನುಮ ಜಯಂತಿಯನ್ನು ದೇಶದಲ್ಲಿ ಎಲ್ಲಾ ಕಡೆಯಲ್ಲೂ ಆಚರಣೆ ಮಾಡಿಕೊಂಡು ಬರುತ್ತಿದ್ದಾರೆ. ಅದರಲ್ಲೂ ನನ್ನ ಕ್ಷೇತ್ರವಾದ ಎಚ್.ಡಿ.ಕೋಟೆಯಲ್ಲಿ, ಹನುಮ ಜಯಂತಿಯನ್ನು ಹನುಮ ಸೇವಾ ಸಮಿತಿಯವರು ಆಚರಣೆಮಾಡಿದ್ದಾರೆ ಎಂದು.

ಪಕ್ಷಾತೀತವಾಗಿ, ಜಾತ್ಯಾತೀತವಾಗಿ ಆಚರಣೆ ಮಾಡುತ್ತಿರುವುದು ನಿಜಕ್ಕೂ ಸಂತೋಷದ ವಿಚಾರವಾಗಿದೆ, ಆದರಿಂದ ಎಚ್.ಡಿ.ಕೋಟೆ, ಸರಗೂರು ತಾಲೂಕು ಸೇರಿದಂತೆ, ನಾಡಿನ ಎಲ್ಲಾ ಸಮಸ್ತ ಜನತೆಗೆ ಹನುಮ ಜಯಂತಿಯ ಶುಭಾಶಯಗಳನ್ನು ತಿಳಿಸುತ್ತೇನೆ ಎಂದರು.

ಹನುಮ ಜಯಂತಿ ಕಾರ್ಯಕ್ರಮದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.

ಹನುಮ ಸೇವಾ ಸಮಿತಿ ಅಧ್ಯಕ್ಷ ಡೈರಿ ಶ್ರೀಕಾಂತ್, ಕಾರ್ಯದರ್ಶಿ ರಾಜು, ಖಜಾಂಚಿ ಮುತ್ತುರಾಜ್, ಉಪಾಧ್ಯಕ್ಷ ಚಂದ್ರಮೌಳಿ, ಸಲಹಾ ಸಮಿತಿ ಸಂಚಾಲಕರಾದನಾಗೇಶ್, ಮೋಹನ್ ಕುಮಾರ್, ಮಾಜಿ ಅಧ್ಯಕ್ಷ ನಂದೀಶ್ ಸಾಮಾಜಿಕ ಜಾಲತಾಣ ಮುಖ್ಯಸ್ಥ ಶಿವರಾಜು, ಜಯಂತ್, ಸದಸ್ಯರಾದ ಎಚ್.ಕೆ.ಸುರೇಶ್, ಕನ್ನಡಪ್ರಮೋದ್, ಸಂತೋಷ್, ಪೂರ್ಣೇಶ್, ಯಡತೊರೆ ಮಹೇಶ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ವೆಂಕಟಸ್ವಾಮಿ ರುದ್ರಪ್ಪ ಮೋಹನ್, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಕನ್ನಡ ಪ್ರಮೋದ್, ಜೈ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಸತೀಶ್ ಗೌಡ, ವರ್ತಕರ ಸಂಘದ ಅಧ್ಯಕ್ಷ ವಿನಯ್ ಭಜರಂಗಿ, ಸುಧಾಕರ್, 24 ಮನೆ ತೆಲುಗು ಶೆಟ್ಟರ ಜನಾಂಗದ ತಾಲೂಕು ಅಧ್ಯಕ್ಷ ಮಂಜು, ಮುಖಂಡರುಗಳಾದ ಎಂ.ಸಿ.ದೊಡ್ಡ ನಾಯಕ ಸುಬ್ರಮಣಿ ಶಿವರಾಜಪ್ಪ, ದಾಸ್, ಚಂದ್ರಶೇಖರ್, ನಾರಾಯಣ್ ಲಾಲ್, ನಾಗಣ್ಣ ವೀರಪ್ಪ, ನಾರಾಯಣಗೌಡ, ನಟ ರಾಜು, ಪಪ್ಪು, ಅನಿಲ್, ಮನೋಜ್ ಗನ್ನ, ಸತೀಶ್, ರಘುರಾಮ್, ಬಾಲು ಶಿವಯ್ಯ, ಉಡ ನಾಗರಾಜ್, ಸಾವಿರಾರು ಸಂಖ್ಯೆಯಲ್ಲಿ ಹನುಮ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



ಶೋಭಾಯಾತ್ರೆಗೆ ಚಾಲನೆ ನೀಡಿದ ಶಾಸಕ ಅನಿಲ್ ಚಿಕ್ಕಮಾದು ಮತ್ತು ಶ್ರೀಗಳು

ಶ್ರೀಕಂಠೇಶ್ವರನ ದರ್ಶನ ಪಡೆದು ತುಲಾಭಾರ ಸೇವೆ ನೆರವೇರಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ

ನಂಜನಗೂಡು, ಜ.6– ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಶ್ರೀಕಂಠೇಶ್ವರ ದೇವಾಲಯಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ ತೂಕದ ತುಲಾಭಾರ ಸೇವೆ ನೆರವೇರಿಸಿದರು.



ಶ್ರೀಕಂಠೇಶ್ವರನಿಗೆ ತುಲಾಭಾರ ಸೇವೆ ನೆರವೇರಿಸುತ್ತಿರುವ ವಿಜಯೇಂದ್ರ

ಶ್ರೀಕಂಠೇಶ್ವರನಿಗೆ ಕ್ಷೀರಾಭಿಷೇಕ ನೆರವೇರುತ್ತಿದ್ದ ವೇಳೆಗೆ ಆಗಮಿಸಿದ ವೇಳೆ ಕಾಕತಾಳೀಯವೆಂಬಂತೆ ನಂಜನಗೂಡು ಕ್ಷೇತ್ರದ ಕಾಂಗ್ರೆಸ್ ಶಾಸಕ ದರ್ಶನ್ ಧ್ರುವನಾರಾಯಣ್ ಅವರು ಕೂಡ ದೇವರ ದರ್ಶನಕ್ಕೆಂದು ಮೊದಲೇ ತೆರಳಿ ಗರ್ಭಗುಡಿಯ ಮುಂಭಾಗ ಕುಳಿತಿದ್ದರು. ವಿಜಯೇಂದ್ರ ಬಂದೊಡನೆ ಎದ್ದು ನಿಂತು ಗೌರವ ಸಲ್ಲಿಸಿದ ಬಳಿಕ ಇಬ್ಬರೂ ಒಟ್ಟಾಗಿ ನಂಜುಂಡೇಶ್ವರನ ದರ್ಶನ ಪಡೆದು ಅಭಿಷೇಕವನ್ನು ಕಣ್ತುಂಬಿಕೊಂಡು ಕೆಲಕಾಲ ಧ್ಯಾನಸಕ್ತರಾದರು. ನಂತರ ಶ್ರೀಕಂಠೇಶ್ವರನಿಗೆ ವಿಶೇಷ ಪೂಜೆ ಸಲ್ಲಿಸಿದರು.

ನಂತರ ಪಾರ್ವತಿದೇವಿ, ಸುಬ್ರಮಣ್ಯ, ನಾರಾಯಣಸ್ವಾಮಿ, ಚಂಡಿಕೇಶ್ವರನ ದರ್ಶನ ಪಡೆದರೆ ಬಳಿಕ ಬೆಲ್ಲದ ತೂಕದ ತುಲಾಭಾರ ಸೇವೆ ನೆರವೇರಿಸಿ ಹರಕೆ ತೀರಿಸಿದರು. ದೇವಾಲಯದ ವತಿಯಿಂದ ಅವರನ್ನು ಶೇಷವಸ್ತ್ರ, ಫಲ ತಾಂಬೂಲಗಳನ್ನು ನೀಡಿ ಗೌರವಿಸಲಾಯಿತು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಶ್ರೀಕಂಠೇಶ್ವರ ದೇವಾಲಯದ ಅಂಧಕಾಸುರನ ಸಂಹಾರದ ವೇಳೆ ನಡೆದ ದುರ್ಘಟನೆಯ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿ ಸರ್ಕಾರ, ಜಿಲ್ಲಾಡಳಿತವೇ ಈ ಘಟನೆಯನ್ನು ಬಗೆಹರಿಸುತ್ತದೆ ಎಂಬ ನಂಬಿಕೆ ಇದೆ ಎಂದರಲ್ಲದೆ, ಬಿಜೆಪಿ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ನಂತರ ರಾಜ್ಯದಾದ್ಯಂತ ಸಂಚರಿಸಿ ಬಿಜೆಪಿ ಪಕ್ಷದ ಸಂಘಟನೆಯನ್ನು ಬಲಪಡಿಸುವ ಕಾರ್ಯದಲ್ಲಿ ತೊಡಗಿಕೊಂಡಿದ್ದೇನೆ. ಈಗಾಗಲೇ ಬಿಜೆಪಿ ಪಕ್ಷದ ಎಲ್ಲಾ ಮೋರ್ಚಾದ ಪದಾಧಿಕಾರಿಗಳನ್ನು ನೇಮಿಸಲಾಗಿದ್ದು ಶೀಘ್ರದಲ್ಲಿಯೇ ಜಿಲ್ಲಾಧ್ಯಕ್ಷರನ್ನೂ ಕೂಡ ನೇಮಿಸಲಾಗುವುದು. ಜಿಲ್ಲಾಧ್ಯಕ್ಷರ ನೇಮಕ ವೇಳೆ ಸ್ಥಳೀಯ ಮುಖಂಡರು ಕಾರ್ಯಕರ್ತರ ಅಭಿಪ್ರಾಯವನ್ನು ಸಂಗ್ರಹಿಸಿ ಅಂತಿಮಗೊಳಿಸಲಾಗುವುದು ಎಂದು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಕಾಂಪೋಸ್ಟ್ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ಎಂ.ರಾಜೇಂದ್ರ, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್‌ಗೌಡ, ಬಿಜೆಪಿ ಮೈಸೂರು ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘುಕೌಟಿಲ್ಯ, ಬಿಜೆಪಿ ತಾಲೂಕು ಅಧ್ಯಕ್ಷ ಪಿ.ಮಹೇಶ್‌ಹೊರಳವಾಡಿ, ನಗರಾಧ್ಯಕ್ಷ ಶ್ರೀನಿವಾಸರೆಡ್ಡಿ, ಖಾದಿ ಗ್ರಾಮೋದ್ಯೋಗ ಮಂಡಳಿ ಮಾಜಿ ಅಧ್ಯಕ್ಷ ಎನ್.ಆರ್.ಕೃಷ್ಣಪ್ಪಗೌಡ, ಜಿಪಂ ಮಾಜಿ ಸದಸ್ಯ ಎಸ್.ಎಂ.ಕೆಂಪಣ್ಣ ನಗರಸಭಾ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಎಪಿಎಂಸಿ ಮಾಜಿ ಸದಸ್ಯ ಗುರುಸ್ವಾಮಿ, ಮುಖಂಡರಾದ ಕುಂಬ್ರಳ್ಳಿಸುಬ್ಬಣ್ಣ ವಿನಯ್ ಕುಮಾರ್, ಮಧುರಾಜ್, ಮೃಗಾಲಯ ಪ್ರಾಧಿಕಾರ ಮಾಜಿ ಅಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ ಸೇರಿದಂತೆ ಹಲವಾರು ಪ್ರಮುಖರು ಇದ್ದರು.

ಅಂಬೇಡ್ಕರ್ ಭವನದ ಅಡುಗೆ ಮನೆಗೆ ಗುದ್ದಲಿ ಪೂಜೆ



ಭೂಮಿ ಪೂಜೆ ನೆರವೇರಿಸುತ್ತಿರುವ ಯತೀಂದ್ರ ಸಿದ್ದರಾಮಯ್ಯ

ಸುತ್ತೂರು, ಜ.6– ವರುಣ ಕ್ಷೇತ್ರಕ್ಕೆ ಸೇರಿರುವ ನಂಜನಗೂಡು ತಾಲೂಕು ನಗರ್ಲೆ ಗ್ರಾಮದಲ್ಲಿ ಅಂಬೇಡ್ಕರ್ ಭವನದ ಅಡುಗೆ ಮನೆ ಭೂಮಿ ಪೂಜೆಯನ್ನು ಕ್ಷೇತ್ರದ ಮಾಜಿ ಶಾಸಕರು ಹಾಗೂ ಆಶ್ರಯ ಸಮಿತಿ ಅಧ್ಯಕ್ಷ ಡಾ.ಯತೀಂದ್ರ ಸಿದ್ದರಾಮಯ್ಯನವರು ನೆರವೇರಿಸಿದರು.

ಈ ಸಂದರ್ಭದಲ್ಲಿ ರಾಜ್ಯ ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಬಸವರಾಜು, ಬ್ಲಾಕ್ ಅಧ್ಯಕ್ಷ ರಂಗಸ್ವಾಮಿ, ವೀರಶೈವ ಮುಖಂಡ ಹಾಗೂ ಕೆಪಿಸಿಸಿ ಕಾರ್ಯದರ್ಶಿ ವರುಣ ಮಹೇಶ್, ದಯಾನಂದ ಮೂರ್ತಿ, ಸುರೇಶ್ ಬಾಬು, ಗ್ರಾಮ ಪಂಚಾಯತಿ ಅಧ್ಯಕ್ಷ ಮಹದೇವಮ್ಮ, ಉಪಾಧ್ಯಕ್ಷೆ ಸುಧಾರಾಣಿ, ಕಾಂಗ್ರೆಸ್ ಮುಖಂಡರಾದ ನಗರ್ಲೆ ಮನು, ನರಸಿಂಹಮೂರ್ತಿ, ಸರ್ವೇಶ, ಭದ್ರನಾಯಕ, ನಾರಾಯಣನಾಯಕ, ಇಸ್ಮಾಯಿಲ್, ಅಲ್ತಾಫ್ ಪಾಸ, ಸಂತೋಷ್, ಪ್ರಮೋದ್, ಜಲಾಡ್ ರಾಜೇಶ್, ಪಿಡಿಒ ಈಶ, ಮಾರ್, ಡಿವೈಎಸ್‌ಪಿ ಗೋವಿಂದ ರಾಜ್, ರವೀಂದ್ರ, ಕೆಇಬಿ ಅಧಿಕಾರಿ ಕಿರಣ್ ಕೆಎಸ್‌ಆರ್‌ಟಿಸಿ ಅಧಿಕಾರಿ ರೇವಣ್ಣ, ಬಸವರಾಜ್, ಗ್ರಾಮ ಪಂಚಾಯತಿಯ ಅಧಿಕಾರಿಗಳು, ತಾಲೂಕಿನ ಅಧಿಕಾರಿಗಳು, ಗ್ರಾಮಸ್ಥರು ಹಾಜರಿದ್ದರು.

ಮಾದೇಗೌಡನಹುಂಡಿ ಡೇರಿ ಕಾಂಗ್ರೆಸ್ ತೆಕ್ಕೆಗೆ

ತಿ.ನರಸೀಪುರ, ಜ.6– ತಾಲೂಕಿನ ಮಾದೇಗೌಡನಹುಂಡಿ ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿತ ಅಭ್ಯರ್ಥಿಗಳು ಭರ್ಜರಿ ಗೆಲುವು ಸಾಧಿಸುವ ಮೂಲಕ ಡೇರಿಯನ್ನು ತನ್ನ ತೆಕ್ಕೆಗೆ ತೆಗೆದುಕೊಂಡಿದೆ.

ಹಾಲು ಉತ್ಪಾದಕರ ಸಹಕಾರ ಸಂಘದ 12 ನಿರ್ದೇಶಕರ ಸ್ಥಾನಕ್ಕೆ 5 ವರ್ಷಗಳ ಅವಧಿಗೆ ನಡೆದ ಚುನಾವಣೆಯಲ್ಲಿ ನಿರ್ದೇಶಕರಾದ ಚುಂಚೇಗೌಡ, ಪುನೀತ್ ಕುಮಾರ್, ಪ್ರಭಾಕರ್, ಸಂಪತ್ ಕುಮಾರ್, ನವೀನ್, ನಾಗರಾಜು. ಮಹಿಳಾ ಕ್ಷೇತ್ರದಿಂದ ಅಂಬಿಕಾ, ರತ್ನಮ್ಮ ಅವರು ಚುನಾಯಿತರಾದರು. ರಾಮಚಂದ್ರು ಮತ್ತು ಗಣಪತಿಚಾರಿ ಇವರಿಬ್ಬರು ಅವಿರೋಧವಾಗಿ ಆಯ್ಕೆಯಾದರು.

ಚುನಾವಣಾಧಿಕಾರಿ ಎನ್.ಮಂಜು ವಿಜೇತರನ್ನು ಘೋಷಿಸಿದರು. ಸಹಾಯಕ ಚುನಾವಣಾಧಿಕಾರಿಯಾಗಿ ಡೈರಿ ಕಾರ್ಯದರ್ಶಿ ರೇವಣ್ಣ ನಿರ್ವಹಿಸಿದರು. ನೂತನ ನಿರ್ದೇಶಕರನ್ನು ಅಭಿನಂದಿಸಿದ ಮಾಜಿ ಸಹಕಾರ ಸಂಘದ ಅಧ್ಯಕ್ಷ ಎನ್.ಅನಿಲ್ ಕುಮಾರ್ ಮಾತನಾಡಿ, ಮಾದೇಗೌಡನಹುಂಡಿ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ರೈತರು ನಮಗೆ ಬೆಂಬಲ ನೀಡಿದ್ದು ನಾವು ಸರ್ಕಾರದಿಂದ ಬರುವ ಸವಲತ್ತುಗಳನ್ನು ಮತ್ತು ಮೈಮುಲ್‌ನಿಂದ ನೀಡುವ ಯಾವುದೇ ಬೋನಸ್ ಆಗಲಿ ಮತ್ತು ವಿವಿಧ ಯೋಜನೆಗಳಲ್ಲಿ ತಾರತಮ್ಯ ನೀಡದೆ ರೈತರಿಗೆ ತಲುಪಿಸಿದ್ದೇವೆ. ಮತ್ತು ಕಳೆದ ಈ ಕ್ಷೇತ್ರದ ಶಾಸಕರಾಗಿದ್ದ ಡಾ. ಯತೀಂದ್ರ ಸಿದ್ದರಾಮಯ್ಯನವರು ಹಲವಾರು ಅಭಿವೃದ್ಧಿ ಮಾಡಿದ್ದು, ರೈತರು ಮನಗಂಡು ನಮಗೆ ಬೆಂಬಲಿಸಿದ್ದಾರೆ ಎಂದು ಹೇಳಿದರು.



ಮಾದೇಗೌಡನಹುಂಡಿ ಡೇರಿಗೆ ನಿರ್ದೇಶಕರಾಗಿ ಆಯ್ಕೆಯಾದ ಕಾಂಗ್ರೆಸ್ ಬೆಂಬಲಿತರು

ಪ್ರಧಾನ ಮಂತ್ರಿ ಜನ್‌ಮನ್ ಕಾರ್ಯಕ್ರಮದಡಿ

ಬುಡಕಟ್ಟು ಸಮುದಾಯಗಳ ಅಭಿವೃದ್ಧಿ ಅನುಷ್ಠಾನಕ್ಕಾಗಿ ಸಮೀಕ್ಷೆ ಆರಂಭ

ಹುಣಸೂರು, ಜ.6– ಪ್ರಧಾನ ಮಂತ್ರಿ ಜನ್–ಮನ್ ಕಾರ್ಯಕ್ರಮದಡಿಯಲ್ಲಿ ಮೂಲನಿವಾಸಿಗಳಿಗೆ ಆದಿವಾಸಿ ಮಹಾಯೋಜನೆ ಅಡಿಯಲ್ಲಿ ಬುಡಕಟ್ಟು ಮಂತ್ರಾಲಯ 18 ರಾಜ್ಯಗಳಲ್ಲಿನ 75 ದುರ್ಬಲ ಬುಡಕಟ್ಟು ಸಮುದಾಯಗಳ ಸಮಗ್ರ ಅಭಿವೃದ್ಧಿ ಅನುಷ್ಠಾನಕ್ಕಾಗಿ ಸಮೀಕ್ಷಾ ವರದಿ ತಯಾರಿಸಲು ಪ್ರತಿ ಹಾಡಿಯಲ್ಲು ಸರ್ವೇಕ್ಷಣ ಕಾರ್ಯ ಪ್ರಾರಂಭವಾಗಿದೆ ಎಂದು ತಾಲೂಕು ಗಿರಿಜನ ಕಲ್ಯಾಣಾಧಿಕಾರಿ ಬಸವರಾಜು ತಿಳಿಸಿದರು.



ಬುಡಕಟ್ಟು ಸಮುದಾಯದ ಸಮೀಕ್ಷೆ ನಡೆಸುತ್ತಿರುವ ಅಧಿಕಾರಿಗಳು

ತಾಲೂಕಿನ ನಾಗಪುರ ಮತ್ತು ವೀರನ ಹೊಸಳ್ಳಿ ಗಿರಿಜನ ಹಾಡಿಯಲ್ಲಿ ಸರ್ವೆ ಕಾರ್ಯ ಮಾಡುವ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಧಾನ ಮಂತ್ರಿ ಜನ್–ಮನ್ ಕಾರ್ಯಕ್ರಮದಡಿಯಲ್ಲಿ ಮೂಲ ನಿವಾಸಿಗಳಿಗೆ ಅದಿವಾಸಿ ಮಹಾಯೋಜನೆ ಅಡಿಯಲ್ಲಿ 18 ರಾಜ್ಯಗಳಲ್ಲಿನ 75 ದುರ್ಬಲ ಬುಡಕಟ್ಟು ಸಮುದಾಯಗಳ ಸಮಗ್ರ ಅಬಿವೃದ್ಧಿಗೆ ಕೇಂದ್ರ ಸರ್ಕಾರ 24104 ಕೋಟಿ ರೂ. ಕಾಯ್ದಿರಿಸಿದ್ದು ಜೇನು ಕುರುಬ ಸೇರಿದಂತೆ 75 ದುರ್ಬಲ ಅದಿವಾಸಿ ಬುಡಕಟ್ಟು ಜಾತಿಗಳನ್ನು ಗುರುತಿಸಿ ಮೂಲ ನಿವಾಸಿಗಳನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸಮಗ್ರ ಅಬಿವೃದ್ಧಿಗಾಗಿ 19 ಇಲಾಖೆಗಳನ್ನೊಳಗೊಂಡು ಸಮೀಕ್ಷ ಕಾರ್ಯವನ್ನು ಆರಂಭಿಸಲಾಗಿದೆ ಎಂದರು.

ನಮ್ಮ ತಾಲೂಕಿನಲ್ಲಿ 37 ಜೇನುಕುರುಬ ಹಾಡಿಗಳಿದ್ದು, ಈ ಹಾಡಿಗಳ 2961 ಕುಟುಂಬಗಳಲ್ಲಿ 11501 ಗಿರಿಜನರಿದ್ದಾರೆ. ಈ ಆದಿವಾಸಿಗಳಿಗೆ ಆಧಾರ್ ನೋಂದಣಿ ಮತ್ತು ಕಾರ್ಡ್, ಆಯುಷ್‌ಮಾನ್ ಕಾರ್ಡ್, ಜಾತಿ ಪ್ರಮಾಣ ಪತ್ರ, ಜನ್–ಧನ್ ಬ್ಯಾಂಕ್ ಖಾತೆ, ಮಾತೃವಂದನ, ಸೇರಿದಂತೆ ಎಲ್ಲ ರೀತಿಯ ಸೇವೆಗಳು ಸ್ಥಳದಲ್ಲೇ ಆಯಾಯ ಇಲಾಖೆಗಳು ಮಾಡಿಕೊಡುತ್ತಿವೆ.

ಅಲ್ಲದೆ ವಸತಿ ಇಲ್ಲದವರಿಗೆ ವಸತಿ, ವಿದ್ಯುತ್ ಸಂಪರ್ಕ, ಹಾಡಿಗಳಿಗೆ ರಸ್ತೆ, ಸಂಪರ್ಕ, ದೂರವಾಣಿ ಇಲಾಖೆಯಿಂದ ದೂರಸಂಪರ್ಕ ಸೇವೆ, ಆರೋಗ್ಯ ಇಲಾಖೆಯಿಂದ ಆರೋಗ್ಯ ಕಾರ್ಯಕ್ರಮಗಳು, ಅಂಗನವಾಡಿ ಕೇಂದ್ರಗಳು, ಶಾಲೆ ಮತ್ತು ಹಾಡಿ ಆಂಬುಲೆನ್ಸ್ ಸೇವೆ, ಜಲ ಜೀವನ್ ಮಿಷನ್ ವತಿಯಿಂದ ಪ್ರತಿ ಮನೆ ಮನೆಗೆ ನಲ್ಲಿಗಳ ಮೂಲಕ ಕುಡಿಯುವ ನೀರು ಹಾಡಿಗಳಿಗೆ ಸಾರಿಗೆ ಸೌಲಭ್ಯ ಸೇರಿದಂತೆ ಎಲ್ಲ ರೀತಿಯ ಸವಲತ್ತುಗಳನ್ನು ಒದಗಿಸಲಾಗುತ್ತಿದೆ. ಇದಕ್ಕಾಗಿ ಎಲ್ಲಾ ಇಲಾಖೆಯ ಅಧಿಕಾರಿಗಳಿ ಈ ಸಮೀಕ್ಷ ಕಾರ್ಯದಲ್ಲಿ ಪಾಲ್ಗೊಂಡು ತಮ್ಮ ಇಲಾಖೆ ಅಡಿಯಲ್ಲಿ ಬರುವ ಸೇವಾ ಸೌಲಭ್ಯವನ್ನು ಒದಗಿಸಲಾಗುತ್ತಿದೆ ಎಂದರು.

ಈ ಸಮೀಕ್ಷಾ ಕಾರ್ಯದಲ್ಲಿ ಎಲ್ಲ ಇಲಾಖೆಯ ಅಧಿಕಾರಿಗಳು ಭಾಗವಹಿಸಿ ಸ್ಥಳದಲ್ಲೆ ಸಾಧ್ಯವಾದ ದಾಖಲಾತಿಗಳನ್ನು ನೀಡುತ್ತಿದ್ದಾರೆ. ಪ್ರತಿ ಹಾಡಿಗೆ ಒಬ್ಬರಂತೆ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳನ್ನು ಮೇಲುಸ್ತುವಾರಿಗೆ ನೇಮಿಸಲಾಗಿದೆ ಹಾಗೂ ಕಾರ್ಯಕ್ರಮದ ಸಮೀಕ್ಷೆಗಾಗಿ ಜಿಲ್ಲಾ ಮಟ್ಟದಲ್ಲಿ ಮತ್ತು ತಾಲೂಕು ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗಿದೆ ಎಂದರು.

ತಳಮಟ್ಟದಲ್ಲಿ ಹೇಗೆ ಕಾರ್ಯಕ್ರಮಗಳು ನಡೆಯುತ್ತಿವೆ ಎಂದು ಪರಿಶೀಲಿಸಲು ಉಪವಿಭಾಗಾಧಿಕಾರಿ ಎಂ.ಡಿ.ಹ್ಯಾರೀಶ್ ಸುಮೆರ್ ನಿನ್ನೆ ತಾಲೂಕಿನ ಕೊಟ್ಟಿಗೆ ಕಾವಲ್, ಹಾಡಿಯ ಕಾರ್ಯಕ್ರಮದ ಪರಿಶೀಲನೆ ಮಾಡಿದರು. ಅಲ್ಲದೆ ಕೊಳುವಿಗೆಹಾಡಿ, ಹರಳ್ಳಿ,ಹಾಡಿ, ನಾಗಪುರ, ಹಾಡಿಗಳಿಗೆ ಭೇಟಿ ನೀಡಿ ಪರಿಶಿಲನೆ ಮಾಡಿದರು.ಈ ಕಾರ್ಯಕ್ರಮವು ಜನವರಿ 12ರ ತನಕ ತಾಲೂಕಿನ ಎಲ್ಲ 37 ಹಾಡಿಗಳಲ್ಲಿ ನಡೆಯುತ್ತದೆ ಎಂದರು

ಈ ಸರ್ವೇಕ್ಷಣಾ ಕಾರ್ಯಕ್ರಮದಲ್ಲಿ ತಾಲೂಕು ಪರಿಶಿಷ್ಟ ಪಂಗಡಗಳ ಕಲ್ಯಾಣಧಿಕಾರಿ ಹೆಚ್.ಸಿ.ಬಸವರಾಜು, ಗ್ರೇಡ್.2 ತಹಸಿಲ್ದಾರ್ ನರಸಿಂಹಯ್ಯ, ಬುಡಕಟ್ಟು ಸರ್ವೇಕ್ಷಣಾ ಸಂಸ್ಥೆಯ ನಿರ್ದೇಶಕ ಶ್ರೀನಿವಾಸ್, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ವೀರಣ್ಣ, ಹನಗೂಡು ಉಪ ತಹಸಿಲ್ದಾರ್ ಚಲುವರಾಜು, ಗ್ರಾಮ ಲೆಕ್ಕಿಗ ಕರಿಬಸವ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಆಧಾರ್ ಯು.ಐ.ಡಿ.ಎ.ಐ. ಸಹಾಯಕ ವ್ಯವಸ್ಥಾಪಕ ಮಹಮದ್ ಮುಸೇಬ್ ಭಾಗವಹಿಸಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಡೆವಿಲ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಬ್ಯಾಡ್ ಮ್ಯಾನರ್ಸ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸಲಾರ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕಾಟೇರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಾಟೇರ (ಕ)	4 ಪ್ರದರ್ಶನಗಳು
ರಾಜಕಮಲ್	
ಕಾಟೇರ (ಕ)	4 ಪ್ರದರ್ಶನಗಳು
ಸಂಗಂ	
ಸಲಾರ್ (ಕ)	4 ಪ್ರದರ್ಶನಗಳು
ಲಿಡೋ	
ಕೈವಾ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಟೈಗರ್–3 (ಹಿಂ)	4 ಪ್ರದರ್ಶನಗಳು
ಪ್ರಭಾ	
on line ಮದುವೆ off line ಶೋಭನ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಪ್ರೇಮ ಕಥ (ತೆ): ಬೆ.10.20ಕ್ಕೆ, ಮಾಥಿಮಾರನ್ (ತ): ಮ.1.05ಕ್ಕೆ, ಸಲಾರ್–1 (ತೆ): ಮ.3.40ಕ್ಕೆ, ಕಾಟೇರ (ಕ): ರಾ.7.05ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಮ.12.05ಕ್ಕೆ, ಕಾಟೇರ (ಕ): ಮ.3.50ಕ್ಕೆ, ರಾ.10ಕ್ಕೆ, ಪ್ರೇಮ ಕಥ (ತೆ): ರಾ.7.15ಕ್ಕೆ.
ಸ್ಕ್ರೀನ್ 3	ಒಂಟಿ ಬಂಟಿ ಲವ್ ಸ್ಟೋರಿ (ಕ): ಬೆ.10.20ಕ್ಕೆ, ಡಂಕಿ (ಹಿಂ): ಮ.1.20ಕ್ಕೆ, ರಾ.7.10ಕ್ಕೆ, ಅಕ್ವಾಮ್ಯಾನ್ ಅಂಡ್ ಲಾಸ್ಟ್ ಕಿಂಗ್‌ಡಮ್ (3ಡಿ)(ಇಂ): ಸಂ.4.30ಕ್ಕೆ, ಆಟಂ (ಮ): ರಾ.10.15ಕ್ಕೆ.
ಸ್ಕ್ರೀನ್ 4	ಕಾಟೇರ (ಕ): ಬೆ.9.50ಕ್ಕೆ, ಮ.1.15ಕ್ಕೆ, ಸಂ.4.45ಕ್ಕೆ, ರಾ.8.30ಕ್ಕೆ.

ಐನಾಕ್ಸ್ ಮೂವೀಸ್
LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಕಾಟೇರ (ಕ): ಬೆ.11.30ಕ್ಕೆ, ಮ.3.10ಕ್ಕೆ, ಸಂ.6.50ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಕಾಟೇರ (ಕ): ಬೆ.10.30ಕ್ಕೆ, ಮ.2.10ಕ್ಕೆ, ಸಂ.5.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಸಲಾರ್–1 (ಕ): ಬೆ.11ಕ್ಕೆ, ಸಂ.6.10ಕ್ಕೆ, ರಾ.9.45ಕ್ಕೆ, ಸಲಾರ್ –1 (ಹಿಂ): ಮ.2.35ಕ್ಕೆ,
ಸ್ಕ್ರೀನ್ 4	ಮೈಗ್ರೇಷನ್ (3ಡಿ)(ಇಂ): ಬೆ.10.30ಕ್ಕೆ, ರಾ.7.55ಕ್ಕೆ, ಡಂಕಿ (ಹಿಂ): ಮ.12.35ಕ್ಕೆ, ಸಂ.4.35ಕ್ಕೆ, ಸಲಾರ್–1 (ಹಿಂ): ರಾ.10ಕ್ಕೆ

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮ ಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಅಕ್ವಾಮ್ಯಾನ್ ಅಂಡ್ ಲಾಸ್ಟ್ ಕಿಂಗ್‌ಡಮ್ (3ಡಿ)(ಇಂ): ಬೆ.9.35ಕ್ಕೆ, ಮ.3.55ಕ್ಕೆ, ರಾ.10ಕ್ಕೆ, ಡಂಕಿ (ಹಿಂ): ಬೆ.9ಕ್ಕೆ, ಬೆ.11.40ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ಸಂ.6.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ನೆರು (ಮ): ರಾ.10.10ಕ್ಕೆ, ಸಲಾರ್ –1 (ಮ): ಸಂ.6.35ಕ್ಕೆ, ಸಲಾರ್–1 (ಹಿಂ): ಮ.2.50ಕ್ಕೆ, ಸಂ.5.55ಕ್ಕೆ, ರಾ.10ಕ್ಕೆ, ಸಲಾರ್–1 (ಕ): ಬೆ.8.05ಕ್ಕೆ, ಬೆ.11.15ಕ್ಕೆ, ಮ.3ಕ್ಕೆ, ಸಂ.6.25ಕ್ಕೆ, ಸಲಾರ್– 1(ತೆ): ಬೆ.7.10ಕ್ಕೆ, ಬೆ.7.40ಕ್ಕೆ, ಬೆ.8.10ಕ್ಕೆ, ರಾ.10.45ಕ್ಕೆ, ಬೆ.11.45ಕ್ಕೆ, ಮ.12.20ಕ್ಕೆ, ಮ.3.20ಕ್ಕೆ, ಮ.2.20ಕ್ಕೆ, ಸಂ.6.55ಕ್ಕೆ, ರಾ.9.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪ ಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.


ಜ.9, ನೇರಳೆ, ಹಂಪಾಪುರದಲ್ಲಿ ಶಾಸಕರಿಂದ ಜನಸಂಪರ್ಕ ಸಭೆ



ನಂಜನಗೂಡು, ಜ.6– ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಧ್ರುವನಾರಾಯಣ್ ಅವರು ಜ.9ರಂದು ಮಂಗಳವಾರ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಜನಸಂಪರ್ಕ ಸಭೆಯನ್ನು ಹಮ್ಮಿಕೊಂಡಿದ್ದಾರೆ ಎಂದು ನೇರಳೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಗಿರೀಶ್ ತಿಳಿಸಿದ್ದಾರೆ.

ಅಂದು ಬೆಳಿಗ್ಗೆ 11 ಗಂಟೆಗೆ ನೇರಳೆ ಗ್ರಾಮಕ್ಕೆ, ಮಧ್ಯಾಹ್ನ 1 ಗಂಟೆಗೆ ಹಳೇಪುರಕ್ಕೆ ಭೇಟಿ ನೀಡಿ ಜನಸಂಪರ್ಕ ಸಭೆ ನಡೆಸಲಿದ್ದು, ಗ್ರಾಮಸ್ಥರ ಕುಂದು–ಕೊರತೆ ಆಲಿಸಿ ಸ್ಥಳದಲ್ಲೇ ಪರಿಹಾರ ಸೂಚಿಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಗ್ರಾಮಪಂಚಾಯಿತಿ ಸದಸ್ಯರು, ಗ್ರಾಮದ ಯಜಮಾನರು, ಮುಖಂಡರು ಮತ್ತು ಗ್ರಾಮಸ್ಥರುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಶಾಸಕರ ಬಳಿ ಹೇಳಿಕೊಂಡು ಪರಿಹಾರ ಕಂಡುಕೊಳ್ಳುವಂತೆ ಅವರು ಕೋರಿದ್ದಾರೆ. ವಿವರಗಳಿಗೆ ನೇರಳೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಗಿರೀಶ್ ಅವರನ್ನು ಮೊಬೈಲ್ ಸಂಖ್ಯೆ 9741623859 ಮೂಲಕ ಸಂಪರ್ಕಿಸಬಹುದಾಗಿದೆ.

ಶತಾಯುಷಿ ಪುಟ್ಟವೀರಮ್ಮ ನಿಧನ



ಸರಗೂರು: ತಾಲೂಕಿನ ಇಟ್ನಾ ಗ್ರಾಮದ ಪುಟ್ಟವೀರಮ್ಮ(101) ಶನಿವಾರ ಮೃತಪಟ್ಟಿದ್ದಾರೆ. ಮೃತರು ಏಳು ಮಂದಿ ಪುತ್ರರು ಮತ್ತು ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಏಳು ಮಂದಿ ಪುತ್ರರಲ್ಲಿ ಒಬ್ಬ ಪುತ್ರ ಡಾ.ಸೋಮಣ್ಣ ಎಚ್.ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಮೃತರ ಅಂತ್ಯಕ್ರಿಯೆ ಮೃತರ ಜಮೀನಿನಲ್ಲಿ ಭಾನುವಾರ ನಡೆಯಲಿದೆ ಎಂದು ಡಾ.ಸೋಮಣ್ಣ ತಿಳಿಸಿದ್ದಾರೆ.

ದೇವನಾಯಕ



ಹಿರೀಕ್ಯಾತನಹಳ್ಳಿ, ಜ.6– ಹುಣಸೂರು ತಾಲೂಕಿನ ಗಾವಡಗೆರೆ ಗ್ರಾಮದ ದೇವನಾಯಕ (ಪೂಜಾರಿ) ಶುಕ್ರವಾರ ರಾತ್ರಿ ಅನಾರೋಗ್ಯದಿಂದ ನಿಧನರಾದರು. ಅವರಿಗೆ 74 ವರ್ಷ ವಯಸ್ಸಾಗಿತ್ತು. ಇವರು ಗ್ರಾಮದೇವತೆ ಪಟ್ಟಲದಮ್ಮನ ದೇವಸ್ಥಾನದಲ್ಲಿ ಅರ್ಚಕರಾಗಿದ್ದರು. ಇವರ ಅಂತ್ಯಕ್ರಿಯೆ ಶನಿವಾರ ಮಧ್ಯಾಹ್ನ 2 ಗಂಟೆಗೆ ಅವರ ಜಮೀನಿನಲ್ಲಿ ನಡೆಯಿತು. ಮೃತರು ಇಬ್ಬರು ಪುತ್ರರು, ಮೂವರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಲಲಿತ ಮಹಲ್ ಪ್ಯಾಲೇಸ್ ಹೋಟೆಲ್ ಸಂರಕ್ಷಣೆಗೆ ಡಿಪಿಆರ್



ಪಾರಂಪರಿಕ ಆಯುಕ್ತ ಎ.ದೇವರಾಜು ಮಾಹಿತಿ

ಮೈಸೂರು,ಜ.6(ಆರ್‌ಕೆ)–ಮೈಸೂರಿನ ಲಲಿತ ಮಹಲ್ ಪ್ಯಾಲೇಸ್ ಹೋಟೆಲ್ ಪಾರಂಪರಿಕ ಕಟ್ಟಡದ ಪುನರುಜ್ಜೀವನ ಮತ್ತು ಸಂರಕ್ಷಣೆಗಾಗಿ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪಾರಂಪರಿಕ ಇಲಾಖೆಯು ಸಮಗ್ರ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುತ್ತಿವೆ.

ಈ ಐತಿಹಾಸಿಕ ಕಟ್ಟಡವನ್ನು ಇಂಗ್ಲಿಷ್ ಮತ್ತು ಇಟಾಲಿಯನ್ ಆರ್ಕಿಟೆಕ್ಚರಲ್ ಶೈಲಿಯಲ್ಲಿ ರಾಜರು ಮೈಸೂರಿನ ಪಾರಂಪರಿಕತೆ ಕುರುಹಾಗಿ ನಿರ್ಮಿಸಿದ್ದರು. ಇದೀಗ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಕೋರಿಕೆ ಮೇರೆಗೆ ಲಲಿತ ಮಹಲ್ ಪ್ಯಾಲೇಸ್ ಹೋಟೆಲ್ ಕಟ್ಟಡ ಪುನರುಜ್ಜೀವನ ಮತ್ತು ಸಂರಕ್ಷಣೆಗಾಗಿ ಡಿಪಿಆರ್ ತಯಾರಿಸಲಾಗುತ್ತಿದೆ ಎಂದು ಹೆರಿಟೇಜ್ ಆಯುಕ್ತ ಎ. ದೇವರಾಜು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಈಗಾಗಲೇ ಪುರಾತನ ಇತಿಹಾಸ ತಜ್ಞ ಪ್ರೊ. ಎನ್.ಎಸ್.ರಂಗರಾಜು ಸೇರಿದಂತೆ ಹೆರಿಟೇಜ್ ತಜ್ಞರು, ಆರ್ಕಿಟೆಕ್ಚರಲ್ ಇಂಜಿನಿಯರ್‌ಗಳು ಹಾಗೂ ಪಾರಂಪರಿಕ ಇಲಾಖೆ ಇಂಜಿನಿಯರ್‌ಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಲಾಗಿದ್ದು, ಕಟ್ಟಡ ಶಿಥಿಲಗೊಂಡಿರುವುದು, ನೀರು ಸೋರಿಕೆ, ಗೋಡೆ, ಕೆನಪಿ, ಗೋಪುರಗಳು ಬಿರುಕು ಬಿಟ್ಟಿರುವುದು, ಪ್ಲಾಸ್ಟಿಂಗ್ ಕಿತ್ತು ಬಂದಿರುವುದು, ಛಾವಣಿಯಿಂದ ಪೈಪ್‌ಲೈನ್‌ಗಳು ಒಡೆದು ನೀರು ಗೋಡೆ ಮೇಲೆ ಹರಿಯುತ್ತಿರುವ ಬಗ್ಗೆ ಫೋಟೋ ಸಮೇತ ಮಾಹಿತಿ ಪಡೆಯಲಾಗಿದೆ ಎಂದು ತಿಳಿಸಿದರು.

ಕಳೆದ ಒಂದು ತಿಂಗಳಿಂದ ಡಿಪಿಆರ್ ಸಿದ್ಧಪಡಿಸುವ ಕಾರ್ಯ ನಡೆಯುತ್ತಿದ್ದು, ಎಂಟ್ಹತ್ತು ದಿನದೊಳಗಾಗಿ ನಾವು ಸರ್ಕಾರಕ್ಕೆ ಅಂದಾಜು ಪಟ್ಟಿಯೊಂದಿಗೆ ಡಿಪಿಆರ್ ಸಲ್ಲಿಸುತ್ತೇವೆ. ಕಟ್ಟಡದಲ್ಲಿ ಸಣ್ಣ ಮತ್ತು ದೊಡ್ಡ ರಿಪೇರಿ ಕೆಲಸಗಳನ್ನು ಪಾರಂಪರಿಕ ಶೈಲಿಯಲ್ಲಿ ಅದಕ್ಕನುಗುಣವಾದ ಮೆಟಿರಿಯಲ್‌ಗಳನ್ನು ಮಾತ್ರ ಬಳಸಿ ಕಾಮಗಾರಿ ಕೈಗೊಳ್ಳಬೇಕಾಗಿದೆ ಎಂದರು.

ಕಟ್ಟಡದ ರೆಸ್ಟೋರೇಷನ್ ಕೆಲಸವನ್ನು ನುರಿತ ತಜ್ಞರಿಂದ ಆರ್ಕಿಟೆಕ್ಚರ್‌ಗಳ ಸಲಹೆಯಂತೆ ಸಮಗ್ರ ಅಭಿವೃದ್ಧಿ ಯೋಜನಾ ವರದಿ ಸಿದ್ಧಗೊಳಿಸಲಾಗುತ್ತಿದೆ. ಕರ್ನಾಟಕ ಸರ್ಕಾರದ ಪ್ರವಾಸೋದ್ಯಮ ಇಲಾಖೆ ಅಧೀನದಲ್ಲಿರುವ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಲಿಮಿಟೆಡ್ ಲಲಿತ ಮಹಲ್ ಪ್ಯಾಲೇಸ್ ಹೋಟೆಲ್ ಪಾರಂಪರಿಕ ಕಟ್ಟಡದ ಪುನರುಜ್ಜೀವನ ಮತ್ತು ಸಂರಕ್ಷಣೆಗೆ ಮುಂದಾಗಿದ್ದು, ಡಿಪಿಆರ್‌ಗೆ ಅನುಮೋದನೆ ದೊರೆತ ಬಳಿಕ ಕಾಮಗಾರಿ ಕೈಗೆತ್ತಿಕೊಳ್ಳಬೇಕಾಗುತ್ತದೆ ಎಂದು ತಿಳಿಸಿದರು.

2023ರ ನವೆಂಬರ್ ಮಾಹೆಯಲ್ಲಿ ಲಲಿತ ಮಹಲ್ ಪ್ಯಾಲೇಸ್ ಹೋಟೆಲ್ ಪುನರುಜ್ಜೀವನಗೊಳಿಸಲು 38 ಕೋಟಿ ರೂ. ಅಂದಾಜುಪಟ್ಟಿ ಪ್ರಸ್ತಾವನೆ ಹಿನ್ನೆಲೆಯಲ್ಲಿ ಜೆಎಲ್‌ಆರ್ ವ್ಯವಸ್ಥಾಪಕ ನಿರ್ದೇಶಕ ಮನೋಜ್ ಕುಮಾರ್ ಡಿಪಿಆರ್ ಸಲ್ಲಿಸುವಂತೆ ತಿಳಿಸಿದ್ದ ಹಿನ್ನೆಲೆಯಲ್ಲಿ ಕ್ರಮ ವಹಿಸಲಾಗುತ್ತಿದೆ ಎಂದು ದೇವರಾಜು ತಿಳಿಸಿದರು.



ಅಯೋಧ್ಯೆಯ ಶ್ರೀ ರಾಮಮಂದಿರದ ಮಂತ್ರಾಕ್ಷತೆಗೆ 42ನೇ ವಾರ್ಡ್ ಕೆ.ಜಿ.ಕೊಪ್ಪಲಿನ ರಾಮಮಂದಿರದಲ್ಲಿ ಯಜಮಾನರು ಹಾಗೂ ಮುಖಂಡರೊಂದಿಗೆ ಪೂಜೆ ಸಲ್ಲಿಸಿ, ಮನೆ ಮನೆಗೆ ವಿತರಿಸುವ ಕಾರ್ಯಕ್ರಮಕ್ಕೆ ಮಾಜಿ ಶಾಸಕ ಎಲ್.ನಾಗೇಂದ್ರ ಚಾಲನೆ ನೀಡಿದರು. ಈ ವೇಳೆ ಮೈಸೂರು ನಗರ ರೈತ ಮೋರ್ಚಾ ಅಧ್ಯಕ್ಷ ಕೆ.ದೇವರಾಜು, ಯಜಮಾನರಾದ ಪುಟ್ಟಣ್ಣ, ಡಿ.ನಿಂಗಪ್ಪ, ಚಂದ್ರಣ್ಣ, ನಾರಾಯಣ್, ಜ್ಯೋತಿ, ಮಮತಾ ಇನ್ನಿತರರಿದ್ದರು.

ಜ.13ರಂದು ಸ್ವಾಮಿ ಕೊರಗಜ್ಜ ದೈವದ ಗಗ್ಗರ, ಅಗೇಲು ಸೇವೆ



ಮೈಸೂರು,ಜ.6–ಲಿಂಗಾಂಬುದಿ ಪಾಳ್ಯ, ಆರ್.ಟಿ.ನಗರ, ಕೇರ್ಗಳ್ಳಿಯಲ್ಲಿರುವ ಶ್ರೀ ಸ್ವಾಮಿ ಕೊರಗಜ್ಜ ದೈವಸ್ಥಾನದಲ್ಲಿ ಜನವರಿ 13ರಂದು ಸಂಜೆ 6ಕ್ಕೆ ಮೊದಲ ವರ್ಷದ ಸ್ವಾಮಿ ಕೊರಗಜ್ಜ ದೈವದ ಗಗ್ಗರ ಸೇವೆ (ಕೋಲ) ಮತ್ತು ಅಗೇಲು ಸೇವೆ ನಡೆಯಲಿದೆ.

ನವೀಕರಣ ಯೋಜನೆಯಿಂದಾಗಿ ನಾಲ್ವಡಿ ಪುತ್ಥಳಿ ಪ್ರತಿಷ್ಠಾಪನೆ ವಿಳಂಬ

ಮೈಸೂರು, ಜ. 6(ಆರ್‌ಕೆ)– ನವೀಕರಣ ಮತ್ತು ಪುನರುಜ್ಜೀವನ ಕಾರ್ಯಕ್ಕಾಗಿ ಡಿಪಿಆರ್ ಸಿದ್ಧವಾಗುತ್ತಿರುವುದರಿಂದ ಮೈಸೂರಿನ ಲಲಿತ ಮಹಲ್ ಪ್ಯಾಲೇಸ್ ಹೋಟೆಲ್ ಮುಂದೆ ನಾಲ್ವಡಿ ಕೃಷ್ಣರಾಜ ಒಡೆಯರ್ ಪುತ್ಥಳಿ ಪ್ರತಿಷ್ಠಾಪಿಸುವ ಯೋಜನೆ ವಿಳಂಬವಾಗಿದೆ.



ನಾಲ್ವಡಿ ಕೃಷ್ಣರಾಜ ಒಡೆಯರ್ ಪುತ್ಥಳಿಯೊಂದಿಗೆ ಶಿಲ್ಪಿ ಅರುಣ್ ಯೋಗಿರಾಜ್.

ನಾಲ್ವಡಿಯವರು ನಿರ್ಮಿಸಿರುವ ಈ ಕಟ್ಟಡದ ಶತಮಾನೋತ್ಸವ ಆಚರಿಸಲು 2021ರ ಅಕ್ಟೋಬರ್‌ನಲ್ಲಿ ಮುಂದಾಗಿದ್ದ ಸರ್ಕಾರ, ಆ ವೇಳೆ ಪುತ್ಥಳಿ ಪ್ರತಿಷ್ಠಾಪಿಸಲುದ್ದೇಶಿಸಲಾಗಿತ್ತು. ಅಧಿಕಾರಿಗಳ ಕೋರಿಕೆ ಮೇರೆಗೆ ಮೈಸೂರಿನ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ನಾಲ್ವಡಿ ಕೃಷ್ಣರಾಜ ಒಡೆಯರ್ ಪುತ್ಥಳಿಯನ್ನು ಸಿದ್ಧಪಡಿಸಿದ್ದರು. ಆದರೆ, ಕೋವಿಡ್‌ನಿಂದಾಗಿ ಶತಮಾನೋತ್ಸವ ಕಾರ್ಯಕ್ರಮವನ್ನು ರದ್ದುಪಡಿಸಲಾಯಿತಾದರೂ, ಪುತ್ಥಳಿ ಸಿದ್ಧಪಡಿಸಲು ಹೇಳಿದವರು ಮತ್ತೆ ಶಿಲ್ಪಿ ಅರುಣ್ ಅತ್ತ ಸುಳಿಯಲೇ ಇಲ್ಲ. ಹಾಗಾಗಿ ಅದು ಅವರ ಬಳಿಯೇ ಉಳಿಯಿತು. ಇದೀಗ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ಲಿಮಿಟೆಡ್ ಲಲಿತ ಮಹಲ್ ಪ್ಯಾಲೇಸ್ ಹೋಟೆಲ್ ಕಟ್ಟಡವನ್ನು ಪುನರುಜ್ಜೀವನಗೊಳಿಸಲು ಮುಂದಾಗಿರುವುದರಿಂದ ಕಾಮಗಾರಿ ಪೂರ್ಣಗೊಂಡ ನಂತರ ಪುತ್ಥಳಿ ಸ್ಥಾಪಿಸುವ ಸಾಧ್ಯತೆ ಇದೆ.

ಇಸ್ರೋ ಮಿಷನ್ ಯಶಸ್ವಿ: ಎಲ್–1 ಪಾಯಿಂಟ್ ಸೇರಿದ ಆದಿತ್ಯ ನೌಕೆ

ನವದೆಹಲಿ: ಆದಿತ್ಯ ಯಾನ ಕೈಗೊಂಡಿದ್ದ ಇಸ್ರೋ ಮಿಷನ್ ಯಶಸ್ವಿಯಾಗಿದೆ. ಸೂರ್ಯನ ಅಧ್ಯಯನಕ್ಕಾಗಿ ಉಡಾವಣೆಯಾಗಿದ್ದ ಆದಿತ್ಯ ನೌಕೆ ನಿಗದಿತ ಎಲ್–1 ಪಾಯಿಂಟ್ ತಲುಪುವಲ್ಲಿ ಯಶಸ್ವಿಯಾಗಿದೆ.

ಚಂದ್ರಯಾನ–3ರ ಬಳಿಕ ಇಸ್ರೋ ಮಹತ್ವದ ಸಾಧನೆ ಮಾಡಿದ್ದು, ಆದಿತ್ಯ ನೌಕೆ ಸೂರ್ಯನ ಅಧ್ಯಯನ ಆರಂಭಿಸಲಿರುವ ಮೊದಲ ನೌಕೆ ಎಂಬ ಹೆಗ್ಗಳಿಕೆಗೂ ಪಾತ್ರವಾಗಿದೆ. ಚಂದ್ರಯಾನ–3 ಯಶಸ್ವಿಯಾದ 10 ದಿನಗಳಲ್ಲಿ ಆದಿತ್ಯ ಎಲ್–1 ನೌಕೆಯನ್ನು ಉಡಾವಣೆ ಮಾಡಲಾಗಿತ್ತು. ಸುದೀರ್ಘ 126 ದಿನಗಳ ಬಳಿಕ ಆದಿತ್ಯ ನೌಕೆ ತನ್ನ ಗಮ್ಯ ತಲುಪಿದೆ.

ಪ್ರಧಾನಿ ನರೇಂದ್ರ ಮೋದಿ ಇಸ್ರೋ ವಿಜ್ಞಾನಿಗಳ ಸಾಧನೆಗೆ

ಪ್ರಧಾನಿ ಮೋದಿ ಮೆಚ್ಚುಗೆ

ಪ್ರಧಾನಿ ಮೋದಿ ಮೆಚ್ಚುಗೆ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

ಭಾರತ ಮತ್ತೊಂದು ಮೈಲಿಗಲ್ಲು ಸ್ಥಾಪಿಸಿದೆ. ಭಾರತದ ಮೊದಲ ಆದಿತ್ಯ ಅಧ್ಯಯನ ನೌಕೆ ಎಲ್–1 ಪಾಯಿಂಟ್ ತಲುಪಿದೆ. ಇದು ನಮ್ಮ ವಿಜ್ಞಾನಿಗಳ ನಿರಂತರ ಸಮರ್ಪಣಾ ಮನೋಭಾವಕ್ಕೆ ಸಾಕ್ಷಿಯಾಗಿದೆ.

ಇದು ಅತ್ಯಂತ ಸಂಕೀರ್ಣ ಮತ್ತು ಸಂಕೀರ್ಣವಾದ ಬಾಹ್ಯಾಕಾಶ ಕಾರ್ಯಾಚರಣೆಗಳನ್ನು ಸಾಧ್ಯವಾಗಿ ಸುವುದರಲ್ಲಿ ನಮ್ಮ ವಿಜ್ಞಾನಿಗಳ ನಿರಂತರ ಸಮರ್ಪಣೆಗೆ ಸಾಕ್ಷಿಯಾಗಿದೆ. ಮಾನವೀಯತೆಯ ಪ್ರಯೋಜನಕ್ಕಾಗಿ ನಾವು ವಿಜ್ಞಾನದ ಹೊಸ ಗಡಿಗಳನ್ನು ಬೆನ್ನಟ್ಟುವುದನ್ನು ಮುಂದುವರಿಸುತ್ತೇವೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ವಿವಿಧ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

ಮೈಸೂರು,ಜ.6– ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ 2023–24ನೇ ಸಾಲಿನ 5 ಫಲಾನುಭವಿ ಆಧಾರಿತ ಯೋಜನೆಗಳಾದ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ, ಸಾಧನ ಸಲಕರಣೆಗಳ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಗ್ರಾಮ ಒನ್, ಕರ್ನಾಟಕ ಒನ್ ಮತ್ತು ಸೇವಾಸಿಂಧು https://sevasindhu.karnataka.gov.in/Sevasindhu/Kannada ಪೋರ್ಟಲ್‌ನಲ್ಲಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಜ.30 ಅಂತಿಮ ದಿನ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯ ವಿಕಲಚೇತನರ ಸಹಾಯವಾಣಿ ಕೇಂದ್ರದ ದೂ.ಸಂ:0821–2490333 ಸಂಪರ್ಕಿಸಬಹುದು.

ಎಸ್.ನಾಗರಾಜನ್ ನಿಧನ



ಮೈಸೂರು, ಜ. 6– ಮೈಸೂರಿನ ವಿವಿ ಮೊಹಲ್ಲಾ ನಿವಾಸಿ, ನಿವೃತ್ತ ಶಿಕ್ಷಕ ಎಸ್.ನಾಗರಾಜನ್(88) ಜ. 3ರಂದು ನಿಧನರಾದರು. ಮೃತರು ಪತ್ನಿ ಹಾಗೂ ಅಪಾರ ಬಂಧುವರ್ಗವನ್ನು ಅಗಲಿದ್ದು, ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಿಟರ್ನಿಂಗ್ ಆಫೀಸರ್, ಗ್ರಾಜ್ಯುಯೇಟ್ಸ್ ಕೋ–ಆಪರೇಟಿವ್ ಬ್ಯಾಂಕ್ ಲಿ. ಮೈಸೂರು
ಮೈಸೂರು ರವರ ಕಾರ್ಯಾಲಯ.

ಪತ್ರಿಕಾ ಪ್ರಕಟಣೆ

ಗ್ರಾಜ್ಯುಯೇಟ್ಸ್ ಕೋ–ಆಪರೇಟಿವ್ ಬ್ಯಾಂಕ್ ಲಿ, ಮೈಸೂರು ಈ ಬ್ಯಾಂಕಿನ ಆಡಳಿತ ಮಂಡಳಿಗೆ ಚುನಾವಣಾ ದಿನಾಂಕದಿಂದ ಮುಂದಿನ 05 ವರ್ಷಗಳ ಅವಧಿಗೆ ಚುನಾವಣೆಯನ್ನು ದಿನಾಂಕ : 21–01–2024 ರಂದು ಭಾನುವಾರ ಬೆಳಿಗ್ಗೆ 09–00 ಗಂಟೆಯಿಂದ ಸಂಜೆ 04–00 ಗಂಟೆಯವರೆಗೆ ಹಾರ್ಡ್ವಿಕ್ ಶಾಲೆ ಜೆ.ಎಲ್.ಬಿ ರಸ್ತೆ, ಮೈಸೂರು ಇಲ್ಲಿ ನಡೆಸಲು ನಿಗಧಿಪಡಿಸಲಾಗಿರುತ್ತದೆ. ಚುನಾವಣೆಯಲ್ಲಿ ಸ್ಪರ್ಧಿಸಲು ಇಚ್ಛಿಸುವವರು ನಾಮಪತ್ರಗಳನ್ನು ದಿನಾಂಕ 07.01.2024 ರಿಂದ 13.01.2024 ರವರೆಗೆ ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 03–00 ಗಂಟೆಯವರೆಗೆ ಬ್ಯಾಂಕಿನ ಕಛೇರಿಯಲ್ಲಿ ಸ್ವೀಕರಿಸಲಾಗುವುದು ಹಾಗೂ ನಾಮಪತ್ರಗಳ ಪರಿಶೀಲನೆಯನ್ನು ದಿನಾಂಕ : 14.01.2024 ರಂದು ಬೆಳಿಗ್ಗೆ 11–00 ಗಂಟೆಗೆ ನಡೆಸಲಾಗುವುದು. ಚುನಾವಣಾ ವೇಳಾ ಪಟ್ಟಿಯನ್ನು ಎಲ್ಲಾ ಅರ್ಹ ಸದಸ್ಯರುಗಳಿಗೆ ಅಂಚೆ ಮೂಲಕ ಈಗಾಗಲೇ ರವಾನಿಸಲಾಗಿದ್ದು, ಹೆಚ್ಚಿನ ವಿವರಗಳಿಗಾಗಿ ಬ್ಯಾಂಕಿನ ಮುಖ್ಯಕಾರ್ಯನಿರ್ವಾಹಕರನ್ನು / ರಿಟರ್ನಿಂಗ್ ಅಧಿಕಾರಿಯನ್ನು ಸಂಪರ್ಕಿಸಲು ಕೋರಲಾಗಿದೆ.

ಸಹಿ/– ಆರ್ ಮಂಜುನಾಥ್
ಸಹಕಾರ ಸಂಘಗಳ ಉಪ ನಿಬಂಧಕರು ಮೈಸೂರು ಜಿಲ್ಲೆ,
ಮೈಸೂರು ಹಾಗೂ ರಿಟರ್ನಿಂಗ್ ಅಧಿಕಾರಿ
ಗ್ರಾಜ್ಯುಯೇಟ್ಸ್ ಕೋ–ಆಪರೇಟಿವ್ ಬ್ಯಾಂಕ್ ಲಿ, ಮೈಸೂರು

ಸಾರ್ವಜನಿಕ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಕಂಡ ಷೆಡ್ಯೂಲ್ ಸ್ವತ್ತನ್ನು ನಮ್ಮ ಕಕ್ಷಿದಾರರಾದ **ಲಾವಣ್ಯ ಪ್ರಕಾಶ್** ರವರು ಈ ಷೆಡ್ಯೂಲ್ ಸ್ವತ್ತುಗಳನ್ನು ಕ್ರಯಕ್ಕೆ ಪಡೆಯಲು ನಿರ್ಧರಿಸಿದ್ದು ಮಾರಾಟಗಾರರಾದ **ಜಿ.ಎನ್. ಸುರೇಶ್** ರವರುಗಳು ಕ್ರಯ ಪತ್ರವನ್ನು ಬರೆದು ಕೊಡಲು ಒಪ್ಪಿರುತ್ತಾರೆ. ಈ ಸಂಬಂಧ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದೇ ತಂಟೆ ತಕರಾರುಗಳು ಇತರೆ ದಾಖಲಾತಿಗಳು ಕ್ಲೈಮ್‌ಗಳು ವ್ಯಾಜ್ಯಗಳು ಯಾವುದೇ ಹಕ್ಕು ಯಾರಿಗಾದರೂ ಇದ್ದರೇ ಸೂಕ್ತ ದಾಖಲಾತಿಗಳೊಂದಿಗೆ ಈ ಪ್ರಕಟಣೆ ಮಾಡಿದ 07 ದಿನದ ಒಳಗಾಗಿ ಈ ಕೆಳಕಂಡ ವಿಳಾಸಕ್ಕೆ ಕಳುಹಿಸಲು ತಿಳಿಯಪಡಿಸಲಾಗಿದೆ. ಈ ಅವಧಿ ಮುಗಿದ ನಂತರ ನಮ್ಮ ಕಕ್ಷಿದಾರರಿಗೆ ಕ್ರಯ ಪತ್ರ ಮಾಡಿಕೊಳ್ಳುತ್ತಾರೆ. ನಂತರದಲ್ಲಿ ಬಂದಂತಹ ಯಾವುದೇ ತಕರಾರುಗಳಿಗೆ ನಮ್ಮ ಕಕ್ಷಿದಾರರಿಗೆ ಅದು ಬದ್ಧ ಪಡಿಸುವುದಿಲ್ಲ ಎಂದು ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸಲಾಗಿದೆ.

ಷೆಡ್ಯೂಲ್

ಮೈಸೂರು ಸಿಟಿ, ಚಾಮರಾಜ ಮೊಹಲ್ಲಾ, ಕುವೆಂಪುನಗರ ಎಸ್.ಟಿ.ಕೆ ಬಡಾವಣೆ 4ನೇ ಹಂತ, ಮನೆ ನಂ.637, ಸ್ವತ್ತಿಗೆ ಚಕ್ಕುಬಂಧಿ: ಪೂರ್ವಕ್ಕೆ: 636 ನೇ ನಂಬರ್ ಸ್ವತ್ತು, ಪಶ್ಚಿಮಕ್ಕೆ: 638 ನೇ ನಂಬರ್ ಸ್ವತ್ತು, ಉತ್ತರಕ್ಕೆ: 620 ಮತ್ತು 621 ನೇ ನಂಬರ್ ಸ್ವತ್ತು, ದಕಿಣಕ್ಕೆ: ರಸ್ತೆ.

ದಿನಾಂಕ: 06–01–2024
ಸ್ಥಳ: ಮೈಸೂರು

ಎಂ.ಆರ್. ಸೂರ್ಯ ಕುಮಾರ್
ವಕೀಲರು
ನಂ. 148, 11ನೇ ಕ್ರಾಸ್, 12ನೇ ಮೈನ್, ಸರಸ್ವತಿಪುರಂ, ಮೈಸೂರು-570 009
ಮೊ: 9845450011

ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು ನನ್ನ ಕಕ್ಷಿದಾರರು ಅದರ ಮಾಲೀಕರಾದ ಮೈಸೂರು ಸಿಟಿ–570 024, ಚಾಮರಾಜ ಮೊಹಲ್ಲಾ, ಕುವೆಂಪುನಗರ, ಸಿ ಮತ್ತು ಡಿ ಬ್ಲಾಕ್, 2ನೇ ಪಶ್ಚಿಮ ಅಡ್ಡರಸ್ತೆ, ಮನೆ ನಂ. 725/4 ರಲ್ಲಿ ವಾಸವಾಗಿರುವ ಲೇಟ್ ಬಿ.ಎಸ್. ವಿರುಪಾಕ್ಷ ಶೆಟ್ಟಿ ರವರ ಮಗನಾದ ಶ್ರೀ ಬಿ.ವಿ. ಮಲ್ಲಿಕಾರ್ಜುನ ಶೆಟ್ಟಿ, ಮತ್ತು ಅವರ ಕುಟುಂಬ ಸದಸ್ಯರಿಂದ ಖರೀದಿಸಲು ಉದ್ದೇಶಿಸಿರುತ್ತಾರೆ. ಷೆಡ್ಯೂಲ್ ಸ್ವತ್ತಿನ ವಿಚಾರದಲ್ಲಿ ಮೇಲೆ ಕಾಣಿಸಿದ ವ್ಯಕ್ತಿಗಳಲ್ಲದೆ ಬೇರೆ ಯಾರಿಗಾದರು ಯಾವುದೇ ರೀತಿಯ ಹಕ್ಕಾಗಲೀ, ಹಿತಾಸಕ್ತಿಯಾಗಲೀ, ಭಾಗಾಂಶವಾಗಲೀ ಅಥವಾ ಋಣಗಳಾಗಲೀ ಇದ್ದಲ್ಲಿ ಈ ಕೆಳಕಂಡವರನ್ನು, ಈ ದಿನದಿಂದ ಹತ್ತು (10) ದಿನಗಳ ಒಳಗಾಗಿ ಸಂಬಂಧ ಪಟ್ಟ ದಾಖಲಾತಿಗಳೊಡನೆ ಸಂಪರ್ಕಿಸುವುದು. ಇಲ್ಲವಾದಲ್ಲಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಮೇಲೆ ಕಾಣಿಸಿದವರಿಗಲ್ಲದೆ ಬೇರೆ ಯಾರಿಗೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ ಯಾಗಲೀ ಇಲ್ಲವೆಂದೇ ಪರಿಗಣಿಸಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಖರೀದಿಸುವರು.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ಸಿಟಿ, ಚಾಮರಾಜ ಮೊಹಲ್ಲಾ, ಸೀತಾ ವಿಲಾಸ ರಸ್ತೆಯಲ್ಲಿರುವ ನಿವೇಶನ ಸಂಖ್ಯೆ. 991/2, 3, 4 ಹೊಸ ಸಂಖ್ಯೆ. CH–34/2,3,4, ವಿಸ್ತೀರ್ಣ ಪೂರ್ವ ಪಶ್ಚಿಮ 99.6 ಅಡಿಗಳು ಮತ್ತು ದಕ್ಷಿಣೋತ್ತರ 66.3 ಅಡಿಗಳು, ಒಟ್ಟು ವಿಸ್ತೀರ್ಣ 6603.48 ಚದರ ಅಡಿಗಳ ಸ್ವತ್ತಿನಲ್ಲಿ ನಿರ್ಮಿಸಿರುವ ವಾಣಿಜ್ಯ ಕಟ್ಟಡದ 'ದೀಕ್ಷಾ ಶೆಟ್ಟಿ ಮ್ಯಾನ್ಷನ್', ಈ ಕಟ್ಟಡದಲ್ಲಿರುವ 3403.00 ಚದರ ಅಡಿಗಳುಳ್ಳ ನೆಲಮಾಳಿಗೆ, 3403.00 ಚದರ ಅಡಿಗಳುಳ್ಳ ನೆಲ ಅಂತಸ್ತು, 3403.00 ಚದರ ಅಡಿಗಳುಳ್ಳ ಮೊದಲನೇ ಅಂತಸ್ತು ಹಾಗೂ 892.00 ಚದರ ಅಡಿಗಳುಳ್ಳ ಎರಡನೇ ಅಂತಸ್ತಿನಿಂದ ಕೂಡಿರುವ ವಾಣಿಜ್ಯ ಕಟ್ಟಡ ಮತ್ತು ಈ ಸ್ವತ್ತಿಗೆ ಚಕ್ಕುಬಂದಿ :– ಪೂರ್ವಕ್ಕೆ : ಖಾಸಗಿ ಸ್ವತ್ತು, ಪಶ್ಚಿಮಕ್ಕೆ : ಖಾಸಗಿ ಸ್ವತ್ತು, ಉತ್ತರಕ್ಕೆ : ಖಾಸಗಿ ಸ್ವತ್ತು, ದಕ್ಷಿಣಕ್ಕೆ: ಸೀತಾವಿಲಾಸ ರಸ್ತೆ.

ಸಹಿ/– ಕೆ.ಎನ್. ಮಹಾದೇವಸ್ವಾಮಿ, ಬಿ.ಎಸ್ಸಿ, ಎಲ್.ಎಲ್.ಬಿ.. ವಕೀಲರು ಮತ್ತು ನೋಟರಿ, ನಂ. 725, 727, ರೂಂ ನಂ. ಎಫ್–1 ಮತ್ತು 2, ಒಂದನೇ ಮಹಡಿ, 5ನೇ ಕ್ರಾಸ್, ಅಲ್ಲಮ್ಮ ಪ್ರಭು ಕಾಂಪ್ಲೆಕ್ಸ್, ರಾಮಾನುಜ ರಸ್ತೆ, ಮೈಸೂರು–570 004
Mob: 94482-22522, Office No. 0821- 4287998.
ದಿನಾಂಕ: 6–1–2024

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಜೆಎಸ್‌ಎಸ್ ಮಹಾವಿದ್ಯಾಪೀಠ
ಡಾ. ಶ್ರೀ ಶಿವರಾತ್ರಿರಾಜೇಂದ್ರ ವೃತ್ತ, ಮೈಸೂರು - 570 004

ಮಳಿಗೆಯು ಬಾಡಿಗೆಗೆ ಇರುತ್ತದೆ

ಮೈಸೂರಿನ ಗುರುಕಾರ್ ದೇವಣ್ಣ ರಸ್ತೆಯಲ್ಲಿರುವ ವೈದ್ಯರ ವಸತಿ ಗೃಹಗಳ ಸಮುಚ್ಚಯದ ನೆಲಮಹಡಿಯಲ್ಲಿ 432.75 ಚ.ಅಡಿ ಅಳತೆಯ ಮಳಿಗೆ ಸಂಖ್ಯೆ 2 ಬಾಡಿಗೆಗೆ ಇರುತ್ತದೆ. ಬಾಡಿಗೆ ದರವು ಚ.ಅಡಿಗೆ ರೂ. 50/– + ಜಿಎಸ್‌ಟಿ ಇರುತ್ತದೆ. ಆಸಕ್ತಿವುಳ್ಳವರು ಜೆಎಸ್‌ಎಸ್ ಮಹಾವಿದ್ಯಾಪೀಠದ ಕಛೇರಿಯಲ್ಲಿ ಸಂಪರ್ಕಿಸುವುದು. ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: 0821-2548201, 2548202 ಹಾಗೂ 96866 77216.

ಸಹಿ/–ನಿರ್ದೇಶಕರು
ಸಾಮಾನ್ಯ ಆಡಳಿತ ವಿಭಾಗ

ಕರ್ನಾಟಕ ಸರ್ಕಾರ
ಭೂಮಾಪನ ಮತ್ತು ಕಂದಾಯ ನಿರ್ಣಯ ತರಬೇತಿ ಸಂಸ್ಥೆ
ಹಡಜನ ಮೈಸೂರು –571311
Email: mysoreprincipalssti@gmail.com
Phone no: 08212500530

ಸಂ:ಸಿಬ್ಬಂದಿ(2)ಸಿ.ಆರ್.27/2023–24 ದಿನಾಂಕ: 04.01.2024

ಇ–ಟೆಂಡರ್ ಅಧಿಸೂಚನೆ

ಮೈಸೂರು ಭೂಮಾಪನ ತರಬೇತಿ ಸಂಸ್ಥೆಗೆ ಹೊರಗುತ್ತಿಗೆಯ ಆಧಾರದಲ್ಲಿ ಸೆಕ್ಯೂರಿಟಿಗಾರ್ಡ್ಸ್, ಹೌಸ್‌ಕೀಪರ್ಸ್, ಸ್ವೀಪರ್ಸ್, ವಾಹನಚಾಲಕ ಹಾಗೂ, ಗಾರ್ಡನರ್ಸ್‌ಗಳನ್ನು ಪಡೆಯುಲು ಮಾನವ ಸಂಪನ್ಮೂಲ ಸೇವೆಗಳನ್ನು ಒದಗಿಸುವ ಅರ್ಹ ಸಂಸ್ಥೆಗಳಿಂದ Online ಮುಖಾಂತರ ಟೆಂಡರ್ ಅನ್ನು ಆಹ್ವಾನಿಸಲಾಗಿದೆ.
ಟೆಂಡರ್ ಅವಧಿ ದಿ: 04.01.2024 ರಿಂದ ದಿ:16.01.2024
ಇ.ಎಂ.ಡಿ. ಮೊತ್ತ ರೂ:50,000/–(ಐವತ್ತು ಸಾವಿರ ರೂಪಾಯಿಗಳು ಮಾತ್ರ)
ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: 16.01.2024
ಹೆಚ್ಚಿನ ಮಾಹಿತಿಗಾಗಿ ಆಡಳಿತ ವಿಭಾಗ, ಭೂಮಾಪನ ತರಬೇತಿ ಸಂಸ್ಥೆ, ಹಡಜನ, ಮೈಸೂರು ಇವರನ್ನು ಸಂಪರ್ಕಿಸಬಹುದು. ಹಾಗೂ ಪೂರ್ಣ ವಿವರಗಳು ಹಾಗೂ ಟೆಂಡರ್ ಡಾಕ್ಯುಮೆಂಟ್‌ಗಳು Website: https://kppp.karnataka.gov.in ನಲ್ಲಿ ದೊರೆಯುತ್ತವೆ.

ಸಹಿ/– ಪ್ರಾಚಾರ್ಯರು, ಭೂಮಾಪನ & ಕಂದಾಯ ನಿರ್ಣಯ ತರಬೇತಿ ಸಂಸ್ಥೆ, ಮೈಸೂರು.
DIPR/DDMYS/KSMCA/866/2023-24